ಸಂಪುಟ: 05 ಸಂಚಿಕೆ: 82 ಪುಟಗಳು: 08 ಗುರುವಾರ 05 ಜೂನ್ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

**ಮುಂಜಾನೆ ಮಾತು**

ನಮ್ಮ ಮಾತಿಗೆ ಅರ್ಥ ಬರಬೇಕಾದರೆ ಮಾತನಾಡುವಷ್ಟೇ ಮಾತನಾಡದೆ ಇರುವುದೂ ಅಗತ್ಯ.

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಆರ್‌ಸಿಬಿ ಅಭಿಮಾನಿಗಳ ಸಾವಿಗೆ ಸಂತಾಪ ಸೂಚಿಸಿದ ಮಲ್ಯ

• **ಉದಯವಾಹಿನಿ, ಹೊಸದಿಲ್ಲಿ**

ಬೆಂಗಳೂರಿನ ಚಿನ್ನಸ್ವಾಮಿ ಸ್ಟೇಡಿಯಂ ಬಳಿ ಸಂಭವಿಸಿದ ಕಾಲ್ತುಳಿತದಿಂದ ಆದ ಜೀವಹಾನಿ ಮತ್ತು ಗಾಯಗೊಂಡವರ ಬಗ್ಗೆ ಕೇಳಿ ತೀವ್ರ ದುಃಖ ವಾಗಿದೆ ಎಂದು ಉದ್ಯಮಿ ವಿಜಯ್ ಮಲ್ಯ ಹೇಳಿಕೊಂಡಿದ್ದಾರೆ. ಈ ಬಗ್ಗೆ ಎಕ್ಸ್‌ನಲ್ಲಿ ಅವರು ಪೋಸ್ಟ್ ಮಾಡಿದ್ದಾರೆ.
ಪೋಸ್ಟ್‌ನಲ್ಲಿ ಐಪಿಎಲ್ ಚಾಂಪಿಯನ್ ವಿಜಯೋತ್ಸವ ಆಚರಿಸಲು ಬಂದಿದ್ದ ಆರ್‌ಸಿಬಿ ಅಭಿಮಾನಿಗಳು ಸಾವಿಗೀಡಾಗಿದ್ದಾರೆ. ಮೃತರ ಕುಟುಂಬಗಳಿಗೆ ಸಂತಾಪಗಳು, ಓಂ ಶಾಂತಿ ಎಂದು ಬರೆದುಕೊಂಡಿದ್ದಾರೆ. ಆರ್‌ಸಿಬಿ ಗೆಲುವು ವಿಜಯೋತ್ಸವದ ವೇಳೆ ಚಿನ್ನಸ್ವಾಮಿ ಸ್ಟೇಡಿಯಂ ಬಳಿ ಸಂಭವಿಸಿದ ಕಾಲ್ತುಳಿತಕ್ಕೆ 11 ಆರ್‌ಸಿಬಿ ಫ್ಯಾನ್ಸ್ ದುರ್ಮರಣಕ್ಕೀಡಾಗಿದ್ದಾರೆ. 50ಕ್ಕೂ ಹೆಚ್ಚು ಗಂಭೀರವಾಗಿ ಗಾಯಗೊಂಡಿರುವ ಘಟನೆ ನಡೆದಿದೆ. ಗಾಯಾಳುಗಳಿಗೆ ಬೌರಿಂಗ್ ಆಸ್ಪತ್ರೆ, ವೈದೇಹಿ ಆಸ್ಪತ್ರೆ ಹಾಗೂ ಮಣಿ ಪಾಲ್ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಸಾವಿನ ಸಂಖ್ಯೆ ಮತ್ತಷ್ಟು ಏರಿಕೆಯಾಗುವ ಸಾಧ್ಯತೆ ಇದೆ.

## ಕೆಎಂಎಫ್‌ಗೆ ಟಿ.ಎಚ್.ಎಂ. ಕುಮಾರ್ ಆಡಳಿತಾಧಿಕಾರಿ

• **ಉದಯವಾಹಿನಿ, ಬೆಂಗಳೂರು**

ಕರ್ನಾಟಕ ಹಾಲು ಉತ್ಪಾದಕರ ಮಹಾ ಮಂಡಳದ (ಕೆಎಂಎಫ್) ಆಡಳಿತ ಮಂಡಳಿಯ ಅಧಿಕಾರ ಅವಧಿ ಕೊನೆಗೊಂಡ ಬೆನ್ನಲ್ಲೇ, ಸಹಕಾರ ಸಂಘಗಳ ರಿಜಿಸ್ಟ್ರಾರ್ ಟಿ.ಎಚ್.ಎಂ.ಕುಮಾರ್ ಅವರನ್ನು ಆರು ತಿಂಗಳ ಅವಧಿಗೆ ಆಡಳಿತಾಧಿಕಾರಿಯನ್ನಾಗಿ ನೇಮಕ ಮಾಡಿ ಆದೇಶ ಹೊರಡಿಸಲಾಗಿದೆ. ಆಡಳಿತಾಧಿಕಾರಿ ಅಧಿಕಾರ ವಹಿಸಿಕೊಂಡ ಬಳಿಕ ಮಹಾಮಂಡಳದ ಆಡಳಿತ ಮಂಡಳಿಗೆ ಚುನಾವಣೆ ನಡೆಸಿ, ಚುನಾಯಿತ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸಬೇಕು ಎಂದು ಆದೇಶದಲ್ಲಿ ತಿಳಿಸಲಾಗಿದೆ.
ಕೆಎಂಎಫ್‌ನ ಹಾಲಿ ಆಡಳಿತ ಮಂಡಳಿಯ ಅವಧಿ 2024ರ ಜುಲೈ 7ಕ್ಕೆ ಮುಕ್ತಾಯಗೊಂಡಿತ್ತು. ಆದರೆ, ಲೋಕಸಭಾ ಚುನಾವಣೆ ಎದುರಾಗಿದ್ದರಿಂದಾಗಿ, ಆಡಳಿತಾಧಿಕಾರಿ ನೇಮಕ ಮಾಡದೆ ಹಾಲಿ ಆಡಳಿತ ಮಂಡಳಿಯನ್ನೇ ಮುಂದುವರಿಸಲಾಗಿತ್ತು. ಹಗರಿಬೊಮ್ಮನಹಳ್ಳಿಯ ಮಾಜಿ ಶಾಸಕ ಭೀಮಾನಾಯ್ಕ ಕೆಎಂಎಫ್ ಅಧ್ಯಕ್ಷರಾಗಿದ್ದರು.

## ತಪ್ಪನ್ನು ಒಪ್ಪಿಕೊಂಡು ಕನ್ನಡಿಗರ ಬಳಿ ಕ್ಷಮೆ ಕೋರಬೇಕು

• **ಉದಯವಾಹಿನಿ, ಬೆಂಗಳೂರು**

'ಕನ್ನಡ ಭಾಷೆಯ ಹುಟ್ಟಿನ ಬಗ್ಗೆ ವಿವಾದಾತ್ಮಕ ಹೇಳಿಕೆ ನೀಡುವ ಮೂಲಕ ಕನ್ನಡಿಗರಲ್ಲಿ ಆಕ್ರೋಶವನ್ನುಂಟು ಮಾಡಿರುವ ತಮಿಳು ನಟ ಕಮಲ್ ಹಾಸನ್, ಈಗಲಾದರೂ ತನ್ನ ತಪ್ಪನ್ನು ಒಪ್ಪಿಕೊಂಡು ಕನ್ನಡಿಗರ ಬಳಿ ಕ್ಷಮೆ ಕೋರಬೇಕು ಎಂದು ಕರ್ನಾಟಕ ವಿಕಾಸ ರಂಗ ಆಗ್ರಹಿಸಿದೆ.'ತಮಿಳು ಭಾಷೆಗೆ ಈವರೆಗೂ ಅಂಕಿಯನ್ನು ಕಂಡುಹಿಡಿಯಲು ಸಾಧ್ಯವಾಗಿಲ್ಲ. ಕನ್ನಡ ಭಾಷೆಗೆ ತನ್ನದೇ ಆದ ಅಂಕಿಗಳಿವೆ. ಇದರಿಂದಲೇ ಗೊತ್ತಾಗಲಿದೆ. ಕನ್ನಡ ಭಾಷೆ ಎಷ್ಟು ಶ್ರೇಷ್ಠವೆಂದು. ಸಾಮಾನ್ಯ ಜ್ಞಾನ ಇಲ್ಲದ, ಇತಿಹಾಸದ ಅರಿವಿಲ್ಲದ ಕಮಲ್ ಹಾಸನ್ ಅನಗತ್ಯವಾಗಿ ಕನ್ನಡಿಗರ ಆಕ್ರೋಶಕ್ಕೆ ಗುರಿಯಾಗಿದ್ದಾರೆ. ಅವರು ಹೈಕೋರ್ಟ್ ತೀರ್ಪನ್ನು ಗೌರವಿಸಬೇಕು' ಎಂದು ಕರ್ನಾಟಕ ವಿಕಾಸ ರಂಗದ ರಾಜ್ಯ ಘಟಕದ ಅಧ್ಯಕ್ಷ ವ.ಚ. ಚನ್ನೇಗೌಡ ಹೇಳಿದ್ದಾರೆ. 'ಕನ್ನಡಿಗರ ಆಕ್ರೋಶ ಮುಂದೆ ಹಲವು ತಿರುವುಗಳನ್ನು ಪಡೆದುಕೊಳ್ಳುವ ಸಾಧ್ಯತೆಯಿದೆ. ಮುಂದಿನ ಆಗು ಹೋಗುಗಳಿಗೆ ಅವರೇ ಹೊಣೆಯಾಗಬೇಕಾಗುತ್ತದೆ' ಎಂದು ತಿಳಿಸಿದ್ದಾರೆ.

## 8 ಕೋಟಿ ವೆಚ್ಚದ ಕಾಮಗಾರಿಗೆ ಶಾಸಕ ವಿಶ್ವನಾಥ್ ಚಾಲನೆ

• **ಉದಯವಾಹಿನಿ, ಬೆಂಗಳೂರು**

ಯಲಹಂಕ ಕ್ಷೇತ್ರದ ಅಟ್ಟೂರು, ಉಪನಗರ, ಚೌಡೇಶ್ವರಿ ಹಾಗೂ ಕೆಂಪೇಗೌಡ ವಾರ್ಡ್‌ಗಳ ವ್ಯಾಪ್ತಿಯ ವಿವಿಧ ಬಡಾವಣೆಗಳಲ್ಲಿ 18 ಕೋಟಿ ವೆಚ್ಚದಲ್ಲಿ ಕೈಗೊಂಡಿರುವ ಅಭಿವೃದ್ಧಿ ಕಾಮಗಾರಿಗೆ ಶಾಸಕ ಎಸ್.ಆರ್.ವಿಶ್ವನಾಥ್ ಚಾಲನೆ ನೀಡಿದರು. ನಂತರ ಮಾತನಾಡಿದ ಅವರು, 'ಪಾಲಿಕೆಯ ನಾಲ್ಕು ವಾರ್ಡುಗಳ ವ್ಯಾಪ್ತಿಯ 10 ಬಡಾವಣೆಗಳಲ್ಲಿ ರಸ್ತೆ, ಚರಂಡಿ ಹಾಗೂ ಉದ್ಯಾನಗಳ ಅಭಿವೃದ್ಧಿ ಕಾಮಗಾರಿಗೆ ಗುದ್ದಲಿಪೂಜೆ ನೆರವೇರಿಸಲಾಗಿದೆ. ಮಳೆನೀರು ಕಾಲುವೆಗಳಲ್ಲಿ ಸಂಗ್ರಹವಾಗಿರುವ ಹೂಳನ್ನು ತೆರವುಗೊಳಿಸಿ, ಪ್ರವಾಹಗಳು ಬಂದಾಗ ಚರಂಡಿಗಳಲ್ಲಿ ನೀರು ಸರಾಗವಾಗಿ ಹರಿದುಹೋಗಲು ಅವಕಾಶ ಕಲ್ಪಿಸಬೇಕೆಂದು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ತಿಳಿಸಿದರು. ರಾಜ್ಯ ಸರ್ಕಾರದಿಂದ ಅಗತ್ಯ ಅನುದಾನ ಬಿಡುಗಡೆಯಾಗುತ್ತಿಲ್ಲ. ಅನುದಾನದ ಕೊರತೆಯ ನಡುವೆಯೂ ಅಧಿಕಾರಿಗಳಿಗೆ ಮನವಿ ಮಾಡಿ. ಸ್ವಲ್ಪಮಟ್ಟಿಗೆ ಅನುದಾನ ಮಂಜೂರು ಮಾಡಿಸಿಕೊಂಡು ಅಭಿವೃದ್ಧಿ ಕಾಮಗಾರಿಗೆ ಹಿನ್ನಡೆಯಾಗದಂತೆ ಗಮನಹರಿಸಲಾಗುತ್ತಿದೆ ಎಂದರು.



# ಸಂಭ್ರಮದ ಜೊತೆಜೊತೆಗೆ ಸೂತಕದ ಛಾಯೆ

ಆರ್‌ಸಿಬಿ ತಂಡದ ವಿಜಯೋತ್ಸವದ ವೇಳೆ ಕಾಲ್ತುಳಿತ ಸಂಭವಿಸಿ 11 ಜನರು ಸಾವು

ರಾಜ್ಯ ಕಾಂಗ್ರೆಸ್ ಸರಕಾರವೇ ಹೊಣೆ

ಮೃತರ ಕುಟುಂಬಗಳಿಗೆ ತಲಾ 10 ಲಕ್ಷ ರೂಪಾಯಿ ಪರಿಹಾರ

ಘಟನೆಯ ಕುರಿತು ಜಿಲ್ಲಾಧಿಕಾರಿಗಳಿಂದ ತನಿಖೆ

ಸಂಭ್ರಮಾಚರಣೆಯನ್ನು ಸೂತಕವನ್ನಾಗಿ ಮಾಡಿದ ರಾಜ್ಯ ಸರ್ಕಾರಿ ವ್ಯವಸ್ಥೆಗೆ ಧಿಕ್ಕಾರ

ಚಿನ್ನಸ್ವಾಮಿ ಸ್ಟೇಡಿಯಂ ಕಾಲ್ತುಳಿತ ದುರಂತ

• **ಉದಯವಾಹಿನಿ, ಬೆಂಗಳೂರು**

ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ಸಂಭ್ರಮಾಚರಣೆ ವೇಳೆ ನಡೆದ ದುರಂತದಲ್ಲಿ 11 ಜನರು ಸಾವಿಗೀಡಾಗಿದ್ದು, ಇವರ ಕುಟುಂಬಗಳಿಗೆ ತಲಾ 10 ಲಕ್ಷ ರೂ. ಪರಿಹಾರವನ್ನು ಸಿಎಂ ಸಿದ್ದರಾಮಯ್ಯ ಘೋಷಿಸಿದ್ದಾರೆ. ಅಲ್ಲದೆ ಗಾಯಗೊಂಡವರ ಚಿಕಿತ್ಸೆ ವೆಚ್ಚವನ್ನೂ ಸರಕಾರ ಭರಿಸಲಿದೆ ಎಂದು ಅವರು ಹೇಳಿದ್ದು, ಜಿಲ್ಲಾಧಿಕಾರಿ ತನಿಖೆಗೂ ಆದೇಶ ನೀಡಿದ್ದಾರೆ.

ಘಟನೆ ಬಳಿಕ ಬುಧವಾರ ವಿಧಾನಸೌಧದಲ್ಲಿ ಪತ್ರಿಕಾಗೋಷ್ಠಿ ನಡೆಸಿದ ಸಿಎಂ ಸಿದ್ದರಾಮಯ್ಯ, ಮಧ್ಯ ರಾತ್ರಿವರೆಗೆ ಕೂಡ ಟಾಟಾ ಐಪಿಎಲ್ ಫೈನಲ್ ಪಂದ್ಯ ಅಹಮದಾಬಾದ್‌ನಲ್ಲಿ ನಡೆದಿತ್ತು. ಇವತ್ತು ಆರ್‌ಸಿಬಿ ತಂಡದ ವಿಜಯೋತ್ಸವ ಆಚರಣೆಗೆ ಕ್ರಿಕೆಟ್ ಅಸೋಸಿಯೇಷನ್‌ನವರು ಕಾರ್ಯಕ್ರಮ ಹಮ್ಮಿಕೊಂಡಿದ್ದರು. ಸರಕಾರದ ಕಡೆಯಿಂದಲೂ ಕಾರ್ಯಕ್ರಮ ಏರ್ಪಾಡು ಮಾಡಲಾಗಿತ್ತು. ಇದೇ ವೇಳೆ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ವಿಜಯೋತ್ಸವ ಆಚರಣೆ ನಡೆಯುತ್ತಿದ್ದ ಸಂದರ್ಭದಲ್ಲಿ ದೊಡ್ಡ ದುರಂತ ಸಂಭವಿಸಿದೆ, ಎಂದು ಹೇಳಿದರು. ಕಾಲ್ತುಳಿತಕ್ಕೆ ಒಳಗಾಗಿ 11 ಜನರು ಮೃತ ಪಟ್ಟಿದ್ದಾರೆ. 33 ಜನರು ಗಾಯಗೊಂಡಿದ್ದಾರೆ. ಸಣ್ಣ ಪುಟ್ಟ ಗಾಯಗೊಂಡು ಬಿಡುಗಡೆಯಾದವರೂ ಸೇರಿ 47 ಜನರಿಗೆ ಗಾಯವಾಗಿದೆ. ನಾನು ಬೌರಿಂಗ್ ಆಸ್ಪತ್ರೆಗೆ ವೈದೇಹಿ, ಮಲ್ಯ ಆಸ್ಪತ್ರೆಗೆ ಭೇಟಿ ಕೊಟ್ಟಿದ್ದೇನೆ. ಈ ಸಂಭ್ರಮಾಚರಣೆ ಮಾಡುವಾಗ, ಇಂಥ ಒಂದು ದುರಂತ ನಡೆಯಬಾರದಿತ್ತು. ಸರಕಾರ ಈ ಘಟನೆಗೆ ದುಃಖ ವ್ಯಕ್ತಪಡಿಸುತ್ತದೆ, ಎಂದರು. ನಮ್ಮ ನಿರೀಕ್ಷೆಗೂ ಮೀರಿ, ಜನ, ಅಭಿಮಾನಿಗಳು ಸೇರಿದ್ದರು. ವಿಧಾನಸೌಧದ ಎದುರುಗಡೆಯೇ ಸುಮಾರು 1 ಲಕ್ಷಕ್ಕೂ ಹೆಚ್ಚು ಜನ ಸೇರಿದ್ದರು. ವಿಧಾನಸೌಧದ ಮುಂದೆ ನಡೆದ ಸಮಾರಂಭದಲ್ಲಿ ಯಾವುದೇ ಅನಿರೀಕ್ಷಿತ ಘಟನೆ ನಡೆದಿಲ್ಲ. ಆದರೆ ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ದುರಂತ ಸಂಭವಿಸಿದೆ. ಇದನ್ನು ಯಾರೂ ನಿರೀಕ್ಷೆ ಮಾಡಿರಲಿಲ್ಲ. ಕ್ರಿಕೆಟ್ ಅಸೋಸಿಯೇಷನ್‌ನವರು ಕೂಡ ನಿರೀಕ್ಷಿಸಿರಲಿಲ್ಲ, ಎಂದು ತಿಳಿಸಿದರು.

ಕ್ರಿಕೆಟ್ ಸ್ಟೇಡಿಯಂನಲ್ಲಿ 35,000 ಸಾವಿರ ಆಸನಗಳಿವೆ. ಆದರೆ, 2–3 ಲಕ್ಷ ಜನ ಬಂದು ಬಿಟ್ಟಿದ್ದರು. ನಿನ್ನೆಯಷ್ಟೇ ಪಂದ್ಯ ನಡೆದಿದ್ದು, ಕ್ರಿಕೆಟ್ ಅಸೋಸಿಯೇಷನ್‌ನವರು ಸಂಭ್ರಮಾಚರಣೆ ಬಗ್ಗೆ ಬೆಳಿಗ್ಗೆ ನಮಗೆ ಮಾಹಿತಿ ನೀಡಿದ್ದರು. ಹಾಗಾಗಿ ಯಾರೂ ಕೂಡ ಇದನ್ನು ನಿರೀಕ್ಷೆ ಮಾಡಿರಲಿಲ್ಲ. ಇಷ್ಟು ಜನ ಬರುತ್ತಾರೆ ಅಂದುಕೊಂಡಿರಲಿಲ್ಲ. ಸ್ಟೇಡಿಯಂನಲ್ಲಿ ಸಾಮರ್ಥ್ಯ ಇರುವಷ್ಟು ಜನ ಬರಬಹುದು. ಅದಕ್ಕಿಂತ ಸ್ವಲ್ಪ ಹೆಚ್ಚಿನ ಜನ ಬರಬಹುದು ಎಂದುಕೊಂಡಿದ್ದೆವು.

**10 ಲಕ್ಷ ರೂ. ಪರಿಹಾರ ಘೋಷಣೆ**


ಘಟನೆಯಲ್ಲಿ ಸಾವಿಗೀಡಾದ ಕುಟುಂಬದ ವಾರಸುದಾರರಿಗೆ 10 ಲಕ್ಷ ರೂ. ಪರಿಹಾರವಾಗಿ ಕೊಡುತ್ತೇವೆ. ಹೆಣ್ಣು ಮಕ್ಕಳು, ಗಂಡು ಮಕ್ಕಳು ಸೇರಿ ಯುವ ಜನಾಂಗದವರೇ ಹೆಚ್ಚಿನ ಸಂಖ್ಯೆಯಲ್ಲಿ ಸಾವಿಗೀಡಾಗಿದ್ದಾರೆ. 11 ಜನ ಸತ್ತಿದ್ದು, ಇವರಿಗೆ ತಲಾ 10 ಲಕ್ಷ ರೂ. ಪರಿಹಾರವಾಗಿ ನೀಡುತ್ತೇವೆ, ಎಂದು ಸಿಎಂ ಸಿದ್ದರಾಮಯ್ಯ ಘೋಷಿಸಿದರು ಇನ್ನು ಘಟನೆಯಲ್ಲಿ ಯಾರೆಲ್ಲ ಗಾಯಗೊಂಡಿದ್ದಾರೋ ಅವೆಲ್ಲರಿಗೂ ಉಚಿತವಾಗಿ ಚಿಕಿತ್ಸೆ ನೀಡಲು ನಾನು ಈಗಾಗಲೇ ಸೂಚನೆ ನೀಡಿದ್ದೇನೆ. ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡವರಿಗೂ ಅದರ ವೆಚ್ಚವನ್ನೂ ಸರಕಾರವೇ ಭರಿಸುತ್ತದೆ, ಎಂದು ಸಿಎಂ ಮಾಹಿತಿ ನೀಡಿದರು.
ಇದೇ ವೇಳೆ ಗಾಯಗೊಂಡವರೆಲ್ಲರೂ ಅಪಾಯದಿಂದ ಪಾರಾಗಿದ್ದಾರೆ ಎಂದು ತಿಳಿಸಿದ ಸಿದ್ದರಾಮಯ್ಯ, ಇವರ ಊಟ, ಸಾರಿಗೆ ವೆಚ್ಚವನ್ನು ಸರಕಾರವೇ ಭರಿಸುತ್ತದೆ ಎಂದು ಹೇಳಿದರು. ಕಾಲ್ತುಳಿತದಲ್ಲಿ ಪ್ರಾಣ ಕಳೆದುಕೊಂಡವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಸರಕಾರ ಪ್ರಾರ್ಥನೆ ಮಾಡುತ್ತದೆ ಎಂದ ಸಿಎಂ, ಅವರ ಕುಟುಂಬ ವರ್ಗದವರು, ವಾರಸುದಾರರಿಗೆ ಅವರ ಸಾವಿನ ದುಃಖ ಭರಿಸುವ ಶಕ್ತಿ ಕೊಡಲಿ ಎಂದು ದೇವರಲ್ಲಿ ಪ್ರಾರ್ಥನೆ ಮಾಡುತ್ತೇನೆ ಎಂದರು.


**ಮ್ಯಾಜಿಸ್ಟ್ರಿಯಲ್ ತನಿಖೆಗೆ ಆದೇಶ**

ಜಿಲ್ಲಾಧಿಕಾರಿಗಳಿಂದ ವಿಚಾರಣೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕ್ರಮ ತೆಗೆದುಕೊಳ್ಳುತ್ತೇವೆ ಎಂದು ಸಿದ್ದರಾಮಯ್ಯ ಭರವಸೆ ನೀಡಿದರು. ಇದು ಒಂದು ಅನಿರೀಕ್ಷಿತವಾದ ಬೆಳವಣಿಗೆ. ಯಾರೂ ಇಷ್ಟು ಜನ ಬರುತ್ತಾರೆ ಎಂದು ನಿರೀಕ್ಷೆ ಮಾಡಿರಲಿಲ್ಲ ಎಂದು ಹೇಳಿದರು. ಅನಿರೀಕ್ಷಿತ ಎಂದು ಕ್ಲೀನ್ ಚಿಟ್ ನೀಡಿ ಬಿಟ್ಟಿದ್ದೀರಲ್ಲ? ಎಂದು ಹೇಳಿದ್ದಕ್ಕೆ, ಕ್ಲೀನ್ ಚಿಟ್ ನೀಡಿಲ್ಲ. ಅನಿರೀಕ್ಷಿತವಾಗಿ ಜನರು ಬಂದಿದ್ದರು ಎಂದು ಹೇಳಿದ್ದಷ್ಟೆ ಎಂಬುದಾಗಿ ಸಮಜಾಯಿಷಿ ನೀಡಿದರು. ಇದು ಸರಕಾರ ವೈಫಲ್ಯ ಎಂದು ಕೇಂದ್ರ ಸಚಿವರು ಆರೋಪಿಸಿದ್ದಾರೆ' ಎಂದು ಹೇಳಿದ್ದಕ್ಕೆ, ಇದರಲ್ಲಿ ರಾಜಕೀಯ ತರಲು ಇಷ್ಟ ಪಡುವುದಿಲ್ಲ. ಅನಿರೀಕ್ಷಿತವಾಗಿ ಜನ ಬಂದಿದ್ದರೂ ಕೂಡ, ಮ್ಯಾಜಿಸ್ಟ್ರಿಯಲ್ ತನಿಖೆಗೆ ಆದೇಶಿಸಿದ್ದೇನೆ. ಭದ್ರತಾ ವೈಫಲ್ಯ, ಏನೇ ವೈಫಲ್ಯ ಇದ್ದರೂ ತನಿಖೆ ನಡೆಯುತ್ತದೆ. ಮ್ಯಾಜಿಸ್ಟ್ರೇಟ್ ತನಿಖೆಗೆ 15 ದಿನಗಳ ಕಾಲವಕಾಶ ನೀಡಲಾಗಿದೆ ಎಂದು ಉತ್ತರಿಸಿದರು.

### ಕಾಲ್ತುಳಿತಕ್ಕೆ ಪ್ರಮುಖ ಕಾರಣಗಳು

- ಚಿನ್ನಸ್ವಾಮಿ ಕ್ರೀಡಾಂಗಣದ ಒಟ್ಟು ಸಾಮರ್ಥ್ಯ 35 ಸಾವಿರ ಆಸನ. ಆದರೆ, 3 ಲಕ್ಷ ಮಂದಿ ಅಭಿಮಾನಿಗಳು ಕ್ರೀಡಾಂಗಣಕ್ಕೆ ಆಗಮಿಸಿದ್ದರು.
- ಚಿನ್ನಸ್ವಾಮಿ ಕ್ರೀಡಾಂಗಣಕ್ಕೆ ಉಚಿತ ಪ್ರವೇಶ ಎಂಬ ಸುದ್ದಿ ಹರಡಿತ್ತು.
- ವಿಜಯೋತ್ಸವ ಹಮ್ಮಿಕೊಳ್ಳಲಾಗಿದೆ ಎಂದು ಸರ್ಕಾರ, ಆರ್‌ಸಿಬಿ ಘೋಷಣೆ ಮಾಡಿ ಆ ಬಳಿಕ ರದ್ದು ಮಾಡಿತ್ತು.
- ಕೊನೆಯ ಕ್ಷಣದಲ್ಲಿ ಕ್ರೀಡಾಂಗಣ ಪ್ರವೇಶಕ್ಕೆ ಆಪ್ (ತಂತ್ರಾಂಶ) ಮಾಡಿ ನೋಂದಣಿ ಮಾಡಿಕೊಳ್ಳಿ ಎಂದು ಹೇಳಿ ಗೊಂದಲ ಮಾಡಲಾಯಿತು.
- ಬೆಂಗಳೂರಿನಲ್ಲಿ 2 ಕಡೆ ಕಾರ್ಯಕ್ರಮ ಆಯೋಜಿಸಿದ್ದು. ಒಂದು ಸರ್ಕಾರ, ಇನ್ನೊಂದು ಕರ್ನಾಟಕ ಕ್ರಿಕೆಟ್ ಮಂಡಳಿ (ಕೆಎಸ್‌ಸಿಎ) ಕಾರ್ಯಕ್ರಮ ಹಮ್ಮಿಕೊಂಡಿತ್ತು. ಇದು ಅಭಿಮಾನಿಗಳಲ್ಲಿ ಗೊಂದಲ ಉಂಟುಮಾಡಿತು.
- ಸರ್ಕಾರ ಯಾವುದೇ ಮುನ್ನಚ್ಚರಿಕೆ ಕ್ರಮ ಕೈಗೊಳ್ಳದೇ ಕಪ್ ಗೆದ್ದ ಒಂದೇ ದಿನಕ್ಕೆ ತರಾತುರಿಯಲ್ಲಿ ಕಾರ್ಯಕ್ರಮ ಆಯೋಗಿಸಿದ್ದು.
- ಸರ್ಕಾರದ ಅನುಮತಿ ಇಲ್ಲದೇ ವಿಜಯ ಯಾತ್ರೆ ಎಂದು ಆರ್‌ಸಿಬಿ ಘೋಷಣೆ ಮಾಡಿದ್ದು.
- ಚಿನ್ನಸ್ವಾಮಿ ಕ್ರೀಡಾಂಗಣ ಬಳಿ ಚರಂಡಿಯ ಕಾಂಕ್ರಿಟ್ ಸ್ಲಾಬ್ ಕುಸಿತ.
- ಆರ್‌ಸಿಬಿ ಹುಚ್ಚು ಅಭಿಮಾನ. ತನ್ನ ನೆಚ್ಚಿನ ಆಟಗಾರನನ್ನು ಕಾಣಬೇಕು ಎಂಬ ಆಸೆಯಿಂದ ಜನದಟ್ಟಣೆ, ಪರಿಸ್ಥಿತಿ ಅಂದಾಜಿಸದೇ ಹೆಚ್ಚಿನ ಸಂಖ್ಯೆಯಲ್ಲಿ ಅಭಿಮಾನಿಗಳು ಬಂದಿದ್ದು.
- ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಜನದಟ್ಟಣೆ ಹಾಗೂ ತುರ್ತು ಪರಿಸ್ಥಿತಿಯನ್ನು ನಿಭಾಯಿಸುವಲ್ಲಿ ಪೊಲೀಸರ ವೈಫಲ್ಯ.













# ಹುಟ್ಟುಹಬ್ಬದ ಕೊಡುಗೆಯಾಗಿ ಪಡಿತರ ವಿತರಕರಿಗೆ ಜೀವವಿಮೆ

● ರಾಜ್ಯದ 20,000ಕ್ಕೂ ಹೆಚ್ಚು ಪಡಿತರ ವಿತರಕರು ನನ್ನ ಹೋರಾಟದಲ್ಲಿ ಕೈಜೋಡಿಸಿ ಪ್ರಾಮಾಣಿಕವಾಗಿ ಬೆಂಬಲ

• **ಉಮೇಶ್ ಬಾಣಾವರ ಉದಯವಾಹಿನಿ ಬೆಂಗಳೂರು**

ರಾಜ್ಯದ ನನ್ನ ಪಡಿತರ ವಿತರಕ ಬಂಧುಗಳಿಗೆ ಜೀವ ವಿಮೆ ಮಾಡುತ್ತಾ ಬಂದಿದ್ದು ಈಗಾಗಲೇ 550ಕ್ಕೂ ಹೆಚ್ಚು ಪಡಿತರ ವಿತರಕರಿಗೆ ನನ್ನ ವೈಯಕ್ತಿಕವಾಗಿ ಜೀವ ವಿಮೆ ಮಾಡಿಸಿ ಎಲ್ಲರಿಗೂ ಬಾಂಡ್ ವಿತರಿಸಲಾಗಿದೆ. ಇನ್ನೂ ಸಹ ನನ್ನ ಪಡಿತರ ವಿತರಕ ಬಂಧುಗಳು ತಮ್ಮ ದಾಖಲಾತಿಗಳನ್ನು ನೀಡಿ ಅರ್ಜಿ ನೀಡಿದಲ್ಲಿ ಅವರೆಲ್ಲರಿಗೂ ಸಹ ಜೀವ ವಿಮಾ ಯೋಜನೆಯ ಬಾಂಡನ್ನು ಕೊಡಿಸಲಿದ್ದೇನೆ. ಇದಕ್ಕಾಗಿ ಪಡಿತರ ವಿತರಕರು ಜೀವವಿಮೆಗಾಗಿ ಅರ್ಜಿ ಮತ್ತು ದಾಖಲಾತಿಗಳನ್ನು ನನ್ನ ವಿಳಾಸಕ್ಕೆ ಕಳುಹಿಸಿಕೊಡಬೇಕೆಂದು ಮನವಿ ಮಾಡಿದರು.

ಕನ್ನಡದ ಖ್ಯಾತ ನಟ ರೆಬಲ್ ಸ್ಟಾರ್, ದಾನ ಶೂರ ಕರ್ಣ, ಅಂಬರೀಶ್ ಅವರ ಸ್ವಗ್ರಾಮವಾದ ಮಂಡ್ಯ ಜಿಲ್ಲೆ, ಮದ್ದೂರು ತಾಲ್ಲೂಕು, ದೊಡ್ಡ ಅರಸಿಕೆರೆ ಗ್ರಾಮದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನ್ಯಾಯಬೆಲೆ ಅಂಗಡಿ ಎಂಬ ಚಲನಚಿತ್ರದ ಚಿತ್ರೀಕರಣದಲ್ಲಿ ಭಾಗವಹಿಸಿ ಮಾತನಾಡಿದ ಕೃಷ್ಣಪ್ಪನವರು ಕರ್ನಾಟಕ ಸರ್ಕಾರ ನ್ಯಾಯಬೆಲೆ ಅಂಗಡಿಯ ರಾಜ್ಯಾಧ್ಯಕ್ಷನಾಗಿ ಕಳೆದ 20 ವರ್ಷಗಳಿಂದ ಕನಿಷ್ಠ ಪ್ರಮಾಣದ ಕಮಿಷನ್ ಪಡೆಯುತ್ತಿದ್ದ ಪಡಿತರ ವಿತರಕರಿಗೆ ಇಂದು ಕ್ವಿಂಟಲ್‌ಗೆ ಎರಡು ನೂರು ರೂ.ಗಳ ಕಮಿಷನ್ ಹೆಚ್ಚಳ ಮಾಡಿಸಿದ್ದೇನೆ. ಪ್ರತಿ ಹಂತದಲ್ಲಿಯೂ ಪಡಿತರ ವಿತರಕರ ಸಮಸ್ಯೆಗಳಿಗೆ ಸ್ಪಂದಿಸುತ್ತಾ ಬಂದಿದ್ದು , ನನಗೂ ರಾಜ್ಯದ 20,000ಕ್ಕೂ ಹೆಚ್ಚು ಪಡಿತರ ವಿತರಕರು ನನ್ನ ಹೋರಾಟದಲ್ಲಿ ಕೈಜೋಡಿಸಿ ಪ್ರಾಮಾಣಿಕವಾಗಿ ಬೆಂಬಲವಾಗಿ ನಿಂತಿದ್ದಾರೆ. ಇವರ ನಂಬಿಕೆಗೆ ನಾನು ಎಂದಿಗೂ ದ್ರೋಹ ಬಗೆಯುವುದಿಲ್ಲ ಎಂದರು .

**ಮಾನವೀಯತೆ ಮೆರೆದ ಕೃಷ್ಣಪ್ಪ**



ಕರ್ನಾಟಕ ರಾಜ್ಯ ಪಡಿತರ ವಿತರಕರ ಸಂಘದ ರಾಜ್ಯಾಧ್ಯಕ್ಷ ಹಾಗೂ ರಾಷ್ಟ್ರೀಯ ಕಾರ್ಯ ಅಧ್ಯಕ್ಷನಾಗಿ ಕಳೆದ 20 ವರ್ಷಕ್ಕೂ ಹೆಚ್ಚು ಪಡಿತರ ವಿತರಕರ ಸಂಘದಲ್ಲಿ ರಾಜ್ಯಾಧ್ಯಕ್ಷನಾಗಿ ಸೇವೆ ಸಲ್ಲಿಸುತ್ತಾ ಬಂದಿದ್ದು ಈ ಸಂಸ್ಥೆಯಿಂದ ನಾನು ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ನನ್ನ ಪ್ರಾಮಾಣಿಕ ಹೋರಾಟಗಳಿಂದ ಗುರುತಿಸಿಕೊಂಡು ಬರುತ್ತಿದ್ದು ರಾಜ್ಯಾದ್ಯಂತ ಎಲ್ಲಾ ನನ್ನ ಪಡಿತರ ವಿತರಕ ಬಂಧುಗಳು ನನ್ನ ಹುಟ್ಟುಹಬ್ಬವನ್ನು ನನ್ನ ಕುಟುಂಬದ ಸದಸ್ಯರಂತೆ ರಾಜ್ಯದ ಮೂಲೆ ಮೂಲೆಗಳಲ್ಲಿಯೂ ಸಹ ಆಚರಿಸಿ ನನಗೆ ಶುಭಾಶಯ ಕೋರಿದ್ದು ಇದಕ್ಕಾಗಿ ನಾನು ಚಿರಋಣಿಯಾಗಿರುತ್ತೇನೆ.
-ಕೃಷ್ಣಪ್ಪ ಕರ್ನಾಟಕ ರಾಜ್ಯ ಪಡಿತರ ವಿತರಕರ ಸಂಘದ ರಾಜ್ಯಾದ್ಯಕ್ಷ ಹಾಗೂ ರಾಷ್ಟ್ರೀಯ ಕಾರ್ಯ ಅಧ್ಯಕ್ಷ

**ರಾಷ್ಟ್ರದಲ್ಲಿಯೇ ಮಾದರಿ ಕರ್ನಾಟಕದ ಪಡಿತರ ವಿತರಕರ ಸಂಘ**



ರಾಷ್ಟ್ರದಲ್ಲಿಯೇ ಸಂಘಟನೆ ಹೋರಾಟಗಳಲ್ಲಿ ಹೆಸರುವಾಸಿಯಾಗಿರುವ ಕರ್ನಾಟಕ ರಾಜ್ಯ ಸರ್ಕಾರಿ ಪಡಿತರ ವಿತರಕರ ಸಂಘ ಇದನ್ನು ಪ್ರತಿ ಹಂತದಲ್ಲೂ ಗುರುತಿಸಿರುವ ಚಲನಚಿತ್ರ ಫಿಲಂ ಚೇಂಬರ್ ಮಾಜಿ ಅಧ್ಯಕ್ಷರಾದ ಭಾಮ ಹರೀಶರವರು. ನ್ಯಾಯಬೆಲೆ ಅಂಗಡಿ ಮಾಲೀಕರಾದ ಹಾಗೂ ನಿರ್ಮಾಪಕರಾದ ಪದ್ಮಾವತಿ ಚಂದ್ರಶೇಖರ್, ಹಾಗೂ ಮೂರ್ತಿ, ಮತ್ತು ತೇಜು ಈ ಚಲನಚಿತ್ರಕ್ಕಾಗಿ ಶ್ರಮಿಸುತ್ತಿದ್ದು ನಾಯಕ ನಟರಾಗಿ ಕುಮಾರ್ ಬಂಗಾರಪ್ಪ, ನಾಯಕಿಯಾಗಿ ತುಪ್ಪದ ಬೆಡಗಿ ರಾಗಿಣಿ, ಹಿರಿಯ ನಟರಾದ ದೊಡ್ಡಣ್ಣ ರವರು ಸಹ ನಟಿಸುತ್ತಿದ್ದು ಚಲನಚಿತ್ರ ಅತ್ಯಂತ ಯಶಸ್ವಿಯಾಗಿ ಮುಂದಿನ ದಿನಗಳಲ್ಲಿ ಪಂಚ ಭಾಷೆಗಳಲ್ಲಿಯೂ ಸಹ ಕರ್ನಾಟಕ ಸರ್ಕಾರಿ ನ್ಯಾಯಬೆಲೆ ಅಂಗಡಿ ಎಂಬ ಚಲನಚಿತ್ರ ಮೂಡಿ ಬರಲಿದೆ. ಈ ಚಲನಚಿತ್ರದಲ್ಲಿಯೂ ಸಹ ತಾವು ಸಹ ರಾಜ್ಯಾಧ್ಯಕ್ಷರಾಗಿ ನಟಿಸುತ್ತಿರುವುದಾಗಿ ಕರ್ನಾಟಕ ರಾಜ್ಯ ಪಡಿತರ ವಿತರಕರ ಸಂಘದ ರಾಜ್ಯಾದ್ಯಕ್ಷ ಹಾಗೂ ರಾಷ್ಟ್ರೀಯ ಕಾರ್ಯ ಅಧ್ಯಕ್ಷ ಕೃಷ್ಣಪ್ಪ ತಿಳಿಸಿದರು. ರಾಜ್ಯ ಕಾರ್ಯದರ್ಶಿ ಹಾಗೂ ಹಾಸನ ಜಿಲ್ಲಾ ಅಧ್ಯಕ್ಷರಾದ ಚನ್ನಕೇಶವೇಗೌಡ ಹಾಗೂ ಹಲವಾರು ಸಂಘದ ರಾಜ್ಯ ಪದಾಧಿಕಾರಿಗಳು ಹಾಗೂ ರಾಜ್ಯ ಮೂಲೆ ಮೂಲೆಗಳಿಂದ ಆಗಮಿಸಿದ್ದ ರಾಜ್ಯ ಪಡಿತರ ವಿತರಕರು ತೀವ್ರ ಉತ್ಸಾಹದಿಂದ ಕರ್ನಾಟಕ ರಾಜ್ಯ ಸರ್ಕಾರಿ ನ್ಯಾಯಬೆಲೆ ಅಂಗಡಿ ಚಿತ್ರೀಕರಣದಲ್ಲಿ ರಾಜ್ಯದ್ಯಕ್ಷ ಕೃಷ್ಣಪ್ಪನವರೊಂದಿಗೆ ಪಾಲ್ಗೊಂಡರು.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹9,917/Gram24ct ₹9,090/Gram22ct ಬೆಳ್ಳಿ: ₹102.00/Gram

## 81.82 ಲಕ್ಷ ರೂ. ಮೌಲ್ಯದ ಮಾದಕ ದ್ರವ್ಯ ವಶಕ್ಕೆ

• ಉದಯವಾಹಿನಿ, ಬೆಂಗಳೂರು

ನಗರದ ವಿವಿಧೆಡೆ ಕಾರ್ಯಾಚರಣೆ ನಡೆಸಿರುವ ಮಾದಕ ದ್ರವ್ಯ ನಿಗ್ರಹ ದಳ (ಸಿಸಿಬಿ) ಎರಡು ಪ್ರತ್ಯೇಕ ಪ್ರಕರಣಗಳಲ್ಲಿ 81.82 ಲಕ್ಷ ರೂ. ಮೌಲ್ಯದ ಮಾದಕ ದ್ರವ್ಯ ವಸ್ತುಗಳನ್ನು ವಶಕ್ಕೆ ಪಡೆದಿದೆ. ತಲಘಟ್ಟಪುರ ಪೊಲೀಸ್ ಠಾಣಾ ಸರಹದ್ದಿನ ಕನಕಪುರ ಮುಖ್ಯ ರಸ್ತೆಯಲ್ಲಿದ್ದ ಗೋಡಾನ್ ಮೇಲೆ ಸಿಸಿಬಿ ದಾಳಿ ನಡೆಸಿದ್ದು, ಈ ವೇಳೆ ತಂಬಾಕು ಹಾಗೂ ನಿಕೋಟಿನ್ ಒಳಗೊಂಡ ಸುಮಾರು 81.82 ಲಕ್ಷ ರೂ. ಮೌಲ್ಯದ ವಸ್ತುಗಳನ್ನು ಜಪ್ತಿ ಮಾಡಿದೆ. ಈ ವೇಳೆ ಇಬ್ಬರನ್ನು ಬಂಧಿಸಲಾಗಿದೆ.ವಶಪಡಿಸಿಕೊಂಡ ವಸ್ತುಗಳಲ್ಲಿ 61.8 ಲಕ್ಷ ರೂ. ಮೌಲ್ಯದ ವಿವಿಧ ತಂಬಾಕು ಮತ್ತು ಚೂಯಿಂಗ್ ಉತ್ಪನ್ನಗಳು ಸೇರಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಮತ್ತೊಂದು ಕಾರ್ಯಾಚರಣೆಯಲ್ಲಿ ಮಾದಕ ದ್ರವ್ಯ ನಿಗ್ರಹ ದಳ (ಸಿಸಿಬಿ) 2ನೇ ಹಂತದ ಎಚ್‌ಆರ್‌ಬಿಆರ್ ಲೇಔಟ್‌ನಲ್ಲಿರುವ ಅಂಗಡಿಯಲ್ಲಿ ಇ-ಸಿಗರೇಟ್‌ಗಳು, ಹುಕ್ಕಾ ಫ್ಲೇವರ್‌ಗಳು, ವಿದೇಶಿ ಸಿಗರೇಟ್‌ಗಳನ್ನು ಮಾರಾಟ ಮಾಡಿದ ಹಿನ್ನೆಲೆಯಲ್ಲಿ ಅಂಗಡಿ ಕೆಲಸಗಾರನನ್ನು ಬಂಧನಕ್ಕೊಳಪಡಿಸಿದೆ. ಸಿಸಿಬಿ ಅಧಿಕಾರಿಗಳು ಅಂಗಡಿಯ ಮೇಲೆ ದಾಳಿ ನಡೆಸಿ 201 ಇ-ಸಿಗರೇಟ್‌ಗಳು, 297 ಹುಕ್ಕಾ ಫ್ಲೇವರ್‌ಗಳು ಮತ್ತು ಆರು ವಿದೇಶಿ ಸಿಗರೇಟ್ ಪ್ಯಾಕ್‌ಗಳನ್ನು ವಶಪಡಿಸಿಕೊಂಡಿದ್ದಾರೆ.

## ಸಿಸಿಬಿ ದಾಳಿ ಆರು ಮಂದಿ ಸೆರೆ: ಗಾಂಜಾ, ಎಂಡಿಎಂಎ ಕ್ರಿಸ್ಟಲ್, ಇ-ಸಿಗರೇಟು ಜಪ್ತಿ

• ಉದಯವಾಹಿನಿ, ಬೆಂಗಳೂರು

ನಾಲ್ಕು ಪ್ರತ್ಯೇಕ ಪ್ರಕರಣಗಳಲ್ಲಿ ಸಿಸಿಬಿಯ ಮಾದಕ ದ್ರವ್ಯ ನಿಗ್ರಹ ದಳದ ಸಿಬ್ಬಂದಿ ನಗರದ ವಿವಿಧೆಡೆ ಕಾರ್ಯಾಚರಣೆ ನಡೆಸಿ, ಆರು ಮಂದಿಯನ್ನು ಬಂಧಿಸಿದ್ದು ರೂ. 84 ಲಕ್ಷ ಮೌಲ್ಯದ ಡ್ರಗ್ಸ್ ವಶಪಡಿಸಿಕೊಳ್ಳಲಾಗಿದೆ.ರಾಜಗೋಪಾಲನಗರದ ದರ್ಶನ್, ಪ್ರಜ್ವಲ್ ಹಾಗೂ ಕೇರಳದ ಅಲೆಕ್ ವರ್ಗಿಸ್, ಹಾದಿಲ್, ಅನಸ್ಕೊಯ್ಯು, ಜೋಬಿನ್ ಬಂಧಿತರು. ಬ್ಯಾಡರಹಳ್ಳಿ ವ್ಯಾಪ್ತಿಯಲ್ಲಿ ನಡೆದ ಕಾರ್ಯಾಚರಣೆಯಲ್ಲಿ 1 ಕೆ.ಜಿ 200 ಗ್ರಾಂ ಗಾಂಜಾ, 220 ಗ್ರಾಂ ಹೈಡ್ರೋ ಗಾಂಜಾ, ಎರಡು ಐ-ಫೋನ್ ವಶಕ್ಕೆ ಪಡೆದುಕೊಳ್ಳಲಾಗಿದೆ. ಇದರ ಮೌಲ್ಯ ರೂ.13 ಲಕ್ಷ ಎಂದು ಅಂದಾಜಿಸಲಾಗಿದೆ ಎಂದು ಪೊಲೀಸರು ತಿಳಿಸಿದರು. ಹಾದಿಲ್ ಜೋಬಿನ್ ಅವರು ಮೋಜಿನ ಜೀವನ ನಡೆಸಲು ಕೇರಳದಿಂದ ಡ್ರಗ್ಸ್ ತಂದು ಬೆಂಗಳೂರಿನಲ್ಲಿ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿದ್ದರು' ಎಂದು ಹೇಳಿದರು. ಬ್ಯಾಡರಹಳ್ಳಿ ವ್ಯಾಪ್ತಿಯಲ್ಲಿ ನಡೆದ ಕಾರ್ಯಾಚರಣೆಯಲ್ಲಿ ರಾಜಗೋಪಾಲನಗರದ ದರ್ಶನ್ ಹಾಗೂ ಪ್ರಜ್ವಲ್ ಅವರನ್ನು ಬಂಧಿಸಲಾಗಿದೆ. ಮಂಡ್ಯ ಜಿಲ್ಲೆ ನಾಗಮಂಗಲ ತಾಲ್ಲೂಕಿನ ಬೆಳ್ಳೂರು ಕ್ರಾಸ್ ಬಳಿ ಅಪರಿಚಿತ ವ್ಯಕ್ತಿಯಿಂದ ಗಾಂಜಾ ಹಾಗೂ ಎಂಡಿಎಂಎ ಡ್ರಗ್ಸ್ ಅನ್ನು ಕಡಿಮೆ ಬೆಲೆಗೆ ಖರೀದಿಸಿ ನಗರಕ್ಕೆ ತಂದು ಮಾರಾಟ ಮಾಡುತ್ತಿದ್ದರು. ಆರೋಪಿಗಳಿಂದ ಗಾಂಜಾ, ಎಂಡಿಎಂಎ ಕ್ರಿಸ್ಟಲ್ ಹಾಗೂ ತೂಕದ ಯಂತ್ರವನ್ನು ಜಪ್ತಿ ಮಾಡಿಕೊಳ್ಳಲಾಗಿದೆ ಎಂದು ಪೊಲೀಸರು ಹೇಳಿದರು. ನಿಷೇಧಿತ ತಂಬಾಕು ಉತ್ಪನ್ನ ಜಪ್ತಿ ನಿಷೇಧಿತ ತಂಬಾಕು ಉತ್ಪನ್ನಗಳನ್ನು ಅಕ್ರಮವಾಗಿ ದಾಸ್ತಾನು ಮಾಡಿದ್ದ ಗೋದಾಮಿನ ಮೇಲೆ ಸಿಸಿಬಿ ಅಧಿಕಾರಿಗಳು ದಾಳಿ ನಡೆಸಿ ಲಕ್ಷಾಂತರ ರೂಪಾಯಿ ಮೌಲ್ಯದ ವಸ್ತುಗಳನ್ನು ಜಪ್ತಿ ಮಾಡಿದ್ದಾರೆ. ತಲಘಟ್ಟಪುರ ಪೊಲೀಸ್ ಠಾಣಾ ವ್ಯಾಪ್ತಿಯ ಕನಕಪುರ ಮುಖ್ಯ ರಸ್ತೆಯಲ್ಲಿರುವ ಗೋದಾಮಿನ ಮೇಲೆ ಸಿಸಿಬಿ ಅಧಿಕಾರಿಗಳು ದಾಳಿ ನಡೆಸಿ, ತಂಬಾಕು ಹಾಗೂ ನಿಕೋಟಿನ್ ಒಳಗೊಂಡ ಅಂದಾಜು ರೂ.61.82 ಲಕ್ಷ ಮೌಲ್ಯದ ವಸ್ತುಗಳನ್ನು ಜಪ್ತಿ ಮಾಡಿಕೊಂಡಿದ್ದಾರೆ. ಪರವಾನಗಿ ಪಡೆಯದೆ ತಂಬಾಕು ಉತ್ಪನ್ನಗಳನ್ನು ಹಲವು ದಿನಗಳಿಂದ ಸಂಗ್ರಹಿಸಿ ಆರೋಪಿಗಳು ಹಂಚಿಕೆ ಮಾಡುತ್ತಿದ್ದರು.

## ಬಿಡದಿ ಪೊಲೀಸರಿಗೆ ರಿಕಿ ರೈ ಎಚ್ಚರಿಕೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಕೊಲೆ ಯತ್ನದಿಂದ ಬದುಕುಳಿದ ಮೃತ ಭೂಗತ ಪಾತಕಿ ಮುತ್ತಪ್ಪ ರೈ ಪುತ್ರ ರಿಕಿ ರೈ ಬಿಡದಿ ಪೊಲೀಸರ ಮುಂದೆ ಹಾಜರಾಗಿದ್ದರು. ಈ ದಿನ ಏನು ನಡೆಯಿತು ಎಂಬ ಕುರಿತು ಪೊಲೀಸರಿಗೆ ವಿವರಿಸಿದ್ದಾರೆ. ಘಟನೆ ಕುರಿತಂತೆ ಈ ಹಿಂದೆ ಪೊಲೀಸ್ ಸಮನ್ಸ್‌ಗೆ ಪ್ರತಿಕ್ರಿಯಿಸಲು ರಿಕಿ ರೈ ಸಮಯ ಕೋರಿದ್ದರು. ಏಪ್ರಿಲ್ 19ರಂದು ರಿಕಿ ರೈ ಅವರು ಬಿಡದಿಯಲ್ಲಿರುವ ಫಾರ್ಮ್‌ಹೌಸ್‌ನಿಂದ ಬೆಂಗಳೂರಿಗೆ ಕಾರಿನಲ್ಲಿ ಪ್ರಯಾಣಿಸುತ್ತಿದ್ದಾಗ ಗೇಟ್‌ಕೀಪರ್ ವಿಠಲ್ ಮೋನಪ್ಪ ಗುಂಡು ಹಾರಿಸಿದ್ದಾನೆ ಎಂದು ಆರೋಪಿಸಲಾಗಿದೆ. ರಿಕಿ ರೈ ಖಾಸಗಿ ಭದ್ರತಾ ಸಿಬ್ಬಂದಿಯೊಂದಿಗೆ ಪೊಲೀಸ್ ಠಾಣೆಗೆ ಬಂದರು. ಅವರನ್ನು ಉಪ ಪೊಲೀಸ್ ವರಿಷ್ಠಾಧಿಕಾರಿ ಶ್ರೀನಿವಾಸ್ ಮತ್ತು ಬಿಡದಿ ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್ ಶಂಕರ್ ನಾಯಕ್ ಸುಮಾರು ನಾಲ್ಕು ಗಂಟೆಗಳ ಕಾಲ ವಿಚಾರಣೆ ನಡೆಸಿದರು. ಪೊಲೀಸರು ಅವರ ಹೇಳಿಕೆಯನ್ನು ವಿಡಿಯೋ ಚಿತ್ರೀಕರಣ ಮಾಡಿದರು. ಅದೃಷ್ಟವಶಾತ್, ನಾನು ಕೊಲೆ ಯತ್ನದಿಂದ ಬದುಕುಳಿದೆ. ವಿವರವಾದ ತನಿಖೆ ಅಗತ್ಯ, ಮತ್ತು ನ್ಯಾಯ ಸಿಗುತ್ತದೆ ಎಂದು ನಾನು ಭಾವಿಸುತ್ತೇನೆ. ಇಲ್ಲದಿದ್ದರೆ, ದಾಳಿಯ ಹಿಂದಿನವರನ್ನು ನಾವೇ ನೋಡಿಕೊಳ್ಳುತ್ತೇನೆ ಎಂದು ರಿಕಿ ಮಾಧ್ಯಮಗಳೊಂದಿಗೆ ಮಾತನಾಡುತ್ತಾ ಹೇಳಿದರು. ನಾವು ಎಲ್ಲಾ ಅಗತ್ಯ ಮಾಹಿತಿಯನ್ನು ಹಂಚಿಕೊಂಡಿದ್ದೇವೆ. ಸುಳ್ಳು ವದಂತಿಗಳು ಹರಡುತ್ತಿದ್ದರೂ, ತನಿಖೆಯಲ್ಲಿ ನಮಗೆ ಸಂಪೂರ್ಣ ನಂಬಿಕೆ ಇದೆ ಎಂದು ರಿಕಿ ವಕೀಲ ನಾರಾಯಣಸ್ವಾಮಿ ಹೇಳಿದರು.

# ಪೊಲೀಸ್ ವ್ಯಾಪ್ತಿಗೆ ಹೆಬ್ಬಗೋಡಿ, ಆವಲಹಳ್ಳಿ, ಕುಂಬಳಗೋಡು ಠಾಣೆಗಳು

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ನಗರದ ಸುತ್ತಮುತ್ತಲಿನ ಮೂರು ಗ್ರಾಮೀಣ ಪೊಲೀಸ್ ಠಾಣೆಗಳಾದ ರಾಮನಗರ ಜಿಲ್ಲೆಯ ಕುಂಬಳಗೋಡು, ಆವಲಹಳ್ಳಿ, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೆಬ್ಬಗೋಡಿಗಳನ್ನು ಬೆಂಗಳೂರು ನಗರ ಪೊಲೀಸ್ ವ್ಯಾಪ್ತಿಗೆ ಸೇರ್ಪಡೆ ಮಾಡಲಾಗಿದೆ.

ಅಧಿಕಾರ ಕೂಡ ಶೀಘ್ರ ಹಸ್ತಾಂತರಗೊಳ್ಳಲಿದೆ, ಏಕೆಂದರೆ ಈ ಪ್ರದೇಶಗಳು ಹೆಚ್ಚಾಗಿ ನಗರೀಕರಣಗೊಂಡಿವೆ ಮತ್ತು ಅಪರಾಧದ ಸ್ವರೂಪವೂ ಬದಲಾಗಿದೆ. ಫೆಬ್ರವರಿ 6ರಂದೇ



ಉದಯವಾಹಿನಿ ಚಿತ್ರ

ಸರ್ಕಾರದಿಂದ ಆದೇಶ ಹೊರಬಿದ್ದಿದ್ದು, ಇದುವರೆಗೂ ಈ ಠಾಣೆಗಳು ಜಿಲ್ಲಾಡಳಿತದ ಅಡಿಯಲ್ಲೇ ಕಾರ್ಯ ನಿರ್ವಹಿಸುತ್ತಿವೆ ಎಂದು ಡಿಜಿ, ಐಜಿಪಿ ಡಾ. ಎಂಎ ಸಲೀಂ ತಿಳಿಸಿದ್ದಾರೆ.

ಮೇಲೆ ತಿಳಿಸಲಾದ ಮೂರು ಪೊಲೀಸ್ ಠಾಣೆಗಳನ್ನು ಪೊಲೀಸ್ ಕಾನ್‌ಸ್ಟೆಬಲ್‌ಗಳಿಂದ ಸಬ್-ಇನ್‌ಸ್ಪೆಕ್ಟರ್‌ಗಳವರೆಗಿನ ಅಸ್ತಿತ್ವದಲ್ಲಿರುವ ಸಿಬ್ಬಂದಿಯೊಂದಿಗೆ ಹಸ್ತಾಂತರಿಸಿ ತಕ್ಷಣವೇ ಅಧಿಕಾರ ವಹಿಸಿಕೊಳ್ಳಬೇಕು. ಪೊಲೀಸ್ ಕಾನ್‌ಸ್ಟೆಬಲ್‌ಗಳಿಂದ ಸಬ್-ಇನ್‌ಸ್ಪೆಕ್ಟರ್‌ಗಳವರೆಗಿನ ಅಸ್ತಿತ್ವದಲ್ಲಿರುವ ಸಿಬ್ಬಂದಿ ಬೆಂಗಳೂರು, ರಾಮನಗರ ಜಿಲ್ಲೆಗಳಿಂದ ಬೆಂಗಳೂರು ನಗರ ಪೊಲೀಸರಿಗೆ ಒಂದು ತಿಂಗಳ ಕಾಲ OOD ಆಧಾರದ ಮೇಲೆ ಅದೇ ಸ್ಥಳದಲ್ಲಿ ಕೆಲಸ ಮಾಡುವುದನ್ನು ಮುಂದುವರಿಸುತ್ತಾರೆ, ನಂತರ ಅವರನ್ನು ಬೆಂಗಳೂರು ನಗರ ಪೊಲೀಸ್ ಸಿಬ್ಬಂದಿಯಿಂದ ಬದಲಾಯಿಸಬೇಕು ಎಂದು ಪತ್ರದಲ್ಲಿ ತಿಳಿಸಲಾಗಿದೆ. ಮೂರು ಪೊಲೀಸ್ ಠಾಣೆಗಳು ಸೇರ್ಪಡೆಯಾಗುವುದರೊಂದಿಗೆ, ಹೆಬ್ಬಗೋಡಿ ಆಗ್ನೇಯ ವಿಭಾಗಕ್ಕೆ, ಆವಲಹಳ್ಳಿ ವೈಟ್‌ಫೀಲ್ಡ್ ವಿಭಾಗಕ್ಕೆ ಮತ್ತು ಕುಂಬಳಗೋಡು ಪಶ್ಚಿಮ ವಿಭಾಗಕ್ಕೆ ಸೇರ್ಪಡೆ ಯಾಗುವ ಸಾಧ್ಯತೆ ಇದೆ. ವಿಭಾಗಗಳ ಸಂಖ್ಯೆಯನ್ನು ಎಂಟರಿಂದ 11 ಕ್ಕೆ ಹೆಚ್ಚಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದರು. ಇನ್ನೂ ಮೂರು ವಿಭಾಗಗಳೊಂದಿಗೆ, ಪೊಲೀಸ್ ಠಾಣೆಗಳ ಸಂಖ್ಯೆ ಹೆಚ್ಚಾಗುತ್ತದೆ ಮತ್ತು ನಗರದಲ್ಲಿ ಇನ್ನೂ ಮೂವರು ಐಪಿಎಸ್ ಅಧಿಕಾರಿಗಳನ್ನು ಡಿಸಿಪಿಗಳಾಗಿ ನೇಮಿಸಲಾಗುವುದು ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

# ಜಾಗ ಫೈನಲ್, 68 ಎಕರೆ ಪ್ರದೇಶ ಗುರ್ತಿಸಿದ ಸರ್ಕಾರ!


### ದೇಶದ ಉದ್ಯಾನ ನಗರಿ ಎಂದು ಕರೆಸಿಕೊಳ್ಳುವ ಬೆಂಗಳೂರಿನ ಬಗ್ಗೆ ಹೆಚ್ಚಿನ ಮಾಹಿತಿ

• ಉದಯವಾಹಿನಿ, ಬೆಂಗಳೂರು

ಬ್ರ್ಯಾಂಡ್ ಬೆಂಗಳೂರಿನ ಉಪಕ್ರಮವಾಗಿ ನಗರದಲ್ಲಿ ನಿರ್ಮಾಣವಾಗುತ್ತಿರುವ ಸರ್ಕಾರದ ಈ ಮಹತ್ವಾಕಾಂಕ್ಷೆಯ ಸ್ಕೈಡೆಕ್ ಯೋಜನೆಗೆ ಹೊಸ ಸ್ಥಳ ಅಂತಿಮಗೊಳಿಸಿ ಸರ್ಕಾರ ಪ್ರಕಟಿಸಿದೆ. ಯೋಜನೆಯನ್ನು ಪ್ರವಾಸೋದ್ಯಮ ಉತ್ತೇಜಿಸುವ, ಪ್ರವಾಸಿಗರ ಆಕರ್ಷಣೆಗೆ ಕೇಂದ್ರವಾಗಿ ಮಾಡುವ ಉದ್ದೇಶ ಹೊಂದಲಾಗಿದೆ. ದೇಶದ ಉದ್ಯಾನ ನಗರಿ ಎಂದು ಕರೆಸಿಕೊಳ್ಳುವ ಬೆಂಗಳೂರಿನ ಬಗ್ಗೆ ಹೆಚ್ಚಿನ ಮಾಹಿತಿ ತಿಳಿಯಲು ಸುತ್ತ 360 ಡಿಗ್ರಿ ವ್ಯಾಪ್ತಿಯಲ್ಲಿ ಬೆಂಗಳೂರು ಸೌಂದರ್ಯ ಕಣ್ತುಂಬಿಕೊಳ್ಳಲು ಈ 250 ಮೀಟರ್ ಎತ್ತರದ ಸ್ಕೈ ಟವರ್ ಸ್ಥಾಪಿಸಲಾಗುತ್ತದೆ. ಈ ಟವರ್ ಸ್ಥಾಪನೆಗೆ ಈವರೆಗೆ ಇದ್ದ ಸ್ಥಳ ಅಂತಿಮ ಗೊಂದಲ ಬಗೆಹರಿದಿದ್ದು, ಸರ್ಕಾರ ಕೆಂಗೇರಿ ಬಳಿ ನಾಡಪ್ರಭು ಲೇಔಟ್‌ನಲ್ಲಿ ಸ್ಕೈಡೆಕ್ ನಿರ್ಮಿಸಲು ಸ್ಥಳ ಅಂತಿಮಗೊಳಿಸಿದೆ.

ಈ ಹಿಂದೆ ಕೆಲವು ಸ್ಥಳಗಳನ್ನು ಗುರುತಿಸಲಾಗಿತ್ತು. ಆ ಪೈಕಿ ಬೆಂಗಳೂರು ವಿಶ್ವವಿದ್ಯಾಲಯದ ಜ್ಞಾನಭಾರತಿ ಕ್ಯಾಂಪಸ್ ಬಳಿ ಸ್ಥಾಪಿಸಲು ಪ್ರಸ್ತಾಪಿಸಲಾಗಿತ್ತು. ಆದರೆ, ಭವಿಷ್ಯದಲ್ಲಿ ಪ್ರವಾಸಿಗರ ಸಂಖ್ಯೆ ಹೆಚ್ಚಾಗಿ ವಿಶ್ವವಿದ್ಯಾಲಯ ಕಾರ್ಯ ಚಟುವಟಿಕೆಗೆ ತೊಂದರೆ ಆಗುವ ಹಿನ್ನೆಲೆ ಯೋಜನೆಗೆ ಇದೀಗ ಕೊಮ್ಮಘಟ್ಟದ ಮೈಸೂರು ರಸ್ತೆ, ಮಾಗಡಿ ರಸ್ತೆಯ ನಡುವೆ ಇರುವ ಲೇಔಟ್‌ನ 7ನೇ ಬ್ಲಾಕ್‌ನಲ್ಲಿ 68 ಎಕರೆ ಪ್ರದೇಶವನ್ನು ಗುರ್ತಿಸಿದೆ. ದಕ್ಷಿಣ ಏಷ್ಯಾದ ಅತಿ ಎತ್ತರದ ಸ್ಕೈಡೆಕ್ ಎಂದು ಪರಿಗಣಿಸಲಾಗುತ್ತಿರುವ ಈ ಯೋಜನೆಗೆ ರೂ. 500 ಕೋಟಿ ವೆಚ್ಚವಾಗಲಿದೆ ಎಂದು ಅಂದಾಜಿಸಲಾಗಿದೆ.

ಈ ನಡುವೆ ಮಂಗಳವಾರ ಉಪಮುಖ್ಯಂತ್ರಿ ಡಿಕೆ.


ಉದಯವಾಹಿನಿ ಚಿತ್ರ

> ಬೆಂಗಳೂರಿನ ಸ್ಕೈಡೆಕ್ ದೆಹಲಿಯ ಕುತುಬ್ ಮಿನಾರ್‌ಗಿಂತ ಮೂರು ಪಟ್ಟು ಎತ್ತರವಾಗಿರುತ್ತದೆ. ಈ ಗೋಪುರವು ಉದ್ಯಾನ ನಗರದ 360 ಡಿಗ್ರಿ ಸಮಗ್ರ ನೋಟವನ್ನು ನೀಡುತ್ತದೆ ಎಂದು ಸರ್ಕಾರಿ ಮೂಲಗಳು ಮಾಹಿತಿ ನೀಡಿವೆ. ಈ ನಡುವೆ ಈ ವರ್ಷದ ಕೆಂಪೇಗೌಡ ಜಯಂತಿಯನ್ನು ನಾಡಪ್ರಭು ಕೆಂಪೇಗೌಡ ಲೇಔಟ್‌ನಲ್ಲಿ ಆಚರಿಸಲು ಸರ್ಕಾರ ನಿರ್ಧರಿಸಿದೆ ಎಂದು ಶಿವಕುಮಾರ್ ಹೇಳಿದ್ದಾರೆ.

ಶಿವಕುಮಾರ್ ಅವರು ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲನೆ ನಡೆಸಿದರು, ದಕ್ಷಿಣ ಏಷ್ಯಾದ ಅತಿ ಎತ್ತರದ ಸ್ಕೈಡೆಕ್, ಬ್ರಾಂಡ್ ಬೆಂಗಳೂರಿನ ಮಹತ್ವಾಕಾಂಕ್ಷೆಯ ಯೋಜನೆ, ನಮ್ಮ ನಗರದ ಹೆಮ್ಮೆಯಾಗಲಿದೆ ಎಂದು ಹೇಳಿದರು.

ಈ ಯೋಜನೆಯನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಥವಾ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಕಾರ್ಯಗತಗೊಳಿಸಬೇಕು ಎಂಬುದನ್ನು ಡಿಸಿಎಂ ನಿರ್ಧರಿಸುತ್ತಾರೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

> ನಾಡಪ್ರಭು ಕೆಂಪೇಗೌಡ ಅಭಿವೃದ್ಧಿ ಪ್ರಾಧಿಕಾರಕ್ಕೆ ಸುಮ್ಮನಹಳ್ಳಿ ಬಳಿ 5 ಎಕರೆ ಜಾಗವನ್ನು ನಿಗದಿ ಮಾಡಿದ್ದು, ಜೂನ್ 27ರಂದು ಕೆಂಪೇಗೌಡ ಜಯಂತಿ ಅಂಗವಾಗಿ ಅಂದೇ ಭೂಮಿ ಪೂಜೆ ಮಾಡಲು ತೀರ್ಮಾನಿಸಿದ್ದೇವೆ. ಈ ಸಂಬಂಧ ಜಮೀನನ್ನು ವೀಕ್ಷಿಸಿ, ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚಿಸಿದ್ದೇನೆ. ಹಂಚಿಕೆಯಾದ ಭೂಮಿಯಲ್ಲಿ ಕೆಂಪೇಗೌಡರ ವಸ್ತುಸಂಗ್ರಹಾಲಯ ಬರಲಿದೆ, ಈ ಸ್ಥಳದ ಮೂಲಕ ರೈಲು ಮಾರ್ಗವೂ ಹಾದುಹೋಗುತ್ತದೆ. ಹೀಗಾಗಿ ಇಲ್ಲಿ ಒಂದು ನಿಲ್ದಾಣವನ್ನೂ ನಿರ್ಮಿಸಲಾಗುವುದು. ಇದನ್ನು ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಲಾಗುವುದು ಎಂದು ಹೇಳಿದರು.

ಯೋಜನೆಗೆ ಗುರ್ತಿಸಲಾಗಿರುವ ಪ್ರದೇಶವು ವಿಶಾಲವಾಗಿದ್ದು, ಪೆರಿಫೆರಲ್ ರಿಂಗ್ ರಸ್ತೆ -2 ಯೋಜನೆಯ ಪ್ರಮುಖ ಅಪಧಮನಿಯ ರಸ್ತೆ ಭಾಗದೊಂದಿಗೆ ಉತ್ತಮವಾಗಿ ಸಂಪರ್ಕ ಹೊಂದಿದೆ ಎಂದೂ ಮಾಹಿತಿ ನೀಡಿದ್ದಾರೆ. ಸ್ಥಳ ಪರಿಶೀಲನೆ ವೇಳೆ ಶಿವಕುಮಾರ್ ಅವರೊಂದಿಗೆ ಮಾಜಿ ಸಚಿವ ಮತ್ತು ಶಾಸಕ ಎಸ್.ಟಿ. ಸೋಮಶೇಖರ್, ಬಿಡಿಎ ಆಯುಕ್ತ ಮಣಿವಣ್ಣನ್ ಮತ್ತು ಹಿರಿಯ ಅಧಿಕಾರಿಗಳು ಸಾಥ್ ನೀಡಿದ್ದರು

## ಎರಡು ನಿಲ್ದಾಣಗಳಲ್ಲಿ ಮೆಟ್ರೋ ಸೇವೆ ಸ್ಥಗಿತ



• ಉದಯವಾಹಿನಿ, ಬೆಂಗಳೂರು

ರಾಯಲ್ ಚಾಲೆಂಜರ್ಸ್ ಬೆಂಗಳೂರು (ಆರ್‌ಸಿಬಿ) ಕಪ್ ಗೆಲುವಿನ ಸಂಭ್ರಮಾಚರಣೆ ವೇಳೆ ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ನಡೆದ ಕಾಲ್ತುಳಿತದಿಂದ 10 ಜನ ಸಾವನ್ನಪ್ಪಿದ್ದಾರೆ. ಇದರ ಬೆನ್ನಲ್ಲೇ ಜನರ ನಿಯಂತ್ರಣಕ್ಕೆ ನಮ್ಮ ಮೆಟ್ರೋ ಎರಡು ನಿಲ್ದಾಣಗಳಲ್ಲಿ ಮೆಟ್ರೋ ಸೇವೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ. ಕಬ್ಬನ್ ಪಾರ್ಕ್ ವಿಧಾನಸೌಧ ಮೆಟ್ರೋ ನಿಲ್ದಾಣವನ್ನು ತಾತ್ಕಾಲಿಕ ಸ್ಥಗಿತಗೊಳಿಸಲಾಗಿದೆ. ಕಬ್ಬನ್ ಪಾರ್ಕ್, ವಿಧಾನಸೌಧ ಮೆಟ್ರೋ ನಿಲ್ದಾಣನಲ್ಲಿ ನಿಲುಗಡೆ ಇಲ್ಲದೇ ಮೆಟ್ರೋ ರೈಲು ಸಂಚರಿಸಲಿದೆ. ಅತೀ ಹೆಚ್ಚಿನ ಜನ ಆಗಮಿಸುವ ಹಿನ್ನಲೆ ಈ ಕ್ರಮಕೈಗೊಳ್ಳಲಾಗಿದೆ. ಬೆಂಗಳೂರಿನಲ್ಲಿ ನಡೆಯುತ್ತಿರುವ ವಿಜಯೋತ್ಸವದ ವೇಳೆ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಒಬ್ಬ ಮಹಿಳೆ ಸೇರಿದಂತೆ ಹತ್ತು ಜನರು ಸಾವಿಗೀಡಾಗಿದ್ದಾರೆ. ಸುಮಾರು 20ಕ್ಕೂ ಹೆಚ್ಚು ಜನರು ಅಸ್ವಸ್ಥರಾಗಿದ್ದಾರೆ. ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲಿಸಲಾಗಿದ್ದು, ಚಿಕಿತ್ಸೆ ನೀಡಲಾಗುತ್ತಿದೆ.

## ರಸ್ತೆ ಗುಂಡಿ, ಪ್ರವಾಹ ಪರಿಸ್ಥಿತಿ ನಿರ್ವಹಿಸಲು ಅಗತ್ಯ

• ಉದಯವಾಹಿನಿ, ಬೆಂಗಳೂರು

ನಗರದ ರಸ್ತೆ ಗುಂಡಿ, ಪ್ರವಾಹ ಪರಿಸ್ಥಿತಿ ನಿರ್ವಹಿಸಲು ಅಗತ್ಯ ಕ್ರಮ ಕೈಗೊಳ್ಳಿ ಎಂದು ಅಧಿಕಾರಿಗಳಿಗೆ ಬಿಬಿಎಂಪಿ ಸೂಚನೆ ನೀಡಿದೆ. ಅಧಿಕಾರಿಗಳೊಂದಿಗೆ ಬಿಬಿಎಂಪಿ ಆಡಳಿತಾಧಿಕಾರಿ ತುಷಾರ್ ಗಿರಿನಾಥ್ ಅವರು ಸಭೆ ನಡೆಸಿದರು. ಮಳೆ ವಾತಾವರಣ ಇರುವುದರಿಂದ ಕೋಲ್ಡ್ ಮಿಕ್ಸ್ ಹಾಗೂ ಇಕೋ ಫಿಕ್ಸ್ ಬಳಸಿ ರಸ್ತೆ ಗುಂಡಿಗಳನ್ನು ಮುಚ್ಚಬೇಕು. ಎಲ್ಲಾ ಎಂಟು ಬಿಬಿಎಂಪಿ ವಲಯಗಳಲ್ಲಿ ಗುತ್ತಿಗೆದಾರರ ಮೂಲಕ ಅವಶ್ಯ ಡಾಂಬರನ್ನು ಪಡೆದು ತ್ವರಿತಗತಿಯಲ್ಲಿ ದುರಸ್ತಿ ಕಾಮಗಾರಿ ನಡೆಸಬೇಕು. ರಸ್ತೆ ಗುಂಡಿಗಳನ್ನು ಮುಚ್ಚುವ ವರದಿಯನ್ನು ಪ್ರತಿ ನಿತ್ಯ ನೀಡಬೇಕು ಎಂದು ಆದೇಶಿಸಿದರು.

ಪಾಲಿಕೆ ವ್ಯಾಪ್ತಿಯಲ್ಲಿ 690 ಕೋಟಿ ರೂ. ವೆಚ್ಚದಲ್ಲಿ ರಸ್ತೆಗಳಿಗೆ ಡಾಂಬರೀಕರಣ ಕಾರ್ಯ ಕೈಗೆತ್ತಿಕೊಳ್ಳಲಾಗಿದೆ. ಈ ಕಾಮಗಾರಿ ಶೀಘ್ರ ಪೂರ್ಣಗೊಳ್ಳಬೇಕು.

ಮಳೆಗಾಲದ ವೇಳೆ 82 ಕಡೆ ರಸ್ತೆಗಳಲ್ಲಿ ನೀರು ನಿಂತು ಸಂಚಾರ ದಟ್ಟಣೆ ಹೆಚ್ಚಾಗಲಿದೆ. ಅದನ್ನು ತಪ್ಪಿಸುವ


ಉದಯವಾಹಿನಿ ಚಿತ್ರ

ಸಲುವಾಗಿ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು. ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಮಾತನಾಡಿ, ಮಳೆಗಾಲದ ಸಂದರ್ಭದಲ್ಲಿ ಪ್ರವಾಹ ಉಂಟಾಗುವ ಪ್ರದೇಶಗಳು ಹಾಗೂ ರಸ್ತೆಗಳಿಗೆ ಆದ್ಯತೆ ನೀಡಿ, ಸಮಸ್ಯೆಗಳನ್ನು ಬಗೆಹರಿಸಬೇಕು ಎಂದು ತಿಳಿಸಿದರು. ಸಭೆಯಲ್ಲಿ ವಿಶೇಷ ಆಯುಕ್ತರು, ವಲಯ ಆಯುಕ್ತರು, ಜಂಟಿ ಪೊಲೀಸ್ ಆಯುಕ್ತ (ಸಂಚಾರ) ಅನುಚೇತ್ ಮತ್ತು ಎಲ್ಲಾ ವಲಯ ಜಂಟಿ ಆಯುಕ್ತರು, ಮುಖ್ಯ ಇಂಜಿನಿಯರ್‌ಗಳು ಮತ್ತು ಇತರ ಅಧಿಕಾರಿಗಳು ಭಾಗವಹಿಸಿದ್ದರು.

## ಪ್ರತಿಭಟನಾಕಾರರ ವಿರುದ್ಧದ ಪ್ರಕರಣಗಳ ಹಿಂಪಡೆಯಿರಿ

• ಉದಯವಾಹಿನಿ, ಬೆಂಗಳೂರು

ವಿವಾದಿತ ಹೇಮಾವತಿ ಎಕ್ಸ್‌ಪ್ರೆಸ್ ಲಿಂಕ್ ಕೆನಾಲ್ ಫೀಡರ್ ಯೋಜನೆಯನ್ನು ಕೂಡಲೇ ನಿಲ್ಲಿಸಿ, ಹೋರಾಟಕ್ಕಿಳಿದ ರೈತರು, ಸಾರ್ವಜನಿಕರು, ಮಠಾಧೀಶರುಗಳ ಮೇಲೆ ದಾಖಲಿಸಿರುವ ಪ್ರಕರಣಗಳನ್ನು ಹಿಂಪಡೆಯಿರಿ ಎಂದು ರಾಜ್ಯ ಸರ್ಕಾರಕ್ಕೆ ಕೇಂದ್ರ ಸಚಿವ ವಿ.ಸೋಮಣ್ಣ ಅವರು ಆಗ್ರಹಿಸಿದ್ದಾರೆ.

ಈ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿರುವ ಅವರು, ವಿವಾದಿತ ಹೇಮಾವತಿ ಎಕ್ಸ್‌ಪ್ರೆಸ್ ಲಿಂಕ್ ಕೆನಾಲ್ ಫೀಡರ್ ಯೋಜನೆಯಿಂದ ತುಮಕೂರು ಭಾಗದ ರೈತರಿಗೆ ಅನ್ಯಾಯ ಆಗುತ್ತಿದ್ದು, ತಕ್ಷಣವೇ ಈ ಯೋಜನೆಯ ಕಾಮಗಾರಿಯನ್ನು ನಿಲ್ಲಿಸುವಂತೆ ಸಾಕಷ್ಟು ಭಾರಿ ಸಿಎಂ ಸಿದ್ದರಾಮಯ್ಯ ಅವರ ಗಮನಕ್ಕೆ ತಂದರೂ, ಅವರು ಈ ಬಗ್ಗೆ ಗಮನಹರಿಸದಿರುವುದು ಹಾಗೂ ಈ ಅನ್ಯಾಯದ ವಿರುದ್ಧ ಹೋರಾಟಕ್ಕಿಳಿದ ರೈತರು, ಸಾರ್ವಜನಿಕರು, ಮಠಾಧೀಶರುಗಳ ಮೇಲೆ ಪ್ರಕರಣ ದಾಖಲಿಸಿ ಹೋರಾಟವನ್ನು


ಉದಯವಾಹಿನಿ ಚಿತ್ರ

ಹತ್ತಿಕ್ಕುವ ಪ್ರಯತ್ನ ಮಾಡಿರುವುದು ವಿಷಾದನೀಯ ಸಂಗತಿ ಎಂದು ಹೇಳಿದ್ದಾರೆ. ಈ ಸಂಬಂಧ ಬೆಂಗಳೂರು ಗ್ರಾಮಾಂತರ ಸಂಸದ ಡಾ. ಸಿ.ಎನ್. ಮಂಜುನಾಥ ಅವರು ಸಹ ಪ್ರಸ್ತುತ ಬೆಳವಣಿಗೆಯ ಬಗ್ಗೆ ದೂರವಾಣಿ ಮುಖಾಂತರ ಚರ್ಚಿಸಿದ್ದು, ಅತ್ಯಂತ ಕಳವಳವನ್ನು ವ್ಯಕ್ತಪಡಿಸಿದ್ದಾರೆ.

ಈ ಸಭೆಗೆ ತಾಂತ್ರಿಕ ತಜ್ಞರನ್ನು ಮತ್ತು ಈ ಹಿಂದೆ ಯೋಜನೆಯ ಕಾರ್ಯಸಾಧ್ಯತೆ ಇಲ್ಲವೆಂದು ಈಗ ಯೋಜನೆಯ ಕಾರ್ಯಸಾಧ್ಯತೆಯ ಬಗ್ಗೆ ಒಪ್ಪಿಗೆ ನೀಡಿರುವ ಅಧಿಕಾರಿಗಳನ್ನು ಸಹ ಈ ಸಭೆಯಲ್ಲಿ ಹಾಜರಿರುವಂತೆ ಸೋಮಣ್ಣ ಅವರು ಮನವಿ ಮಾಡಿದ್ದಾರೆ.

> ಆದಾಗ್ಯೂ ಈ ಭಾಗದ ಜನರ ಹಿತದೃಷ್ಟಿಯಿಂದ ಹಾಗೂ ರೈತರ ಜೀವನಾಡಿ ನೀರಿಲ್ಲದೇ ಬದುಕು ಇಲ್ಲ ಎಂಬುದರ ಸಾಧಕ ಬಾಧಕಗಳ ಬಗ್ಗೆ ರೈತರ, ಮಠಾಧೀಶರ ಹಾಗೂ ಜನಸಾಮಾನ್ಯರ ಮೇಲಿನ ದೌರ್ಜನ್ಯ ನಿವಾರಣೆಗೊಳಿಸಲು ಮತ್ತು ವಿವಾದಿತ ಯೋಜನೆಯ ನಿಜವಾದ ತಾಂತ್ರಿಕ ಅಂಶಗಳ ಮೇಲೆ ಚರ್ಚಿಸಲು ಈ ಯೋಜನಾ ವ್ಯಾಪ್ತಿಯಲ್ಲಿ ಬರುವ ಸಂಬಂಧಪಟ್ಟ ಎಲ್ಲಾ ಜನಪ್ರತಿನಿಧಿಗಳ ಸಭೆಯನ್ನು ಉಪ ಮುಖ್ಯಮಂತ್ರಿಗಳು ಹಾಗೂ ನೀರಾವರಿ ಸಚಿವರ ಉಪಸ್ಥಿತಿಯಲ್ಲಿ ತಕ್ಷಣ ಏರ್ಪಡಿಸುವಂತೆ ಒತ್ತಾಯಿಸಿದ್ದಾರೆ.

# ಪೊಲೀಸ್ ದೂರು ಪ್ರಾಧಿಕಾರಕ್ಕೆ ಶೋಭ ಕರಂದ್ಲಾಜೆ ಪತ್ರ

### ಸರ್ಕಾರದ ಒತ್ತಡಕ್ಕೆ ಮಣಿದು ಹಿಂದೂ ಸಂಘಟನೆ ಮುಖಂಡರಿಗೆ ಕಿರುಕುಳ

• ಉದಯವಾಹಿನಿ, ಬೆಂಗಳೂರು

ಅಶ್ರಫ್, ಸುಹಾಸ್ ಶೆಟ್ಟಿ ಹಾಗೂ ಅಬ್ದುಲ್ ರೆಹ್ಮಾನ್ ಕೊಲೆ ಪ್ರಕರಣಗಳ ಹಿನ್ನೆಲೆಯಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪೊಲೀಸ್ ಇಲಾಖೆ ಕೆಲವೊಂದು ಬಿಗಿ ಕ್ರಮಗಳನ್ನು ಕೈಗೊಳ್ಳುತ್ತಿದೆ. ಸಂಘ ಪರಿವಾರ ಹಾಗೂ ಎಸ್ ಡಿ ಪಿ ಐ ನಲ್ಲಿ ಗುರುತಿಸಿಕೊಂಡಿರುವ ಹಾಗೂ ಮತೀಯ ಚಟುವಟಿಕೆಗಳಲ್ಲಿ ಸಕ್ರಿಯವಾಗಿರುವ ವಿರುದ್ಧ ಗಡಿಪಾರು ಕೈಗೊಂಡಿದೆ. ಆದರೆ ಪೊಲೀಸರ ಕ್ರಮಕ್ಕೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ವಿರೋಧ ವ್ಯಕ್ತಪಡಿಸಿದ್ದು, ಈ ಬಗ್ಗೆ ರಾಜ್ಯ ಪೊಲೀಸ್ ದೂರುಗಳ ಪ್ರಾಧಿಕಾರಕ್ಕೆ ಪತ್ರ ಬರೆದು ದೂರು ಸಲ್ಲಿಸಿದ್ದಾರೆ.

ದಕ್ಷಿಣ ಕನ್ನಡದಲ್ಲಿ ಹಿಂದೂ ಸಂಘಟನೆಗಳಿಗೆ ಸಂಬಂಧಿಸಿದ ಸದಸ್ಯರ ಮೇಲೆ ಪೊಲೀಸ್ ಕಿರುಕುಳ ತಡೆಗಟ್ಟಲು ತಕ್ಷಣ ಕ್ರಮ ಕೈಗೊಳ್ಳುವಂತೆ ಶೋಭಾ ಕರಂದ್ಲಾಜೆ ಅವರು ಪೊಲೀಸ್ ದೂರು ಪ್ರಾಧಿಕಾರದ ಅಧ್ಯಕ್ಷ ನ್ಯಾಯಮೂರ್ತಿ ಎನ್.ಕೆ. ಸುಧೀಂದ್ರರಾವ್ ಅವರನ್ನು ಒತ್ತಾಯಿಸಿದ್ದಾರೆ. ದಕ್ಷಿಣ ಕನ್ನಡದಲ್ಲಿ ನಡೆಯುತ್ತಿರುವ ಬೆಳವಣಿಗೆಗಳ ಬಗ್ಗೆ ನ್ಯಾಯಮೂರ್ತಿ ರಾವ್ ಅವರಿಗೆ ಬರೆದ


ಉದಯವಾಹಿನಿ ಚಿತ್ರ

ಪತ್ರದಲ್ಲಿ ಕರಂದ್ಲಾಜೆ ಕಳವಳ ವ್ಯಕ್ತಪಡಿಸಿದ್ದಾರೆ. ಆಡಳಿತಾರೂಢ ಕಾಂಗ್ರೆಸ್‌ನ ಒತ್ತಡಕ್ಕೆ ಮಣಿದು ಪೊಲೀಸರು ಹಿಂದೂ ಸಂಘಟನೆಗಳಿಗೆ ಸಂಬಂಧಿಸಿದ ವ್ಯಕ್ತಿಗಳನ್ನು ವ್ಯವಸ್ಥಿತವಾಗಿ ಗುರಿಯಾಗಿಸಿಕೊಂಡು ಕಿರುಕುಳ ನೀಡುತ್ತಿದ್ದಾರೆ ಎಂದು ವರದಿಯಾಗಿದೆ.

> ಜನರ ಮೂಲಭೂತ ಹಕ್ಕುಗಳನ್ನು ಉಲ್ಲಂಘಿಸಿದ ತಪ್ಪಿತಸ್ಥರೆಂದು ಕಂಡುಬಂದ ಪೊಲೀಸ್ ಅಧಿಕಾರಿಗಳ ನಡವಳಿಕೆಯನ್ನು ತನಿಖೆ ಮಾಡಿ ಕ್ರಮ ಕೈಗೊಳ್ಳಬೇಕು ಎಂದು ಕರಂದ್ಲಾಜೆ ಹೇಳಿದರು. ಕರ್ನಾಟಕದಲ್ಲಿ ಪೊಲೀಸ್ ವ್ಯವಸ್ಥೆ, ನ್ಯಾಯಯುತ ಮತ್ತು ಕಾನೂನಿನ ಚೌಕಟ್ಟಿನೊಳಗೆ ಇರುವಂತೆ ಪೊಲೀಸ್ ದೂರು ಪ್ರಾಧಿಕಾರ ಖಚಿತಪಡಿಸಿಕೊಳ್ಳಬೇಕು ಎಂದು ಅವರು ಹೇಳಿದರು.

ಸಾಮಾಜಿಕ ಕಾರ್ಯಕರ್ತರು, ವ್ಯಾಪಾರಿಗಳು ಮತ್ತು ಸಾಮಾನ್ಯ ನಾಗರಿಕರನ್ನು ಸಹ ಅವರು ಬಿಡುತ್ತಿಲ್ಲ ಎಂದು ಅವರು ಆರೋಪಿಸಿದ್ದಾರೆ. ವಿಶೇಷವಾಗಿ ಆತಂಕಕಾರಿ ವಿಷಯವೆಂದರೆ ತೆಗೆದುಕೊಳ್ಳುತ್ತಿರುವ ಕ್ರಮಗಳ ಸ್ವರೂಪವಾಗಿದೆ. ಪೊಲೀಸ್ ಅಧಿಕಾರಿಗಳು ತಡ ರಾತ್ರಿಯಲ್ಲಿ ಈ ವ್ಯಕ್ತಿಗಳ ಮನೆಗಳಿಗೆ ಭೇಟಿ ನೀಡಿ, ಅವರ ಮನೆಗಳ ಫೋಟೋ ತೆಗೆದುಕೊಂಡು, ಯಾವುದೇ ಕಾನೂನು ವಾರಂಟ್‌ಗಳು ಅಥವಾ ಕಾನೂನು ಪ್ರಕ್ರಿಯೆ ಇಲ್ಲದೆ ಜಿಪಿಎಸ್ ಸೆರೆಹಿಡಿಯುತ್ತಿದ್ದಾರೆ ಎಂದು ವರದಿಯಾಗಿದೆ. ಈ ಕ್ರಮಗಳು ಭಾರತದ ಸಂವಿಧಾನದ ಅಡಿಯಲ್ಲಿ ಖಾತರಿಪಡಿಸಲಾದ ಮೂಲಭೂತ ಹಕ್ಕುಗಳನ್ನು ಸ್ಪಷ್ಟವಾಗಿ ಉಲ್ಲಂಘಿಸುತ್ತವೆ, ಇದರಲ್ಲಿ ಗೌಪ್ಯತೆಯ ಹಕ್ಕು ಮತ್ತು ಆರ್ಟಿಕಲ್ 21 ರ ಅಡಿಯಲ್ಲಿ ಬದುಕುವ ಹಕ್ಕು ಹಾಗೂ ಆರ್ಟಿಕಲ್ 14 ರ ಅಡಿಯಲ್ಲಿ ಸಮಾನತೆಯ ಹಕ್ಕು ಸೇರಿವೆ ಎಂದಿದ್ದಾರೆ.

# ಸರ್ಜಾಪುರ ಮುಖ್ಯ ರಸ್ತೆಯ ಉದ್ದಕ್ಕೂ ಸರ್ವೀಸ್ ರಸ್ತೆ ಅಭಿವೃದ್ಧಿ

### ಒಳಚರಂಡಿಗೆ ಕೊಳಚೆ ನೀರು ಬಿಟ್ಟಿದ್ದಕ್ಕೆ ಅಪಾರ್ಟ್ ಮೆಂಟ್ 1 ಲಕ್ಷ ರೂ. ದಂಡ!

• ಉದಯವಾಹಿನಿ, ಬೆಂಗಳೂರು

ಸರ್ಜಾಪುರದ ಶ್ರೀನಿವಾಸ ಅಪಾರ್ಟ್ ಮೆಂಟ್ ಮಳೆನೀರಿನ ಚರಂಡಿಗೆ ಕೊಳಚೆ ನೀರನ್ನು ನೇರವಾಗಿ ಹರಿಸಿದ್ದಕ್ಕಾಗಿ ಬಿಬಿಎಂಪಿ ಮುಖ್ಯ ಆಯುಕ್ತ ಮಹೇಶ್ವರ ರಾವ್ 1 ಲಕ್ಷ ರೂ. ದಂಡ ವಿಧಿಸಿದ್ದಾರೆ. ಮಳೆ ನೀರಿನ ಚರಂಡಿಗಳಲ್ಲಿನ ಅತಿಕ್ರಮಣಗಳನ್ನು ಪರಿಶೀಲಿಸಲು ತಕ್ಷಣ ಡ್ರೋನ್ ಸಮೀಕ್ಷೆ ನಡೆಸುವಂತೆ ರಾವ್ ಮಹದೇವಪುರ ವಲಯ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಮಹದೇವಪುರದಲ್ಲಿ ಮಳೆ ನೀರಿನ ಚರಂಡಿಗಳ ಸರಿಯಾದ ಹೂಳು ತೆಗೆಯಲು ಕ್ರಮ ಕೈಗೊಳ್ಳಲು ಸೂಚನೆ ನೀಡಲಾಗಿದೆ. ಒತ್ತುವರಿ ತೆರವು ಮೇಲ್ವಿಚಾರಣೆ ಮಾಡಲು ಮತ್ತು ಚರಂಡಿಗಳ ಸ್ಥಿತಿಯನ್ನು ನಿರ್ಣಯಿಸಲು ಅಧಿಕಾರಿಗಳಿಗೆ ಸೂಚಿಸಿದ್ದೇನೆ ಎಂದು ಅವರು ಹೇಳಿದರು.

ಸರ್ಜಾಪುರ ಮುಖ್ಯ ರಸ್ತೆಯ ಉದ್ದಕ್ಕೂ ಸರ್ವೀಸ್ ರಸ್ತೆ ಅಭಿವೃದ್ಧಿಗೆ ಸಂಬಂಧಿಸಿದ ಬಾಕಿ ಇರುವ ಭೂಸ್ವಾಧೀನ ಸಮಸ್ಯೆಗಳನ್ನು ಪರಿಹರಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ, ಅಲ್ಲಿ ರಸ್ತೆ ಅಗಲೀಕರಣವು ಈಗಾಗಲೇ ಪೂರ್ಣಗೊಂಡಿದೆ.


ಉದಯವಾಹಿನಿ ಚಿತ್ರ

ಇಬ್ಲೂರು ಜಂಕ್ಷನ್‌ನಲ್ಲಿ, ಪಾದಚಾರಿ ಮಾರ್ಗಗಳು ಸೇರಿದಂತೆ ನಡೆಯುತ್ತಿರುವ ಸಮಸ್ಯೆಗಳನ್ನು ಅವರು ಪರಿಶೀಲಿಸಿದರು. ಭೂಸ್ವಾಧೀನ ಪ್ರಕ್ರಿಯೆಗೆ ಸಹಕರಿಸಲು ಮತ್ತು ಅಭಿವೃದ್ಧಿ

> ಇಬ್ಲೂರು ಜಂಕ್ಷನ್‌ನಿಂದ ಕಾರ್ಮೆಲಾರಾಮ್ ಆರ್‌ಜೆ ಟೆಕ್ ಪಾರ್ಕ್‌ವರೆಗಿನ 4.7 ಕಿ.ಮೀ ಉದ್ದದ ಮುಖ್ಯ ರಸ್ತೆಯನ್ನು 2022 ರಲ್ಲಿ 45 ಮೀಟರ್‌ಗೆ ಅಗಲಗೊಳಿಸಿ ಡಾಂಬರೀಕರಣ ಮಾಡಲಾಯಿತು. ಆದಾಗ್ಯೂ, ಅಭಿವೃದ್ಧಿ ಹಕ್ಕುಗಳ ವರ್ಗಾವಣೆ (ಟಿಡಿಆರ್) ಯೋಜನೆಯ ಮೂಲಕ ಆಸ್ತಿಗಳನ್ನು ಸ್ವಾಧೀನಪಡಿಸಿಕೊಳ್ಳುವಲ್ಲಿನ ಸವಾಲುಗಳಿಂದಾಗಿ ಪಕ್ಕದ ಸರ್ವೀಸ್ ರಸ್ತೆ ಕಾಮಗಾರಿ ವಿಳಂಬವಾಗಿದೆ ಎಂದು ಅಧಿಕಾರಿಗಳು ಆಯುಕ್ತರಿಗೆ ಮಾಹಿತಿ ನೀಡಿದರು.

ಕಾರ್ಯವನ್ನು ತ್ವರಿತಗೊಳಿಸಲು ಸರ್ವೀಸ್ ರಸ್ತೆ ಭೂ ಮಾಲೀಕರನ್ನು ಮನವೊಲಿಸಲು ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಸ್ವಾಧೀನಕ್ಕೆ ಒಪ್ಪಿಕೊಂಡಿರುವ ಭೂಮಾಲೀಕರಿಂದ ದಾಖಲೆಗಳನ್ನು ಸಂಗ್ರಹಿಸಿ ಬಿಬಿಎಂಪಿಗೆ ಔಪಚಾರಿಕವಾಗಿ ಭೂಮಿಯನ್ನು ವರ್ಗಾಯಿಸಲು ಮಹೇಶ್ವರ್ ರಾವ್ ಹೇಳಿದರು. ಸರಿಯಾದ ಪಾದಚಾರಿ ಮಾರ್ಗಗಳನ್ನು ನಿರ್ಮಿಸಲು ವಿವರವಾದ ಯೋಜನೆಯನ್ನು ಸಿದ್ಧಪಡಿಸುವಂತೆಯೂ ಅವರು ತಿಳಿಸಿದ್ದಾರೆ. ಮುಖ್ಯ ಆಯುಕ್ತರು ಭೇಟಿಯ ಸಮಯದಲ್ಲಿ ಇಬ್ಲೂರು ಜಂಕ್ಷನ್, ಹರಳೂರು ರಸ್ತೆ ಜಂಕ್ಷನ್, ಕಸವನಹಳ್ಳಿ ರಸ್ತೆ ಜಂಕ್ಷನ್‌ನ ಸಮಗ್ರ ಸುಧಾರಣೆಯ ಅಗತ್ಯವನ್ನು ಒತ್ತಿ ಹೇಳಿದರು.

> ಕೌಲ್ಡ್ ನೈನ್ ಆಸ್ಪತ್ರೆಯ ಬಳಿಯ ತ್ಯಾಜ್ಯ ವರ್ಗಾವಣೆ ಸ್ಥಳವನ್ನು ಪರಿಶೀಲಿಸುವಾಗ, ನಿವಾಸಿಗಳು ರಾತ್ರಿಯ ವೇಳೆ ಕಸ ಸುರಿಯುತ್ತಿರುವ ಬಗ್ಗೆ ದೂರು ನೀಡಿದರು. ಕಸವನ್ನು ಅಕ್ರಮವಾಗಿ ವಿಲೇವಾರಿ ಮಾಡುವುದನ್ನು ತಡೆಯಲು ಸ್ಥಳದಲ್ಲಿ ಸಿಸಿ ಕ್ಯಾಮೆರಾ ಅಳವಡಿಸುವಂತೆ ರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

## ಕೋಟ್ಪಾ ಕಾಯ್ದೆ ಉಲ್ಲಂಘನೆ

• ಉದಯವಾಹಿನಿ, ಬೆಂಗಳೂರು

ವಿಶ್ವ ತಂಬಾಕು ವಿರೋಧಿ ದಿನ ಅಂಗವಾಗಿ ನಗರ ಪೊಲೀಸರು ಸಾರ್ವಜನಿಕ ಸ್ಥಳಗಳಲ್ಲಿ ಅಕ್ರಮವಾಗಿ ತಂಬಾಕು ಉತ್ಪನ್ನ ಮಾರಾಟ ವಿರುದ್ಧ ಕಾರ್ಯಾಚರಣೆ ನಡೆಸಿ 11 ಸಾವಿರ ಕೇಸ್ ದಾಖಲಿಸಿಕೊಂಡು 21 ಲಕ್ಷ ರೂ.ದಂಡವನ್ನು ವಸೂಲಿ ಮಾಡಿದ್ದಾರೆ. ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ನಗರ ಪೊಲೀಸ್ ಆಯುಕ್ತ



ದಯಾನಂದ್ ಅವರು, ಸಿಗರೇಟ್ ಮತ್ತು ಇತರ ತಂಬಾಕು ಉತ್ಪನ್ನಗಳ ಕಾಯ್ದೆ (COTPA)ಯನ್ನು ಕಟ್ಟುನಿಟ್ಟಾಗಿ ಜಾರಿ ತರಲಾಗಿದ್ದು, ಕಾಯ್ದೆ ಉಲ್ಲಂಘಿಸಿದವರ ವಿರುದ್ಧ ಪ್ರಕರಣ ದಾಖಲಿಸಲಾಗುತ್ತಿದೆ ಎಂದು ಹೇಳಿದರು.

ವಿಶ್ವ ತಂಬಾಕು ರಹಿತ ದಿನದ ಸಂದರ್ಭದಲ್ಲಿ ಜಾಗೃತಿ ಮೂಡಿಸಲು 3 ದಿನಗಳ ವಿಶೇಷ ಅಭಿಯಾನವನ್ನು ನಡೆಸಲಾಗಿದೆ. ಪೊಲೀಸ್ ಅಧಿಕಾರಿಗಳು, ಮಾರ್ಷಲ್‌ಗಳು, ಸ್ವಯಂಸೇವಕರ ಸಹಾಯದಿಂದ ಬೀದಿ ನಾಟಕಗಳು, ರ್‍ಯಾಲಿಗಳು, ಭಾಷಣಗಳಂತಹ ಅಭಿಯಾನಗಳನ್ನು ಆಯೋಜಿಸಲಾಗಿದೆ. ಹೆಚ್ಚುವರಿಯಾಗಿ, ವಿಶ್ವ ತಂಬಾಕು ರಹಿತ ದಿನದಂದು 5,667 ಪೊಲೀಸ್ ಸಿಬ್ಬಂದಿ ಮತ್ತು 6,448 ಸಾರ್ವಜನಿಕರು ಪ್ರತಿಜ್ಞೆ ಸ್ವೀಕರಿಸಿದರು. ತಂಬಾಕು ನಿಷೇಧವನ್ನು ಉತ್ತೇಜಿಸಲು ನಗರದಾದ್ಯಂತ 60,000 ಕ್ಕೂ ಹೆಚ್ಚು ಜಾಗೃತಿ ಪೋಸ್ಟರ್‌ಗಳನ್ನು ಹಾಕಲಾಯಿತು. ಆರೋಗ್ಯಕರ, ಸುರಕ್ಷಿತ ಜೀವನ ಮತ್ತು ಬಲವಾದ ಸಮಾಜಕ್ಕಾಗಿ ನಾಗರಿಕರು ತಂಬಾಕು ತ್ಯಜಿಸಲು ಪ್ರೋತ್ಸಾಹಿಸುವ ಗುರಿಯನ್ನು ಈ ಅಭಿಯಾನಗಳು ಹೊಂದಿವೆ. ತಂಬಾಕು ಸೇವನೆ ವಿವಿಧ ರೀತಿಯ ಕ್ಯಾನ್ಸರ್‌ಗೆ ಕಾರಣವಾಗುತ್ತದೆ.

ಅಂತರಾಳದಿಂದ.. EDITORIAL

# ಸಾಕ್ಷರತೆಯಲ್ಲಿ ಉತ್ತರ ಭಾರತ ಯಾಕೆ ಹಿಂದುಳಿದಿದೆ?

ಭಾರತದ ಇತ್ತೀಚಿನ ಸಾಕ್ಷರತೆಯ ಪ್ರಮಾಣದ ಬಗ್ಗೆ ಪಿಎಲ್‌ಎಫ್‌ಎಸ್ (ಪೀರಿಯೋಡಿಕ್ ಲೇಬರ್ ಫೋರ್ಸ್ ಸರ್ವೇ) ನಡೆಸಿದ 2023-24ರ ಸಮೀಕ್ಷೆಯ ವಿವರ ಹೊರ ಬಿದ್ದಿದ್ದು, ಮಿಜೋರಾಂ ಗರಿಷ್ಠ ಸಾಕ್ಷರತೆಯನ್ನು ಸಾಧಿಸಿದ ರಾಜ್ಯವಾಗಿ ಗುರುತಿಸಲ್ಪಟ್ಟಿದೆ. ಮಿಜೋರಾಂ ಶೇ.98.2ರಷ್ಟು ಸಾಕ್ಷರತೆಯನ್ನು ಸಾಧಿಸಿದ್ದರೆ, ಲಕ್ಷದ್ವೀಪ ಶೇ. 97.3 ಕೇರಳ ಶೇ. 95.3, ತ್ರಿಪುರಾ ಶೇ 93.7, ಗೋವಾ 93.6ರಷ್ಟು ಗರಿಷ್ಠ ಸಾಕ್ಷರತೆಯನ್ನು ಸಾಧಿಸಿದ ರಾಜ್ಯಗಳು ಎಂದು ಗುರುತಿಸಲ್ಪಟ್ಟಿವೆ. ಭಾರತದ ಒಟ್ಟಾರೆ ಸಾಕ್ಷರತೆಯ ಪ್ರಮಾಣ ಶೇ. 80.9 ಎಂದು ಹೇಳಲಾಗಿದೆ. ಏಳು ವರ್ಷಕ್ಕಿಂತ ಮೇಲ್ಪಟ್ಟ ಪುರುಷರಲ್ಲಿ ಶೇ. 87.2ರಷ್ಟು ಸಾಕ್ಷರತೆಯಿದ್ದರೆ, ಮಹಿಳೆಯರಲ್ಲಿ ಇದು 74.6ರಷ್ಟಿದೆ. ಇದೇ ಸಂದರ್ಭದಲ್ಲಿ ಅತ್ಯಂತ ಕಡಿಮೆ ಸಾಕ್ಷರತೆಯನ್ನು ಹೊಂದಿದ ರಾಜ್ಯವಾಗಿ ಬಿಹಾರ ಗುರುತಿಸಿಕೊಂಡಿದೆ. ಇದರ ಬೆನ್ನಿಗೇ ಮಧ್ಯಪ್ರದೇಶ, ರಾಜಸ್ಥಾನಗಳಿವೆ. ನಗರವಾಸಿಗಳಲ್ಲಿ ಸಾಕ್ಷರತೆಯ ಪ್ರಮಾಣ ಹೆಚ್ಚಿದ್ದು, ಗ್ರಾಮೀಣ ಪ್ರದೇಶದಲ್ಲಿ ಕಡಿಮೆಯಿರುವುದನ್ನು ಸಮೀಕ್ಷೆ ಹೇಳುತ್ತದೆ. ಈ ಸಾಕ್ಷರತೆಯ ಅಂಕಿಅಂಶಗಳ ಜೊತೆ ಜೊತೆಗೇ ಅಭಿವೃದ್ಧಿಯ ಅಂತರಗಳೂ ಬಹಿರಂಗವಾಗುತ್ತವೆ. ಅತಿ ಹೆಚ್ಚು ಸಾಕ್ಷರತೆಯುಳ್ಳ ತ್ರಿಪುರಾ, ಕೇರಳದಂತಹ ರಾಜ್ಯಗಳ ಸಾಕ್ಷರತೆಯ ಹಿಂದೆ ಎಡಪಂಥೀಯ ಪ್ರಭಾವವನ್ನು ನಾವು ಈ ಸಂದರ್ಭದಲ್ಲಿ ಮರೆಯುವಂತಿಲ್ಲ. ಒಂದು ಕಾಲದಲ್ಲಿ ಇಡೀ ದೇಶದಲ್ಲೇ ಸಾಕ್ಷರತೆಗಾಗಿ ಕೇರಳ ಗುರುತಿಸಲ್ಪಟ್ಟಿತ್ತು. ಸಾಕ್ಷರತಾ ಆಂದೋಲನ ಅತ್ಯಂತ ಯಶಸ್ವಿಯಾಗಿ ಅನುಷ್ಠಾನಗೊಂಡದ್ದು ಕೇರಳದಲ್ಲಿ. ಅಭಿವೃದ್ಧಿ, ಆರೋಗ್ಯ, ಉನ್ನತ ಶಿಕ್ಷಣ ಇತ್ಯಾದಿಗಳಲ್ಲೂ ಕೇರಳ ದೇಶದಲ್ಲಿ ಗುರುತಿಸಲ್ಪಟ್ಟಿದೆ. ಈಶಾನ್ಯ ಭಾರತ ಮತ್ತು ದಕ್ಷಿಣ ಭಾರತದ ರಾಜ್ಯಗಳಿಗೆ ಹೋಲಿಸಿದರೆ ಉತ್ತರ ಭಾರತ ಸಾಕ್ಷರತೆಯಲ್ಲಿ ಹಿಂದೆ ಉಳಿದಿದೆ. ಸಾಕ್ಷರತೆಯಲ್ಲಿ ಕೊನೆಯ ಸಾಲಿನಲ್ಲಿ ಸ್ಥಾನ ಪಡೆದಿರುವ ರಾಜಸ್ಥಾನ ಇಂದು ಗುರುತಿಸುತ್ತಿರುವುದು ಗುಂಪು ಥಳಿತ, ನಕಲಿ ಗೋರಕ್ಷಕರು, ಜಾತಿ ದೌರ್ಜನ್ಯಗಳಿಗಾಗಿ, ಮಧ್ಯಪ್ರದೇಶವನ್ನು ಬಿಜೆಪಿ ನಿರಂತರವಾಗಿ ಆಳುತ್ತಾ ಬರುತ್ತಿದೆಯಾದರೂ, ಈ ರಾಜ್ಯದ ಸಾಕ್ಷರತೆಯನ್ನು ಉತ್ತಮ ಪಡಿಸುವುದಕ್ಕೆ ಸಾಧ್ಯವಾಗಿಲ್ಲ. ಆದಿವಾಸಿಗಳ ಮೇಲೆ ದೌರ್ಜನ್ಯ, ಅಸ್ಪೃಶ್ಯತೆ ಇತ್ಯಾದಿಗಳಿಗಾಗಿಯೇ ಈ ರಾಜ್ಯ ಮಾಧ್ಯಮಗಳಲ್ಲಿ ಸುದ್ದಿಯಾಗುತ್ತಿದೆ. ಸಾಕ್ಷರತೆಯು ದಕ್ಷಿಣ ಭಾರತದ ರಾಜ್ಯಗಳನ್ನು ಉತ್ತರ ಭಾರತದಿಂದ ಪ್ರತ್ಯೇಕಿಸಿದೆ. ಉತ್ತರ ಭಾರತೀಯರ ಹಿಂದಿಯನ್ನು ದಕ್ಷಿಣದ ರಾಜ್ಯಗಳ ಮೇಲೆ ಹೇರಲು ಮುಂದಾಗುತ್ತಿರುವ ಕೇಂದ್ರ ಸರಕಾರ ಇದನ್ನು ಗಮನಿಸಬೇಕಾಗಿದೆ. ಉತ್ತರ ಭಾರತ ಭಾವನಾತ್ಮಕ ರಾಜಕೀಯದ ಬಲಿಪಶುವಾಗಿದೆ. ಅದು ಧರ್ಮ, ಹಿಂದುತ್ವ ಮಂದಿರದ ಅಮಲಲ್ಲಿ ಬಿದ್ದಿದೆ. ಜನಸಾಮಾನ್ಯರು ಕಟ್ಟುವ ತೆರಿಗೆಯನ್ನು ಮಂದಿರ, ಕುಂಭಮೇಳ, ಪ್ರತಿಮೆಗಳಿಗಾಗಿ ಅಲ್ಲಿನ ಸರಕಾರ ವ್ಯಯ ಮಾಡುತ್ತಿದೆ. ಇತ್ತೀಚೆಗೆ ಮಹಾರಾಷ್ಟ್ರ ಸರಕಾರ ಸುಮಾರು 3,000 ಕೋಟಿ ರೂಪಾಯಿಗಳ ಯೋಜನೆಗೆ ಅನುಮೋದನೆ ನೀಡಿತು. ವಿಪರ್ಯಾಸವೆಂದರೆ, ಈ ಅನುಮೋದನೆ ರಾಜ್ಯದ ದೇವಾಲಯ ಮತ್ತು ಸ್ಮಾರಕಗಳ ಪುನರುಜ್ಜೀವನಕ್ಕೆ ಸಂಬಂಧಿಸಿದ್ದಾಗಿತ್ತು. ಏಳು ಯಾತ್ರಾ ಸ್ಥಳಗಳನ್ನು ಅಭಿವೃದ್ಧಿ ಪಡಿಸುವುದಕ್ಕಾಗಿ ಈ ರಾಜ್ಯವು ಸುಮಾರು 5,500 ಕೋಟಿ ರೂಪಾಯಿ ವೆಚ್ಚ ಮಾಡಲಿದೆ. ಕೇಂದ್ರ ಸರಕಾರ ಅತ್ಯಧಿಕ ಅನುದಾನಗಳನ್ನು ಉತ್ತರ ರಾಜ್ಯಗಳಿಗೆ ನೀಡುತ್ತಾ ಬಂದಿದ್ದರೂ ಅದು ಅಭಿವೃದ್ಧಿಯ ಕಡೆಗೆ ಸಾಗದೇ ಇರುವುದಕ್ಕೆ ಇದು ಮುಖ್ಯ ಕಾರಣವಾಗಿದೆ. ದಕ್ಷಿಣ ಭಾರತೀಯರು ಕಟ್ಟುತ್ತಿರುವ ತೆರಿಗೆಯನ್ನು ಉತ್ತರ ಭಾರತಕ್ಕೆ ಹಂಚಲಾಗುತ್ತಿದೆ ಎನ್ನುವ ವ್ಯಾಪಕ ಆಕ್ರೋಶವನ್ನು ದಕ್ಷಿಣದ ರಾಜ್ಯಗಳು ವ್ಯಕ್ತಪಡಿಸುತ್ತಾ ಬಂದಿವೆ. ಆದರೆ ಒಕ್ಕೂಟ ವ್ಯವಸ್ಥೆಯನ್ನು ಮುಂದಿಟ್ಟುಕೊಂಡು ವಿತ್ತ ಸಚಿವರು ಕೇಂದ್ರ ಸರಕಾರದ ಮಲತಾಯಿ ಧೋರಣೆಯನ್ನು ಸಮರ್ಥಿಸಿದರು. ಆದರೆ ಇಷ್ಟು ಪ್ರಮಾಣದಲ್ಲಿ ಅನುದಾನಗಳನ್ನು ಉತ್ತರ ಭಾರತಕ್ಕೆ ನೀಡುತ್ತಾ ಬಂದರೂ ಅದು ಯಾಕೆ ಸದ್‌ಬಳಕೆಯಾಗುತ್ತಿಲ್ಲ ಎನ್ನುವ ಪ್ರಶ್ನೆಗೆ ಉತ್ತರಿಸುವುದು ಕೇಂದ್ರ ಸರಕಾರದ ಕರ್ತವ್ಯವಾಗಿದೆ. ಅಭಿವೃದ್ಧಿ ಆರೋಗ್ಯ ಶಿಕ್ಷಣಗಳಿಗೆ ಅದು ಬಳಕೆ ಮಾಡುವ ಹಣವೆಷ್ಟು ಎನ್ನುವುದಾದರೂ ಚರ್ಚೆಯಾಗಬೇಕಾಗಿದೆ. ದಕ್ಷಿಣ ಭಾರತದ ರಾಜ್ಯಗಳಿಗೆ ಹೋಲಿಸಿದರೆ ರಾಜಸ್ಥಾನ, ಬಿಹಾರ, ಮಧ್ಯಪ್ರದೇಶದಂತಹ ರಾಜ್ಯಗಳು ಯಾಕೆ ಸಾಕ್ಷರತೆ, ಆರೋಗ್ಯ, ಉನ್ನತ ಶಿಕ್ಷಣ ಕ್ಷೇತ್ರಗಳಲ್ಲಿ ಹಿಂದುಳಿಯುತ್ತಿವೆ ಎನ್ನುವ ಪ್ರಶ್ನೆ ಮುನ್ನೆಲೆಗೆ ಬರಬೇಕಾಗಿದೆ. ಎಲ್ಲಕ್ಕಿಂತ ಮುಖ್ಯವಾಗಿ ಸಾಕ್ಷರತೆಯಲ್ಲಿ ಹಿಂದುಳಿದಿರುವ ಎಲ್ಲಾ ರಾಜ್ಯಗಳು ಹಿಂದುತ್ವದ ಹೆಸರಿನಲ್ಲಿ ನಡೆಸುವ ಕ್ರಿಮಿನಲ್ ಚಟುವಟಿಕೆಗಳಿಗೆ, ಗುಂಪು ಹತ್ಯೆಗಳಿಗೆ, ಜಾತಿ ದೌರ್ಜನ್ಯಗಳಿಗೆ ಕುಖ್ಯಾತವಾಗಿವೆ. ಇಂತಹ ಸಂದರ್ಭದಲ್ಲಿ ದಕ್ಷಿಣದ ರಾಜ್ಯಗಳು ಅನುದಾನ ನೀಡುವಿಕೆಯಲ್ಲಿ ತಮಗಾಗುವ ಅನ್ಯಾಯದ ಬಗ್ಗೆ ಯಾಕೆ ಧ್ವನಿಯೆತ್ತಬಾರದು? ಎನ್ನುವ ಪ್ರಶ್ನೆ ಏಳುತ್ತದೆ. ಇತ್ತೀಚೆಗೆ ಜನಸಂಖ್ಯೆಯ ಆಧಾರದಲ್ಲಿ ಕ್ಷೇತ್ರ ಮರು ವಿಂಗಡಣೆಯ ವಿರುದ್ಧವೂ ದಕ್ಷಿಣದ ರಾಜ್ಯಗಳು ಆಕ್ಷೇಪಗಳನ್ನು ಎತ್ತಿವೆ. ದೇಶ ಕುಟುಂಬ ಯೋಜನೆಯನ್ನು ಘೋಷಣೆ ಮಾಡಿದಾಗ ದಕ್ಷಿಣದ ರಾಜ್ಯಗಳು ಅದನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಿದವು. ಸಾಕ್ಷರತೆ ಮತ್ತು ಜನಸಂಖ್ಯೆಯ ಇಳಿಕೆಯ ನಡುವೆ ಪರಸ್ಪರ ಸಂಬಂಧವಿದೆ. ಸಾಕ್ಷರತೆಯ ಕುರಿತಂತೆ ಜಾಗೃತಿಯನ್ನು ಹೊಂದಿರುವ ರಾಜ್ಯಗಳು ಕುಟುಂಬ ಯೋಜನೆಯ ಬಗ್ಗೆಯೂ ಹೆಚ್ಚು ಜಾಗೃತಿಯನ್ನು ಹೊಂದಿವೆ.

> **ಕೇಂದ್ರ ಸರಕಾರ ಅತ್ಯಧಿಕ ಅನುದಾನಗಳನ್ನು ಉತ್ತರ ಭಾರತದ ಈ ಪ್ರಮುಖ ರಾಜ್ಯಗಳಿಗೆ ನೀಡುತ್ತಾ ಬಂದಿದೆಯಾದರೂ ಯಾಕೆ ಇವುಗಳು ಸಾಕ್ಷರತೆಯಲ್ಲಿ ಈ ಮಟ್ಟಿಗೆ ಹಿಂದುಳಿದಿವೆ ಎನ್ನುವುದನ್ನು ಚರ್ಚಿಸಲು ಇದು ಸರಿಯಾದ ಸಂದರ್ಭವಾಗಿದೆ. ಉತ್ತರ ಪ್ರದೇಶ ಅಯೋಧ್ಯೆ ಮತ್ತು ರಾಮಮಂದಿರದ ಕಾರಣದಿಂದ ದೇಶದಲ್ಲಿ ಸುದ್ದಿಯಲ್ಲಿದೆ. ಪ್ರಯಾಗ ರಾಜ್, ಕುಂಭಮೇಳ ಇತ್ಯಾದಿಗಳಿಂದ ಉತ್ತರ ಪ್ರದೇಶದ ಸಾಕ್ಷರತೆಯನ್ನು ಮೇಲೆತ್ತಲು ಸಾಧ್ಯವಾಗಿಲ್ಲ. ಅಪರಾಧ ಪ್ರಕರಣಗಳಿಗಾಗಿ ಉತ್ತರ ಪ್ರದೇಶ ಕುಖ್ಯಾತಿಯನ್ನು ಪಡೆಯುತ್ತಿದೆ.**




• ಹಿಂದಿನ ಸಂಚಿಕೆಯಿಂದ **78ನೆಯ ಅಧ್ಯಾಯ**

ಅವನು ಅಲ್ಲಿಂದ ಹೊರಟು ಕೇಕಯರಾಜನ ಅಂತಃಪುರಕ್ಕೆ ಹೋಗಿ ಆ ರಾಯನ ಅನುಮತಿಯನ್ನು ಮತ್ತೊಮ್ಮೆ ಪಡೆದು ಶತ್ರುಘ್ನಸಮೇತನಾಗಿ ರಥವನ್ನೇರಿಕೊಂಡು ಕೇಕಯರಾಯನ ಪ್ರಧಾನ ರೊಡನೆ ಚತುರಂಗ ಬಲಸಮೇತನಾಗಿ ಸಿದ್ಧ ಪುರುಷನು ಅಮರಾವತಿಯಿಂದ ಹೊರಡು ವಂತೆ ಗಿರಿವ್ರಜದಿಂದ ಅಯೋಧ್ಯಾಪಟ್ಟಣಕ್ಕೆ ತೆರಳಿದನು.

**ಅಯೋಧ್ಯೆಗೆ ಭರತನ ಆಗಮನ :** ಅನಂತರ ಭರತನು ರಾಜಗೃಹದಿಂದ ಹೊರಟು ಸುದಾಮ ಮತ್ತು ಹ್ವಾದಿನಿ ಎಂಬ ನದಿಗಳನ್ನು ದಾಟಿ ಮುಂದೆ ಹೋಗಿ ಶತದ್ರುನದಿಯನ್ನು ದಾಟಿದನು.

ಏಲಾಧಾನವೆಂಬ ಗ್ರಾಮದ ಮೂಲಕ ಅಪರಪರ್ವಟಗಳೆಂಬ ಗ್ರಾಮಸಮುದಾಯವನ್ನು ಕಳೆದು ಶಿಲಾನದಿಯನ್ನು ದಾಟಿ ಆಗ್ನಿಯದಿಕ್ಕಿಗೆ ನಡೆದು ಶಲ್ಯಕರ್ತನವೆಂಬ ಗ್ರಾಮವನ್ನು ದಾಟಿದನು. ಮುಂದೆ ಅನೇಕ ಪರ್ವತ ಗಳನ್ನು ಹಾಯ್ದು ಚೈತ್ರರಥವೆಂಬ ವನಕ್ಕೆ ಬಂದನು. ಅಲ್ಲಿಂದ ಗಂಗಾನದಿಯ ಒಂದು ಶಾಖಾ ನದಿಯೂ ಸರಸ್ವತಿಯೂ ಸೇರುವ ಸಂಗಮಸ್ಥಳವನ್ನು ಹಾಯ್ದು ಮತ್ತ್ವದೇಶದ ಮೂಲಕ ಭಾರುಂಡವನಕ್ಕೆ ಬಂದನು.

ಅಲ್ಲಿಂದ ಕುಲಿಂಗಾನದಿಯನ್ನು ದಾಟಿ ಯಮುನಾತೀರಕ್ಕೆ ಬಂದು ಸೈನ್ಯಕ್ಕೆ ವಿಶ್ರಮಿಸುವುದಕ್ಕಾಗಿ ಅನುಜ್ಞೆ ಕೊಟ್ಟನು. ಅಲ್ಲಿ ಕುದುರೆಗಳಿಗೆ ಸ್ನಾನಮಾಡಿಸಿ ನೀರು ಹುಲ್ಲು ಮುಂತಾದವುಗಳನ್ನು ಕೊಡಿಸಿ ಸ್ವಲ್ಪ ಕಾಲ ವಿಶ್ರಮಿಸಿದನು. ಅನಂತರ ಭರತನು ಒಂದು ಮಹಾರಣ್ಯವನ್ನು ದಾಟಿ ಪ್ರಾಟವೆಂಬ ಪಟ್ಟಣದ ಬಳಿಯಲ್ಲಿ ಗಂಗಾನದಿಯನ್ನು ಉತ್ತರಿಸಿ ಕುಟಿಕೋಷ್ಠಿಕೆಯೆಂಬ ನದಿಯನ್ನು ದಾಟಿದನು. ಅವನು ಸೈನ್ಯಸಮೇತನಾಗಿ ಜಂಬೂಪ್ರಸ್ಥಕ್ಕೆ ಬಂದು ವರೂಥವೆಂಬ ಗ್ರಾಮವನ್ನು ಸಮೀಪಿಸಿದನು. ಅದರ ಬಳಿಯಲ್ಲಿ ಆ ರಾತ್ರಿ ವಿಶ್ರಮಿಸಿ ಮಾರನೆಯ ದಿನ ಉಜ್ಜಿಹಾನವೆಂಬ ನಗರಿಗೆ ಬಂದನು. ಅಲ್ಲಿ ಸೈನ್ಯವನ್ನು ಕುರಿತು ನೀವು ಹಿಂದಿನಿಂದ ಮೆಲ್ಲಗೆ ಬರಬಹುದು ಎಂದು ಅನುಮತಿಯನ್ನಿತ್ತು ತಾನು ವೇಗಶಾಲಿಗಳಾದ ಕುದುರೆಗಳನ್ನು ಹೂಡಿದ ರಥವನ್ನು ಏರಿದನು. ಅದರಲ್ಲಿ ಶತ್ರುಘ್ನ ನೊಡನೆ ಅಯೋಧ್ಯಾಭಿಮುಖವಾಗಿ ಬೇಗಬೇಗನೆ ಪ್ರಯಾಣಮಾಡಿದನು. ಅವನು ಆ ದಿನ ಸರ್ವತೀರ್ಥವೆಂಬ ಗ್ರಾಮದಲ್ಲಿ ರಾತ್ರಿ ವಿಶ್ರಮಿಸಿದನು. ಪ್ರಾತಃಕಾಲ ಅಲ್ಲಿಂದ ಹೊರಟು ಅನೇಕ ನದಿಗಳನ್ನು ದಾಟಿ ಹಸ್ತಿಪೃಷ್ಟಗ್ರಾಮದ ಮೂಲಕ ಕುಟಿಕಾ ನದಿಯನ್ನು ದಾಟಿದನು. ಆಮೇಲೆ ಕಪೀವತೀನದಿಯನ್ನು ಉತ್ತರಿಸಿ ಸ್ಥಾಣುಮತಿ ಮತ್ತು ಗೋಮತಿ ಎಂಬ ನದಿಗಳನ್ನು ಕಳೆದು ಮುಂದೆ ಬಂದನು. ಅಲ್ಲಿಂದ ಕಳಿಂಗವೆಂಬ ನಗರದ ಬಳಿಯಿರುವ ಸಾಲವನಕ್ಕೆ ಬಂದು ಸ್ವಲ್ಪ ಕಾಲ ವಿಶ್ರಮಿಸಿದನು. ಅನಂತರ ರಾತ್ರಿಯಲ್ಲಿಯೇ ಒಂದು ಅರಣ್ಯವನ್ನು ದಾಟಿದನು. ರಥದ ಕುದುರೆಗಳು ಅತಿಶಯವಾಗಿ ಬಳಲಿಹೋಗಿದ್ದುವು. ಬೆಳಗಾಗುವ ಹೊತ್ತಿಗೆ ದೂರದಲ್ಲಿ ಭರತನಿಗೆ ಅಯೋಧ್ಯಾನಗರವು ಕಾಣಿಸಿತು. ಮಾರ್ಗಮಧ್ಯದಲ್ಲಿ ಏಳು ರಾತ್ರಿಗಳು ಕಳೆದಿದ್ದುವು.

**ಭರತನು ತನ್ನ ಸಾರಥಿಯನ್ನು ಕುರಿತು ಹೀಗೆಂದನು :** ಎಲೈ ಸಾರಥಿಯೆ, ಅಯೋಧ್ಯಾ ಪಟ್ಟಣವನ್ನು ನೋಡಿದರೆ ಅದು ಹಿಂದೆ ಇದ್ದ ಹಾಗೆ ಕಾಣಿಸುವುದಿಲ್ಲ. ದೂರದಲ್ಲಿ ಬಿಳುಪಾದ ಭೂಮಿಯು ಕಾಣಿಸುತ್ತಿದೆ.

**ಮುಂದುವರಿಯುವುದು...**

# ಪ್ರತಿದಿನ ರಾಗಿ ರೊಟ್ಟಿ ತಿನ್ನಬೇಕು ಅಂತ

ರಾಗಿ ಆರೋಗ್ಯಕ್ಕೆ ಬಹಳ ಒಳ್ಳೆಯದು, ನೀವು ರಾಗಿ ಮುದ್ದೆಯನ್ನು ಇಷ್ಟಪಡದಿದ್ದರೆ ರಾಗಿಯಿಂದ ತಯಾರಿ ಸಲಾಗುವ ರೊಟ್ಟಿಯನ್ನು ತಿನ್ನಬಹುದು. ಇದು ಜೀರ್ಣಕ್ರಿಯೆಯಿಂದ ಹಿಡಿದು ಶುಗರ್ ಕಂಟ್ರೋಲ್‌ನಲ್ಲಿಡಲೂ ಸಹಕಾರಿಯಾಗಿದೆ.

ನೀವು ಕಡಿಮೆ ಗೋಧಿ ತಿನ್ನಲು ಪ್ರಯತ್ನಿಸುತ್ತಿದ್ದರೆ ಅಥವಾ ನಿಮ್ಮ ಊಟಕ್ಕೆ ಆರೋಗ್ಯಕರವಾದದ್ದನ್ನು ಸೇರಿಸಲು ಬಯಸಿದರೆ, ಈ ಮೃದುವಾದ ರಾಗಿ ರೊಟ್ಟಿ ನಿಮಗೆ ಒಂದು ಉತ್ತಮ ಆಯ್ಕೆಯಾಗಿದೆ. ಇದು ಚಟ್ನಿ, ಪಲ್ಯ ಉಪ್ಪಿನಕಾಯಿ ಜೊತೆನೆ ನೆಂಚಿಕೊಳ್ಳಲು ಸೂಕ್ತವಾಗಿದೆ. ರಾಗಿ ರೊಟ್ಟಿಯನ್ನು ನಿಮ್ಮ ದೈನಂದಿನ ದಿನಚರಿಯ ಭಾಗವಾಗಿ ಮಾಡುವುದು ನಿಮ್ಮ ಆರೋಗ್ಯವನ್ನು ಉತ್ತಮವಾಗಿಸಲು ಸಹಕಾರಿಯಾಗಿದೆ.

**ರಕ್ತದಲ್ಲಿನ ಸಕ್ಕರೆ ಮಟ್ಟ ಕಂಟ್ರೋಲ್‌ನಲ್ಲಿಡಲು:** ರಾಗಿ ಕಡಿಮೆ ಗ್ಲೈಸೆಮಿಕ್ ಸೂಚಿಯನ್ನು ಹೊಂದಿರುತ್ತದೆ. ಅಂದರೆ ಇದು ಅನೇಕ ಸಂಸ್ಕರಿಸಿದ ಧಾನ್ಯಗಳಂತೆ ರಕ್ತದಲ್ಲಿನ ಸಕ್ಕರೆಯಲ್ಲಿ ತ್ವರಿತ ಏರಿಕೆ ಉಂಟುಮಾಡುವುದಿಲ್ಲ. ನೀವು ಸ್ಥಿರ, ಸಮತೋಲಿತ ರೀತಿಯಲ್ಲಿ ತಿನ್ನಲು ಪ್ರಯತ್ನಿಸುತ್ತಿದ್ದರೆ, ಈ ಧಾನ್ಯವು ನಿಮಗೆ ಸಹಕಾರಿಯಾಗಿದೆ. **ಹೆಚ್ಚು ಸಮಯ ಹೊಟ್ಟೆ ತುಂಬಿರುವಂತೆ ಮಾಡುತ್ತದೆ:** ರಾಗಿ ನೈಸರ್ಗಿಕವಾಗಿ ಫೈಬರ್‌ನಲ್ಲಿ ಅಧಿಕವಾಗಿರುತ್ತದೆ. ಅಂದರೆ ಇದು ನಿಧಾನವಾಗಿ ಜೀರ್ಣವಾಗುತ್ತದೆ. ಇದು ನಿಮಗೆ ಹೆಚ್ಚು ಹೊತ್ತು ಹೊಟ್ಟೆ ತುಂಬಿದ ಅನುಭವವನ್ನು ನೀಡುತ್ತದೆ ಮತ್ತು ಊಟದ ನಡುವೆ ತಿಂಡಿಗಳನ್ನು ತೆಗೆದುಕೊಳ್ಳುವುದನ್ನು ತಡೆಯುತ್ತದೆ. ಬೆಳಿಗ್ಗೆ ರಾಗಿ ರೊಟ್ಟಿ ತಿಂದರೆ ನಿಮ್ಮ ದಿನವು ಹಠಾತ್ ಶಕ್ತಿ ಕುಸಿತವಿಲ್ಲದೆ ಸ್ಥಿರ ಆರಂಭವನ್ನು ನೀಡುತ್ತದೆ.



**ಮೂಳೆಗಳು ಬಲಗೊಳ್ಳಲು ಉತ್ತಮವಾಗಿದೆ:** ನೈಸರ್ಗಿಕ ಕ್ಯಾಲ್ಸಿಯಂ ಅಂಶದೊಂದಿಗೆ, ರಾಗಿಯು ಯಾವುದೇ ಪೂರಕಗಳ ಅಗತ್ಯವಿಲ್ಲದೆ ಮೂಳೆಯ ಬಲವನ್ನು ಬೆಂಬಲಿಸುತ್ತದೆ. ಇದು ಕಬ್ಬಿಣಾಂಶವನ್ನು ಸಹ ನೀಡುತ್ತದೆ, ಇದು ನಿಮಗೆ ಶಕ್ತಿಯ ಕೊರತೆಯಿದ್ದರೆ ಉತ್ತಮ ಆಯ್ಕೆಯಾಗಿದೆ. ಕಾಲಾನಂತರದಲ್ಲಿ ಇದು ಶಕ್ತಿಯನ್ನು ಹೆಚ್ಚಿಸುತ್ತದೆ.

**ನೈಸರ್ಗಿಕವಾಗಿ ಗ್ಲುಟನ್-ಮುಕ್ತವಾಗಿದೆ:** ಗೋಧಿ ಹೆಚ್ಚಾಗಿ ತುಂಬಾ ಭಾರವಾಗಿದ್ದರೆ ಅಥವಾ ಹೊಟ್ಟೆ ಉಬ್ಬರಕ್ಕೆ ಕಾರಣವಾಗಿದ್ದರೆ, ರಾಗಿ ಉತ್ತಮ ಪರ್ಯಾಯವಾಗಿದೆ. ಇದು ಗ್ಲುಟನ್-ಮುಕ್ತವಾಗಿದ್ದು ಹೊಟ್ಟೆಗೆ ಮೃದುವಾಗಿರುತ್ತದೆ. ಇದು ಸೂಕ್ಷ್ಮ ವ್ಯವಸ್ಥೆಗಳಿಗೆ ಅಥವಾ ಸಾಮಾನ್ಯ ಹಿಟ್ಟಿನಿಂದ ವಿರಾಮ ಬಯಸುವ ಯಾರಿಗಾದರೂ ಉತ್ತಮ ಆಯ್ಕೆಯಾಗಿದೆ.

**ಜೀರ್ಣಕ್ರಿಯೆಯನ್ನು ಸುಲಭಗೊಳಿಸುತ್ತದೆ:** ರಾಗಿ ರೊಟ್ಟಿ ಹಗುರವಾಗಿರುತ್ತದೆ, ಸುಲಭವಾಗಿ ಒಡೆಯುತ್ತದೆ ಮತ್ತು ನಿಮಗೆ ಹೊಟ್ಟೆ ಭಾರವಾದ ಭಾವನೆಯನ್ನು ಉಂಟುಮಾಡುವುದಿಲ್ಲ. ಇದು ಬಿಸಿ ವಾತಾವರಣದಲ್ಲಿ ಅಥವಾ ಹೊಟ್ಟೆ ಸ್ವಲ್ಪ ಅಸ್ವಸ್ಥತೆಯನ್ನು ಅನುಭವಿಸಿದಾಗ ವಿಶೇಷವಾಗಿ ಉಪಯುಕ್ತವಾಗಿದೆ. ಇದು ವ್ಯವಸ್ಥೆಯಲ್ಲಿ ಹಗುರವಾಗಿರುವ ಆರಾಮದಾಯಕ ಊಟವಾಗುತ್ತದೆ.

**ರಾಗಿ ರೊಟ್ಟಿ ಮಾಡುವ ವಿಧಾನ:** ರಾಗಿ ಹಿಟ್ಟನ್ನು ಬೆಚ್ಚಗಿನ ನೀರು, ಒಂದು ಚಿಟಿಕೆ ಉಪ್ಪು ಮತ್ತು ಕೆಲವು ಹನಿ ಎಣ್ಣೆಯೊಂದಿಗೆ ಬೆರೆಸಿ. ಮೃದುವಾದ ಹಿಟ್ಟಿನಲ್ಲಿ ಬೆರೆಸಿ ಮತ್ತು ನಿಮ್ಮ ಕೈ ಅಥವಾ ಲಟ್ಟಣಿಗೆಯನ್ನು ಬಳಸಿ ನಿಧಾನವಾಗಿ ಚಪಾತಿ ಲಟ್ಟಿಸಿದಂತೆ ಲಟ್ಟಿಸಿ. ಎರಡೂ ಬದಿಗಳು ಗಟ್ಟಿಯಾಗಿ ಮತ್ತು ಸ್ವಲ್ಪ ಗರಿಗರಿಯಾಗುವವರೆಗೆ ಬಿಸಿ ತವಾದಲ್ಲಿ ಅದನ್ನು ಟೋಸ್ಟ್ ಮಾಡಿ. ಹೆಚ್ಚುವರಿ ಸುವಾಸನೆಗಾಗಿ, ಕತ್ತರಿಸಿದ ಕೊತ್ತಂಬರಿ, ಜೀರಿಗೆ ಅಥವಾ ತುರಿದ ತರಕಾರಿಗಳನ್ನು ಹಿಟ್ಟಿನಲ್ಲಿ ಸೇರಿಸಿ.



# ಪ್ಲಾಸ್ಟಿಕ್ ನಿಯಂತ್ರಣಕ್ಕೆ ತುರ್ತು ಕ್ರಮ ಅಗತ್ಯ: ಪ್ರೊ.ಮಧು ವೀರರಾಘವನ್


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಯಲಹಂಕ**

ಮಣಿಪಾಲ್ ಉನ್ನತ ಶಿಕ್ಷಣ ಅಕಾಡೆಮಿಯಲ್ಲಿ ಪ್ಲಾಸ್ಟಿಕ್ ಮಾಲಿನ್ಯ ತಡೆಗಟ್ಟುವ ಸಂಕಲ್ಪದೊಂದಿಗೆ ವಿಶ್ವ ಪರಿಸರ ದಿನವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಇಂಡಿಯನ್ ಎಕನಾಮಿಕ್ ಟ್ರೇಡ್ ಆರ್ಗನೈಸೇಶನ್ ಮಣಿಪಾಲ್ ಸೆಂಟರ್ ಫಾರ್ ದ್ವೀಪ ಸಂಸ್ಥೆಯ ಸಹಭಾಗಿತ್ವದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿತ್ತು. ಗಿಡನೆಡುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಮಣಿಪಾಲ್ ಉನ್ನತ ಶಿಕ್ಷಣ ಅಕಾಡೆಮಿಯ ಕುಲಪತಿ ಪ್ರೊ.ಮಧು ವೀರರಾಘವನ್, ಪ್ರತಿ ವರ್ಷ ವಿಶ್ವದಾದ್ಯಂತ 40 ಕೋಟಿ ಟನ್‌ನಷ್ಟು ಪ್ಲಾಸ್ಟಿಕ್ ಉತ್ಪಾದನೆಯಾಗುತ್ತಿದೆ. ಇದರಿಂದ ಪರಿಸರ ಮಾಲಿನ್ಯ ಹೆಚ್ಚಾಗುತ್ತಿದೆ. ನಿಯಂತ್ರಣಕ್ಕಾಗಿ ತಕ್ಷಣದ ಕ್ರಮ ಕೈಗೊಳ್ಳಬೇಕಾದ ಅಗತ್ಯವಿದೆ' ಎಂದರು. 'ಜವಾಬ್ದಾರಿಯುತ ವಿಶ್ವವಿದ್ಯಾಲಯವಾಗಿ ನಾವು ಶೂನ್ಯ-ತ್ಯಾಜ್ಯ ಪರಿಸರ ರೂಪಿಸುವುದಕ್ಕೆ ಬದ್ಧರಾಗಿದ್ದೇವೆ. ಕ್ಯಾಂಪಸ್‌ನಲ್ಲಿ ಪ್ಲಾಸ್ಟಿಕ್ ಬಾಟಲಿಗಳ ಬಳಕೆ ನಿಷೇಧಿಸಿದ್ದು, ಸುಸ್ಥಿರ ಪರ್ಯಾಯವಾಗಿ ಗಾಜಿನ ಬಾಟಲಿಗಳನ್ನು ಬಳಸಲು ಪ್ರಾರಂಭಿಸಿದ್ದೇವೆ. ವೇದಾಂತ ಸಂಸ್ಥೆಯ ಪಾಲುದಾರಿಕೆಯೊಂದಿಗೆ ಸಮಗ್ರ ತ್ಯಾಜ್ಯ ನಿರ್ವಹಣಾ ವ್ಯವಸ್ಥೆಯನ್ನು ರೂಪಿಸಿದ್ದೇವೆ ಎಂದು ತಿಳಿಸಿದರು.ಭಾರತದಲ್ಲಿರುವ ಈಕ್ವೆಡಾರ್‌ನ ರಾಯಭಾರಿ ಫರ್ನಾಂಡೋ ಬುಚೆಲಿ ಮಾತನಾಡಿದರು. ಮಣಿಪಾಲ್ ಸೆಂಟರ್ ಫಾರ್ ದ್ವೀಪ ಸಂಸ್ಥೆಯ ಪ್ರೊ.ದೀಪ್ತಾ ಸತೀಶ್, ಐಐಎಂನ ಸೆಂಟರ್ ಫಾರ್ ಪಬ್ಲಿಕ್ ಪಾಲಿಸಿ ಕೇಂದ್ರದ ಅಧ್ಯಕ್ಷ ಪ್ರೊ.ಎಂ.ವಿ.ರಾಜೀವ್‌ಗೌಡ, ಐಇಟಿಒ ಅಧ್ಯಕ್ಷ ಡಾ.ಅಸಿಫ್ ಇಕ್ಬಾಲ್ ಮತ್ತಿತರರು ಉಪಸ್ಥಿತರಿದ್ದರು. ಇದೇ ಸಂದರ್ಭದಲ್ಲಿ ನಡೆದ ಸಂವಾದದಲ್ಲಿ ಯೂನಿಫೈಡ್ ಇಂಟೆಲಿಜೆನ್ಸ್ ಪ್ರೈ. ಲಿಮಿಟೆಡ್‌ನ ಸಹ-ಸಂಸ್ಥಾಪಕ ಟಿ.ಪಾಲ್ ಕೋಶಿ, ಸಮುದ್ರ ಆಹಾರ ಉದ್ಯಮ ತಜ್ಞ ದಾವೂದ್ ಸೇಟ್, ಶಿಕ್ಷಣ ತಜ್ಞೆ ಮೀರಾ ಬೈಂದೂರ್ ಹಾಗೂ ಪ್ರೊ.ಎಂ.ವಿ.ರಾಜೀವ್‌ಗೌಡ ಪ್ಲಾಸ್ಟಿಕ್ ನಿರ್ಮೂಲನೆಯ ವಿವಿಧ ವಿಚಾರಗಳನ್ನು ಹಂಚಿಕೊಂಡರು.

# 10 ನಿಮಿಷ ಸಾಕು ಮಾರ್ನಿಂಗ್ ಟಿಫಿನ್, ಸಂಜೆ ಸ್ನಾಕ್‌ಗೆ ಬ್ರೆಡ್ ಚಿಲ್ಲಿ ಬೆಸ್ಟ್

ಇನ್ಮುಂದೆ ಅಮ್ಮಂದಿರಿಗೆ ನೋ ಟೆನ್ಷನ್ ಮಾರ್ನಿಂಗ್ ಟಿಫಿನ್ ಬಾಕ್ಸ್ ಆಗಿರಲಿ ಅಥವಾ ಸಂಜೆ ಟೈಮ್ ತಿಂಡಿ ಬಗ್ಗೆ ಚಿಂತೆ ಬೇಡವೇ ಬೇಡ. ಕೇವಲ 10 ನಿಮಿಷಗಳಲ್ಲಿ ರುಚಿಯಾದ ಬ್ರೆಡ್ ಚಿಲ್ಲಿ ಮಾಡಬಹುದು. ಹೌದು, ಇದು ತ್ವರಿತ ತಿಂಡಿ ರೆಸಿಪಿ ಆಗಿದೆ. ಸಾಮಾನ್ಯವಾಗಿ ಮಕ್ಕಳು ನಿತ್ಯ ತಮ್ಮ ಲಂಚ್ ಬಾಕ್ಸ್‌ನಲ್ಲಿ ಒಂದೇ ತಿಂಡಿ ಬಯಸಲ್ಲ. ಅವರು ತಮ್ಮ ಡಬ್ಬಿಯಲ್ಲಿಯೂ ವಿಭಿನ್ನ ತಿಂಡಿ ಕೇಳುತ್ತಾರೆ. ಕೆಲವು ಮಕ್ಕಳಂತೂ ಹಿಡಿದಿದ್ದೇ ಹಠ. ಈ ಪರಿಸ್ಥಿತಿಯಲ್ಲಿ ನಿಮಗೆ ಏನು ಮಾಡಬೇಕು ಎಂಬ ಚಿಂತೆ ಸಾಮಾನ್ಯ. ನಿಮ್ಮ ಈ ಚಿಂತೆ ದೂರ ಮಾಡಲು ನಾವಿಂದು ಬೇಗನೇ ತಯಾರಾಗುವ ಬ್ರೆಡ್ ಚಿಲ್ಲಿ ಬಗ್ಗೆ ತಿಳಿಸಿಕೊಡಲಿದ್ದೇವೆ. ಬ್ರೆಡ್ ಚಿಲ್ಲಿ ಕೇವಲ ಬೆಳಗ್ಗಿನ ಉಪಹಾರಕ್ಕೆ ಮಾತ್ರವಲ್ಲ, ಸಂಜೆ ಸ್ನಾಕ್ ಪರ್ಫೆಕ್ಟ್ ಚಾಯ್ಸ್, ಸಂಜೆ ಬಹಳಷ್ಟು ಹಸಿವು ಇರುತ್ತದೆ. ಈ ವೇಳೆ ಕಷ್ಟಪಟ್ಟು ಕೆಲಸ ಮಾಡಲು ಆಗಲ್ಲ. ಆದರೆ, ಬೇಗ ಏನನ್ನಾದರೂ ಮಾಡಿ ತಿನ್ನಬೇಕು ಅನಿಸುತ್ತೆ. ಈ ಸಮಯದಲ್ಲಿ ಬ್ರೆಡ್ ಚಿಲ್ಲಿ ನಿಮಗೆ ಸಹಕಾರಿಯಾಗಿದೆ. ಇದನ್ನು ಬ್ರೆಡ್ ಮತ್ತು ಮನೆಯಲ್ಲಿ ಇರುವ ವಸ್ತುಗಳನ್ನು ಬಳಸಿ ಸುಲಭವಾಗಿ ಮಾಡಬಹುದು. ಇನ್ನೇಕೆ ತಡ, ಟೇಸ್ಟಿಯಾದ ಬ್ರೆಡ್ ಚಿಲ್ಲಿ ಮಾಡೋದು ಹೇಗೆ ಅಂತ ತಿಳಿಯೋಣ ಬನ್ನಿ.

**ಬ್ರೆಡ್ ಚಿಲ್ಲಿ ಮಾಡುವ ವಿಧಾನ:** ಮೊದಲು ನಾವು ಆರು ಬ್ರೆಡ್ ತೆಗೆದುಕೊಳ್ಳೋಣ. ಅವುಗಳನ್ನು ಸಣ್ಣ ಸಣ್ಣ ತುಂಡುಗಳನ್ನಾಗಿ ಕತ್ತರಿಕೊಳ್ಳೋಣ. ಈಗ ಬಾಣಲೆ ತೆಗೆದುಕೊಳ್ಳಿ, ಅದು ಸ್ವಲ್ಪ ಬಿಸಿಯಾಗಲಿ. ಅದರಲ್ಲಿ ಅಡುಗೆ ಎಣ್ಣೆ ಹಾಕಿ, ಒಗ್ಗರಣೆ ಮಾಡಿ. ಒಂದು ಸ್ಪೂನ್ ಸಾಸಿವೆ ಮತ್ತು ಜೀರಿಗೆಯನ್ನು ಹಾಕಬೇಕು. ಇದು ಚೆನ್ನಾಗಿ ಬೆಂದ ಬಳಿಕ, ಸಣ್ಣದಾಗಿ ಕತ್ತರಿಸಿ ಹಸಿ ಮೆಣಸಿನಕಾಯಿ ಮತ್ತು 4 ರಿಂದ 5 ಎಸಳು ಬೆಳ್ಳುಳ್ಳಿ ಸೇರಿಸಿ. ಹಾಗೆಯೇ ಸ್ವಲ್ಪ ಚೆನ್ನಾಗಿ ಬೇಯಿಸಿ.ಇದಾದ ಬಳಿಕ, ಎರಡು ಕತ್ತರಿಸಿದ ಈರುಳ್ಳಿ ತೆಗೆದುಕೊಂಡು ಅದರಲ್ಲಿ ಹಾಕಿ ಚೆನ್ನಾಗಿ ಹುರಿಯಬೇಕು. ಈರುಳ್ಳಿ ಗೋಲ್ಡ್ ಬಣ್ಣ ಬಂದ ಬಳಿಕ, ಅದಕ್ಕೆ ಒಂದು ಕತ್ತರಿಸಿದ ಕ್ಯಾಪ್ಸಿಕಂ ಹಾಕಬೇಕು. ಎರಡನ್ನೂ ಸ್ವಲ್ಪ ಹುರಿದ ಬಳಿಕ, ಈಗ ಅದಕ್ಕೆ ಒಂದು ಕತ್ತರಿಸಿದ ಟೊಮ್ಯಾಟೊ ಹಾಕಿ. ಸ್ವಲ್ಪ ಕಾಲ ಹುರಿಯಿರಿ. ಬಳಿಕ ಎಲ್ಲಾ ಸಾಸ್ ಸೇರಿಸಿ. ಈಗ ಗ್ಯಾಸ್ ಆಫ್ ಮಾಡಿ. ಕೊನೆಯದಾಗಿ ಕೊತ್ತಂಬರಿ ಸೊಪ್ಪು ಹಾಕಿ.


ಇಷ್ಟು ಮಾಡಿದರೆ ಸಾಕು ಬಿಸಿ ಬಿಸಿಯಾದ ಬ್ರೆಡ್ ಚಿಲ್ಲಿ ಸವಿಯಲು ಸಿದ್ಧವಾಗುತ್ತದೆ. ಈ ಮೇಲಿನ ರೀತಿಯಲ್ಲಿ ಕೇವಲ 10 ನಿಮಿಷಗಳಲ್ಲಿ ನೀವು ಸುಲಭವಾಗಿ ರುಚಿಯಾದ ಬ್ರೆಡ್ ಚಿಲ್ಲಿ ತಯಾರಿಸಬಹುದು. ಬ್ರೇಕ್‌ಫಾಸ್ಟ್‌ಗೂ ಸೈ, ಲಂಚ್‌ಗೂ ಸೈ 15 ನಿಮಿಷದಲ್ಲಿ ತಯಾರಿಸಿ ಈ ತಿಂಡಿ.. ಒಟ್ಟಾರೆಯಾಗಿ, ಈ ಬ್ರೆಡ್ ಚಿಲ್ಲಿ ನಿಮ್ಮ ಚಿಂತೆಯನ್ನು ಮಾತ್ರ ಕಡಿಮೆ ಮಾಡುವುದಿಲ್ಲ. ನಿಮ್ಮ ಸಮಯವನ್ನೂ ಉಳಿಸುತ್ತದೆ. ನೀವು ಮನೆಯಲ್ಲಿಯೇ ಮಾಡುವುದರಿಂದ ಹೆಚ್ಚು ರುಚಿಕರವಾಗಿರುತ್ತದೆ ಮತ್ತು ಮಕ್ಕಳ ಆರೋಗ್ಯಕ್ಕೂ ಒಳ್ಳೆಯದು.

**ಬ್ರೆಡ್ ಚಿಲ್ಲಿ ತಯಾರಿಸಲು ಬೇಕಾಗುವ ಸಾಮಗ್ರಿಗಳು**


- ಬ್ರೆಡ್
- ಈರುಳ್ಳಿ
- ಕ್ಯಾಪ್ಸಿಕಂ
- ಟೊಮ್ಯಾಟೊ
- ಹಸಿ ಮೆಣಸಿನಕಾಯಿ
- ಬೆಳ್ಳುಳ್ಳಿ
- ಟೊಮ್ಯಾಟೊ ಸಾಸ್
- ಚಿಲ್ಲಿ ಸಾಸ್
- ವಿನೆಗರ್
- ಸಾಸಿವೆ ಮತ್ತು ಜೀರಿಗೆ
- ಉಪ್ಪು
- ಕೊತ್ತಂಬರಿ ಸೊಪ್ಪು
- ಅಡುಗೆ ಎಣ್ಣೆ



# ದೀರ್ಘಕಾಲ ಕುಳಿತುಕೊಳ್ಳುವುದು ಧೂಮಪಾನದಷ್ಟೇ ಅಪಾಯಕಾರಿ!



ಒಂದೇ ಸ್ಥಳದಲ್ಲಿ ದೀರ್ಘಕಾಲದವರೆಗೆ ಕುಳಿತು ಕೆಲಸ ಮಾಡುವುದು ಆರೋಗ್ಯಕ್ಕೆ ತುಂಬಾನೇ ಹಾನಿಕಾರಕ. ಅಯೋವಾ ವಿಶ್ವವಿದ್ಯಾಲಯದ ಸಂಶೋಧನೆಯ ಪ್ರಕಾರ, ಒಂದೇ ಕಡೆಯಲ್ಲಿ ಗಂಟೆಗಟ್ಟಲೆ ಕುಳಿತು, ಕೆಲಸ ಮಾಡುವುದರಿಂದ, ಮುಂದಿನ ದಿನಗಳಲ್ಲಿ 19 ಬಗೆಯರೋಗಗಳು ಕಾಣಿಸಿಕೊಳ್ಳುವ ಅಪಾಯ ಹೆಚ್ಚಿರುತ್ತದೆಯಂತೆ! ಈಗ ಕಾಲ ಬದಲಾಗಿ ಬಿಟ್ಟಿದೆ, ಎಲ್ಲದರಲ್ಲೂ ಕೂಡ ಹೊಸತನ ಬಂದು! ನಮ್ಮ ಹಿರಿಯರ ಕಾಲದವರ ತರಹ ಮೈಬಗ್ಗಿಸಿ ದುಡಿಯುವ ಪ್ರಮೇಯ ಈಗ ಇಲ್ಲ! ಇದ್ದರೂ ಕೂಡ ಕೆಲವೊಂದು ದುಡಿಮೆಗೆ ಮಾತ್ರ ಸೀಮಿತವಾಗಿದೆ. ಸಾಧಾರಣವಾಗಿ ಈಗ ಎಲ್ಲಾ ಕೆಲಸ ಕಾರ್ಯಗಳು ಕೂಡ ಈ ನಮ್ಮ ಕೈ ಬೆರಳುಗಳ ಮೂಲಕವೇ ನಡೆಯುತ್ತವೆ ಈಗಿನ ದಿನಮಾನಗಳಲ್ಲಿ ಕಂಪ್ಯೂಟರ್ ಅಥವಾ ಲ್ಯಾಪ್ ಟಾಪ್ ಮುಂದೆ ಕುಳಿತು ಕೆಲಸ ಮಾಡುವ ಅವಕಾಶ ಹೆಚ್ಚಿರುವುದರಿಂದ ಸಾಕಷ್ಟು ಜನರು ಆರರಿಂದ ಎಂಟು ಗಂಟೆಗಳಿಗಿಂತಲೂ ಕೂಡ ಹೆಚ್ಚು ಹೊತ್ತು ಇದರ ಮುಂದೆ ಕುಳಿತುಕೊಂಡೇ ಕೆಲಸ ಮಾಡುತ್ತಾರೆ. ಆದರೆ ವೈದ್ಯರು ಹೇಳುವ ಪ್ರಕಾರ, ದೀರ್ಘಕಾದವರೆಗೆ ಕುಳಿತುಕೊಂಡೇ ಕೆಲಸ ಮಾಡುವವರು, ದೈಹಿಕ ಚಟುವಟಿಕೆ ಇಲ್ಲದವರಲ್ಲಿ ಗಂಭೀರ ಸ್ವರೂಪದ ಆರೋಗ್ಯ ಸಮಸ್ಯೆಗಳು ಕಾಣಿಸಿಕೊಳ್ಳುವ ಸಾಧ್ಯತೆ ಹೆಚ್ಚಿರುತ್ತದೆಯಂತೆ ಅದರಲ್ಲೂ ಮುಖ್ಯವಾಗಿ ದಿನವಿಡಿ ಕುಳಿತು ಮಾಡುವ ಕೆಲಸಗಳು, ಧೂಮಪಾನದಷ್ಟೇ ದೇಹಕ್ಕೆ ಹಾನಿಕಾರಕವಾಗುವ ಸಾಧ್ಯತೆ ಹೆಚ್ಚಿರುತ್ತದೆಯಂತೆ.



**ಸಂಶೋಧನೆಯ ಪ್ರಕಾರ:** ಇತ್ತೀಚಿನ ಸಂಶೋಧನೆಯ ಪ್ರಕಾರ, ಗಂಟೆಗಟ್ಟಲೆ ಕುಳಿತು ದೈಹಿಕ ಕೆಲಸ ಮಾಡದ ಜನರಿಗೆ ಮಧುಮೇಹ ಸೇರಿದಂತೆ 19 ಬಗೆಯ ಕಾಯಿಲೆಗಳು ಬರುವ ಅಪಾಯವಿದೆ ಎಂದು ತನ್ನ ವರದಿಯಲ್ಲಿ ತಿಳಿಸಿದೆ! ಹೌದು ದೇಹ ಚಲನೆಯಲ್ಲಿ ಇಲ್ಲದಿದ್ದರೆ ಹಾಗೂ ಹೆಚ್ಚಿನ ಸಮಯ ಕುಳಿತು ಕೊಂಡೇ ಕೆಲಸ ಮಾಡುತ್ತಿದ್ದರೆ, ಅವರಲ್ಲಿ ಮಾಂಸಖಂಡಗಳು ದುರ್ಬಲವಾಗುತ್ತವೆ, ಸ್ಪೈನಲ್ ಡಿಸ್ಕ್‌ನಲ್ಲಿ ಸಮಸ್ಯೆ ಕಾಣಿಸಿ ಕೊಳ್ಳಬಹುದು ಜೊತೆಗೆ ಹೃದಯದಲ್ಲಿ ಸಮಸ್ಯೆ ಕಾಣಿಸಿ ಕೊಳ್ಳುವುದರ ಜೊತೆಗೆ ಇನ್ನಿತರ ದೀರ್ಘಕಾಲದ ಆರೋಗ್ಯ ಸಮಸ್ಯೆಗಳ ಅಪಾಯ ಕೂಡ ಹೆಚ್ಚಿರುತ್ತದೆ

**ಸಂಶೋಧನೆಯಲ್ಲಿ ಬೆಳಕಿಗೆ ಬಂದಿರುವ ಮಾಹಿತಿಯ ಪ್ರಕಾರ :** ಅಯೋವಾ ವಿಶ್ವವಿದ್ಯಾಲಯದ ಸಂಶೋಧನೆಯಲ್ಲಿ ಈ ಮಾಹಿತಿ ಬೆಳಕಿಗೆ ಬಂದಿದೆ. ಈ ಅಧ್ಯಯನವು 7,000ಕ್ಕೂ ಹೆಚ್ಚು ರೋಗಿಗಳ ದೈಹಿಕ ಚಟುವಟಿಕೆಯ ಮಟ್ಟದ ಬಗ್ಗೆ ಮಾಹಿತಿಯನ್ನು ಆಧರಿಸಿದೆ. ಗಂಟೆಗಟ್ಟಲೆ ಕುಳಿತು ಕೆಲಸ ಮಾಡುವವರ ದೇಹದಲ್ಲಿ ಧೂಮಪಾನದಂತಹ ಪರಿಣಾಮಗಳು ಕಂಡುಬಂದವು. ಈ ಸಂಶೋಧನೆಗೆ ಒಳಪಡಿಸಿದ ಜನರಲ್ಲಿ ಟೈಪ್-2 ಮಧುಮೇಹ, ಹೃದಯ ಕಾಯಿಲೆ, ಕ್ಯಾನ್ಸರ್, ಅಧಿಕ ರಕ್ತದೊತ್ತಡ, ಬೊಜ್ಜು, ಕೀಲು ನೋವು, ಮಾನಸಿಕ ಒತ್ತಡ, ಖಿನ್ನತೆ, ಆತಂಕ, ಇನ್ಸುಲಿನ್ ಪ್ರತಿ ರೋಧ, ಕೀಲುಗಳಲ್ಲಿ ಬಿಗಿತ, ಬೆನ್ನುಮೂಳೆಯ ಸಮಸ್ಯೆಗಳು, ಅಧಿಕ ಕೊಲೆಸ್ಟ್ರಾಲ್, ಫ್ಯಾಟಿ ಲಿವರ್ ಸಮಸ್ಯೆ, ಮೂತ್ರಪಿಂಡದ ಕಾಯಿಲೆ ಮತ್ತು ನರ ದೌರ್ಬಲ್ಯದಿಂದ ಬಳಲುತ್ತಿದ್ದರು ಎಂಬುದನ್ನು ತಮ್ಮ ವರದಿಯಲ್ಲಿ ತಿಳಿಸಿದೆ.

ಇನ್ನೂ ಮುಖ್ಯವಾಗಿ ಇಲ್ಲಿ ಗಮನಿಸಬೇಕಾದ ಸಂಗತಿ ಏನೆಂದರೆ ವ್ಯಾಯಾಮ ಮಾಡುತ್ತಾ ಗಂಟೆಗಟ್ಟಲೆ ಒಂದೇ ಸ್ಥಳದಲ್ಲಿ ಕುಳಿತು ಕೆಲಸ ಮಾಡದವರಲ್ಲಿ ಈ ರೋಗಗಳ ಅಪಾಯ ಬಹಳಷ್ಟು ಕಡಿಮೆ ಇರುವುದು ಬೆಳಕಿಗೆ ಬಂದಿದೆ.

**ಬ್ರೇಕ್ ಅತ್ಯಗತ್ಯ :** ವ್ಯಾಯಾಮದ ಪ್ರಯೋಜನಗಳ ಬಗ್ಗೆ ವೈದ್ಯರು ಜನರಿಗೆ ತಿಳಿಹೇಳಬೇಕು ಎಂದು ಸಂಶೋಧನೆಯು ಸೂಚಿಸಿದೆ. ಪ್ರತಿ ಗಂಟೆಗೆ 5 ನಿಮಿಷಗಳ ಕಾಲ ನಡೆಯುವುದು ಅಥವಾ ಲಘು ವ್ಯಾಯಾಮ ಮಾಡುವುದು, ಇಲ್ಲಾಂದ್ರೆ ಎರಡು ಗಂಟೆಗೆ ಒಮ್ಮೆ ಎದ್ದು ಹೋಗಿ, ಐದತ್ತು ನಿಮಿಷ ಟೀ-ಕಾಫಿ ಬ್ರೇಕ್ ತೆಗೆದುಕೊಳ್ಳುವುದರಿಂದ, ತಕ್ಕ ಮಟ್ಟಿಗಾದರೂ ಈ ಮೇಲಿನ ಆರೋಗ್ಯ ಸಮಸ್ಯೆಗಳಿಂದ ದೂರವಿರಬಹುದು ಎನ್ನುವುದು ತಜ್ಞರ ಸಲಹೆ. ಯಾರಾದರೂ ಒಂದೇ ಸ್ಥಳದಲ್ಲಿ ಗಂಟೆಗಟ್ಟಲೆ ಕುಳಿತುಕೊಳ್ಳುವ ಅಭ್ಯಾಸ ಇಟ್ಟುಕೊಳ್ಳಬಾರದು, ಮಧ್ಯದಲ್ಲಿ ಒಂದೆರಡು ನಿಮಿಷವಾದರೂ ಬ್ರೇಕ್ ತೆಗೆದುಕೊಳ್ಳಬೇಕು ಎಂದು ಸಂಶೋಧಕರು ತಮ್ಮ ವರದಿಯಲ್ಲಿ ಮಾಹಿತಿ ನೀಡಿದೆ. ಈ ಸಮಯದಲ್ಲಿ ಲಘು ವ್ಯಾಯಾಮ ಅಥವಾ ಎರಡು-ಮೂರು ನಿಮಿಷ ನಡೆದಾಡುವ ಅಭ್ಯಾಸ ಮಾಡಿಕೊಳ್ಳಬೇಕು.

## ಪೊಲೀಸ್ ದೂರು ಪ್ರಾಧಿಕಾರ ಹಾಗೂ ಮಾನವ ಹಕ್ಕುಗಳ ಆಯೋಗಕ್ಕೆ ಹಿಂದೂ ಸಂಘಟನೆಗಳ ದೂರು

# ಕಿರುಕುಳ ನೀಡುತ್ತಿರುವ ಪೊಲೀಸರ ಮೇಲೆ ಸೂಕ್ತ ಕ್ರಮ ಜರುಗಿಸಿ

• **ಉದಯವಾಹಿನಿ, ಬೆಂಗಳೂರು**


ಉದಯವಾಹಿನಿ ಚಿತ್ರ

**ಶ್ರೀ. ಮೋಹನ ಗೌಡ ಮಾತನಾಡಿ, ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು, ಕಡಬ ಸೇರಿದಂತೆ ಅನೇಕ ಕಡೆಗಳಿಂದ ವೃದ್ಧರು ಸೇರಿದಂತೆ ಅನೇಕ ಜನರಿಗೆ ತಡ ರಾತ್ರಿ ಕರೆ ಮಾಡಿ ಪೊಲೀಸರು ಅವರ ಮಾಹಿತಿ, ವಿಳಾಸ ಕೇಳಿದ್ದಾರೆ. ಸುಮಾರು 21 ಹಿಂದೂ ನಾಯಕರು, ರೈತರು, ಸಾಮಾಜಿಕ ಕಾರ್ಯಕರ್ತರಿಗೆ ಗಡಿಪಾರು ಆದೇಶವನ್ನು ಮಾಡಲಾಗಿದೆ. ಇದರಿಂದ ಜಿಲ್ಲೆಯಲ್ಲಿ ಭಯದ ವಾತವರಣವು ನಿರ್ಮಾಣವಾಗಿದೆ. ಪೊಲೀಸರು ರಾತ್ರೋರಾತ್ರಿ ಹಿಂದೂಗಳ ಮನೆಗೆ ಬರುವುದರಿಂದ ಜನರಲ್ಲಿ ಭಯದ ವಾತವರಣದಲ್ಲಿ ಬದುಕುವ ಸ್ಥಿತಿಯು ನಿರ್ಮಾಣವಾಗಿದೆ ಎಂದರು.**

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪೊಲೀಸರು ಕಳೆದ ಒಂದು ವಾರದಿಂದ ಕೋಮು ಸೌಹಾರ್ದವನ್ನು ಕಾಪಾಡುವ ನೆಪದಲ್ಲಿ ಹಿಂದೂ ಕಾರ್ಯಕರ್ತರನ್ನು ಗುರಿಯಾಗಿಸಿ ಅವರ ಮಾನವ ಹಕ್ಕುಗಳ ಉಲ್ಲಂಘನೆಯನ್ನು ಮಾಡುತ್ತಿದ್ದಾರೆ.

ದಕ್ಷಿಣ ಕನ್ನಡ ಜಿಲ್ಲೆಯ ಪೊಲೀಸ್ ವರಿಷ್ಠಾಧಿಕಾರಿಗಳ ಸೂಚನೆಯ ಮೇರೆಗೆ ಹಿಂದೂ ಕಾರ್ಯಕರ್ತರಿಗೆ ವಿಚಾರಣೆಯ ನೆಪದಲ್ಲಿ ಪೋಲಿಸ್ ಠಾಣೆಯಿಂದ ಮದ್ಯರಾತ್ರಿ ಕರೆ ಮಾಡಿ, ನೋಟಿಸು ನೀಡದೆ ವಿಚಾರಣೆಗೆ ಕರೆಯುವುದು, ಮಧ್ಯರಾತ್ರಿ ಹಿಂದೂ ಕಾರ್ಯಕರ್ತರ ಮನೆಗೆ ಬಲವಂತವಾಗಿ ಹೋಗಿ ವಿಚಾರಣೆ ಮಾಡುವುದು, ಬಲವಂತವಾಗಿ ರಾತ್ರಿ ಅವರ ಫೋಟೊ ತೆಗೆಯುವುದು, ಅವರ ಮನೆಯ ಜಿಪಿಎಸ್ ಲೊಕೇಶನ್ ಸಂಗ್ರಹಿಸುವುದು.

ಯಾವುದೇ ರೀತಿಯಲ್ಲಿ ಹಿಂದೂ ಸಂಘಟನೆಯ ಚಟುವಟಿಕೆಯಲ್ಲಿ ಭಾಗಿಯಾಗದ ಹಿಂದೂಗಳನ್ನು, ವಯಸ್ಕರನ್ನು ಬಿಡದೇ ಮದ್ಯರಾತ್ರಿ ಫೋನ್ ಮಾಡಿ, ಮನೆಗೆ ಹೋಗಿ ಕಿರುಕುಳ ನೀಡಲಾಗಿದೆ. ಇದರ ವಿರುದ್ಧ ಜೂನ್ 4, 2025 ಬುಧವಾರದಂದು ಬೆಂಗಳೂರಿನ ವಿಶ್ವೇಶ್ವರಯ್ಯ ಟವರ್ ನಲ್ಲಿನ ಪೊಲೀಸ್ ದೂರು ಪ್ರಾಧಿಕಾರದಲ್ಲಿ ಅಲ್ಲಿನ ಅಧ್ಯಕ್ಷರಾದ ಸನ್ಮಾನ್ಯ ನ್ಯಾಯಮೂರ್ತಿ ಎನ್. ಕೆ. ಸುಧೀಂದ್ರ ರಾವ್ ಇವರಿಗೆ ದೂರು ನೀಡಲಾಯಿತು. ಈ ವೇಳೆ ಹಿಂದೂ ಜನಜಾಗೃತಿ ಸಮಿತಿಯ ರಾಜ್ಯ ವಕ್ತಾರರಾದ ಶ್ರೀ. ಮೋಹನ ಗೌಡ, ಕರ್ನಾಟಕ ಉಚ್ಚ ನ್ಯಾಯಾಲಯದ ಹಿರಿಯ ವಕೀಲರಾದ ನ್ಯಾಯವಾದಿ ಅಮೃತೇಶ್ ಎನ್ ಪಿ, ರಾಷ್ಟ್ರ ರಕ್ಷಣಾ ಪಡೆಯ ಶ್ರೀ. ಪುನೀತ್ ಕೆರೆಹಳ್ಳಿ ಸೇರಿದಂತೆ ಅನೇಕ ವಕೀಲರು ಮತ್ತು ಹಿಂದೂ ಸಂಘಟನೆಗಳ ಕಾರ್ಯಕರ್ತರು ಉಪಸ್ಥಿತರಿದ್ದರು.

ನ್ಯಾಯವಾದಿ ಅಮೃತೇಶ ಮಾತನಾಡಿ ಹಿಂದೂಗಳು ಸಾಮಾಜಿಕ ಜಾಲತಾಣದಲ್ಲಿ ಏನೇ ಬರೆದರೂ ಅವರ ಮೇಲೆ ಪ್ರಕರಣ ದಾಖಲಿಸಿ ಅವರನ್ನು ಬಂಧಿಸುವುದು, ಅವರಿಗೆ ಕಿರುಕುಳ ನೀಡಿ ಅವರ ಮಾನವ ಹಕ್ಕುಗಳ ಉಲ್ಲಂಘನೆ ಮಾಡಲಾಗುತ್ತಿದೆ. ಈ ರೀತಿ ಪೊಲೀಸರು ಕಾನೂನಿನ ಎಲ್ಲಾ ನಿಯಮಗಳನ್ನು ಮೀರಿ ಹಿಂದೂ ಕಾರ್ಯಕರ್ತರಿಗೆ, ಸಾಮಾಜಿಕ ಕಾರ್ಯಕರ್ತರಿಗೆ ಕಿರುಕುಳ ನೀಡುವುದು ಭಾರತ ಸಂವಿಧಾನದ ಕಲಂ 14, 17, 19 ಮತ್ತು 21 ರ ಉಲ್ಲಂಘನೆಯಾಗಿದೆ. ಅದಲ್ಲದೇ ಭಾರತೀಯ ನ್ಯಾಯ ಸಂಹಿತೆ ಕಲಂ 105, 107, 182, 352, 128 ಪ್ರಕಾರ ಇದು ಗಂಭೀರ ಅಪರಾಧವಾಗಿದೆ. ಇದು ಭಾರತದ ಸಂವಿದಾನವು ನೀಡಿದ ನಾಗರಿಕರ ಖಾಸಗಿ ಹಕ್ಕು ಮತ್ತು ಜೀವನದ ಹಕ್ಕನ್ನು ಕಸಿದು, ನಮ್ಮಲ್ಲಿ ಅಸುರಕ್ಷಿತ ಭಾವನೆ ನಿರ್ಮಾಣ ಮಾಡುವ ಪ್ರಯತ್ನವಾಗಿದೆ ಎಂದರು.

ಈ ದೂರಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಹಿರಿಯ ಪೊಲೀಸ್ ಅಧಿಕಾರಿಗಳು ಮಾನವ ಹಕ್ಕಗಳ ಉಲ್ಲಂಘನೆ ಮಾಡಿದ ಬಗ್ಗೆ ಉನ್ನತ ಮಟ್ಟದ ತನಿಖೆ ನಡೆಸಬೇಕು, ಕಿರುಕುಳಕ್ಕೆ ಒಳಗಾದ ಹಿರಿಯ ನಾಗರಿಕರಿಗೆ ಪರಿಹಾರ ನೀಡಬೇಕು ಮತ್ತು ಸಂಬಂಧಿಸಿದವರಿಂದ ಲಿಖಿತ ಕ್ಷಮಾಪಣೆ ಮಾಡಲು ಆದೇಶಿಸಿ ಪೀಡಿತರಿಗೆ ನ್ಯಾಯ ಒದಗಿಸಬೇಕು ಎಂದು ಆಗ್ರಹಿಸಲಾಗಿದೆ. ಇದೇ ದೂರಿನ ಪ್ರತಿಯನ್ನು ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗಕ್ಕೂ ನೀಡಲಾಗಿದೆ.

## ಶೈಕ್ಷಣಿಕ ಪ್ರಗತಿಗೆ ಒತ್ತು ನೀಡಿ

• ಉದಯವಾಹಿನಿ ಮಲೇಬೆನ್ನೂರು

ಮಕ್ಕಳ ಶೈಕ್ಷಣಿಕ ಪ್ರಗತಿ, ಪರಿಸರ ಸಂರಕ್ಷಣೆ, ಶುದ್ಧ ಕುಡಿಯುವ ನೀರು ಪೂರೈಕೆ, ಮೂಲ ಸೌಕರ್ಯಗಳಿಗೆ ಒತ್ತು ನೀಡಬೇಕು' ಎಂದು ಮಂಗಳವಾರ ಸ್ಥಳೀಯ ಸಂಸ್ಥೆಗಳಿಗೆ ಬಿಇಒ ದುರುಗಪ್ಪ ಮನವಿ ಮಾಡಿದರು.

ಪುರಸಭೆ ಸಭಾ ಭವನದಲ್ಲಿ ಹಮ್ಮಿಕೊಂಡಿದ್ದ ಶೈಕ್ಷಣಿಕ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು. ಶಾಲೆಗಳಿಗೆ ಕಾಂಪೌಂಡ್, ನೀರಿನ ತೊಟ್ಟಿ ನಿರ್ಮಿಸಿ, ಶಾಲೆಯ ಸುತ್ತಮುತ್ತ ತಂಬಾಕು ಮುಕ್ತಗೊಳಿಸಿ, ಸ್ವಚ್ಛತೆಗೆ ಒತ್ತು ನೀಡಿ ಎಂದು ಕೋರಿದರು. 'ಶಾಲೆ ಬಿಟ್ಟ ಮಕ್ಕಳನ್ನು ಪುನಃ ಶಾಲೆಗೆ ಸೇರಿಸುವ ನಿಟ್ಟಿನಲ್ಲಿ ಸಹಕಾರ ನೀಡಿ. ಶಾಲಾ ವಿದ್ಯಾರ್ಥಿಗಳ ಸುರಕ್ಷತೆ ದೃಷ್ಟಿಯಿಂದ ಭದ್ರಾ ನಾಲೆಗೆ ತಂತಿಬೇಲಿ, ಶಾಲೆಗಳಿಗೆ ಕಾಂಪೌಂಡ್, ರೈಸ್ ಮಿಲ್ ಹಾರು ಬೂದಿ ನಿಯಂತ್ರಣ, ಶೌಚಾಲಯ ಸ್ವಚ್ಛತೆ, ಸುಸಜ್ಜಿತ ಕ್ರೀಡಾಂಗಣ, ಸರ್ಕಾರಿ ಪದವಿಪೂರ್ವ ಕಾಲೇಜಿನ ಆವರಣದಲ್ಲಿ ಹೈಮಾಸ್ಟ್ ದೀಪ, ಸಿ.ಸಿ.ಟಿ.ವಿ ಕ್ಯಾಮೆರಾ ಅಳವಡಿಸಲು, ಬಾಪೂಜಿ ಸಭಾಂಗಣ ಪುನರ್ ನಿರ್ಮಿಸಲು ಅನುದಾನ ಒದಗಿಸಬೇಕು' ಎಂದು ಶಾಲಾ ಮುಖ್ಯಸ್ಥರು, ಶಿಕ್ಷಕರು ಕೋರಿದರು.

## ಮರಳು ಸಾಗಾಣಿಕೆಗೆ ಅವಕಾಶ ನೀಡಿ: ಸಾಗಾಣಿಕೆದಾರರಿಂದ ಮನವಿ

• ಉದಯವಾಹಿನಿ ಬಳ್ಳಾರಿ

ಕಳೆದ ಹತ್ತಾರು ದಿನಗಳಿಂದ ಸ್ಥಗಿತಗೊಳಿಸಲಾಗಿರುವ ಮರಳು (ಉಸುಕು) ಸಾಗಾಣಿಯನ್ನು ಆರಂಭಿಸಬೇಕೆಂದು ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಉಪ ನಿರ್ದೇಶಕಿ ದ್ವಿತೀಯ ಅವರಿಗೆ ಜಿಲ್ಲಾಧಿಕಾರಿಗಳಿಗೆ ಬರೆದ ಮನವಿ ಪತ್ರವನ್ನು ಮರಳು ಸಾಗಾಣಿಕೆಯ ಲಾರಿ ಮಾಲೀಕರು, ಚಾಲಕರು ಮನವಿ ಸಲ್ಲಿಸಿದ್ದಾರೆ.

ಮರಳು ಸಾಗಾಣಿಕೆಯನ್ನು ಸ್ಥಗಿತಗೊಳಿಸಿ ಎಂದು ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಉಪ ನಿರ್ದೇಶಕರ ಸೂಚನೆ ಮೇರೆಗೆ ಕಳೆದ ಹತ್ತು ದಿನಗಳಿಗೂ ಮೇಲ್ಪಟ್ಟು ಮರಳು ಸಾಗಣೆಕೆ ನಿಲ್ಲಿಸಲಾಗಿದೆ. ತಾಲ್ಲೂಕಿನ ಗಣಿ ಭೂವಿಜ್ಞಾನ ಇಲಾಖೆಯಿಂದ ಪರವಾನಗಿಯನ್ನು ಪಡೆದು ಸಾದಾ ಮರಳು ಗಣಿ ಗುತ್ತಿಗೆಗಳಿಂದ ಗಣಿಗಾರಿಕೆಯನ್ನು ಮಾಡಿ ಅದನ್ನು ತಾಲ್ಲೂಕಿನಾದ್ಯಂತ ಸರಬರಾಜು ಮಾಡಲಾಗುತ್ತಿತ್ತು. ಆದರೆ ಮರಳು ಸಂಗ್ರಹಗಾರರು (ಕಾಂಟ್ರಾಕ್ಟ್) ಮತ್ತು ನಮ್ಮನ್ನಾಳುವ ಜನರ ನಡುವೆ ಹೊಂದಾಣಿಕೆ ಕೊರತೆಯಿಂದ ಕಳೆದ ಎರಡು ವರ್ಷದಲ್ಲಿ ಈರೀತಿ ಆಗುತ್ತಿರುವುದು ಇದು ಮೂರನೇ ಬಾರಿ.


ಉದಯವಾಹಿನಿ ಚಿತ್ರ

**ಲಾರಿ ಮಾಲೀಕರು, ಚಾಲಕರು ಮನವಿ**

ಮರಳು ಸಾಗಾಣಿಕೆಗೆ ಕೆಲ ದಿನಗಳಿಂದ ಪರವಾನಿಗೆ ನೀಡುತ್ತಿಲ್ಲ. ಸಕ್ರಮವಾಗಿ ಗಣಿಗಾರಿಕೆ ಮಾಡಿ ಸಂಗ್ರಹಿಸಿದ ಮರಳನ್ನು ಸಾಗಿಸಲು ಅಡ್ಡಿಪಡಿಸಿರುವುದರಿಂದ ಮರಳು ಸಾಗಾಣೆಯ ಲಾರಿ ಮಾಲೀಕರು ಮತ್ತು ಇದೇ ವೃತ್ತಿಯನ್ನು ನಂಬಿದ ವಾಹನ ಚಾಲಕ, ಕ್ಲೀನರ್ ಗಳು ದುಡಿಮೆ ಇಲ್ಲದೆ ಕುಳಿತುಕೊಳ್ಳಬೇಕಾಗಿದೆ.

ಲಾರಿಗಳ ಸಾಲದ ಕಂತುಗಳನ್ನು ಕಟ್ಟಲು ಬಾಡಿಗೆ ಇಲ್ಲದೆ ಪರದಾಡುತ್ತಿದ್ದೇವೆ. ಆದ್ದರಿಂದ, ಮರಳು ಸಾಗಾಣಿಕೆಯನ್ನೇ ನಂಬಿದ ವಾಹನ ಮಾಲೀಕರು, ಚಾಲಕರು ಮತ್ತು ಕ್ಲೀನರ್‌ಗಳ ಬದುಕಿಗಾಗಿ ಸಕ್ರಮ ರೀತಿಯಲ್ಲಿ ಮರಳು ಸಾಗಾಣಿಕೆಗೆ ಅನುಮತಿ ನೀಡಿ ಎಂದು ಮನವಿ ಸಲ್ಲಿಸಿದ್ದಾರೆ.

## ರಂಗ ಶಿಕ್ಷಣ ಡಿಪ್ಲೊಮಾಕ್ಕೆ ಅರ್ಜಿ ಆಹ್ವಾನ

• ಉದಯವಾಹಿನಿ ಗದಗ

ರಾಜ್ಯ ಸರ್ಕಾರದಿಂದ ಮಾನ್ಯತೆ ಪಡೆದಿರುವ ಶಿವಕುಮಾರ ರಂಗ ಪ್ರಯೋಗ ಶಾಲೆಯ 2025-26ನೇ ಸಾಲಿನ ರಂಗಶಿಕ್ಷಣಕ್ಕೆ (ಡಿಪ್ಲೊಮಾ ಇನ್ ಡ್ರಾಮಾ ಆರ್ಟ್ಸ್) ಆಸಕ್ತ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಪ್ರವೇಶಕ್ಕೆ ಕನಿಷ್ಠ ವಿದ್ಯಾರ್ಹತೆ ಎಸ್ ಎಸ್‌ಎಲ್‌ಸಿ ಉತ್ತೀರ್ಣರಾಗಿರಬೇಕು. ಪದವೀಧರರಿಗೆ ಆದ್ಯತೆ ಸಿಗಲಿದೆ. ರಂಗಭೂಮಿಯಲ್ಲಿ ಆಸಕ್ತಿಯಿದ್ದು ಸ್ವಲ್ಪಮಟ್ಟಿನ ಅನುಭವ ಇರಬೇಕಾದ್ದು ಅಗತ್ಯ. ವಿದ್ಯಾರ್ಥಿ, ವಿದ್ಯಾರ್ಥಿನಿಯರಿಗೆ ಉಚಿತ ಊಟ, ವಸತಿ ಸೌಲಭ್ಯವಿದೆ. ರಾಜ್ಯ ಹಾಗೂ ರಾಷ್ಟ್ರಮಟ್ಟದ ರಂಗತಜ್ಞರು ಮತ್ತು ಅತಿಥಿ ಉಪನ್ಯಾಸಕರಿಂದ ತರಗತಿಗಳು ನಡೆಯುತ್ತವೆ. ಗ್ರಂಥ ಭಂಡಾರ ಹಾಗೂ ದೃಶ್ಯ, ಶ್ರವ್ಯ ಪರಿಕರಗಳ ಅನುಕೂಲತೆ ಇದೆ. ರಂಗಶಾಲೆಯ ವಿದ್ಯಾರ್ಥಿಗಳಿಗೆ ಭಾರತೀಯ ರಂಗ ಭೂಮಿ, ಕನ್ನಡ ಮತ್ತು ನಾಟಕ ಸಾಹಿತ್ಯ, ಪರಂಪರೆ, ಪಾಶ್ಚಾತ್ಯ ರಂಗಭೂಮಿ, ಶಿಕ್ಷಣದಲ್ಲಿ ರಂಗಭೂಮಿ ಕುರಿತಾದ ಸೈದ್ಧಾಂತಿಕ ಮತ್ತು ಪ್ರಾಯೋಗಿಕ ತರಗತಿಗಳು ನಡೆಯುತ್ತವೆ.

www.theatreschoolsanehalli.org

ಮಾಡಿಕೊಂಡು ಜೂನ್ 25ರೊಳಗೆ ಭರ್ತಿ ಮಾಡಿ ಸಲ್ಲಿಸಬೇಕು. ಜೂನ್ 27 ಮತ್ತು 28ರಂದು ಸಂದರ್ಶನ ನಡೆಯಲಿದೆ.

## ಡಾಂಬರು ರಸ್ತೆಗೆ ಒಂದು, ಎರಡು ಮೀಟರ್ ಅಂತರದಲ್ಲಿ ಬೃಹತ್ ಕೊಳವೆ ಅಳವಡಿಸುತ್ತಿರುವುದು ಭವಿಷ್ಯದಲ್ಲಿ ಅಪಾಯಕಾರಿ

# ಅವೈಜ್ಞಾನಿಕವಾಗಿ ಜಲ ಜೀವನ ಯೋಜನೆ ಅಡಿಯಲ್ಲಿ ಶುದ್ಧೀಕರಣ ಕೊಳವೆ ಪೈಪ್ ಅಳವಡಿಕೆ

• ಉದಯವಾಹಿನಿ ಮುದ್ದೇಬಿಹಾಳ

ಶಿರಾಡೋಣ-ಲಿಂಗಸುಗೂರ ರಾಜ್ಯ ಹೆದ್ದಾರಿಯ (ನಾಲತವಾಡ ರಸ್ತೆ) ಹಳ್ಳೂರ ಪ್ಯಾಲೇಸ್ ಹತ್ತಿರ ನೂರಾರು ಕೋಟಿ ರೂ ಅನುದಾನದ ಜಲ ಜೀವನ ಮಿಷನ್ ಯೋಜನೆ ಅಡಿ ಕೃಷ್ಣಾ ನದಿಯಿಂದ ಬೂದಿಹಾಳ ನೀರು ಶುದ್ಧೀಕರಣ ಘಟಕಕ್ಕೆ ಕಚ್ಚಾ ನೀರು ಪೂರೈಸುವ ಬೃಹತ್ ಕೊಳವೆಗಳನ್ನು ರಸ್ತೆ ಪಕ್ಕದಲ್ಲಿಯೇ ಅವೈಜ್ಞಾನಿಕವಾಗಿ ಅಳವಡಿಸುತ್ತಿರುವುದಕ್ಕೆ ತಾಲ್ಲೂಕು ರೈತ ಹಿತರಕ್ಷಣಾ ವೇದಿಕೆ ಅಧ್ಯಕ್ಷ ಮಲ್ಲಿಕಾರ್ಜುನ ಸಿದ್ಧರೆಡ್ಡಿ ಅವರು ಆಕ್ಷೇಪ ವ್ಯಕ್ತಪಡಿಸಿದ್ದು ಈ ಬಗ್ಗೆ ಸ್ಥಳದಲ್ಲಿದ್ದ ಸೈಟ್ ಇಂಜಿನೀಯರ್ ಸಂದೀಪ ಅವರನ್ನು ಬುಧವಾರ ತೀವ್ರ ತರಾಟೆಗೆ ತೆಗೆದುಕೊಂಡರು.

ಈ ರಾಜ್ಯ ಹೆದ್ದಾರಿಗೆ ಬ್ರಿಟೀಷರ ಕಾಲದಲ್ಲಿಯೇ 45 ಮೀಟರ್ ಅಗಲದಷ್ಟು ದೊಡ್ಡ ಪ್ರಮಾಣದಲ್ಲಿ ಭೂಮಿ ಮೀಸಲಿಡಲಾಗಿದೆ. ನಾರಾಯಣಪುರ ಮತ್ತು ಆಲಮಟ್ಟಿ ಜಲಾಶಯಗಳನ್ನು ನಿರ್ಮಿಸುವಾಗ ಈ ರಸ್ತೆಯನ್ನು ಜಲಾಶಯಗಳಿಗೆ ಸಂಪರ್ಕ ರಸ್ತೆಯನ್ನಾಗಿ ಬಳಸಲಾಗುತ್ತಿತ್ತು. ದಿನಕಳೆದಂತೆ ಇದು ನಿತ್ಯ ಬಳಕೆಯ ರಸ್ತೆಯಾಗಿ ಬದಲಾಯಿತು. ಕಾಲಕಾಲಕ್ಕೆ ಈ ರಸ್ತೆಯನ್ನು ಮೇಲ್ದರ್ಜೆಗೇರಿಸುವ ಕಾರ್ಯವೂ ನಡೆಯುತ್ತಿದೆ. ನಿತ್ಯ ಸಾವಿರಾರು ವಾಹನಗಳು ಇಲ್ಲಿ ಓಡಾಡುತ್ತವೆ.


ಉದಯವಾಹಿನಿ ಚಿತ್ರ

ಇಂಥ ಮಹತ್ವದ ಹೆದ್ದಾರಿಯ ಡಾಂಬರು ರಸ್ತೆಗೆ ಕೇವಲ ಒಂದು, ಎರಡು ಮೀಟರ್ ಅಂತರದಲ್ಲಿ ಬೃಹತ್ ಕೊಳವೆ ಅಳವಡಿಸುತ್ತಿರುವುದು ಭವಿಷ್ಯದಲ್ಲಿ ಅಪಾಯಕಾರಿಯಾಗುತ್ತದೆ ಎಂದು ದೂರಿದರು.

ಪಿಡಬ್ಲೂಡಿ ಇಲಾಖೆಯಲ್ಲಿ ಲಭ್ಯವಿರುವ ಮಾಹಿತಿಯಂತೆ ನಿಯಮದ ಪ್ರಕಾರ ರಸ್ತೆ ಮಧ್ಯದಿಂದ 22.5 ಮೀಟರ್ ಆಚೆಗೆ ಭೂಮಿ ಅಗೆದು ಕೊಳವೆ ಅಳವಡಿಸಬೇಕು. ಇದರಿಂದ ಭವಿಷ್ಯದ ರಸ್ತೆ ಅಗಲೀಕರಣ ಯೋಜನೆಗೂ ತೊಂದರೆಯಾಗುವುದಿಲ್ಲ ಮತ್ತು ನೀರಿನ ರಭಸದ ಒತ್ತಡಕ್ಕೆ ಕೊಳವೆ ಒಡೆದಲ್ಲಿ ಸಂಚಾರಕ್ಕೆ ಸಮಸ್ಯೆಯೂ ಆಗುವುದಿಲ್ಲ, ದುರಸ್ತಿಯೂ ಸುಲಭವಾಗುತ್ತದೆ. ಆದರೆ ಗುತ್ತಿಗೆ ಹಿಡಿದಿರುವವರು ನಿಯಮ ಗಾಳಿಗೆ ತೂರಿ ಮನಸೋ ಇಚ್ಛೇ ಕೊಳವೆ ಅಳವಡಿಸುತ್ತಿದ್ದಾರೆ. ಇದು ಭವಿಷ್ಯದಲ್ಲಿ ಮಾರಕವಾಗಿ ಪರಿಣಮಿಸುತ್ತದೆ ಎಂದು ತಿಳಿಸಿದರು.

> ರಸ್ತೆಗೆ ಹೊಂದಿಕೊಂಡು ನಡೆಯುತ್ತಿರುವ ಬೃಹತ್ ಪೈಪಲೈನ್ ಅಳವಡಿಕೆ ಕಾಮಗಾರಿ ನಿಲ್ಲಿಸಿ ರಸ್ತೆ ಮಧ್ಯದಿಂದ 22.5 ಮೀಟರ್ ಆಚೆಗೆ ಪೈಪಲೈನ್ ಅಳವಡಿಸಲು ಕ್ರಮ ಜರುಗಿಸದಿದ್ದರೆ ರೈತರೊಂದಿಗೆ ಬೃಹತ್ ಪ್ರಮಾಣದಲ್ಲಿ ಹೋರಾಟ ಹಮ್ಮಿಕೊಳ್ಳಬೇಕಾಗುತ್ತದೆ.
> -ಮಲ್ಲಿಕಾರ್ಜುನ ಸಿದ್ಧರೆಡ್ಡಿ, ಅಧ್ಯಕ್ಷರು, ತಾಲ್ಲೂಕು ರೈತ ಹಿತರಕ್ಷಣಾ ವೇದಿಕೆ, ಮುದ್ದೇಬಿಹಾಳ.

ಹೆಚ್ಚು ನೀರಿನ ಒತ್ತಡ ಇರುವ ಕೊಳವೆಗಳನ್ನು ನೇರ ಮಾರ್ಗದಲ್ಲಿ ಅಳವಡಿಸಬೇಕು. ಆದರೆ ಇಲ್ಲಿ ಅಡ್ಡಾದಿಡ್ಡಿಯಾಗಿ, ಬೆಂಡ್ ಮಾದರಿಯಲ್ಲಿ ಅಳವಡಿಸಲಾಗುತ್ತಿದೆ. ಇದು ನೀರಿನ ಸರಾಗ ಹರಿಯುವಿಕೆಗೆ ಅಡ್ಡಿ ತಂದೊಡ್ಡಿ ಪೈಪ್‌ಗಳು ಸುಲಭವಾಗಿ ಒಡೆಯಬಹುದಾಗಿದೆ. ಕಾಮಗಾರಿ ಪ್ರಾರಂಭ ಹಂತದಲ್ಲಿದ್ದು ಈಗಲೇ ಸರಿಪಡಿಸಿದರೆ ಭವಿಷ್ಯದ ಸಮಸ್ಯೆಯನ್ನು ತಡೆಗಟ್ಟುವುದು ಸಾಧ್ಯ ಎಂದು ಇಂಜಿನೀಯರ್‌ಗೆ ಕಿವಿಮಾತು ಹೇಳಿದರು.

ಸ್ಥಳದಿಂದಲೇ ಯೋಜನೆಯ ಉಸ್ತುವಾರಿ ಇಲಾಖೆಯಾಗಿರುವ ಗ್ರಾಮೀಣ ಕುಡಿಯುವ ನೀರು ಸರಬರಾಜು ಉಪ ವಿಭಾಗದ ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರ ಆರ್.ಎಸ್. ಹಿರೇಗೌಡರ ಅವರನ್ನು ಸಂಪರ್ಕಿಸಿ ನಡೆಯುತ್ತಿರುವ ಅವೈಜ್ಞಾನಿಕ ಕಾಮಗಾರಿಯನ್ನು ಅವರ ಗಮನಕ್ಕೆ ತಂದು ಕೂಡಲೇ ಸ್ಥಳಕ್ಕೆ ಭೇಟಿ ನೀಡಿ ಸಧ್ಯ ನಡೆಯುತ್ತಿರುವ ಕಾಮಗಾರಿ ತಡೆಹಿಡಿದು ವೈಜ್ಞಾನಿಕ ಕಾಮಗಾರಿ ನಡೆಯುವಂತೆ ನೋಡಿ ಕೊಳ್ಳಬೇಕು ಎಂದು ಒತ್ತಾಯಿಸಿದರು.

**ವೈಜ್ಞಾನಿಕ ಕಾಮಗಾರಿಗೆ ಆಗ್ರಹ**


ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಹೆದ್ದಾರಿಯು ಬ್ರಿಟೀಷರ ಕಾಲದಲ್ಲಿಯೇ ರಸ್ತೆಯ ಎರಡೂ ಬದಿಗಳಲ್ಲಿ 22.5 ಮೀಟರ್ ಆಚೆಗೆ ರೈತರ ಜಮೀನು ಇರುವಂತೆ ಮಾಡಿದ್ದಾರೆ. ಅನುಕೂಲಸ್ತ ರೈತರು ಖಾಲಿ ಇದ್ದ ಈ ಜಾಗವನ್ನು ಅತಿಕ್ರಮಣ ಮಾಡಿಕೊಂಡು ರಸ್ತೆಗೆ ಬಂದಿದ್ದಾರೆ. ಇದರಿಂದಾಗಿ ಸರ್ಕಾರಿ ಯೋಜನೆಗಳ ಅನುಷ್ಠಾನಕ್ಕೆ ತೊಂದರೆಯಾಗತೊಡಗಿದೆ. ಮುಂದಿನ ದಿನಗಳಲ್ಲಿ 14 ಮೀಟರ್ ಅಗಲದ ಡಾಂಬರೀಕರಣ ರಸ್ತೆಯಾಗಲಿದೆ. ಇದೀಗ ಜೆಜೆಎಂ ಕಾಮಗಾರಿಗಾಗಿ ಅಳವಡಿಸುತ್ತಿರುವ ರಾ ವಾಟರ್ ಪೈಪಲೈನ್ ಈಗಿರುವ 7 ಮೀಟರ್ ಡಾಂಬರೀಕರಣ ರಸ್ತೆಗೆ ಹೊಂದಿಕೊಂಡೇ ಮಾಡುತ್ತಿದ್ದಾರೆ. ಭವಿಷ್ಯದಲ್ಲಿ ಇದು ಅಪಾಯಕಾರಿಯಾಗಲಿದೆ.

ಜೆಜೆಎಂನಂತಹ ಶಾಶ್ವತ ಕಾಮಗಾರಿಗಳಲ್ಲಿ ಈ ರೀತಿ ನಿರ್ಲಕ್ಷ್ಯ ತೋರಿದರೆ, ತಮ್ಮ ಅನುಕೂಲಕ್ಕೆ ತಕ್ಕಂತೆ ಕಾಮಗಾರಿ ನಡೆಸಿದರೆ ಮುಂದಿನ ದಿನಗಳಲ್ಲಿ ಆಗುವ ಅನಾಹುತಗಳಿಗೆ ಹೊಣೆ ಯಾರು. ಸಂಬಂಧಿಸಿದ ಅಧಿಕಾರಿಗೆ ಮಾತನಾಡಿದರೆ ಸರ್ಕಾರದ ಜಾಗವಾಗಿದ್ದು ರೈತರು ಅತಿಕ್ರಮಿಸಿದ ಭೂಮಿಯಲ್ಲಿ ಪೈಪಲೈನ್ ಅಳವಡಿಸುವ ಕೆಲಸಕ್ಕೆ ತಕರಾರು ಮಾಡುವ ರೈತರ ವಿರುದ್ಧ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸುವಂತೆ ಸ್ಪಷ್ಟ ನಿರ್ದೇಶನ ನೀಡಿದ್ದಾಗಿ ಹೇಳುತ್ತಾರೆ.

ನೆಲದ ಮೇಲ್ಮಟ್ಟದಿಂದ ಮೂರು ಅಡಿ ಆಳದೊಳಗೆ ಪೈಪಲೈನ್ ಹಾಕಿದರೆ ತಕರಾರು ಮಾಡುವಂತಿಲ್ಲ ಎನ್ನುವ ನಿಯಮ ಇದೆ. ಗುತ್ತಿಗೆದಾರರನ್ನು ಕೇಳಿದರೆ ರೈತರು, ಅರಣ್ಯ ಇಲಾಖೆಯವರು ತಕರಾರು ಮಾಡುವ ಕಾರಣಕ್ಕೆ ರಸ್ತೆ ಪಕ್ಕದಲ್ಲಿ ಪೈಪಲೈನ್ ಹಾಕ್ತಿದ್ದೇವೆ ಎಂದು ಸಬೂಬು ಹೇಳುತ್ತಾರೆ ಎಂದು ತಿಳಿಸಿದರು.

## ಶಾಲಾ-ಕಾಲೇಜು ಸುತ್ತಮುತ್ತ ಸ್ವಚ್ಛವಾಗಿಡಿ, ಸೊಳ್ಳೆಗಳಿಂದ ದೂರವಿರಿ

### ಸೊಳ್ಳೆ ಲಾರ್ವ ಮುಕ್ತ ಶಾಲೆ ಕಾರ್ಯಕ್ರಮದಲ್ಲಿ ಜಿಲ್ಲಾ ಕೀಟಶಾಸ್ತ್ರಜ್ಞೆ ನಂದಿನಿ ಕಡಿ


ಉದಯವಾಹಿನಿ ಚಿತ್ರ

> ಪ್ರತಿಯೊಂದು ಮನೆಯಲ್ಲಿಯೂ ಮುಂಜಾಗ್ರತಾ ಕ್ರಮಗಳನ್ನು ಅನುಸರಿಸಬೇಕು. ನೀರಿನ ತೊಟ್ಟಿಗಳು, ಡ್ರಮ್, ಬ್ಯಾರೆಲ್ ಮತ್ತು ಟ್ಯಾಂಕ್‌ಗಳನ್ನು ಭದ್ರವಾಗಿ ಮುಚ್ಚಿಡಿ. ಮನೆಯ ಮೇಲೆ ಮತ್ತು ಸುತ್ತಮುತ್ತಲಿನ ಮಳೆಯ ನೀರು ಸಂಗ್ರಹವಾಗದಂತೆ ಪ್ಲಾಸ್ಟಿಕ್ ವಸ್ತುಗಳು, ಟೈರ್‌ಗಳು, ಒಡೆದ ತೆಂಗಿನ ಚಿಪ್ಪು ಇತ್ಯಾದಿಗಳನ್ನು ತಕ್ಷಣ ವಿಲೇವಾರಿ ಮಾಡಿ. ಏರ್ ಕೂಲರ್, ಹೂವಿನ ಕುಂಡ, ಫೈರ್ ಬಕೆಟ್ ಇತ್ಯಾದಿಗಳ ನೀರನ್ನು ಪ್ರತಿ ವಾರ ಖಾಲಿ ಮಾಡುವುದು ಕಡ್ಡಾಯ ಮಾಡಿಕೊಳ್ಳಿ. ಹಗಲಿನಲ್ಲಿ ನಿದ್ದೆ ಮಾಡುವ ಅಥವಾ ವಿಶ್ರಾಂತಿ ಪಡೆಯುವವರು ಸೊಳ್ಳೆ ನಿರೋಧಕ ಹಾಗೂ ಸೊಳ್ಳೆ ಪರದೆ ತಪ್ಪದೇ ಬಳಸಿ -ನಂದಿನಿ ಕಡಿ, ಜಿಲ್ಲಾ ಕೀಟಶಾಸ್ತ್ರಜ್ಞೆ

• ಉದಯವಾಹಿನಿ ಚಿತ್ರದುರ್ಗ

ಶಾಲಾ ಕಾಲೇಜು ಸುತ್ತಮುತ್ತ ಸ್ವಚ್ಛವಾಗಿಟ್ಟುಕೊಳ್ಳುವ ಮೂಲಕ ಸೊಳ್ಳೆಗಳಿಂದ ದೂರವಿರಿ ಎಂದು ಜಿಲ್ಲಾ ಕೀಟಶಾಸ್ತ್ರಜ್ಞೆ ನಂದಿನಿ ಕಡಿ ಹೇಳಿದರು. ಇಲ್ಲಿನ ಬುದ್ಧ ನಗರದ ವ್ಯಾಪ್ತಿಗೆ ಬರುವ ತರಳುಬಾಳು ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸೋಮವಾರ ಸೊಳ್ಳೆ ಲಾರ್ವ ಮುಕ್ತ ಶಾಲೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಮಳೆಗಾಲದಲ್ಲಿ ನಿಂತ ನೀರಿನ ತಾಣಗಳಲ್ಲಿ ಲಾರ್ವ ಸೊಳ್ಳೆಗಳು ಹೆಚ್ಚಾಗಿರುವುದು ಹಾಗೂ ಇದರಿಂದ ವಿವಿಧ ಸಾಂಕ್ರಾಮಿಕ ರೋಗಗಳು ಹೆಚ್ಚಾಗುತ್ತದೆ. ಸಾಮಾನ್ಯವಾಗಿ ಮಾನ್ಸೂನ್ ಕಾಲದಲ್ಲಿ ಡೆಂಗ್ಯೂ, ಚಿಕನ್ ಗುನಿಯಾ, ಮಲೇರಿಯಾ ಇನ್ನಿತರ ಕಾಯಿಲೆಗಳಿಗೆ ಸೊಳ್ಳೆಗಳ ಕಡಿತ ಕಾರಣವಾಗುತ್ತದೆ. ಮುಖ್ಯವಾಗಿ ಈಡಿಸ್ ಸೊಳ್ಳೆಗಳು ಸ್ವಚ್ಛ ನಿಂತ ನೀರಿನಲ್ಲಿ ಉತ್ಪತ್ತಿಯಾಗುತ್ತವೆ.

ಹಗಲು ಹೊತ್ತಿನಲ್ಲಿ ಮನುಷ್ಯರನ್ನು ಕಚ್ಚುವುದರಿಂದ ಡೆಂಗಿ ಮತ್ತು ಚಿಕನ್ ಗುನ್ಯಾ ರೋಗಗಳು ಸುಲಭವಾಗಿ ಹರಡುತ್ತವೆ.

ಈ ರೋಗವು ಹರಡದಂತೆ ಎಚ್ಚರಿಕೆ ವಹಿಸುವುದು ನಮ್ಮೆಲ್ಲರ ಜವಾಬ್ದಾರಿ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಮಳಲಿ ಶ್ರೀನಿವಾಸ್, ಟಿ. ಶ್ರೀನಿವಾಸ ಮೂರ್ತಿ, ಕೀಟ ಸಂಗ್ರಹಕಾರರಾದ ಶ್ರೀಕಾಂತ್, ಕಾವ್ಯ ಮತ್ತು ಶಾಲೆಯ ಶಿಕ್ಷಕರು ಇದ್ದರು.

## ಕೀಟನಾಶಕ ಬಳಕೆ ಮತ್ತು ಬಿಜೊಪಚಾರದ ತರಬೇತಿ


ಉದಯವಾಹಿನಿ ಚಿತ್ರ

• ಉದಯವಾಹಿನಿ ಮುನವಳ್ಳಿ

ತೆಗ್ಗಿಹಾಳ ಗ್ರಾಮದದಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಮತ್ತು ಜಿಲ್ಲಾ ಪಂಚಾಯತಿ ಆಶ್ರಯದಲ್ಲಿ ಸುರಕ್ಷಿತ ಕೀಟನಾಶಕ ಬಳಕೆ ಮತ್ತು ಬೀಜೋಪಚಾರ ಕುರಿತು ತರಬೇತಿ ಕಾರ್ಯಕ್ರಮ ಜರುಗಿತು. ಮತ್ತಿಕೊಪ್ಪ ಕೃಷಿ ಸಂಶೋಧನ ಮುಖ್ಯಸ್ಥ ಮಂಜುನಾಥ ಚೌರಡ್ಡಿ ಕಬ್ಬಿಗೆ ಅಂಟುವ ರೋಗಗಳ. ಗೊಣ್ಣೆಹುಳ ನಿಯಂತ್ರಣ ಬಗ್ಗೆ ವಿಸ್ತಾರವಾಗಿ ವಿವರಣೆ ನೀಡಿದರು.


ಬೆಂಗಳೂರಿನ ಡಾ|| ಭಗತ ಮತ್ತು ಡಾ|| ಹಿರೇಮಠ ಪಶುಸಂಗೊಪನೆ ಬಗ್ಗೆ ವಿವರಿಸಿದರು.

## ಬಾಲ ದೌರ್ಜನ್ಯ ಶಿಕ್ಷಾರ್ಹ ಅಪರಾಧ: ಎಚ್.ಬಿ.ಪಾಟೀಲ್

• ಉದಯವಾಹಿನಿ ಕಲಬುರಗಿ

ಮಕ್ಕಳಿಗೆ ಶಿಕ್ಷಣದಿಂದ ವಂಚಿತರನ್ನಾಗಿ ಮಾಡಿ, ಬಾಲ ಕಾರ್ಮಿಕ, ಬಾಲ್ಯ ವಿವಾಹದಂತಹ ಕಾನೂನು ಬಾಹಿರ ಚಟುವಟಿಕೆಗಳು ನಿರ್ಮೂಲನೆ ಮಾಡಬೇಕು. ಬಾಲ ದೌರ್ಜನ್ಯ ಶಿಕ್ಷಾರ್ಹ ಅಪರಾಧವಾಗಿದ್ದು, ಇದರ ನಿರ್ಮೂಲನೆಗೆ ಸಂವಿಧಾನ, ಸರ್ಕಾರಗಳು ಅನೇಕ ಕಾಯ್ದೆ-ಕಾನೂನುಗಳನ್ನು ರಚಿಸಿ ಜಾರಿಗೊಳಿಸಿದೆ. ಅವುಗಳಿಂದಲೇ ದೌರ್ಜನ್ಯ ಸಂಪೂರ್ಣವಾಗಿ ನಾಶವಾಗಲು ಸಾಧ್ಯವಿಲ್ಲ. ಜೊತೆಗೆ ಎಲ್ಲರ ಸಹಕಾರ ಅಗತ್ಯವಾಗಿದೆ ಎಂದು ಉಪನ್ಯಾಸಕ ಎಚ್.ಬಿ.ಪಾಟೀಲ್ ಅಭಿಪ್ರಾಯಪಟ್ಟರು.

ಆಳಂದ ರಸ್ತೆಯ ಸಂತೋಷ ಕಾಲನಿ ಕ್ರಾಸ್ ಸಮೀಪವಿರುವ 'ರಿಪಬ್ಲಿಕ ಸ್ಪೋಕನ್ ಇಂಗ್ಲೀಷ್ ಅಕಾಡೆಮಿ'ಯಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಜರುಗಿದ 'ಅಂತಾರಾಷ್ಟ್ರೀಯ ಬಾಲದೌರ್ಜನ್ಯ ವಿರೋಧಿ ದಿನಾಚರಣೆ'ಯಲ್ಲಿ ಅವರು ಮಾತನಾಡುತ್ತಿದ್ದರು. ಬಾಲಕ ಮತ್ತು ಬಾಲಕಿಯರನ್ನು ಅವರ ಬಾಲ್ಯದ ಕನಸುಗಳಿಂದ ದೂರವಿರಿಸಲು ಯಾರಿಗೂ ಹಕ್ಕಿಲ್ಲ. ಅವರಿಗೆ ದೊರೆಯಬಹುದಾದ ಎಲ್ಲಾ ಹಕ್ಕುಗಳು, ಸೌಕರ್ಯಗಳನ್ನು ಒದಗಿಸಿಕೊಡುವುದು ಪಾಲಕ-ಪೋಷಕರ ಆದ್ಯ ಕರ್ತವ್ಯವಾಗಿದೆ. ಸಾಕ್ಷರತೆಯ ಪ್ರಮಾಣ ಹೆಚ್ಚಾಗುವದರಿಂದ ಬಾಲಕಾರ್ಮಿಕ ಪದ್ಧತಿ ಕಡಿಮೆಯಾಗುತ್ತದೆ. ಬಾಲ ದೌರ್ಜನ್ಯಕ್ಕೆ ಸಂಬಂಧಿಸಿದಂತೆ ಮಾಹಿತಿ, ಪರಿಹಾರಕ್ಕಾಗಿ ಸಹಾಯವಾಣಿ 1098ಕ್ಕೆ ಸಂಪರ್ಕಿಸಬಹುದಾಗಿದೆ. ಮಕ್ಕಳ ಮೇಲಾಗುತ್ತಿರುವ ದೌರ್ಜನ್ಯಗಳನ್ನು ತಡೆಗಟ್ಟಲು ಪೋಕ್ಸೋ ಕಾಯ್ದೆ ಪರಿಣಾಮಕಾರಿಯಾಗಿದೆ ಎಂದರು.


ಉದಯವಾಹಿನಿ ಚಿತ್ರ

ಕಾರ್ಯಕ್ರಮದಲ್ಲಿ ಸಂಸ್ಥೆಯ ಮುಖ್ಯಸ್ಥ ದತ್ತು ಹಡಪದ, ಸಮಾಜ ಸೇವಕರಾದ ಶಿವಯೋಗೆಪ್ಪಾ ಎಸ್.ಬಿರಾದಾರ, ಸಕ್ಸಸ್ ಕಂಪ್ಯೂಟರ್ ತರಬೇತಿ ಸಂಸ್ಥೆಯ ಅಧ್ಯಕ್ಷ ಅಸ್ಲಾಂ ಶೇಖ್, ಶಿಕ್ಷಕ ಮಹಾದೇವಪ್ಪ ಎಚ್.ಬಿರಾದಾರ ಹಾಗೂ ವಿದ್ಯಾರ್ಥಿಗಳಿದ್ದರು.

## ಬಸವಕಲ್ಯಾಣಕ್ಕೆ ರೈಲು ಸಂಪರ್ಕ ಕಲ್ಪಿಸಿ: ಶಿವಾಚಾರ್ಯ

• ಉದಯವಾಹಿನಿ ಬೀದರ್

ಬಸವಾದಿ ಶರಣರ ಕರ್ಮಭೂಮಿ ಬಸವಕಲ್ಯಾಣಕ್ಕೆ ರೈಲು ಸಂಪರ್ಕ ಕಲ್ಪಿಸಬೇಕು ಎಂದು ಬೇಮಳಖೇಡ ಹಿರೇಮಠ ಸಂಸ್ಥಾನದ ಡಾ. ರಾಜಶೇಖರ ಶಿವಾಚಾರ್ಯ ಒತ್ತಾಯಿಸಿದ್ದಾರೆ. ಬೀದರನಲ್ಲಿ ಈಚೆಗೆ ಈ ಕುರಿತು ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಅವರಿಗೆ ಮನವಿ ಪತ್ರ ಸಲ್ಲಿಸಿದರು.

ಬಸವಕಲ್ಯಾಣದ ಅನುಭವ ಮಂಟಪ ವಿಶ್ವದ ಮೊದಲ ಸಂಸತ್ತು ಎಂದೇ ಹೆಸರಾಗಿದೆ. ಬಸವಣ್ಣನವರ ಕಾಯಕ-ದಾಸೋಹ ತತ್ವ, ಸಾಮಾಜಿಕ ಕ್ರಾಂತಿಯಿಂದಾಗಿ ಈ ನೆಲ ವಿಶ್ವಮಾನ್ಯವಾಗಿದೆ. ರಾಜ್ಯ ಸರ್ಕಾರ ಬಸವಕಲ್ಯಾಣದಲ್ಲಿ ಭವ್ಯ ನೂತನ ಅನುಭವ ಮಂಟಪ ನಿರ್ಮಿಸುತ್ತಿದೆ. ಇಂದಲ್ಲ, ನಾಳೆ ಬಸವಕಲ್ಯಾಣ ಜಗತ್ತಿನ ಗಮನ ಸೆಳೆಯಲಿದೆ. ಎಲ್ಲೆಡೆಯ ಪ್ರವಾಸಿಗರನ್ನು ತನ್ನತ್ತ ಕೈಬೀಸಿ ಕರೆಯಲಿದೆ ಎಂದು ಗಮನ ಸೆಳೆದರು.

ಈಗಾಗಲೇ ರಾಜ್ಯ ಹಾಗೂ ನೆರೆ ರಾಜ್ಯಗಳ ಭಕ್ತರು ಬಸವಕಲ್ಯಾಣಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಬರುತ್ತಾರೆ. ನೂತನ ಅನುಭವ ಮಂಟಪ ನಿರ್ಮಾಣ ಆರಂಭವಾದ ನಂತರ ಈ ಸಂಖ್ಯೆ ಇನ್ನೂ ಹೆಚ್ಚಾಗಿದೆ ಎಂದು ತಿಳಿಸಿದರು. ಹುಮನಾಬಾದ್ ಇಲ್ಲವೇ ಕಮಲಾಪುರದಿಂದ ಬಸವಕಲ್ಯಾಣಕ್ಕೆ ರೈಲು ಮಾರ್ಗ ನಿರ್ಮಿಸಬೇಕು. ಭಾರತೀಯ ರೈಲ್ವೆಯೊಂದಿಗೆ ಬಸವಕಲ್ಯಾಣವನ್ನು ಜೋಡಿಸಬೇಕು ಎಂದು ಬೇಡಿಕೆ ಮಂಡಿಸಿದರು. ತಮ್ಮ ಮನವಿಗೆ ಸ್ಪಂದಿಸಿದ ಸಚಿವರು, ಬಸವಕಲ್ಯಾಣಕ್ಕೆ ರೈಲು ಸಂಪರ್ಕ ಕಲ್ಪಿಸುವ ದಿಸೆಯಲ್ಲಿ ಅಗತ್ಯ ಕ್ರಮ ಕೈಗೊಳ್ಳುವ ಭರವಸೆ ನೀಡಿದ್ದಾರೆ ಎಂದು ಡಾ. ರಾಜಶೇಖರ ಶಿವಾಚಾರ್ಯ ತಿಳಿಸಿದ್ದಾರೆ.


ಉದಯವಾಹಿನಿ ಚಿತ್ರ

> ರೈಲ್ವೆ ಸಂಪರ್ಕವಾದರೆ ದೇಶ, ವಿದೇಶದ ಪ್ರವಾಸಿಗರ ದಂಡು ಬಸವಕಲ್ಯಾಣಕ್ಕೆ ಹರಿದು ಬರುವ ವಿಶ್ವಾಸ ಇದೆ. ರೈಲ್ವೆ ಸಂಪರ್ಕದಿಂದ ಪ್ರವಾಸಿಗರಿಗೆ ಅನುಕೂಲವಾಗುವ ಜತೆಗೆ ವ್ಯಾಪಾರ, ಉದ್ಯೋಗ, ಕೈಗಾರಿಕೆಗಳ ವೃದ್ಧಿಯಾಗಲಿದೆ. ಇದರಿಂದ ಜಿಲ್ಲೆಯ ಆರ್ಥಿಕ ಅಭಿವೃದ್ಧಿಗೆ ನೆರವಾಗಲಿದೆ -ಶಿವಾಚಾರ್ಯ

## ಸರ್ಕಾರಿ ಭೂಮಿ ಒತ್ತುವರಿ: ಕ್ರಿಮಿನಲ್ ಮೊಕದ್ದಮೆ ದಾಖಲಿಸಲು ಸೂಚನೆ

• ಉದಯವಾಹಿನಿ ಸಾಗರ

ಸರ್ಕಾರಿ ಭೂಮಿಯ ಒತ್ತುವರಿ ತೆರವುಗೊಳಿಸಿದ ನಂತರವೂ ಮತ್ತೆ ಒತ್ತುವರಿ ಮಾಡಲು ಮುಂದಾಗುವವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸುವಂತೆ ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಸೂಚನೆ ನೀಡಿದ್ದಾರೆ. ಇಲ್ಲಿನ ತಹಶೀಲ್ದಾರ್ ಕಚೇರಿಯಲ್ಲಿ ಕಂದಾಯ ಇಲಾಖೆ ಅಧಿಕಾರಿಗಳೊಂದಿಗೆ ಸಮಾಲೋಚನಾ ಸಭೆ ನಡೆಸಿದ ಅವರು, ಭೂ ಕಬಳಿಕೆ ಮಾಡುವ ಉದ್ದೇಶದಿಂದಲೆ ಕಾರ್ಯ ಪ್ರವೃತ್ತರಾಗಿರುವವರನ್ನು ಗುರುತಿಸಿ ಅಂತಹವರ ವಿರುದ್ಧ ಮುಲಾಜಿಲ್ಲದೆ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಅವರು ಹೇಳಿದರು.

ತಾಲ್ಲೂಕಿನ ಮಂಕೋಡು ಗ್ರಾಮದ ಸ.ನಂ.12ರಲ್ಲಿ ಕೆಲವರು ನಕಲಿ ದಾಖಲೆ ಸೃಷ್ಟಿಸಿ ಸರ್ಕಾರಿ ಭೂಮಿಯನ್ನು ಒತ್ತುವರಿ ಮಾಡಿರುವ ದೂರು ಬಂದಿದೆ. ಈ ಪ್ರಕರಣದ ತನಿಖೆ ಚಾಲ್ತಿಯಲ್ಲಿದ್ದು ಶೀಘ್ರದಲ್ಲೆ ತಪ್ಪಿತಸ್ಥರ ವಿರುದ್ಧ ಪ್ರಕರಣ ದಾಖಲಿಸಲಾಗುವುದು ಎಂದು ಅವರು ತಿಳಿಸಿದರು. ನಗರವ್ಯಾಪ್ತಿಯ ಮಾರ್ಕೆಟ್ ರಸ್ತೆ ವಿಸ್ತರಣೆಗೆ ಸಂಬಂಧಿಸಿದಂತೆ ಭೂ ಸ್ವಾಧೀನ ಪ್ರಕ್ರಿಯೆಗೆ ನೋಟಿಸ್ ನೀಡಲಾಗಿದೆ. ಈ ಪ್ರಕ್ರಿಯೆ ಮುಗಿಯುತ್ತಿದ್ದಂತೆ ವಿಸ್ತರಣೆ ಕಾರ್ಯ ಪೂರ್ಣಗೊಳಿಸಲಾಗುವುದು ಎಂದರು.

## ಆರೋಗ್ಯಕರ ಜೀವನಕ್ಕೆ ಸ್ವಚ್ಛ ಪರಿಸರ ಅಗತ್ಯ: ಸಿ.ಎಸ್.ಗಾಯತ್ರಿ

• ಉದಯವಾಹಿನಿ ಚಿತ್ರದುರ್ಗ

ಆರೋಗ್ಯಕರ ಜೀವನಕ್ಕೆ ಸ್ವಚ್ಛವಾದ ಪರಿಸರ ಅಗತ್ಯ ಎಂದು ಜಿಲ್ಲಾ ಪಂಚಾಯಿತಿ ಯೋಜನಾ ನಿರ್ದೇಶಕರಾದ ಸಿ.ಎಸ್.ಗಾಯತ್ರಿ ಹೇಳಿದರು. ಚಿತ್ರದುರ್ಗ ತಾಲ್ಲೂಕಿನ ಮದಕರಿಪುರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಜಿಲ್ಲಾ ಪಂಚಾಯಿತಿ, ಗ್ರಾಮ ಪಂಚಾಯಿತಿ ಮತ್ತು ಇಕೋ ಕ್ಲಬ್ ವತಿಯಿಂದ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಗಿಡ ನೆಡುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಚಿತ್ರ ಡಾನ್ ಬಾಸ್ಕೋ ಸಂಸ್ಥೆಯ ಮಹಂತೇಶ್ ಅವರು, ಪರಿಸರ ಸಂರಕ್ಷಣೆ, ಪ್ಲಾಸ್ಟಿಕ್ ಕೊನೆಗೊಳಿಸುವ ಬಗ್ಗೆ ಹಾಗೂ ಸಾವಯವ ಕೃಷಿ, ಪೌಷ್ಟಿಕ ಆಹಾರ ಸೇವನೆ, ಶಾಲಾ ಉದ್ಯಾನವನ, ಕೈತೋಟದ ಬಗ್ಗೆ ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು.

ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಪರಿಸರ ಸಂರಕ್ಷಣೆ ಕುರಿತು ಜಾಗೃತಿ ಜಾಥಾ, ಸ್ವಚ್ಛತಾ ಪ್ರತಿಜ್ಞಾವಿಧಿ ಬೋಧಿಸಲಾಯಿತು.

ಕಾರ್ಯಕ್ರಮದಲ್ಲಿ ಮದಕರಿಪುರ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಭವ್ಯ, ಸದಸ್ಯರಾದ ಸ್ವಾಮಿ, ನವೀನ್, ರಂಜಿತ್, ಮಂಜುಳಾ, ಯಶೋಧ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ನಾಗರಾಜ್, ಸ್ವಚ್ಛ ಭಾರತ ಮಿಷನ್ (ಗ್ರಾ) ಜಿಲ್ಲಾ ಐಇಸಿ ಸಮಾಲೋಚಕರಾದ ಬಿ.ಸಿ.ನಾಗರಾಜ್, ಎಸ್ ಡಬ್ಲ್ಯೂಎಂ ಸಮಾಲೋಚಕರಾದ ಪ್ರವೀಳಾ, ಶಾಲಾ ಮುಖ್ಯಶಿಕ್ಷಕರಾದ ರೇಖಾ, ಆರೋಗ್ಯ ಇಲಾಖೆ ಅಧಿಕಾರಿಗಳು, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ಸ್ವಸಹಾಯ ಸಂಘದ ಮಹಿಳೆಯರು, ಗ್ರಾಮ ಪಂಚಾಯಿತಿ ಸಿಬ್ಬಂದಿ ಇದ್ದರು.


ಉದಯವಾಹಿನಿ ಚಿತ್ರ


> ಆರೋಗ್ಯದಿಂದ ಇರಬೇಕಾದರೆ ನಮ್ಮ ಮನೆ ಸುತ್ತಮುತ್ತಲಿನ ಪರಿಸರ ಸ್ವಚ್ಛವಾಗಿ ಇರಬೇಕು. ಸ್ವಚ್ಛ ಪರಿಸರ ನಿರ್ಮಾಣಕ್ಕೆ ನಾಗರಿಕರು ಸಹಕರಿಸಬೇಕು ಎಂದರು. ಹೆಚ್ಚಿನ ಪ್ಲಾಸ್ಟಿಕ್ ಬಳಕೆಯಿಂದಾಗಿ ವಾತಾವರಣ ಕಲುಷಿತವಾಗುತ್ತಿದ್ದು, ಈ ಬಾರಿಯ ಪರಿಸರ ದಿನಾಚರಣೆಯ ಉದ್ದೇಶ ಪ್ಲಾಸ್ಟಿಕ್ ಮುಕ್ತ ಗ್ರಾಮಗಳನ್ನಾಗಿ ಮಾಡುವುದಾಗಿದೆ. ಪ್ಲಾಸ್ಟಿಕ್‌ನಲ್ಲಿ ಏಕಬಳಕೆಯ ಪ್ಲಾಸ್ಟಿಕ್ ಮತ್ತು ಮರು ಬಳಕೆ ಮಾಡಬಹುದಾದ ಪ್ಲಾಸ್ಟಿಕ್ ಎಂಬ ಎರಡು ವಿಧವಿದ್ದು, ಈಗಾಗಲೇ ಏಕ ಬಳಕೆಯ ಪ್ಲಾಸ್ಟಿಕ್ ನಿಷೇಧಿಸಲಾಗಿದೆ ಎಂದು ತಿಳಿಸಿದ ಅವರು, ಒಣ ಕಸ ಮತ್ತು ಹಸಿ ಕಸ ವಿಂಗಡಿಸಿ ಗ್ರಾಮ ಪಂಚಾಯಿತಿಯ ಸ್ವಚ್ಛ ವಾಹಿನಿಗೆ ನೀಡಲು ತಿಳಿಸಿದರು -ಸಿ.ಎಸ್.ಗಾಯತ್ರಿ

## ಕಳಪೆ ಕಾಮಗಾರಿ: ತರಾಟೆ

• ಉದಯವಾಹಿನಿ ನವಲಗುಂದ

ಕಟ್ಟಡ ನಿರ್ಮಾಣ ಕಾಮಗಾರಿ ನಿಗದಿತ ಅವಧಿಯಲ್ಲಿ ಪೂರ್ಣಗೊಂಡಿಲ್ಲ, ಅಲ್ಲದೆ ಕಳಪೆ ಕಾಮಗಾರಿಯ ಬಗ್ಗೆ ಸಾರ್ವಜನಿಕರಿಂದ ವ್ಯಾಪಕ ದೂರುಗಳು ಕೇಳಿಬರುತ್ತಿದ್ದು ಗುಣಮಟ್ಟದ ಕಾಮಗಾರಿ ಮಾಡದೇ ಕಟ್ಟಡದ ಎಲ್ಲಾ ಕೆಲಸ ಮುಗಿಸಿರುವುದಕ್ಕೆ ಶಾಸಕ ಎನ್ ಎಚ್ ಕೋನರಡ್ಡಿ ಲೋಕೋಪಯೋಗಿ ಇಲಾಖೆಯ ಎಇಇ ಸೋಮನಗೌಡ ಪಾಟೀಲ್ ಅವರನ್ನು ತರಾಟೆಗೆ ತೆಗೆದುಕೊಂಡರು. ಪಟ್ಟಣದ ರಾಣಿ ಚನ್ನಮ್ಮ ಶಾಲೆ ಬಳಿ 6 ಕೋಟಿ ರೂ. ವೆಚ್ಚದಲ್ಲಿ ಸಮಾಜ ಕಲ್ಯಾಣ ಇಲಾಖಾ ವತಿಯಿಂದ ನಿರ್ಮಾಣವಾಗುತ್ತಿರುವ ಬಾಲಕರ ವಸತಿ ನಿಲಯದ ಕಟ್ಟಡ ಕಾಮಗಾರಿ ಪರಿಶೀಲಿಸಿದ ವೇಳೆ ಅಗತ್ಯ ಮಾಹಿತಿ ಪಡೆದ ಅವರು ಕೆಲವೆಡೆ ಕಾಮಗಾರಿಯು ಗುಣಮಟ್ಟದಿಂದ ಕೂಡಿಲ್ಲ.

ಆದರೆ ನಿಗದಿತ ಕಾಲಮಿತಿಯಲ್ಲಿ ಕಾಮಗಾರಿ ಪೂರ್ಣಗೊಂಡಿಲ್ಲ, ಅಲ್ಲದೆ ಅಲ್ಲಲ್ಲಿ ಲೋಪದೋಷಗಳು ಕಂಡು ಬರುತ್ತಿದ್ದು ಕ್ಯೂರಿಂಗ್ ಮತ್ತು ಪ್ಲಾಸ್ಟರಿಂಗ್ ಸಮರ್ಪಕವಾಗಿಯಿಲ್ಲ. ಆದುದರಿಂದ ಗುಣಮಟ್ಟ ಕಾಯ್ದುಕೊಂಡು ಉತ್ತಮವಾಗಿ ಕಾಮಗಾರಿ ನಿರ್ವಹಿಸಿಲ್ಲ ಎಂದು ಅಸಮಾಧಾನಗೊಂಡರು. ಉಳಿದ ಕಾಮಗಾರಿಯಲ್ಲಿ ಗುಣಮಟ್ಟದ ಕಾಮಗಾರಿಯನ್ನು ಶೀಘ್ರದಲ್ಲಿಯೇ ಅಂತಿಮಗೊಳಿಸುವಂತೆ ಎಚ್ಚರಿಕೆ ನೀಡಿದರು.


ಉದಯವಾಹಿನಿ ಚಿತ್ರ

# ಎಕ್ಸ್‌ಪ್ರೆಸ್ ಫೀಡರ್‌ನಿಂದ ವಿದ್ಯುತ್ ಕಲ್ಪಿಸಿ: ಎಚ್ಚರಿಕೆ

### ಆಗಾಗ ಆಗುವ ವಿದ್ಯುತ್ ವ್ಯತ್ಯಯದಿಂದ ಮಳೆಗಾಲದಲ್ಲೂ ಕುಡಿಯುವ ನೀರು ಸರಬರಾಜು ಮಾಡಲು ತೊಂದರೆ

• ಉದಯವಾಹಿನಿ ಆಲೂರು

ಪಟ್ಟಣ ಪಂಚಾಯಿತಿ ವ್ಯಾಪ್ತಿಗೆ ಕುಡಿಯುವ ನೀರಿಗಾಗಿ ಅಳವಡಿಸಿರುವ ಎಕ್ಸ್ ಪ್ರೆಸ್ ಫೀಡರ್‌ನಲ್ಲಿ ಕೂಡಲೆ ವಿದ್ಯುತ್ ಸರಬರಾಜು ಮಾಡದಿದ್ದರೆ ಸೆಸ್ಕ್ ಕಚೇರಿ ಎದುರು ಪ್ರತಿಭಟನೆ ನಡೆಸುವುದಾಗಿ ಪಟ್ಟಣ ಪಂಚಾಯಿತಿ ಅಧ್ಯಕ್ಷರು, ಸದಸ್ಯರು ಎಚ್ಚರಿಕೆ ನೀಡಿದರು.

ಪಟ್ಟಣ ಪಂಚಾಯಿತಿ ವ್ಯಾಪ್ತಿಗೊಳಪಡುವ ಕುಟುಂಬಗಳಿಗೆ ಕುಡಿಯುವ ನೀರು ಸರಬರಾಜಿನಲ್ಲಿ ತೊಂದರೆಯಾಗಬಾರದೆಂದು ನಿರಂತರ ವಿದ್ಯುತ್ ಸಂಪರ್ಕಕ್ಕಾಗಿ ಕೋಟ್ಯಂತರ ರೂಪಾಯಿ ಖರ್ಚು ಮಾಡಿ ಎಕ್ಸ್‌ಪ್ರೆಸ್ ಫೀಡರ್ ಮಾಡಲಾಗಿದೆ. ಸುಮಾರು 25 ಲಕ್ಷ ಠೇವಣಿ ಸಹ ಇಡಲಾಗಿದೆ. ಸುಮಾರು ಮೂರು ವರ್ಷಗಳಿಂದ ಈ ಫೀಡರ್ ಮೂಲಕ ವಿದ್ಯುತ್ ಸಂಪರ್ಕ ಕಲ್ಪಿಸದೆ, ಆಗಾಗ ಆಗುವ ವಿದ್ಯುತ್ ವ್ಯತ್ಯಯದಿಂದ ಮಳೆಗಾಲದಲ್ಲೂ ಕುಡಿಯುವ ನೀರು ಸರಬರಾಜು ಮಾಡಲು ತೊಂದರೆಯಾಗಿದೆ ಎಂದು ಸದಸ್ಯ ತೌಫಿಕ್ ಅವರು ವಿಷಯ ಪ್ರಸ್ತಾಪ ಮಾಡಿದರು.

ಇದಕ್ಕೆ ಧ್ವನಿಗೂಡಿಸಿದ ಮುಖ್ಯಾಧಿಕಾರಿ ಮಂಜುನಾಥ್ ಅವರು, ಪ್ರತಿದಿನ ವಿದ್ಯುತ್ ಸಂಪರ್ಕದಲ್ಲಿ ವ್ಯತ್ಯಯವಾಗಿರುವ ದಾಖಲಾತಿಯನ್ನು ಪ್ರದರ್ಶಿಸಿದರು. ಈ ಕೂಡಲೆ ಕ್ರಮ ಕೈಗೊಂಡು ನಿರಂತರವಾಗಿ ವಿದ್ಯುತ್ ಸಂಪರ್ಕ ಒದಗಿಸದಿದ್ದರೆ ಸೆಸ್ಕ್ ಕಚೇರಿ ಎದುರು ಪ್ರತಿಭಟನೆ ಹಮ್ಮಿಕೊಳ್ಳುತ್ತೇವೆ ಎಂದು ಸಭೆಯಲ್ಲಿ ಸೆಸ್ಕ್ ಇಂಜಿನಿಯರ್‌ಗೆ ತಿಳಿಸಿದರು.


ಉದಯವಾಹಿನಿ ಚಿತ್ರ

**ಅಧ್ಯಕ್ಷರು, ಸದಸ್ಯರು ಎಚ್ಚರಿಕೆ**

ಸೆಸ್ಕ್ ಸಹಾಯಕ ಇಂಜಿನಿಯರ್ ಕುಮಾರ್ ಉತ್ತರಿಸಿ. ಆಲೂರಿಗೆ ಪ್ರತ್ಯೇಕ ವಿದ್ಯುತ್ ಪ್ರಸರಣ ಕೇಂದ್ರವಿಲ್ಲದೆ ತೊಂದರೆಯಾಗಿದೆ. ಬಹುತೇಕ ವಿದ್ಯುತ್ ಲೈನುಗಳು ಗದ್ದೆಗಳಲ್ಲಿ ಹಾದು ಹೋಗಿವೆ. ಗಾಳಿ, ಮಳೆಯಲ್ಲಿ ಅಡಚಣೆಯಾದ ಸಂದರ್ಭದಲ್ಲಿ ದುರಸ್ತಿಗೊಳಿಸಲು ವಿಳಂಬವಾಗಲಿದೆ. ಎಕ್ಸ್‌ಪ್ರೆಸ್ ಫೀಡರ್ ಸಂಪರ್ಕ ಕಲ್ಪಿಸುವ ಬಗ್ಗೆ ಹಿರಿಯ ಅಧಿಕಾರಿಗಳೊಡನೆ ಚರ್ಚಿಸಿ ಕ್ರಮ ಕೈಗೊಳ್ಳಲಾಗುವುದು ಎಂದರು.

ಪಟ್ಟಣದಲ್ಲಿ ಸಂಚಾರ ಸುಗಮಕ್ಕೆ ಪೊಲೀಸರ ಸಹಕಾರ ಅಗತ್ಯವಾಗಿದೆ ಎಂದು ಪಟ್ಟಣ ಪಂಚಾಯಿತಿ ಅಧ್ಯಕ್ಷೆ ತಾಹೆರಾಬೇಗಂ ತಿಳಿಸಿದರು.

ಪಟ್ಟಣ ಪಂಚಾಯಿತಿ ಕಚೇರಿಗೆ ಅಗತ್ಯವಿರುವ ಮಾಸಿಕ ಬಾಡಿಗೆ ಆಧಾರದ ಮೇಲೆ ಕರೆಯಲಾಗಿರುವ ಕಾರಿನ ಟೆಂಡರನ್ನು ಅನುಮೋದಿಸಲು, ಫುಡ್ ಕೋರ್ಟ್ ನಿರ್ಮಾಣ, ರೆಕಾರ್ಡ್ ರೂಮ್ ನವೀಕರಣ, ವೆಂಕಟೇಶ್ವರ ಕಲ್ಯಾಣ ಮಂಟಪದ ಹತ್ತಿರ 25 ಮೀ. ಚರಂಡಿ ನಿರ್ಮಾಣ, ಫಿಲ್ಟರ್ ಹೌಸ್ ಮತ್ತು ಪಂಪ್ ಹೌಸ್‌ಗಳಲ್ಲಿ ಮೋಟಾರು ದುರಸ್ತಿಗೆ, ನೀರು ಸರಬರಾಜು ವಿಭಾಗಕ್ಕೆ ಸಾಮಗ್ರಿಗಳನ್ನು ಸರಬರಾಜು ಮಾಡಲು ವಾರ್ಷಿಕ ನಿರ್ವಹಣೆ, ಕೊಳವೆಬಾವಿ ವಾರ್ಷಿಕ ನಿರ್ವಹಣೆ, ಸಭಾಂಗಣಕ್ಕೆ ಪೀಠೋಪಕರಣಗಳನ್ನು ಅಳವಡಿಸುವುದು, ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಕೊಠಡಿ ನವೀಕರಣ, ಕಚೇರಿ ಮೇಲ್ಭಾಗದಲ್ಲಿ ಶೀಟ್ ಹಾಕಿಸಲು, ಬೀದಿ ದೀಪ ನಿರ್ವಹಣೆ ಟೆಂಡರನ್ನು ಅನುಮೋದಿಸಿ ಸಭೆ ಒಪ್ಪಿಗೆ ಸೂಚಿಸಿತು. 2025 ಜನವರಿಯಿಂದ-ಮೇ ವರೆಗೆ ಆಗಿದ್ದ ಜಮಾ ಖರ್ಚಿನ ವಿವರಗಳನ್ನು ಸಭೆಯಲ್ಲಿ ಮಂಡಿಸಲಾಯಿತು.

ಪಕ್ಕದಲ್ಲಿರುವ ಕಟ್ಟಡದ ನೆಲ ಅಂತಸ್ತನ್ನು ಬಾಡಿಗೆಗೆ ನೀಡಿ, ಮೊದಲ ಅಂತಸ್ತಿನಲ್ಲಿ ಅಗತ್ಯವಾದಲ್ಲಿ ಸಭಾಂಗಣವನ್ನು ವರ್ಗಾಯಿಸುವ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು. ಪಟ್ಟಣ ಪಂಚಾಯಿತಿ ವ್ಯಾಪ್ತಿಗಡಿ ಪ್ರದೇಶದೊಳಗಿರುವ ಜಾಗವನ್ನು ಗುರುತಿಸಿ, ಅಲ್ಲಿನ ನಿವಾಸಿಗಳಿಗೆ ಮೂಲ ಸೌಕರ್ಯಗಳನ್ನು ಒದಗಿಸಲು ಕ್ರಮ ಕೈಗೊಳ್ಳಬೇಕು. ರಸ್ತೆ ಉಬ್ಬುಗಳಿಲ್ಲದೆ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಓಡಾಡಲು ಭಯಭೀತರಾಗಿದ್ದಾರೆ. ಕೂಡಲೆ ರಸ್ತೆ ಉಬ್ಬುಗಳನ್ನು ನಿರ್ಮಾಣ ಮಾಡುವಂತೆ ಸಭೆಯಲ್ಲಿ ಎಲ್ಲಾ ಸದಸ್ಯರು ಆಗ್ರಹಿಸಿದರು.

ಗಡಿ ಪ್ರದೇಶದಂಚಿನಲ್ಲಿ ಆಲೂರು ಪಟ್ಟಣ ಪಂಚಾಯಿತಿಗೆ ಹೊಂದಿಕೊಂಡಿರುವ ಬೈರಾಪುರ, ಹುಣಸವಳ್ಳಿ ಪಂಚಾಯಿತಿಗೊಳಪಡುವ ಕೆಲ ನಿವಾಸಿಗಳನ್ನು ನಮ್ಮ ಪಂಚಾಯಿತಿಗೆ ಸೇರಿಸಿಕೊಳ್ಳಲು ಮತ್ತು ಯಾವುದೆ ವಾರ್ಡಿಗೆ ನೂತನವಾಗಿ ಹೆಸರು ನಾಮಕರಣ ಮಾಡಲು ಸರ್ಕಾರದಿಂದ ಅನುಮೋದನೆ ಪಡೆಯಬೇಕು ಎಂದು ಮುಖ್ಯಾಧಿಕಾರಿ ಮಾಹಿತಿ ನೀಡಿದರು.

### ಮುಖ್ಯರಸ್ತೆಯಂಚಿಗೆ ಬಂದಿರುವ ಅಂಗಡಿಗಳು: ಕ್ರಮಕ್ಕೆ ಒತ್ತಾಯ

ಪಟ್ಟಣದ ಮುಖ್ಯ ರಸ್ತೆ ಬದಿಯಲ್ಲಿರುವ ಅಂಗಡಿಗಳು ರಸ್ತೆಯಂಚಿಗೆ ಎಡತಾಕಿರುವುದರಿಂದ ಜನಸಾಮಾನ್ಯರು ಮತ್ತು ವಾಹನಗಳ ಓಡಾಟಕ್ಕೆ ತೊಂದರೆಯಾಗಿದೆ. ವಾಹನಗಳಿಗೆ ಪಾರ್ಕಿಂಗ್ ವ್ಯವಸ್ಥೆಯಾಗಬೇಕು. ಪ್ರತಿದಿನ ಸಂಚಾರ ಪೊಲೀಸರು ಗಸ್ತು ತಿರುಗಿ ನಿಯಮ ಮೀರಿದವರನ್ನು ಎಚ್ಚರಿಸಬೇಕು ಎಂದರು. ಸಭೆಯಲ್ಲಿ ಹಾಜರಿದ್ದ ಎಸ್‌ಐ ಜನಾಬಾಯಿ ಕಡಪಟ್ಟಿಯವರು ರಸ್ತೆಯಂಚಿನಲ್ಲಿ ಮೀಸಲಾಗಿರುವ ಜಾಗವನ್ನು ಗುರುತು ಮಾಡಿದರೆ ನಿಯಮ ಮೀರಿದವರಿಗೆ ಕಾನೂನು ಕ್ರಮ ಜರುಗಿಸಲಾಗುವುದು. ಕೆಲ ಬೃಹತ್ ವಾಹನಗಳು ಬೈರಾಪುರ ಟೋಲ್ ತಪ್ಪಿಸಿಕೊಂಡು ಪಟ್ಟಣದೊಳಗೆ ಬರುತ್ತಿವೆ. ಮಳೆ ಕಡಿಮೆಯಾದ ನಂತರ ಅಂತಹ ವಾಹನಗಳಿಗೆ ದಂಡ ವಿಧಿಸಲು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸೂಚನೆ ನೀಡಿದ್ದಾರೆ. ಸುಗಮ ಸಂಚಾರಕ್ಕೆ ಕ್ರಮ ಕೈಗೊಳ್ಳಲಾಗುವುದು ಎಂದರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 01:30 ರಿಂದ 03:00 |
| ಗುಳಿಕ ಕಾಲ | ಬೆಳಿಗ್ಗೆ | 09:00 ರಿಂದ 10:30 |
| ಯಮಗಂಡ ಕಾಲ | ಬೆಳಿಗ್ಗೆ | 06:00 ರಿಂದ 07:30 |

**ಮೇಷ** ನಿಮ್ಮ ಸಭ್ಯ ನಡವಳಿಕೆ ಮೆಚ್ಚುಗೆ ಪಡೆಯುತ್ತದೆ. ಅನೇಕ ಜನರು ನಿಮ್ಮನ್ನು ಹೊಗಳುತ್ತಾರೆ. ಜೀವನ ಸಂಗಾತಿಯೊಂದಿಗೆ ಹಣಕ್ಕೆ ಸಂಬಂಧಿಸಿದ ಯಾವುದೇ ವಿಷಯದ ಬಗ್ಗೆ ಜಗಳವಾಗುವ ಸಾಧ್ಯತೆ ಇದೆ.

**ವೃಷಭ** ಸ್ನೇಹಿತನ ಜೊತೆಗಿನ ನಿಮ್ಮ ಅಪಾರ್ಥ ಕೆಲವು ಅಹಿತಕರ ಪ್ರತಿಕ್ರಿಯೆಗಳನ್ನು ಉಂಟುಮಾಡಬಹುದು – ಯಾವುದೇ ನಿರ್ಧಾರ ಕೈಗೊಳ್ಳುವ ಮೊದಲು ಸಮತೋಲಿತ ನೋಟ ಹೊಂದಿ.

**ಮಿಥುನ** ನಿಮ್ಮ ಸಭ್ಯ ನಡವಳಿಕೆ ಮೆಚ್ಚುಗೆ ಪಡೆಯುತ್ತದೆ. ಅನೇಕ ಜನರು ನಿಮ್ಮನ್ನು ಹೊಗಳುತ್ತಾರೆ. ಆರ್ಥಿಕ ಜೀವನದಲ್ಲಿ ಇಂದು ಸಂತೋಷ ಉಳಿದಿರುತ್ತದೆ. ಇದರೊಂದಿಗೆ ನೀವು ಇಂದು ಸಾಲಗಳಿಂದ ಮುಕ್ತರಾಗಬಹುದು.

**ಕರ್ಕಾಟಕ** ಇಂದು ನಿಮ್ಮ ಉಚಿತ ಸಮಯ ಮನೆಯನ್ನು ಸ್ವಚ್ಛಗೊಳಿಸುವಲ್ಲಿ ಕಳೆಯಬಹುದು. ಇಂದು ನಿಮ್ಮ ವೈವಾಹಿಕ ಜೀವನದಲ್ಲಿನ ಪರಿಸ್ಥಿತಿಗಳು ನಿಮ್ಮ ನಿಯಂತ್ರಣ ಮೀರಬಹುದು.

**ಸಿಂಹ** ಉತ್ತಮ ಜೀವನಕ್ಕಾಗಿ ನಿಮ್ಮ ಆರೋಗ್ಯ ಮತ್ತು ಒಟ್ಟಾರೆ ವ್ಯಕ್ತಿತ್ವವನ್ನು ಸುಧಾರಿಸಲು ಪ್ರಯತ್ನಿಸಿ. ನಿಮ್ಮ ಖರ್ಚುಗಳನ್ನು ನಿಯಂತ್ರಿಸಲು ಮತ್ತು ಕೇವಲ ಅಗತ್ಯವಾದ ವಸ್ತುಗಳ ಮಾತ್ರ ಇಂದು ಖರೀದಿಸಲು ಪ್ರಯತ್ನಿಸಿ.

**ಕನ್ಯಾ** ಪ್ರೀತಿಪಾತ್ರರಲ್ಲದೇ ನಿಮ್ಮ ಸಮಯ ಕೊಲ್ಲುವುದು ಕಷ್ಟ. ನೀವು ಯಾವುದೇ ಚಲನಚಿತ್ರವನ್ನು ನೋಡಬಹುದು. ಮತ್ತು ನೀವು ನಿಮ್ಮ ಅಮೂಲ್ಯ ಸಮಯವನ್ನು ಹಾಳುಮಾಡಿದ್ದೀರಿ ಎಂದು ಬಯಸುವಿರಿ.

**ತುಲಾ** ಮಕ್ಕಳಿಗೆ ಅವರ ಮನೆಗೆಲಸ ಪೂರ್ಣಗೊಳಿಸಲು ಸಹಾಯ ಮಾಡುವ ಸಮಯ. ನಿಮ್ಮ ಪ್ರೇಮಿಯ ಜೊತೆ ಹೊರಹೋದಾಗ ನಿಮ್ಮ ರೂಪ ಮತ್ತು ವರ್ತನೆಯಲ್ಲಿ ನೈಜತೆಯಿರಲಿ.

**ವೃಶ್ಚಿಕ** ಈ ರಾಶಿಚಕ್ರದ ಜನರು ತಮ್ಮ ಸಹೋದರ–ಸಹೋದರಿಯರೊಂದಿಗೆ ಮನೆಯಲ್ಲಿ ಯಾವುದೇ ಚಲನ ಚಿತ್ರ ಅಥವಾ ಮ್ಯಾಚ್ ನೋಡಬಹುದು. ಇದನ್ನು ಮಾಡುವುದರಿಂದ ನಿಮ್ಮ ನಡುವಿನ ಪ್ರೀತಿಯಲ್ಲಿ ಹೆಚ್ಚಳವಾಗುತ್ತದೆ.

**ಧನಸ್ಸು** ನೀವು ಅತಿಯಾದ ಒತ್ತಡವನ್ನು ಅನುಭವಿಸುತ್ತಿದ್ದೀರೆಂದೆನಿಸಿದರೆ – ಮಕ್ಕಳೊಂದಿಗೆ ಹೆಚ್ಚು ಸಮಯ ಕಳೆಯಿರಿ. ಅವರ ಬೆಚ್ಚಗಿನ ಅಪ್ಪುಗೆ ಮುದ್ದಾಡುವಿಕೆ, ಮುಗ್ಧ ಮುಗುಳ್ನಗೆಯೂ ನಿಮ್ಮ ಸಮಸ್ಯೆಗಳನ್ನು ಮಾಯವಾಗಿಸಬಲ್ಲದು.

**ಮಕರ** ಭಾವನಾತ್ಮಕ ಭರವಸೆಗಳನ್ನು ಬಯಸುವವರು ಹಿರಿಯರು ಅವರ ನೆರವಿಗೆ ಬರುವುದನ್ನು ನೋಡಬಹುದು. ಮದುವೆಯಾಗುವವರು ತಮ್ಮ ಪ್ರೇಮಿ ಸಂತೋಷದ ಮೂಲವೆಂದು ಕಂಡುಕೊಳ್ಳುತ್ತಾರೆ.

**ಕುಂಭ** ನೀವು ಯಾವುದೇ ಕಾರಣವಿಲ್ಲದೆ ಕೆಲವು ಜನರೊಂದಿಗೆ ಗೊಂದಲ ಮಾಡಬಹುದು. ಹಾಗೆ ಮಾಡುವುದರಿಂದ ನಿಮ್ಮ ಮನಸ್ಥಿತಿ ಹಾಳಾಗುತ್ತದೆ ಮತ್ತು ಅದು ನಿಮ್ಮ ಅಮೂಲ್ಯ ಸಮಯವನ್ನು ಸಹ ವ್ಯರ್ಥ ಮಾಡುತ್ತದೆ.

**ಮೀನ** ನೀವು ನಿಮ್ಮ ಜೀವನದ ತೊಂದರೆಗಳನ್ನು ನಿಮ್ಮ ಸಂಗಾತಿಯೊಂದಿಗೆ ಹಂಚಿಕೊಳ್ಳಲು ಬಯಸುವಿರಿ ಆದರೆ ಅವರು ತಮ್ಮ ಸಮಸ್ಯೆಗಳ ಬಗ್ಗೆ ಮಾತನಾಡಿ ನಿಮ್ಮನ್ನು ಇನ್ನಷ್ಟು ತೊಂದರೆಗೊಳಿಸಬಹುದು.

---

● ಬಾಲ್ಯ ವಿವಾಹ ಘಟನೆ ಕಂಡುಬಂದಲ್ಲಿ ಅವುಗಳನ್ನು ತಡೆಗಟ್ಟಲು ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಬೇಕು: ಡಿಸಿ

# ಬಾಲ್ಯ ವಿವಾಹ ಹಾಗೂ ಪೋಕ್ಸೊ ಕಾಯ್ದೆಗಳ ಕುರಿತು ಜನ ಜಾಗೃತಿ ಮೂಡಿಸಿ

• ಉದಯವಾಹಿನಿ ವಿಜಯಪುರ

ಆಶಾ ಕಾರ್ಯಕರ್ತರು, ಅಂಗನವಾಡಿ ಕಾರ್ಯಕರ್ತರ ಸಹಯೋಗದೊಂದಿಗೆ ಬಾಲ್ಯವಿವಾಹ ಹಾಗೂ ಪೋಕ್ಸೊ ಕಾಯ್ದೆಗಳ ಕುರಿತು ಜನಜಾಗೃತಿ ಕಾರ್ಯಕ್ರಮಗಳನ್ನು ಜಿಲ್ಲೆಯಲ್ಲಿ ಸಮರ್ಪಕವಾಗಿ ಆಯೋಜಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ತಿಳಿಸಿದರು.

**ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆ**

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ಅನುಷ್ಠಾನಗೊಳಿಸಲಾಗುತ್ತಿರುವ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನೆಗಾಗಿ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬಾಲ್ಯ ವಿವಾಹ ಕಂಡು ಬಂದಲ್ಲಿ ಬಾಲ್ಯ ವಿವಾಹಕ್ಕೆ ಪ್ರೋತ್ಸಾಹ ನೀಡುವವರೂ ಸೇರಿದಂತೆ ಮಗುವಿನ ಪೋಷಕರು, ಮಗುವಿನ ಜವಾಬ್ದಾರಿಯನ್ನು ಹೊತ್ತವರ, ಭಾಗವಹಿಸಿದ ಇತರರ ವಿರುದ್ಧ ಎಫ್‌ಐಆರ್ ದಾಖಲಿಸುವಂತೆ ಅವರು ನಿರ್ದೇಶನ ನೀಡಿದರು.

ಬಾಲ್ಯ ವಿವಾಹ ಘಟಿಸದಂತೆ ನೋಡಿಕೊಳ್ಳಬೇಕು ಹಾಗೂ ಬಾಲ್ಯ ವಿವಾಹ ತಡೆಗೆ ಇರುವ ಸಹಾಯವಾಣಿ ಸಂಖ್ಯೆ 1098 ಬಗ್ಗೆ ವ್ಯಾಪಕ ಪ್ರಚಾರ ಮಾಡಬೇಕು ಹಾಗೂ ಬಾಲ್ಯ ವಿವಾಹ ಮುಕ್ತ ಗ್ರಾಮ ಪಂಚಾಯಿತಿಗಳನ್ನು ಗುರುತಿಸಿ ಅಂತಹ ಗ್ರಾಮ ಪಂಚಾಯತಿಗಳಿಗೆ ಸನ್ಮಾನಿಸುವ ಕಾರ್ಯ ನಡೆಯಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಅವರು ತಿಳಿಸಿದರು.



ಉದಯವಾಹಿನಿ ಚಿತ್ರ

**ಸಮನ್ವಯತೆಯಿಂದ ಕಾರ್ಯ ನಿರ್ವಹಿಸುವಂತೆ ಸೂಚನೆ**

ಜಿಲ್ಲೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಜಿಲ್ಲಾ ಸರ್ಕಾರಿ ಆಸ್ಪತ್ರೆಯ ಆವರಣದಲ್ಲಿ ನೊಂದ ಮಹಿಳೆಯರಿಗಾಗಿ ಸ್ಥಾಪಿಸಲಾಗಿರುವ ಸಖಿ ಒನ್ ಸ್ಟಾಪ್ ಸೆಂಟರ್‌ನಲ್ಲಿ ನೊಂದ ಮಹಿಳೆಯರಿಗೆ ಆರೋಗ್ಯ, ಆರೈಕೆ, ಪೊಲೀಸ್ ಹಾಗೂ ಕಾನೂನು ನೆರವು, ವಸತಿ ಹಾಗೂ ಆಪ್ತ ಸಮಾಲೋಚನೆ ಇತ್ಯಾದಿ ಸೇವೆಗಳನ್ನು ಸಮರ್ಪಕವಾಗಿ ದೊರಕುವಂತೆ ಎಲ್ಲಾ ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯ ನಿರ್ವಹಿಸುವಂತೆ ಅವರು ಸೂಚಿಸಿದರು.

> ಬಾಲ್ಯ ವಿವಾಹವನ್ನು ತಡೆಗಟ್ಟಲು ಪ್ರೌಢಶಾಲೆ ಹಾಗೂ ಪದವಿ ಪೂರ್ವ ಶಿಕ್ಷಣ ಸಂಸ್ಥೆಗಳಲ್ಲಿ ಸಮಿತಿಗಳನ್ನು ರಚಿಸಿಕೊಂಡು, ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ವಿದ್ಯಾರ್ಥಿಗಳು, ಪಾಲಕರು ಹಾಗೂ ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕು –ಡಿಸಿ

ಬಾಣಂತಿ ಮತ್ತು ಗರ್ಭಿಣಿ ಮಹಿಳೆಯರ ಕ್ಷೇಮಾಭಿವೃದ್ಧಿಗಾಗಿ ಇರುವ ಪ್ರಧಾನಮಂತ್ರಿ ಮಾತೃವಂದನಾ ಯೋಜನೆಯ ಅನುದಾನವನ್ನು ಸಮರ್ಪಕವಾಗಿ ಬಳಕೆ ಮಾಡಿಕೊಳ್ಳುವುದರ ಮೂಲಕ ತಾಯಿ ಮತ್ತು ಮಗುವಿನ ಆರೋಗ್ಯ ಮತ್ತು ಪೋಷಣೆಯನ್ನು ಉತ್ತಮಪಡಿಸಲು ಅನುವಾಗಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಅವರು ತಿಳಿಸಿದರು.

ಕೌಟುಂಬಿಕ ದೌರ್ಜನ್ಯಕ್ಕೆ ಒಳಗಾದ ನೊಂದ ಮಹಿಳೆಯರಿಗಾಗಿ ಜಿಲ್ಲೆಯಲ್ಲಿ ಒಟ್ಟು 06 ಸಾಂತ್ವನ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿದ್ದು, ಈ ಕೇಂದ್ರಗಳಲ್ಲಿ ನೊಂದ ಮಹಿಳೆಯರಿಗೆ ಆಪ್ತ ಸಮಾಲೋಚನೆ, ಕಾನೂನು ಅರಿವು, ನೆರವು ನೀಡಲಾಗುವುದು. ಅಂತಹ ಮಹಿಳೆಯರಿಗೆ ಆತ್ಮಸ್ಥೈರ್ಯ ನೀಡಿ ಪುನಃ ಕುಟುಂಬದೊಂದಿಗೆ ಸೇರಿಸುವ ಕಾರ್ಯವಾಗಬೇಕು. ಸಾಂತ್ವನ ಕೇಂದ್ರಗಳಲ್ಲಿ ಯಾವುದೇ ಸಮಸ್ಯೆಗಳಿದ್ದಲ್ಲಿ ಅಧಿಕಾರಿಗಳ ಗಮನಕ್ಕೆ ತಂದು ಇತ್ಯರ್ಥಪಡಿಸಿಕೊಳ್ಳುವಂತೆ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿಗಳಾದ ರಿಷಿ ಆನಂದ ಅವರು ಸಾಂತ್ವನ ಕೇಂದ್ರಗಳ ವ್ಯವಸ್ಥಾಪಕರಿಗೆ ಸೂಚಿಸಿದರು.

**ಕಟ್ಟುನಿಟ್ಟಿನ ಕ್ರಮ**

ಬಾಲ್ಯ ವಿವಾಹ ತಡೆಗಟ್ಟುವ ನಿಟ್ಟಿನಲ್ಲಿ ಶಾಲೆಗಳಲ್ಲಿ ಒಂದು ವಾರಗಳಿಂತ ಹೆಚ್ಚು ಗೈರಾದ ಮಕ್ಕಳ ಮಾಹಿತಿಗಳನ್ನು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಖುದ್ದಾಗಿ ಶಾಲೆಗಳಿಗೆ ಭೇಟಿ ನೀಡುವುದರ ಮೂಲಕ ಸಮಗ್ರ ಮಾಹಿತಿ ಪಡೆದುಕೊಳ್ಳಬೇಕು. ಬಾಲ್ಯ ವಿವಾಹ ಘಟನೆ ಕಂಡುಬಂದಲ್ಲಿ ಅವುಗಳನ್ನು ತಡೆಗಟ್ಟಲು ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಅವರು ಸೂಚಿಸಿದರು.

ಪೋಕ್ಸೋ ಹಾಗೂ ಬಾಲ್ಯ ವಿವಾಹ ತಡೆಗಟ್ಟುವ ನಿಟ್ಟಿನಲ್ಲಿ ಸಂಬಂಧಿಸಿದ ಇಲಾಖೆಗಳಿಗೆ ಎಲ್ಲಾ ರೀತಿಯ ಸಹಾಯ ಸಹಕಾರವನ್ನು ಪೊಲೀಸ್ ಇಲಾಖೆ ವತಿಯಿಂದ ನೀಡಲಾಗುವುದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ಹೇಳಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತಿಯ ಮುಖ್ಯ ಯೋಜನಾಧಿಕಾರಿ ನಿಂಗಪ್ಪ ಗೋಠೆ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಶಂಕರ ಮಾರಿಹಾಳ, ಜಿಲ್ಲಾ ಶಸ್ತ್ರಚಿಕಿತ್ಸಕ ಶಿವಾನಂದ ಮಾಸ್ತಿಹೊಳಿ, ಸೇರಿದಂತೆ ಜಿಲ್ಲಾಮಟ್ಟದ ಅಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

---

# ಕನ್ನಡದ ಬಗ್ಗೆ ಕಮಲ್ ಹಾಸನ್ ಹೇಳಿಕೆ ಖಂಡನೆ: ಪಾಲಾಮೂರ್

• ಉದಯವಾಹಿನಿ, ಚಿಂಚೋಳಿ

ಕನ್ನಡದ ಬಗ್ಗೆ ತಮಿಳು ನಟ ಕಮಲ್ ಹಾಸನ್ ನೀಡಿರುವ ವಿವಾದಾತ್ಮಕ ಹೇಳಿಕೆಯನ್ನು ನಿಕಟಪೂರ್ವ ತಾಲ್ಲೂಕಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರು, ಪ್ರಾಂಶುಪಾಲ ಮಲ್ಲಿಕಾರ್ಜುನ ಪಾಲಾಮೂರ್ ಖಂಡಿಸಿದ್ದಾರೆ.

ಪತ್ರಿಕಾ ಪ್ರಕಟನೆ ಹೊರಡಿಸಿದ ಅವರು, ಕನ್ನಡ ಭಾಷೆ ಬಗ್ಗೆ ಹಗುರವಾಗಿ ಮಾತನಾಡಿರುವ ಕಮಲ್ ಹಾಸನ್ ಅವರು, ಕ್ಷಮೆ ಕೇಳಿದರೆ ಕ್ಷಮಾ ಹಾಸನ್ ಆಗುತ್ತೀರಿ, ಇಲ್ಲದಿದ್ದರೆ 'ಆ' 'ಹಾಸನ್' ಆಗುತ್ತೀರಿ ಎಂದು ಎಚ್ಚರಿಸಿದ್ದಾರೆ.

ಕನ್ನಡ ಭಾಷೆಯ ಇತಿಹಾಸವು ಬಹಳ ಪುರಾತನವಾಗಿದ್ದು ದ್ರಾವಿಡ ಭಾಷಾ ಕುಟುಂಬಕ್ಕೆ ಸೇರಿದ ಒಂದು ಪ್ರಮುಖ ಭಾಷೆಯಾಗಿದೆ ಕ್ರಿ.ಪೂ.3–4ನೇ ಶತಮಾನದ ವೇಳೆಗೆ ಕನ್ನಡವು ಮೌಖಿಕ ಭಾಷೆಯಾಗಿ ಅಭಿವೃದ್ಧಿ ಹೊಂದಿತ್ತು ಎಂದು ಭಾಷ ತಜ್ಞರು ಅಭಿಪ್ರಾಯಪಡುತ್ತಾರೆ, 5ನೇ ಶತಮಾನದ ಕದಂಬರ ಪ್ರಸಿದ್ಧ ಹಲ್ಮಿಡಿ ಶಾಸನವು ಪ್ರಾಚೀನ ಕನ್ನಡ ಲಿಪಿಯಲ್ಲಿ ಬರೆಯಲ್ಪಟ್ಟ ಕನ್ನಡ ಭಾಷೆಯ ಅತ್ಯಂತ ಹಳೆಯ ಪುರಾವೆಯಾಗಿದೆ, ದ್ರಾವಿಡ ಭಾಷೆಗಳಲ್ಲಿ ಪ್ರಾಮುಖ್ಯವುಳ್ಳ ಭಾಷೆಯೂ ಭಾರತದ ಪುರಾತನವಾದ ಭಾಷೆಗಳಲ್ಲಿ ಒಂದೂ ಆಗಿರುವ ಕನ್ನಡ ಭಾಷೆಯನ್ನು ಅದರ ವಿವಿಧ ರೂಪಗಳಲ್ಲಿ ಸುಮಾರು 45 ದಶಲಕ್ಷ ಜನರು ಆಡು ನುಡಿಯಾಗಿ ಬಳಸುತ್ತಾಲಿದ್ದಾರೆ.



**ಸಿನಿಮಾ ನಡೆಯಲು ಕೊಡಬಾರದು**

ಕನ್ನಡ ಕರ್ನಾಟಕ ರಾಜ್ಯದ ಆಡಳಿತ ಭಾಷೆ ಜಗತ್ತಿನಲ್ಲಿ ಅತ್ಯಂತ ಹೆಚ್ಚು ಮಂದಿ ಮಾತನಾಡುವ ಭಾಷೆಯೆಂಬ ನೆಲೆಯಲ್ಲಿ 29ನೆಯ ಸ್ಥಾನ ಕನ್ನಡಕ್ಕಿದೆ 2011ರ ಜನಗಣತಿಯ ಪ್ರಕಾರ ಜಗತ್ತಿನಲ್ಲಿ 6.4 ಕೋಟಿ ಜನರು ಕನ್ನಡ ಮಾತನಾಡುತ್ತಾರೆ ಎಂದು ತಿಳಿದು ಬಂದಿದೆ. 5.5 ಕೋಟಿ ಜನರ ಮಾತೃಭಾಷೆ ಕನ್ನಡವಾಗಿದೆ ಬ್ರಾಹ್ಮಿ ಲಿಪಿ ಯಿಂದ ರೂಪುಗೊಂಡ ಕನ್ನಡ ಲಿಪಿಯನ್ನು ಉಪಯೋಗಿಸಿ ಕನ್ನಡ ಭಾಷೆಯನ್ನು ಬರೆಯಲಾಗುತ್ತದೆ, ಕನ್ನಡ ಬರಹದ ಮಾದರಿಗಳಿಗೆ ಸಾವಿರದ ಐನೂರು ವರುಷಗಳ ಚರಿತ್ರೆಯಿದೆ, ಕ್ರಿ.ಶ.ಆರನೆಯ ಶತಮಾನದ ಪಶ್ಚಿಮ ಗಂಗ ಸಾಮ್ರಾಜ್ಯದ ಕಾಲದಲ್ಲಿ ಮತ್ತು ಒಂಬತ್ತನೆಯ ಶತಮಾನದ ರಾಷ್ಟ್ರಕೂಟ ಸಾಮ್ರಾಜ್ಯದ ಕಾಲದಲ್ಲಿ ಹಳಗನ್ನಡ ಸಾಹಿತ್ಯ ಅತ್ಯಂತ ಹೆಚ್ಚಿನ ರಾಜಾಶ್ರಯ ಪಡೆಯಿತು, ಅದಲ್ಲದೆ ಸಾವಿರ ವರ್ಷಗಳ ಸಾಹಿತ್ಯ ಪರಂಪರೆ ಕನ್ನಡಕ್ಕಿದೆ, ವಿನೋಬಾ ಭಾವೆ ಕನ್ನಡ ಲಿಪಿಯನ್ನು ಲಿಪಿಗಳ ರಾಣಿಯೆಂದು ಹೊಗಳಿದ್ದಾರೆ.

ಇಂತಹ ಐತಿಹಾಸಿಕ ಕನ್ನಡ ಭಾಷೆಯನ್ನು ಮಾತನಾಡುವ ಭರದಲ್ಲಿ ಅವಮಾನಿಸಿದ ತಮಿಳು ನಟ ಕಮಲ್ ಹಾಸನ್ ನವರ ಬಿಡುಗಡೆಯಾಗುತ್ತಿರುವ ಸಿನಿಮಾವನ್ನು ತಡೆಯಬೇಕು ಹಾಗೂ ಕ್ಷಮೆ ಕೇಳುವವರೆಗೆ ಅವರ ಸಿನಿಮಾ ನಡೆಯಲು ಕೊಡಬಾರದು ಎಂದು ಒತ್ತಾಯಿಸಿದರು.

---



ಉದಯವಾಹಿನಿ ಚಿತ್ರ

## ಕಾಮಗಾರಿಗೆ ಭೂಮಿಪೂಜೆ

• ಉದಯವಾಹಿನಿ, ಹುಬ್ಬಳ್ಳಿ

ಹಳೇ ಹುಬ್ಬಳ್ಳಿ ಭಾಗದ ಹಿರೇಪೇಟ ದುರ್ಗಾದೇವಿ ದೇವಸ್ಥಾನ ಹತ್ತಿರ ಪಾಲಿಕೆ ಸದಸ್ಯರ ಅನುದಾನದಲ್ಲಿ ಒಳಚರಂಡಿ ಹಾಗೂ ಸಿ.ಸಿ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ಹು–ಧಾ ಪಾಲಿಕೆ ಉಪ ಮಹಾಪೌರರು ದುರ್ಗಮ್ಮ ಬಿಜವಾಡ ಮತ್ತು 73 ನೇ ವಾರ್ಡ ಪಾಲಿಕೆ ಸದಸ್ಯ ಶೀಲಾ ಕಾಟಕರ ಜೊತೆಗೂಡಿ ಭೂಮಿ ಪೂಜೆ ಕಾರ್ಯಕ್ರಮಯನ್ನು ನೆರವೇರಿಸಿದರು.

ಉಪ ಮಹಾಪೌರರು ಮಾತನಾಡಿ, ಹು–ಧಾ ಮಹಾನಗರ ವ್ಯಾಪ್ತಿಯ ಎಲ್ಲಾ ಪರಿಶಿಷ್ಟ ಕಾಲೋನಿಗಳ ಅಭಿವೃದ್ಧಿಯ ಕಾರ್ಯಕ್ರಮಗಳನ್ನು ರೂಪಿಸಿ, ಹಂತ ಹಂತವಾಗಿ ಅಭಿವೃದ್ಧಿ ಯೋಜನೆಗಳನ್ನು ಪೂರ್ಣಗೊಳಿಸುವ ಭರವಸೆ ನೀಡಿದರು. 73 ನೇ ವಾರ್ಡ ಪಾಲಿಕೆ ಸದಸ್ಯ ಶೀಲಾ ಕಾಟಕರರವರು ಮಾತನಾಡಿ, ಪಾಲಿಕೆ ಸದಸ್ಯರ ಅನುದಾನದಲ್ಲಿ ಒಳಚರಂಡಿ ಕಾಮಗಾರಿ ಹಾಗೂ ಪಾಲಿಕೆ ಸದಸ್ಯರ ಎಸ್ ಸಿ–ಎಸ್ ಅನುದಾನದಲ್ಲಿ ಸಿ ಸಿ ರಸ್ತೆ, ಉತ್ತಮ ಗುಣಮಟ್ಟದ ಒಳಚರಂಡಿ ವ್ಯವಸ್ಥೆ ಮತ್ತು ರಸ್ತೆ ನಿರ್ಮಾಣವಾಗಿ ಜನಸಾಮಾನ್ಯರಿಗೆ ಅನುಕೂಲವಾಗುವುದು.

> ವಾರ್ಡಿನಲ್ಲಿ ಬಾಕಿ ಉಳಿದಿರುವ ಅಭಿವೃದ್ಧಿ ಕಾರ್ಯಗಳನ್ನು ಮುಂದಿನ ದಿನಗಳಲ್ಲಿ ತ್ವರಿತ ಗತಿಯಲ್ಲಿ ಪೂರ್ಣಗೊಳಿಸಲಾಗುವುದು ಎಂದು ತಿಳಿಸಿದರು. ಮೂಲಭೂತ ಸೌಕರ್ಯ ಅಭಿವೃದ್ಧಿಯೊಂದಿಗೆ 73 ನೇ ವಾರ್ಡ ಮಾದರಿಯಾಗಿಸುವುದು ನಮ್ಮ ಗುರಿ. ಪ್ರಗತಿಯ ಪಥದಲ್ಲಿ ನಿಮ್ಮೊಂದಿಗೆ ಸದಾ ಇರುವೆ –ಶೀಲಾ ಕಾಟಕರ

---

# ಟಿಂಟ್ ಗ್ಲಾಸ್ ಅಳವಡಿಕೆ ವಿರುದ್ಧ ಕಾರ್ಯಾಚರಣೆ: 223 ಪ್ರಕರಣ ದಾಖಲು

• ಉದಯವಾಹಿನಿ, ಮಂಗಳೂರು

ಸಂಚಾರ ಉಲ್ಲಂಘನೆಗಳನ್ನು ತಡೆಗಟ್ಟಲು ಮತ್ತು ಸಾರ್ವಜನಿಕ ಸುರಕ್ಷತೆಯನ್ನು ಹೆಚ್ಚಿಸುವ ಉದ್ದೇಶದಿಂದ, ಮಂಗಳೂರು ನಗರ ಪೊಲೀಸರು ಜೂನ್ 2 ಮತ್ತು 3 ರಂದು ಮೋಟಾರು ವಾಹನ ಕಾಯ್ದೆಯನ್ನು ಉಲ್ಲಂಘಿಸುವ ಟಿಂಟ್ ಗಾಜು ಮತ್ತು ಕಪ್ಪು ಫಿಲ್ಮ್‌ಗಳನ್ನು ಹೊಂದಿರುವ ವಾಹನಗಳನ್ನು ಗುರಿಯಾಗಿಸಿಕೊಂಡು ವಿಶೇಷ ಜಂಟಿ ಕಾರ್ಯಾಚರಣೆಯನ್ನು ನಡೆಸಿದ್ದಾರೆ.

ಮಂಗಳೂರು ಕಮಿಷನರೇಟ್ ವ್ಯಾಪ್ತಿಯ ನಗರ ಸಂಚಾರ ಪೊಲೀಸರು ಮತ್ತು ಕಾನೂನು ಸುವ್ಯವಸ್ಥೆ ಘಟಕಗಳ ತಂಡಗಳು ಈ ಕಾರ್ಯಾಚರಣೆಯನ್ನು ನಡೆಸಿವೆ. ಕಪ್ಪು ಫಿಲ್ಮ್ ಅಥವಾ ಟಿಂಟ್ ಗ್ಲಾಸ್ ಬಳಸಿ ವಾಹನ ಚಲಾಯಿಸಿದ ವಾಹನಗಳ ಮಾಲೀಕರು ಮತ್ತು ಚಾಲಕರ ವಿರುದ್ಧ ಒಟ್ಟು 223 ಪ್ರಕರಣಗಳನ್ನು ದಾಖಲಿಸಲಾಗಿದೆ. ಈ ಕಾರ್ಯಾಚರಣೆಯ ಸಮಯದಲ್ಲಿ 1,11,500 ರೂ.ಗಳ ದಂಡವನ್ನು ಸಂಗ್ರಹಿಸಲಾಗಿದೆ.

ದಂಡ ವಿಧಿಸುವುದರ ಜೊತೆಗೆ, ಪೊಲೀಸರು 223 ವಾಹನಗಳ ಮತ್ತು ಕಿಟಕಿಗಳಿಂದ ಅಕ್ರಮ ಟಿಂಟ್ ಫಿಲ್ಮ್‌ಗಳು ಮತ್ತು ಸ್ಟಿಕ್ಕರ್‌ಗಳನ್ನು ತೆಗೆದುಹಾಕಿದರು ಮತ್ತು ಅಪರಾಧಿಗಳಿಗೆ ಎಚ್ಚರಿಕೆಗಳನ್ನು ನೀಡಿದರು. ಇದಲ್ಲದೆ, ಜೂನ್ 3 ರಂದು, ನಗರ ಪೊಲೀಸರು ಆಯುಕ್ತರ ಕಚೇರಿ ಮತ್ತು ಪೊಲೀಸ್ ಠಾಣೆಗಳಲ್ಲಿ ಕಮಿಷನರೇಟ್ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರು ಶೋ ರೂಂಗಳು, ಪರಿಕರಗಳ ಅಂಗಡಿಗಳು, ಗ್ಯಾರೇಜ್‌ಗಳು ಮತ್ತು ಸ್ಟಿಕ್ಕರ್ ಔಟ್ಲೆಟ್‌ಗಳ ಮಾಲೀಕರೊಂದಿಗೆ ಸಭೆಯನ್ನು ಆಯೋಜಿಸಿದರು.

---

# ಮಹಾ ಆಕ್ಷೇಪ ಅರ್ಥಹೀನ: ಶಾಸಕ ವಿಠ್ಠಲ ಕಟಕದೊಂಡ

• ಉದಯವಾಹಿನಿ ಇಂಡಿ

ಆಲಮಟ್ಟಿ ಡ್ಯಾಂ ಎತ್ತರಿಸುವ ರಾಜ್ಯ ಸರಕಾರದ ಪ್ರಯತ್ನಕ್ಕೆ ಮಹಾರಾಷ್ಟ್ರ ಸರಕಾರದ ಆಕ್ಷೇಪ ಅರ್ಥಹೀನ ಪ್ರಯತ್ನವಾಗಿದೆ ಎಂದು ಶಾಸಕ ವಿಠ್ಠಲ ಕಟಕದೊಂಡ ಹೇಳಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಮೇ 9 ರಂದು ಪತ್ರ ಬರೆದಿರುವ ಮಹಾರಾಷ್ಟ್ರದ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಶ ಅವರು ಆಲಮಟ್ಟಿ ಆಣೆಕಟ್ಟು ಎತ್ತರವನ್ನು 519 ಮೀ ನಿಂದ 524. 63 ಮೀಟರಗೆ ಹೆಚ್ಚಿಸುವುದರಿಂದ ಮಹಾರಾಷ್ಟ್ರದಲ್ಲಿ ನೆರೆ ಪರಿಸ್ಥಿತಿ ಉಂಟಾಗುತ್ತದೆ . ಸಾಂಗ್ಲಿ, ಕೋಲಾಪುರಕ್ಕೆ ತೊಂದರೆಯಾಗುತ್ತದೆ ಎಂದು ಆಕ್ಷೇಪ ವ್ಯಕ್ತಪಡಿಸಿ ಆಲಮಟ್ಟಿ ಎತ್ತರ ಕಾಮಗಾರಿ ಪ್ರಕ್ರಿಯೆ ನಿಲ್ಲಿಸುವಂತೆ ಒತ್ತಾಯಿಸಿರುವದು ರಾಜ್ಯದ ಸಮಸ್ತ ರೈತರ ಹಿತಕ್ಕೆ ಮಾರಕವಾಗಲಿದೆ ಎಂದರು.

ಈ ಯೋಜನೆ ಕಾಮಗಾರಿಯನ್ನು ಅನಗತ್ಯ ವಿಳಂಬ ಮಾಡುವದರಿಂದ ಯೋಜನೆ ವೆಚ್ಚ ಗಣನೀಯ ಏರಿಕೆಯಾಗುತ್ತಿದೆ.

ಯೋಜನೆ ಭೂಸ್ವಾಧೀನಕ್ಕೆ ಒಂದು ಲಕ್ಷ ಕೋಟಿ ರೂ ಬೇಕಾಗಿದೆ. ನಮ್ಮ ಪಾಲಿನ ನೀರು ಬಳಸಲು ಈ ಯೋಜನೆ ತ್ವರಿತಗತಿಯಲ್ಲಿ ಅನುಷ್ಠಾನವಾಗುವುದು ಮುಖ್ಯ. ಕೃಷ್ಣಾ ನ್ಯಾಯಾಧೀಕರಣ ತೀರ್ಪಿನಲ್ಲಿ ಆಲಮಟ್ಟಿ ಎತ್ತರಕ್ಕೆ ಅನುಮೋದನೆ ನೀಡಲಾಗಿದೆ. ಕರ್ನಾಟಕ ತನ್ನ ಪಾಲಿನ ನೀರನ್ನು ಬಳಸಲು ಮಹಾರಾಷ್ಟ್ರದಿಂದ ಇದುವರೆಗೂಯಾವುದೇ ಆಕ್ಷೇಪಗಳಿರಲಿಲ್ಲ.2010ಹಾಗೂ 2012 ರ ತೀರ್ಪುಗಳಿಗೂ ಮಹಾರಾಷ್ಟ್ರ ತಗಾದೆ ತೆಗೆದಿರಲಿಲ್ಲ.

ನ್ಯಾಯಾಧೀಕರಣದ ತೀರ್ಪನ್ನು ಶೀಘ್ರ ಅನುಷ್ಠಾನಗೊಳಿಸುವಂತೆ ನ್ಯಾಯಾಲಯಕ್ಕೆ ಮಹಾರಾಷ್ಟ್ರ ಸರಕಾರವೇ ಮಧ್ಯಾಂತರ ಅರ್ಜಿ ಸಲ್ಲಿಸಿತ್ತು. ಆದರೆ ಈಗ ಇದ್ದಕ್ಕಿದಂತೆ ಆಲಮಟ್ಟಿ ಎತ್ತರಕ್ಕೆ ಆಕ್ಷೇಪ ವ್ಯಕ್ತಪಡಿಸಿರುವದು ಯೋಜನೆಯ ದಿಕ್ಕು ತಪ್ಪಿಸುವ ವಿಚಾರವಾಗಿದೆ ಎಂದು ಶಾಸಕ ಕಟಕದೊಂಡ ಹೇಳಿದರು.



> ಆಲಮಟ್ಟಿ ನೀರಾವರಿ ಯೋಜನೆಯನ್ನು ಕೇಂದ್ರ ಸರಕಾರ ರಾಷ್ಟ್ರೀಯ ಯೋಜನೆಯನ್ನಾಗಿ ಘೋಷಣೆ ಮಾಡುವುದಕ್ಕೆ ಮುಂದಾಗಬೇಕು. ಪ್ರಧಾನಿ ನರೇಂದ್ರ ಮೋದಿ ಅವರು ಕರ್ನಾಟಕ, ಮಹಾರಾಷ್ಟ್ರ, ಆಂಧ್ರ ತೆಲಂಗಾಣ ಮುಖ್ಯಮಂತ್ರಿಗಳ ಸಭೆ ಕರೆದು ಪರಿಹಾರಕ್ಕೆ ಮುಂದಾಗಬೇಕು. ಕೃಷ್ಣಾ ನ್ಯಾಯಾಧೀಕರಣ ತೀರ್ಪಿನಲ್ಲಿ ನೀಡಲಾದ ಕಾನೂನಿನ ಅಂಶಗಳನ್ನು ಯಥಾವತ್ತಾಗಿ ಪಾಲಿಸಲು ಕೇಂದ್ರ ಸರಕಾರ ಬದ್ಧತೆ ತೋರಬೇಕು –ವಿಠ್ಠಲ ಕಟಕದೊಂಡ, ಶಾಸಕ

---

# ಎಪಿಎಂಸಿ ವಿಷಯದಲ್ಲಿ ಜಿಲ್ಲಾಡಳಿತದ ಕುಂಭಕರ್ಣ ನಿದ್ದೆ

• ಉದಯವಾಹಿನಿ ಕಲಬುರಗಿ

ಎಪಿಎಂಸಿಯಲ್ಲಿನ ಅನಧಿಕೃತ ಅಂಗಡಿಗಳನ್ನು ತೆರವುಗೊಳಿಸಬೇಕು ಹಾಗೂ ನೋಟಿಸ್ ನೀಡಿಯೂ ಕೈಕಟ್ಟಿ ಕೂಳಿತ ಎಪಿಎಂಸಿ ಅಧಿಕಾರಿಗಳನ್ನ ಅಮಾನತು ಗೊಳಿಸಬೇಕೆಂದು ಅಗ್ರಹಿಸಿ ಎಂ.ಎಸ್.ಪಾಟೀಲ ನರಿಬೋಳ ನೇತೃತ್ವದಲ್ಲಿ ನಡೆಯುತ್ತಿರುವ ಅನಿರ್ಧಿಷ್ಠಾವಧಿ ಧರಣಿ 14ನೇ ದಿನ ಮುಂದುವರೆದಿದೆ. ಅನಿರ್ಧಿಷ್ಠವಾದಿ ಧರಣಿಗೆ ಬೆಂಬಲಿಸಿ ಹೋರಾಟದಲ್ಲಿ ಪಾಲ್ಗೊಂಡ ಎಪಿಎಂಸಿ ಮಾಜಿ ಅಧ್ಯಕ್ಷ ಚಂದ್ರಶೇಖರ ಹರಸೂರ, ಡಿಸಿಸಿ ನಿರ್ದೇಶಕ ಗೌತಮ ವೈಜನಾಥ ಪಾಟೀಲ, ಬಿಜೆಪಿ ರಾಜ್ಯ ಯುವ ಮುಖಂಡ ಮುಕುಂದ ದೇಶಪಾಂಡೆ ಮಾತನಾಡಿ, ಇದು ನ್ಯಾಯಯುತವಾದ ಹೋರಾಟವಾಗಿದ್ದು ಇದಕ್ಕೆ ನಮ್ಮ ಬೆಂಬಲ ಸದಾ ಇರುತ್ತದೆ ಎಂದರು.

ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ ಕೃಷಿಗೆ ಸಂಬಂಧಿಸಿದಂತ ರೈತರು ಬೆಳೆದ ದಾನ್ಯಗಳ ವ್ಯಾಪಾರ ವಹಿವಾಟುಗಳು ನಡೆಯಬೇಕು ಇಲ್ಲಿ ಕಿರಾಣಿ ಅಂಗಡಿಗಳು ತುಂಬಿರುವುದರಿಂದ ಅಡತಿ ಮಾಡುವವರಿಗೆ ದುಖಾನ ಸಿಗದೆ ಒಂದರಲ್ಲೆ ಎರಡು ಮೂರು ಅಡತಿಗಳು ಆರಂಭಿಸಿದ್ದಾರೆ ಅಲ್ಲದೆ ಇಲ್ಲಿ ಗಾಂಜಾ ಸಿಕ್ಕಿರುವುದು ಮಾರುಕಟ್ಟೆಗೆ ಒಳ್ಳೆಯ ಬೆಳವಣಿಗೆಯಲ್ಲಾ ಕೂಡಲೆ ಅನಧಿಕೃತ ಅಂಗಡಿಗಳನ್ನು ಖಾಲಿ ಮಾಡಿಸಿ ಕೃಷಿ ವ್ಯಾಪಾರಿಗಳಿಗೆ ನೀಡಬೇಕು ಎಂದು ಹೇಳಿದರು. ನೋಟಿಸ್ ನೀಡಿ ಒಂದುವರೆ ವರ್ಷವಾದರು ಕ್ರಮ ಕೈಗೋಳ್ಳದ ಅಧಿಕಾರಿಗಳ ನಡೆಯನ್ನು ಖಂಡಿಸಿ ಶೀಘ್ರ ಕೃಷಿ ಮಾರುಕಟ್ಟೆ ಸಚಿವರ ಬಳಿ ನಿಯೋಗ ತೆರಳಿ ಇಲ್ಲಿಯ ಹಗರಣದ ಸಂಪೂರ್ಣ ಮಾಹಿತಿ ನೀಡಿ ಕ್ರಮಕ್ಕೆ ಆಗ್ರಹಿಸುತ್ತೆವೆ ಎಂದರು.



ಉದಯವಾಹಿನಿ ಚಿತ್ರ

14 ದಿನಗಳಿಂದ ಅನಿರ್ದಿಷ್ಠಾವದಿ ದರಣಿ ನಡೆಯುತ್ತಿದ್ದರೂ ಈಕಡೆ ತಲೆ ಹಾಕದ ಜಿಲ್ಲಾಡಳಿತ ಕುಂಭಕರ್ಣ ನಿದ್ದೆಯಲ್ಲಿದೆ ಎಂದರು. ರಾಜೇಂದ್ರ ಕರೆಕಲ್ ಚಿಂತಕರಾದ ಅಶೋಕ ಗೂರುಜಿ ಹೋರಾಟಗಾರ ರಾಜು ಕುಳಗೆರಿ, ಭಾರತಿಯ ಕಿಸಾನ್ ಮೋರ್ಚಾ ಜಿಲ್ಲಾಧ್ಯಕ್ಕರಾದ ಓಂಪ್ರಕಾಶ ಹೆಬ್ಬಾಳ, ಎಂ ಎಸ್ ಪಾಟೀಲ್, ಸಿರ್ಜೆ ಇತರರಿದ್ದರು.

---

## ಜಮೀನಿಗೆ ಕಾಗದಪತ್ರ ಮಾಡಿಕೊಡಲು 4,500 ಲಂಚ: ಭೂಮಾಪಕ ಬಂಧನ

• ಉದಯವಾಹಿನಿ ಖಾನಾಪುರ

ಜಮೀನಿಗೆ ಕಾಗದಪತ್ರ ಮಾಡಿಕೊಡಲು 4,500 ಲಂಚ ಪಡೆಯುತ್ತಿದ್ದ ಆರೋಪದ ಮೇಲೆ ಖಾನಾಪುರದ ಭೂ ದಾಖಲೆಗಳ ಸಹಾಯಕ ನಿರ್ದೇಶಕರ ಕಚೇರಿಯ ತಾಲ್ಲೂಕು ಭೂಮಾಪಕ ವಿನೋದ ಸಂಬನ್ನಿ ಎಂಬವರನ್ನು ಲೋಕಾಯುಕ್ತ ಪೊಲೀಸರು ಬಂಧಿಸಿದ್ದಾರೆ.

'ಖಾನಾಪುರ ತಾಲ್ಲೂಕಿನ ಮಾನಸಾಪುರ ಗ್ರಾಮದ ಸದಾಶಿವ ಕಾಂಬಳೆ ಅವರು ತಮ್ಮ ಜಮೀನಿಗೆ ಕಾಗದಪತ್ರ ಮಾಡಿಕೊಡಲು ಕೋರಿದಾಗ, ವಿನೋದ ಸಂಬನ್ನಿ ಲಂಚ ಕೇಳಿದ್ದರು' ಎಂದು ಲೋಕಾಯುಕ್ತ ಪೊಲೀಸರು ತಿಳಿಸಿದ್ದಾರೆ. ಪೊಲೀಸ್ ಅಧೀಕ್ಷಕ ಹನುಮಂತರಾಯ ಮಾರ್ಗದರ್ಶನದಲ್ಲಿ ಡಿಎಸ್‌ಪಿ ಭರತ ಎಸ್.ಆರ್. ಇನ್‌ಸ್ಪೆಕ್ಟರ್‌ಗಳಾದ ಆರ್.ಎಲ್.ಧರ್ಮಟ್ಟಿ, ಸಂಗಮನಾಥ ಹೊಸಮನಿ ಮತ್ತು ತಂಡ ಕಾರ್ಯಾಚರಣೆ ನಡೆಸಿತು.

---

## ಕಪ್ ಗೆದ್ದ ಆರ್‌ಸಿಬಿ ವಿದ್ಯಾರ್ಥಿಗಳಿಗೆ ಹೋಳಿಗೆ ಊಟ

• ಉದಯವಾಹಿನಿ ಹಾವೇರಿ

ಐಪಿಎಲ್ ಟಿ–20 ಕ್ರಿಕೆಟ್ ಪಂದ್ಯಾವಳಿಯಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಈ ಬಾರಿ ಚಾಂಪಿಯನ್ ಆಗಿ ಹೊರಹೊಮ್ಮಿದ್ದು. ನಗರದ ಭಗತ್ ಸಿಂಗ್ ಪಿಯು ಕಾಲೇಜಿನಲ್ಲಿ ಗೆಲುವಿನ ಸಂಭ್ರಮ ಆಚರಿಸಲಾಯಿತು. ಕಾಲೇಜಿನಲ್ಲಿ ಕೇಕ್ ಕತ್ತರಿಸಿದ ವಿದ್ಯಾರ್ಥಿಗಳು, ಆರ್‌ಸಿಬಿ ಪರ ಜೈಕಾರ ಕೂಗಿದರು. ನಂತರ, ಕಾಲೇಜು ವತಿಯಿಂದ ಎಲ್ಲಾ ವಿದ್ಯಾರ್ಥಿಗಳಿಗೆ ಹೋಳಿಗೆ ಹಾಗೂ ಶೀಕರಣೆ ಊಟ ಮಾಡಿಸಲಾಯಿತು. 18 ವರ್ಷಗಳ ನಂತರ ಆರ್‌ಸಿಬಿ ಕಪ್ ಗೆದ್ದಿದ್ದು, ಅದರ ಪ್ರಯುಕ್ತ ವಿದ್ಯಾರ್ಥಿಗಳು ಸಂಭ್ರಮಾಚರಣೆ ಮಾಡಿದರು.

---

# ಶಾಲೆಗಳಿಗೆ ಅಧಿಕಾರಿಗಳ ಮಿಂಚಿನ ಸಂಚಾರ

• ಉದಯವಾಹಿನಿ ಕಮಲನಗರ

ತಾಲ್ಲೂಕಿನ ವಿವಿಧ ಶಾಲೆಗಳಿಗೆ ಮಂಗಳವಾರ ಭೇಟಿ ನೀಡಿದ ಬಿಆರ್‌ಸಿ ಪ್ರಕಾಶ ರಾಠೋಡ ನೇತೃತ್ವದ ಅಧಿಕಾರಿಗಳು, ಶಾಲೆಗಳಲ್ಲಿನ ಮೂಲಸೌಕರ್ಯ ಹಾಗೂ ಮಕ್ಕಳ ದಾಖಲಾತಿ ಬಗ್ಗೆ ಪರಿಶೀಲನೆ ನಡೆಸಿದರು.

ನಂತರ ಮಾತನಾಡಿದ ಬಿಆರ್‌ಸಿ ಪ್ರಕಾಶ ರಾಠೋಡ, ಸರ್ಕಾರಿ ಶಾಲೆಗಳಲ್ಲಿ ಆರಂಭಿಕ ಹಂತದಿಂದಲೇ ಶೈಕ್ಷಣಿಕ ಚಟುವಟಿಕೆಗಳನ್ನು ಉತ್ತಮಗೊಳಿಸಲು ಶಿಕ್ಷಣ ಇಲಾಖೆ ತೀರ್ಮಾನಿಸಿದೆ. ಈ ನಿಟ್ಟಿನಲ್ಲಿ ಮಿಂಚಿನ ಸಂಚಾರ ಹಮ್ಮಿಕೊಂಡು ಶಾಲೆಯ ಸ್ಥಿತಿಗತಿಗಳ ಬಗ್ಗೆ ಪರಿಶೀಲಿಸಲಾಗುತ್ತಿದೆ ಎಂದು ತಿಳಿಸಿದರು.

ಮದನೂರ, ಖತಗಾಂವ, ಡೋಣಗಾಂವ(ಎಂ), ಬೆಳಕೋಣಿ (ಭೋ), ಕೋಟಗ್ಯಾಳ ಶಾಲೆಗಳಿಗೆ ಭೇಟಿ ನೀಡಿ, ಶಿಕ್ಷಕರ ಬೋಧನೆ ಮಾಡುವ ಪದ್ಧತಿ, ಪಾಠ ಟಿಪ್ಪಣಿ, ವಾರ್ಷಿಕ ದಾಖಲೆ, ವಿದ್ಯಾರ್ಥಿಗಳ ದಾಖಲಾತಿ ಮತ್ತು ಹಾಜರಾತಿ ಹಾಗೂ ಸೇತುಬಂಧ ಕಾರ್ಯಕ್ರಮಗಳ ಬಗ್ಗೆ ಶಿಕ್ಷಕರಿಗೆ ಮಾರ್ಗದರ್ಶನ ನೀಡಲಾಯಿತು.

ಸಿಆರ್‌ಸಿಗಳಾದ ರೋಹಿದಾಸ ಮೇತ್ರೆ, ವೆಂಕಟರಾವ ನಾಗಲಗಿದ್ದೆ, ಶಿಕ್ಷಕರಾದ ಗಣಪತರಾವ ದೇವಕತ್ತೆ, ಗೋವಿಂದರಾವ ಮಸೋಟೆ, ಸುಧಾಕರ ಬಾಬರೆ, ಮಾರುತಿ ರೇಡ್ಡಿ, ದಿಲೀಪ ವಾನಖೇಡೆ, ಸರಸ್ವತಿ ಡೊಂಗರೆ, ಸುಭಾಷ ಹಾಗೂ ಇನ್ನಿತರರು ಇದ್ದರು.



ಉದಯವಾಹಿನಿ ಚಿತ್ರ

---

## ರೈತ ಸಂಪರ್ಕ ಕೇಂದ್ರದಲ್ಲಿ ಕಳವು

• ಉದಯವಾಹಿನಿ ಅರಕಲಗೂಡು

ತಾಲ್ಲೂಕಿನ ಮಲ್ಲಿಪಟ್ಟಣ ರೈತ ಸಂಪರ್ಕ ಕೇಂದ್ರದ ಕಿಟಕಿ ಸರಳು ಮುರಿದು 1.5 ಲಕ್ಷ ಬೆಲೆಬಾಳುವ ಬಿತ್ತನೆ ಬೀಜ ಮತ್ತು ಸಸ್ಯ ಸಂರಕ್ಷಣಾ ಔಷಧಿಗಳನ್ನು ಕಳವು ಮಾಡಿರುವ ಘಟನೆ ಮಂಗಳವಾರ ನಡೆದಿದೆ.

ಬೆಳಿಗ್ಗೆ ಸಿಬ್ಬಂದಿ ಕಚೇರಿ ಬಾಗಿಲು ತೆರೆದು ನೋಡಿದ ವೇಳೆ ಕಳವು ನಡೆದಿರುವುದು ಗೊತ್ತಾಗಿದೆ. 148 ಕೆ.ಜಿ. ಬಿತ್ತನೆ ಮುಸುಕಿನ ಜೋಳ, 68 ಕೆ.ಜಿ. ವಿವಿದ ಸಸ್ಯಸಂರಕ್ಷಣಾ ಔಷಧಿಗಳನ್ನು ಕಳವು ಮಾಡಲಾಗಿದೆ. ಹಾರೆ, ಗುದ್ದಲಿ ಮುಂತಾದ ಕೃಷಿ ಪರಿಕರಗಳನ್ನು ಕಚೇರಿ ಹೊರಗೆ ಎಸೆದು ದಾಂದಲೆ ನೆಡಿಸಿದ್ದಾರೆ. ಪೋಲಿಸರಿಗೆ ದೂರು ನೀಡಲಾಗಿದೆ. ಸಿಸಿಟಿವಿ ಕ್ಯಾಮೆರಾ ಅಳವಡಿಸುವ ಕುರಿತು ಮೇಲಾಧಿಕಾರಿಗಳ ಗಮನಕ್ಕೆ ತರಲಾಗುವುದು. ಎಂದು ಸಹಾಯಕ ಕೃಷಿ ನಿರ್ದೇಶಕಿ ಕೆ.ಜಿ.ಕವಿತಾ ತಿಳಿಸಿದ್ದಾರೆ.



ಉದಯವಾಹಿನಿ ಚಿತ್ರ

---

● ಹಿಂದೂಗಳ ವಿರುದ್ಧದ ದಮನಕಾರಿ ಕ್ರಮಗಳಿಗೆ ಕುಖ್ಯಾತನಾದ ಔರಂಗಜೇಬನಿಗಿಂತಲೂ ಕಮ್ಮಿ ಇಲ್ಲದಂತೆ ಸರ್ಕಾರ ವರ್ತಿಸುತ್ತಿದೆ

# ಸಿದ್ದರಾಮಯ್ಯ ಸರ್ಕಾರದಲ್ಲಿ ಕರಾವಳಿಯ ಹಿಂದೂಗಳನ್ನು ಗುರಿಪಡಿಸಲಾಗಿದೆ: ಸಂಸದ ಕೋಟ

• ಉದಯವಾಹಿನಿ ಉಡುಪಿ

ಸಿಎಂ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಕರಾವಳಿಯಲ್ಲಿ ಹಿಂದೂಗಳನ್ನು ಉದ್ದೇಶಪೂರ್ವಕವಾಗಿ ಗುರಿಪಡಿಸುತ್ತಿದೆ ಎಂದು ಬಿಜೆಪಿ ಸಂಸದ ಕೋಟ ಶ್ರೀನಿವಾಸ ಪೂಜಾರಿ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಕಡಿಯಾಳಿಯಲ್ಲಿರುವ ಬಿಜೆಪಿ ಜಿಲ್ಲಾ ಕಚೇರಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ''ಕರಾವಳಿಯಲ್ಲಿ ಅನ್ಯಾಯದ ಮತ್ತು ಅನಿರೀಕ್ಷಿತ ಘಟನೆಗಳು ನಡೆಯುತ್ತಿವೆ. ಇದಕ್ಕೆ ಸಿದ್ದರಾಮಯ್ಯ ನೇತೃತ್ವದ ಸರ್ಕಾರವೇ ನೇರ ಹೊಣೆ. ಹಿಂದೂಗಳನ್ನು ಪ್ರತ್ಯೇಕವಾಗಿ ಗುರಿಪಡಿಸಿ ದಮನ ಮಾಡಲಾಗುತ್ತಿದೆ ಎಂಬುದು ಸ್ಪಷ್ಟವಾಗಿದೆ. ಇತಿಹಾಸದಲ್ಲಿ ಹಿಂದೂಗಳ ವಿರುದ್ಧದ ದಮನಕಾರಿ ಕ್ರಮಗಳಿಗೆ ಕುಖ್ಯಾತನಾದ ಔರಂಗಜೇಬನಿಗಿಂತಲೂ ಕಮ್ಮಿ ಇಲ್ಲದಂತೆ ಸರ್ಕಾರ ವರ್ತಿಸುತ್ತಿದೆ ಎಂದು ಆರೋಪಿಸಿದರು.

''ಕುಕ್ಕರ್ ಬಾಂಬ್ ಘಟನೆಗೆ ಯಾವುದೇ ಕಠಿಣ ಕ್ರಮ ಕೈಗೊಳ್ಳಲಿಲ್ಲ. ವಿಧಾನಸಭೆಯಲ್ಲಿ 'ಪಾಕಿಸ್ತಾನ್ ಜಿಂದಾಬಾದ್ ಎಂಬ ಘೋಷಣೆಗಳು ಕೇಳಿ ಬಂದಾಗಲೂ ಸರ್ಕಾರದ ಕಡೆಯಿಂದ ಯಾವುದೇ ಆಕ್ರೋಶ ವ್ಯಕ್ತವಾಗಲಿಲ್ಲ.

ಆದರೆ, ಕಲ್ಲಡ್ಕ ಪ್ರಭಾಕರ ಭಟ್ ಅವರು ಸುಹಾಸ್ ಶೆಟ್ಟಿಗೆ ನ್ಯಾಯ ಕೋರಿ, ಎನ್‌ಐಎ ತನಿಖೆಗೆ ಒತ್ತಾಯಿಸಿ ಭಾಷಣ ಮಾಡಿದ ತಕ್ಷಣ ಅವರ ವಿರುದ್ಧ ಎಫ್‌ಐಆರ್ ದಾಖಲಿಸಲಾಯಿತು. ಕೆಲವು ಕಾರ್ಯಕರ್ತರನ್ನು ಹೊರಹಾಕಲಾಗಿದೆ ಮತ್ತು ಅವರ ವಿರುದ್ಧ ಪ್ರಕರಣಗಳನ್ನು ದಾಖಲಿಸಲಾಗಿದೆ. ಇದು ಯಾವ ರೀತಿಯ ನ್ಯಾಯ?'' ಎಂದು ಪ್ರಶ್ನಿಸಿದರು.

''ಹಿಂದೂ ಕಾರ್ಯಕರ್ತರನ್ನು ಮಾತ್ರ ಏಕೆ ಬಂಧಿಸಲಾಗುತ್ತಿದೆ? ಈ ದೇಶದಲ್ಲಿ ವಾಕ್ ಸ್ವಾತಂತ್ರ್ಯ, ಅಭಿವ್ಯಕ್ತಿ ಸ್ವಾತಂತ್ರ್ಯ ಉಳಿದಿಲ್ಲವೇ? ಈ ಪ್ರಜಾಸತ್ತಾತ್ಮಕ ಸಂವಿಧಾನದಲ್ಲಿ, ನಾವು ಈಗ ಹಿಂದೂ ಧರ್ಮದ ಮೇಲೆ ನೇರ ದಾಳಿಯನ್ನು ನೋಡುತ್ತಿದ್ದೇವೆ. ಈ ಹಿಂದೂಗಳ ಮೇಲಿನ ದಾಳಿಗಳನ್ನು ತಕ್ಷಣವೇ ನಿಲ್ಲಿಸಲು ಗೃಹ ಸಚಿವ ಪರಮೇಶ್ವರ ಮತ್ತು ಸಂಬಂಧಿತ ಸಚಿವರಿಗೆ ನಾನು ವಿನಂತಿಸುತ್ತೇನೆ.

ಹಿಂದೂಗಳ ವಿರುದ್ಧದ ಈ ಏಕಪಕ್ಷೀಯ ಕ್ರಮವನ್ನು ನಿಲ್ಲಿಸುವಂತೆ ನಾನು ಸಿದ್ದರಾಮಯ್ಯ ಅವರನ್ನು ಒತ್ತಾಯಿಸುತ್ತೇನೆ. ಈ ಕ್ರಮಗಳು ಬಿಜೆಪಿಯಿಂದ ವ್ಯಾಪಕ ಪ್ರತಿಭಟನೆಗಳಿಗೆ ಮಾತ್ರ ಕಾರಣವಾಗುತ್ತವೆ ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಬಿಜೆಪಿ ನಾಯಕರಾದ ಶ್ರೀನಿಧಿ ಹೆಗ್ಡೆ, ಗಿರೀಶ್ ಅಂಚನ್, ಶಿವಕುಮಾರ್ ಅಂಬಲಪಾಡಿ, ದಿನೇಶ್ ಅಮಿನ್ ಉಪಸ್ಥಿತರಿದ್ದರು.



ಉದಯವಾಹಿನಿ ಚಿತ್ರ

**ಪೂಜಾರಿ ತೀವ್ರ ವಾಗ್ದಾಳಿ**

> ಮಂಗಳೂರಿನಲ್ಲಿ ನಡೆದ ಪೊಲೀಸ್ ದಾಳಿ ವೇಳೆ ಜಿಪಿಎಸ್ ಚಿತ್ರಗಳನ್ನು ತೆಗೆಯಲಾಗಿದ್ದು, ಪ್ರಶ್ನಿಸಿದಾಗ, ಉನ್ನತ ಅಧಿಕಾರಿಗಳ ಆದೇಶದ ಮೇರೆಗೆ ಎಂದು ಪೊಲೀಸರು ಹೇಳಿದ್ದಾರೆ ಎನ್ನಲಾಗಿದೆ. ಇದು ನಮಗೆ ಬೇಕಾದ ಆಡಳಿತವೇ ಹಿಂದೂ ಕಾರ್ಯಕರ್ತರು ಮತ್ತು ಸಾಮಾನ್ಯ ಜನರನ್ನು ಗುರಿಯಾಗಿಸಲು ಸರ್ಕಾರ ಪೊಲೀಸ್ ಪಡೆಗಳನ್ನು ದುರುಪಯೋಗಪಡಿಸಿಕೊಳ್ಳುತ್ತಿದೆ. ಪೊಲೀಸರು ರಾಮಾಯಣ ಮತ್ತು ಮಹಾಭಾರತದ ಬಗ್ಗೆ ಜನರನ್ನು ಪ್ರಶ್ನಿಸುತ್ತಿದ್ದಾರೆ. ಹಿಂದಿನ ಘಟನೆಗಳಲ್ಲಿ, ಅವರು ಎಂದಿಗೂ ಇತರರ ಪವಿತ್ರ ಗ್ರಂಥಗಳ ಬಗ್ಗೆ ಪ್ರಶ್ನಿಸುವ ಧೈರ್ಯ ಮಾಡಲಿಲ್ಲ
> –ಕೋಟ ಶ್ರೀನಿವಾಸ ಪೂಜಾರಿ, ಬಿಜೆಪಿ ಸಂಸದ

**ಅಧಿಕಾರದ ದುರುಪಯೋಗ ನಿಲ್ಲಿಸಬೇಕು**

ಉಡುಪಿಯಲ್ಲಿ ಇತ್ತೀಚಿನ ಘಟನೆಯನ್ನು ಉಲ್ಲೇಖಿಸಿ ಮಾತನಾಡಿದ ಅವರು, ''ಒಬ್ಬ ವ್ಯಕ್ತಿ ಸಂದೇಶವನ್ನು ಹಂಚಿಕೊಂಡಿದ್ದಕ್ಕಾಗಿ ಬಂಧನಕ್ಕೊಳಗಾಗಿದ್ದಾರೆ. ಇದು ಸರ್ಕಾರವು ಪೊಲೀಸ್ ಇಲಾಖೆಯ ಮೇಲೆ ಅಪಾರ ಒತ್ತಡ ಹೇರುತ್ತಿದೆ ಎಂಬುದನ್ನು ಸ್ಪಷ್ಟವಾಗಿ ತೋರಿಸುತ್ತದೆ. ಇಂತಹ ಆಕ್ರಮಣಕಾರಿ ವರ್ತನೆ ಮತ್ತು ಅಧಿಕಾರದ ದುರುಪಯೋಗವನ್ನು ನಿಲ್ಲಿಸಬೇಕು. ಹಿಂದೂಗಳಾಗಲಿ ಅಥವಾ ಮುಸ್ಲಿಮರಾಗಲಿ, ಯಾವುದೇ ಸಮುದಾಯಕ್ಕೆ ಅನ್ಯಾಯವಾಗಬಾರದು. ಆದರೆ ಇಂದು ನಾವು ನೋಡುತ್ತಿರುವುದು ಹಿಂದೂಗಳನ್ನು ಸ್ಪಷ್ಟವಾಗಿ ಗುರಿಪಡಿಸುವ ಕ್ರಮಗಳ ಸರಣಿಯನ್ನು. ಆದರೆ ಇದನ್ನು ಸಹಿಸಲಾಗುವುದಿಲ್ಲ. ಇದು ಮುಂದುವರಿದರೆ ಪಕ್ಷದಿಂದ ಬಲವಾದ ವಿರೋಧ ಮತ್ತು ಪ್ರತಿಭಟನೆಗಳು ನಡೆಯುತ್ತವೆ'' ಎಂದರು.

## ಭಾರತದ ನಿಯೋಗ ವಾಪಸ್ ಕಳುಹಿಸುವಂತೆ ಪಾಕಿಸ್ತಾನ ಹಾಕಿದ ಒತ್ತಡಕ್ಕೆ ಬಗ್ಗದ ಮಲೇಷ್ಯಾ

# ಜಾಗತಿಕ ಮಟ್ಟದಲ್ಲಿ ಭಾರೀ ಮುಖಭಂಗ ಅನುಭವಿಸಿದ ಪಾಕಿಸ್ತಾನ

**ಕ್ವಾಲಾಲಂಪುರ:** ಇಸ್ಲಾಮಿಕ್ ಒಗ್ಗಟ್ಟನ್ನು ಉಲ್ಲೇಖಿಸಿ ಭಾರತೀಯ ನಿಯೋಗದ ಮಲೇಷ್ಯಾ ಭೇಟಿಯನ್ನು ಹಳಿತಪ್ಪಿಸಲು ಪ್ರಯತ್ನಿಸಿದ ಪಾಕಿಸ್ತಾನಕ್ಕೆ ಭಾರೀ ಮುಖಭಂಗವಾಗಿದೆ ಎಂಬ ಸಂಗತಿ ಬೆಳಕಿಗೆ ಬಂದಿದೆ.

ಭಯೋತ್ಪಾದನೆಗೆ ಪಾಕಿಸ್ತಾನದ ಬೆಂಬಲವನ್ನು ಜಗತ್ತಿಗೆ ಮನವರಿಕೆ ಮಾಡಿಕೊಡುವ ನಿಟ್ಟಿನಲ್ಲಿ, ವಿವಿಧ ದೇಶಗಳಿಗೆ ತೆರಳಿರುವ ಏಳು ಭಾರತೀಯ ಸಂಸದೀಯ ನಿಯೋಗಗಳು ಸ್ವದೇಶಕ್ಕೆ ಮರಳುತ್ತಿವೆ. ಈ ಪೈಕಿ ಜೆಡಿಯು ಸಂಸದ ಸಂಜಯ್ ಝಾ ನೇತೃತ್ವದ ಸಂಸದೀಯ ನಿಯೋಗ ಮಲೇಷ್ಯಾ, ಇಂಡೋನೇಷ್ಯಾ, ದಕ್ಷಿಣ ಕೊರಿಯಾ, ಜಪಾನ್ ಮತ್ತು ಸಿಂಗಪುರ ದೇಶಗಳಿಗೆ ತೆರಳಿತ್ತು. ಇದೀಗ ಸಂಜಯ್ ಝಾ ನೇತೃತ್ವದ ನಿಯೋಗದ ಮಲೇಷ್ಯಾ ಭೇಟಿ ಸಂದರ್ಭದಲ್ಲಿ ಪಾಕಿಸ್ತಾನ ನಡೆಸಿದ್ದ ಹುನ್ನಾರ ಬಯಲುಗೊಂಡಿದೆ. ಭಾರತದ ಸರ್ವಪಕ್ಷ ಸಂಸದೀಯ ನಿಯೋಗದ ವಾದವನ್ನು ಆಲಿಸದಂತೆ ಪಾಕಿಸ್ತಾನವು ಮಲೇಷ್ಯಾಗೆ ಮನವಿ ಮಾಡಿತ್ತು. ಇದಕ್ಕಾಗಿ ಇಸ್ಲಾಮಿಕ್ ಒಗ್ಗಟ್ಟಿನ ದಾಳ ಉರುಳಿಸಿದ್ದ ಪಾಕಿಸ್ತಾನ, ಮಲೇಷ್ಯಾದ ನಕಾರಾತ್ಮಕ ಪ್ರತಿಕ್ರಿಯೆಯಿಂದ ಭಾರೀ ಮುಖಭಂಗ ಅನುಭವಿಸಿತು ಎಂಬ ಸಂಗತಿ ಬೆಳಕಿಗೆ ಬಂದಿದೆ. ಭಾರತೀಯ ನಿಯೋಗದ ಕಾರ್ಯಕ್ರಮಗಳನ್ನು ರದ್ದುಗೊಳಿಸುವಂತೆ, ಪಾಕಿಸ್ತಾನದ ರಾಯಭಾರ ಕಚೇರಿಯು ಮಲೇಷ್ಯಾದ ಅಧಿಕಾರಿಗಳನ್ನು ಒತ್ತಾಯಿಸಿತ್ತು. ಆದರೆ ಮಲೇಷ್ಯಾ ಸರ್ಕಾರ ಪಾಕಿಸ್ತಾನದ ಮನವಿಯನ್ನು ತಳ್ಳಿಹಾಕಿದ್ದಲ್ಲದೇ, ಭಾರತದ ಸಂಸದೀಯ ನಿಯೋಗದ ನಿಗದಿತ ಕಾರ್ಯ ಕ್ರಮಗಳಿಗೆ ಸಕಾರಾತ್ಮಕವಾಗಿ ಸ್ಪಂದಿಸಿದೆ. ಮಲೇಷ್ಯಾದಲ್ಲಿ ಸಂಜಯ್ ಝಾ ನೇತೃತ್ವದ ನಿಯೋಗದ ಎಲ್ಲಾ ಕಾರ್ಯಕ್ರಮಗಳು ಪೂರ್ವ ನಿರ್ಧಾರಿತ ಯೋಜನೆಯಂತೆ ನಡೆದಿವೆ. ಭಾರತೀಯ ನಿಯೋಗದ ಪ್ರಯತ್ನಗಳನ್ನು ವಿಫಲಗೊಳಿಸಲು ಪ್ರಯತ್ನಿಸಿದ ಪಾಕಿಸ್ತಾನ, ಮಲೇಷ್ಯಾದಲ್ಲಿ ದೊಡ್ಡ ರಾಜತಾಂತ್ರಿಕ ಹಿನ್ನಡೆಯನ್ನು ಅನುಭವಿಸಿದೆ. ಭಾರತೀಯ ನಿಯೋಗದ ನೇತೃತ್ವವನ್ನು ಜೆಡಿಯು ಸಂಸದ ಸಂಜಯ್ ಝಾ ವಹಿಸಿದ್ದರು.

ಈ ನಿಯೋಗದಲ್ಲಿ ಬಿಜೆಪಿ ಸಂಸದರಾದ ಅಪರಾಜಿತಾ ಸಾರಂಗಿ, ಬ್ರಿಜ್ ಲಾಲ್, ಪ್ರದಾನ್ ಬರುವಾ, ಹೇಮಾಂಗ್ ಜೋಶಿ, ತೃಣಮೂಲ ಪಕ್ಷದ ಅಭಿಷೇಕ್ ಬ್ಯಾನರ್ಜಿ, ಸಿಪಿಎಂನ ಜಾನ್ ಬ್ರಿಟ್ಟಾಸ್, ಕಾಂಗ್ರೆಸ್‌ನ ಸಲ್ಮಾನ್ ಖುರ್ಷಿದ್, ಮಾಜಿ ರಾಜತಾಂತ್ರಿಕ ಮೋಹನ್ ಕುಮಾರ್ ಇದ್ದರು.



**ಇಸ್ಲಾಮಿಕ್ ಒಗ್ಗಟ್ಟಿನ ಒಗ್ಗರಣೆ ವಿಫಲ**

**ಕಾರ್ಯಕ್ರಮಗಳನ್ನು ವಿಫಲಗೊಳಿಸಲು ಪ್ರಯತ್ನಿಸಿದ ಪಾಕಿಸ್ತಾನ**

**ಭಾರತದ ಏಳೂ ಸರ್ವಪಕ್ಷ ಸಂಸದೀಯ ನಿಯೋಗಗಳು ವಿದೇಶದಲ್ಲಿ ಪಾಕಿಸ್ತಾನದ ಅಸಲಿ ಚಹರೆಯನ್ನು ಬಯಲು ಮಾಡಿದ್ದು, ಪ್ರಮುಖವಾಗಿ ಶಶಿ ತರೂರ್, ಅಸಾದುದ್ದೀನ್ ಓವೈಸಿ ಅವರಂತಹ ನಾಯಕರು ತಾವು ಭೇಟಿ ನೀಡಿದ ದೇಶಗಳಲ್ಲಿ ಭಾರತದ ವಾದವನ್ನು ಸಮರ್ಥವಾಗಿ ಮಂಡಿಸಿ ಸುದ್ದಿಯಾಗಿದ್ದಾರೆ. ಆದರೆ ಮಲೇಷ್ಯಾದಲ್ಲಿ ಭಾರತದ ನಿಯೋಗದ ಕಾರ್ಯಕ್ರಮಗಳನ್ನು ವಿಫಲಗೊಳಿಸಲು ಪ್ರಯತ್ನಿಸಿದ ಪಾಕಿಸ್ತಾನ ಮುಖಭಂಗ ಅನುಭವಿಸಿರುವುದು ಜಾಗತಿಕ ಮಟ್ಟದಲ್ಲಿ ಗಮನ ಸೆಳೆದಿದೆ.**

**ವಿದೇಶಗಳಿಗೆ ಪ್ರಯಾಣಿಸಿದ ಏಳು ನಿಯೋಗಗಳಲ್ಲಿ ಇದೂ ಒಂದು**

**ಮಲೇಷ್ಯಾ ಜೊತೆಗೆ, ಸಂಜಯ್ ಝಾ ನೇತೃತ್ವದ ನಿಯೋಗವು ಇಂಡೋನೇಷ್ಯಾ, ದಕ್ಷಿಣ ಕೊರಿಯಾ, ಜಪಾನ್, ಸಿಂಗಪುರಕ್ಕೆ ಭೇಟಿ ನೀಡಿತು. 27 ಅಮಾಯಕರ ಸಾವಿಗೆ ಕಾರಣವಾದ ಪಹಲ್ಗಾಮ್ ಭಯೋತ್ಪಾದಕ ದಾಳಿ, ಭಾರತದ ಪ್ರತಿದಾಳಿಯಾದ ಆಪರೇಷನ್ ಸಿಂಧೂರ, ಭಾರತದ ನೆಲದಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ ಪಾಕಿಸ್ತಾನದ ಪಾತ್ರವನ್ನು ಬಹಿರಂಗಪಡಿಸಲು, ಭಾರತದ ನಿಲುವನ್ನು ಸ್ಪಷ್ಟಪಡಿಸಲು ವಿದೇಶಗಳಿಗೆ ಪ್ರಯಾಣಿಸಿದ ಏಳು ನಿಯೋಗಗಳಲ್ಲಿ ಇದೂ ಒಂದು.**

## ಮಿನಿ ನ್ಯೂಸ್

### ವ್ಯಾನ್ ಮೇಲೆ ಸಿಮೆಂಟ್ ಟ್ರಕ್ ಹರಿದು ಒಂದೇ ಕುಟುಂಬದ 9 ಮಂದಿ ಸಾವು

**ಝಬುವಾ:** ಮಧ್ಯಪ್ರದೇಶದ ಝಬುವಾ ಜಿಲ್ಲೆಯಲ್ಲಿ ಬೆಳಗಿನ ಜಾವ ಸಿಮೆಂಟ್ ತುಂಬಿದ್ದ ಟ್ರಕ್ ವೊಂದು ವ್ಯಾನ್ ಮೇಲೆ ಉರುಳಿಬಿದ್ದ ಪರಿಣಾಮ ಒಂದೇ ಕುಟುಂಬಕ್ಕೆ ಸೇರಿದ ಒಂಬತ್ತು ಜನರು ಸಾವನ್ನಪ್ಪಿದ್ದಾರೆ. ಮದುವೆ ಕಾರ್ಯಕ್ರಮದಿಂದ ಹಿಂತಿರುಗುತ್ತಿದ್ದಾಗ ಬೆಳಗಿನ ಜಾವ 2.30 ರ ಸುಮಾರಿಗೆ ಈ ಅಪಘಾತ ಸಂಭವಿಸಿದೆ.

ಮೇಘ್ ನಗರ ತಹಸಿಲ್ ಪ್ರದೇಶದ ಸಂಜೇಲಿ ರೈಲ್ವೆ ಕ್ರಾಸಿಂಗ್ ಬಳಿ ತಾತ್ಕಾಲಿಕ ರಸ್ತೆಯ ಮೂಲಕ ನಿರ್ಮಾಣ ಹಂತದಲ್ಲಿರುವ ರೈಲು ಮೇಲೇತುವೆ, ದಾಟುತ್ತಿದ್ದ ಟ್ರಕ್ ಸಮತೋಲನ ತಪ್ಪಿ ವ್ಯಾನ್ ಮೇಲೆ ಉರುಳಿದೆ ಎಂದು ಝಬುವಾ ಪೊಲೀಸ್ ವರಿಷ್ಠಾಧಿಕಾರಿ ಪದವಿಲೋಚನ್ ಶುಕ್ಲಾ ತಿಳಿಸಿದ್ದಾರೆ. ಅಪಘಾತದಲ್ಲಿ ಒಂಬತ್ತು ಜನರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ, ಇಬ್ಬರು ಗಾಯಗೊಂಡಿದ್ದಾರೆ ಎಂದು ಅವರು ಹೇಳಿದರು. ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲಿಸಲಾಗಿದ್ದು ಘಟನೆ ಕುರಿತಂತೆ ತನಿಖೆ ನಡೆದಿದೆ ಎಂದು ಹೇಳಿದರು.

## ಚೊಚ್ಚಲ ಐಪಿಎಲ್ ಪ್ರಶಸ್ತಿ ಗೆದ್ದ ಆರ್‌ಸಿಬಿ ವಿಮಾನದ ಒಳಗಡೆ ಶಶಿ ತರೂರ್ ಮಾಡಿದ್ದೇನು?

**ವಾಷಿಂಗ್ಟನ್:** ಚೊಚ್ಚಲ ಬಾರಿಗೆ ಐಪಿಎಲ್ ಟ್ರೋಫಿ ಮುಡಿಗೇರಿಸಿಕೊಂಡ ರಾಯಲ್ ಚಾಲೆಂಜರ್ಸ್ ಬೆಂಗಳೂರು, ವಿರಾಟ್ ಕೊಹ್ಲಿಯನ್ನು ಕಾಂಗ್ರೆಸ್ ಸಂಸದ ಶಶಿ ತರೂರ್ ಅಭಿನಂದಿಸಿದ್ದಾರೆ. ವಾಷಿಂಗ್ಟನ್ ಡಿಸಿಯಲ್ಲಿ ಲ್ಯಾಂಡಿಂಗ್ ಆದಾಗ ಮೊದಲು ಐಪಿಎಲ್ ಫೈನಲ್ ಪಂದ್ಯದ ಸ್ಕೋರ್‌ನ್ನು ತನ್ನ ಮೊಬೈಲ್‌ನಲ್ಲಿ ಪರಿಶೀಲಿಸಿದ್ದಾಗಿ ಅವರು ತಿಳಿಸಿದ್ದಾರೆ. ಶಶಿ ತರೂರ್ ನೇತೃತ್ವದ ಸರ್ವ ಪಕ್ಷ ನಿಯೋಗ ಅಮೆರಿಕದ ವಾಷಿಂಗ್ಟನ್ ಡಿಸಿಯಲ್ಲಿದೆ. ಇದರಲ್ಲಿ ಬೆಂಗಳೂರಿನ ಸಂಸದ ತೇಜಸ್ವಿ ಸೂರ್ಯ ಕೂಡಾ ಇದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಶಶಿ ತರೂರ್, 18 ವರ್ಷಗಳ ನಂತರ ಟ್ರೋಫಿಗೆ ಕೈಹಾಕಿದ್ದಕ್ಕೆ ತುಂಬಾ ಸಂತಸವಾಗುತ್ತಿದೆ ಎಂದು ಅವರು ಬರೆದುಕೊಂಡಿದ್ದಾರೆ. ವಿಮಾನದ ಒಳಗಡೆ ಕುಳಿತು ತನ್ನ ಮೊಬೈಲ್ ಫೋನ್ ನಲ್ಲಿ ಸ್ಕೋರ್ ಪರಿಶೀಲಿಸುತ್ತಿರುವ ಫೋಟೋವೊಂದನ್ನು ಅವರು ಪೋಸ್ಟ್ ಮಾಡಿದ್ದಾರೆ.



ಅಹಮದಾಬಾದಿನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಮಂಗಳವಾರ ರಾತ್ರಿ ನಡೆದ ಐಪಿಎಲ್ ಫೈನಲ್ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ತಂಡವನ್ನು ಆರು ರನ್‌ಗಳ ಅಂತರದಿಂದ ಸೋಲಿಸುವ ಮೂಲಕ ರಾಯಲ್ ಚಾಲೆಂಜರ್ಸ್ ಬೆಂಗಳೂರು ಟ್ರೋಫಿಯನ್ನು ಮುಡಿಗೇರಿಸಿಕೊಂಡಿತ್ತು. ಶಶಿ ತರೂರ್ ಅವರೊಂದಿಗೆ ಸಂಸದ ತೇಜಸ್ವಿ ಸೂರ್ಯ ಕೂಡಾ ಆರ್ ಸಿಬಿ ತಂಡಕ್ಕೆ ಶುಭಾಶಯ ಕೋರುವ ವಿಡಿಯೋ ಪೋಸ್ಟ್ ಮಾಡಿದ್ದಾರೆ. ಇದು ಮರೆಯಲಾಗದ ಕ್ಷಣವಾಗಿದೆ. ಆರ್‌ಸಿಬಿ ಕೇವಲ ಟ್ರೋಫಿಯನ್ನು ಗೆದ್ದಿಲ್ಲ. ನಗರದ ಕನಸನ್ನು ನನಸು ಮಾಡಿದ್ದಾರೆ. ಒತ್ತಡದ ಸಂದರ್ಭದಲ್ಲಿ ಸಂವೇದನಾಶೀಲ ಪ್ರದರ್ಶನಕ್ಕಾಗಿ ಬೌಲಿಂಗ್ ವಿಭಾಗಕ್ಕೆ ಅಭಿನಂದನೆ ಸಲ್ಲಿಸಿದ್ದು, ಈ ರಾತ್ರಿ ಎಂದೆಂದಿಗೂ ನೆನಪಿನಲ್ಲಿ ಉಳಿಯುತ್ತದೆ ಎಂದು ಬರೆದುಕೊಂಡಿದ್ದಾರೆ.

# ಪಾಕಿಸ್ತಾನದೊಂದಿಗೆ ಮಾತನಾಡಲು ಭಾಷೆಯ ಸಮಸ್ಯೆ ಇಲ್ಲ

## ರಾಜತಾಂತ್ರಿಕ ಮಾತುಕತೆಗೆ ಶಶಿ ತರೂರ್ ಷರತ್ತು, ಭಾರತದ ಸರ್ವಪಕ್ಷ ಸಂಸದೀಯ ನಿಯೋಗ

**ಬ್ರಾಸಿಲಿಯಾ:** ಪಾಕಿಸ್ತಾನದೊಂದಿಗೆ ಮಾತುಕತೆ ನಡೆಸುವಲ್ಲಿ ಸಮಸ್ಯೆ ಭಾಷೆಯಲ್ಲ, ಬದಲಾಗಿ ಸಭ್ಯತೆ ಮತ್ತು ಶಾಂತಿಗಾಗಿ ಸಾಮಾನ್ಯ ದೃಷ್ಟಿಕೋನವನ್ನು ಕಂಡುಕೊಳ್ಳುವುದಾಗಿದೆ ಎಂದು ಕಾಂಗ್ರೆಸ್ ಸಂಸದ, ಭಾರತದ ಸರ್ವಪಕ್ಷ ಸಂಸದೀಯ ನಿಯೋಗದ ಸದಸ್ಯ ಶಶಿ ತರೂರ್ ಹೇಳಿದ್ದಾರೆ. ಬ್ರಜಿಲ್ ರಾಜಧಾನಿ ಬ್ರಾಸಿಲಿಯಾದಲ್ಲಿ ಮಾತನಾಡಿದ ಶಶಿ ತರೂರ್, ಭಯೋತ್ಪಾದನೆಯ ಮೂಲಸೌಕರ್ಯದ ವಿರುದ್ಧ ಪಾಕಿಸ್ತಾನ ಕಠಿಣ ಕ್ರಮಗಳನ್ನು ಕೈಗೊಂಡರೆ, ಭಾರತ ಆ ರಾಷ್ಟ್ರದೊಂದಿಗೆ ರಾಜತಾಂತ್ರಿಕ ಮಾತುಕತೆಯ ಬಗ್ಗೆ ಯೋಚನೆ ಮಾಡಲಿದೆ ಎಂದು ಸೂಚ್ಯವಾಗಿ ಹೇಳಿದರು.

ನಮ್ಮ ನಿಯೋಗ ಭಯೋತ್ಪಾದನೆಯ ವಿರುದ್ಧ ಭಾರತದ ಸಂದೇಶವನ್ನು ಲ್ಯಾಟಿನ್ ಅಮೇರಿಕನ್ ದೇಶಗಳಿಗೆ ಯಶಸ್ವಿಯಾಗಿ ತಲುಪಿಸಿದೆ. ಅಲ್ಲದೇ ಕೆಲವು ದೇಶಗಳ ತಪ್ಪು ತಿಳುವಳಿಕೆಯನ್ನು ಹೋಗಲಾಡಿಸಲಾಗಿದೆ ಎಂದು ಶಶಿ ತರೂರ್ ಇದೇ ವೇಳೆ ನುಡಿದರು. ಪಾಕಿಸ್ತಾನವು ತಾನು ಹೇಳಿಕೊಳ್ಳುವಷ್ಟು ಮುಗ್ಧವಾಗಿದ್ದರೆ, ಭಯೋತ್ಪಾದಕರಿಗೆ ಸುರಕ್ಷಿತ ಆಶ್ರಯ ನೀಡುವುದನ್ನು ಮೊದಲು ನಿಲ್ಲಿಸಬೇಕು. ಭಯೋತ್ಪಾದಕರು ತರಬೇತಿ ಶಿಬಿರಗಳನ್ನು ನಡೆಸಲು, ಮತ್ತಷ್ಟು ಜನರನ್ನು ಮೂಲಭೂತವಾದಿಗಳನ್ನಾಗಿ ಪರಿವರ್ತಿಸಲು, ಅಮಾಯಕರ ಕೈಗೆ ಶಸ್ತ್ರಗಳನ್ನು ಕೊಡಲು ಪಾಕಿಸ್ತಾನ ಎಲ್ಲಾ ಅಗತ್ಯ ನೆರವು ನೀಡುತ್ತಿದೆ ಎಂದು ಶಶಿ ತರೂರ್ ತೀವ್ರ ವಾಗ್ದಾಳಿ ನಡೆಸಿದರು.




**ಶಶಿ ತರೂರ್ ನೇತೃತ್ವದ ಭಾರತದ ಸರ್ವಪಕ್ಷ ಸಂಸದೀಯ ನಿಯೋಗವು ಇದುವರೆಗೂ, ಗಯಾನಾ, ಪನಾಮ, ಕೊಲಂಬಿಯಾ, ಬ್ರೆಜಿಲ್ ರಾಷ್ಟ್ರಗಳಿಗೆ ಭೇಟಿ ನೀಡಿದೆ. ಈ ದೇಶಗಳಲ್ಲಿ ಭಾರತದ ವಾದವನ್ನು ಸಮರ್ಥವಾಗಿ ಮಂಡಿಸುವಲ್ಲಿ ನಿಯೋಗ ಯಶಸ್ವಿಯಾಗಿದೆ**

**–ಶಶಿ ತರೂರ್,**

ಪಾಕಿಸ್ತಾನದೊಂದಿಗೆ ಮಾತನಾಡಲು ನಮಗೆ ಭಾಷೆಯ ಸಮಸ್ಯೆ ಇಲ್ಲ. ಬದಲಿಗೆ ಸಭ್ಯತೆ ಮತ್ತು ಶಾಂತಿಗಾಗಿ ಸಾಮಾನ್ಯ ದೃಷ್ಟಿಕೋನವನ್ನು ಕಂಡುಹಿಡಿಯುವಲ್ಲಿ ಎದುರಾಗುವ ಸವಾಲುಗಳ ಸಮಸ್ಯೆ ಇದೆ ಎಂದು ಕಾಂಗ್ರೆಸ್ ಸಂಸದ ಇದೇ ವೇಳೆ ಮಾರ್ಮಿಕವಾಗಿ ಹೇಳಿದರು. ಮುಂದುವರೆದು, ನಿಮ್ಮ ದೇಶದಲ್ಲಿ ಎಲ್ಲೆಡೆ ಗೋಚರಿಸುವ ಭಯೋತ್ಪಾದನೆಯ ಈ ಮೂಲಸೌಕರ್ಯವನ್ನು ನೀವು ಹತ್ತಿಕ್ಕಿದರೆ ಮಾತ್ರ, ನಾವು ಮಾತುಕತೆಯ ಬಗ್ಗೆ ಯೋಚನೆ ಮಾಡುತ್ತೇವೆ ಎಂದು ಸ್ಪಷ್ಟಪಡಿಸಿದರು. ನಾವು ಅವರೊಂದಿಗೆ ಹಿಂದೂಸ್ತಾನಿಯಲ್ಲಿ ಮಾತನಾಡಬಹುದು. ನಾವು ಅವರೊಂದಿಗೆ ಪಂಜಾಬಿಯಲ್ಲಿ ಮಾತನಾಡಬಹುದು. ನಾವು ಅವರೊಂದಿಗೆ ಇಂಗ್ಲಿಷ್‌ನಲ್ಲಿ ಮಾತನಾಡಬಹುದು. ಪಾಕಿಸ್ತಾನದೊಂದಿಗೆ ಸಾಮಾನ್ಯ ನೆಲೆಯನ್ನು ಕಂಡುಕೊಳ್ಳುವಲ್ಲಿ ಯಾವುದೇ ಸಮಸ್ಯೆ ಇಲ್ಲ. ಸಭ್ಯತೆಗಾಗಿ, ಶಾಂತಿಗಾಗಿ ಸಾಮಾನ್ಯ ದೃಷ್ಟಿಕೋನವನ್ನು ಕಂಡುಹಿಡಿಯುವುದು ಸಮಸ್ಯೆಯಾಗಿದೆ ಎಂದು ಶಶಿ ತರೂರ್ ಅಸಮಾಧಾನ ವ್ಯಕ್ತಪಡಿಸಿದರು. ಸದ್ಯ ಭಾರತದ ಈ ಸರ್ವಪಕ್ಷ ಸಂಸದೀಯ ನಿಯೋಗ ಅಮೆರಿಕಕ್ಕೆ ತೆರಳಿದ್ದು, ಭಯೋತ್ಪಾದನೆ ವಿರುದ್ಧದ ಭಾರತದ ಹೋರಾಟವನ್ನು ಅಮೆರಿಕನ್ನರಿಗೆ ಮನವರಿಕೆ ಮಾಡಿಕೊಡುವಲ್ಲಿ ನಿರತವಾಗಿದೆ.

**ಭಾರತವನ್ನು ಶಾಂತಿಯಿಂದ ಇರಲು ಪಾಕಿಸ್ತಾನ ಬಿಡುತ್ತಿಲ್ಲ. ಅವರು ಭಾರತವನ್ನು 1,000 ತುಂಡುಗಳಾಗಿ ವಿಭಜಿಸುವ ಗುರಿ ಹೊಂದಿದ್ದಾರೆ. ಆದರೆ ಭಾರತವನ್ನು ತುಂಡರಿಸುವ ದುಸ್ಸಾಹಸವನ್ನು ಜಗತ್ತಿನ ಯಾವ ಶಕ್ತಿಯೂ ಮಾಡಲಾರದು ಎಂದು ಭಾರತದ ಸರ್ವಪಕ್ಷ ಸಂಸದೀಯ ನಿಯೋಗದ ಸದಸ್ಯ ಇದೇ ವೇಳೆ ಗುಡುಗಿದರು.**

### ಭಾರತ ಎಂದರೆ ಮೋದಿ ಎಂದು ಭಾವಿಸುವುದು ತಪ್ಪು: ಕಾಂಗ್ರೆಸ್

**ನವದೆಹಲಿ:** ನರೇಂದ್ರ ಮೋದಿ ಅಂದರೆ ಭಾರತ ಮತ್ತು ಭಾರತ ಎಂದರೆ ನರೇಂದ್ರ ಮೋದಿ ಎಂದು ಭಾವಿಸುವುದು ತಪ್ಪು ಎಂದು ಕಾಂಗ್ರೆಸ್ ಬುಧವಾರ ಹೇಳಿದೆ. ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಪ್ರಧಾನಿಯನ್ನು ಟೀಕಿಸಿದ್ದಕ್ಕಾಗಿ ಬಿಜೆಪಿ ಕಾಂಗ್ರೆಸ್ ಅನ್ನು ತೀವ್ರ ತರಾಟೆಗೆ ತೆಗೆದುಕೊಂಡಿದೆ. ನರೇಂದ್ರ ಸರೆಂಡರ್' ಎಂಬ ರಾಹುಲ್ ಗಾಂಧಿ ಹೇಳಿಕೆ ಸಮರ್ಥಿಸಿಕೊಂಡ ಕಾಂಗ್ರೆಸ್ ಮಾಧ್ಯಮ ಮತ್ತು ಪ್ರಚಾರ ವಿಭಾಗದ ಮುಖ್ಯಸ್ಥ ಪವನ್ ಖೇರಾ ಅವರು, ಮೋದಿ ತಾನು ಚತುರ ಮತ್ತು 'ವಿಶ್ವಗುರು' ಎಂಬುದನ್ನು ತೋರಿಸಬೇಕಾದ ಸಂದರ್ಭಗಳಲ್ಲಿ ಭಾರತದ ರಾಷ್ಟ್ರೀಯ ಹಿತಾಸಕ್ತಿ ವಿಚಾರದಲ್ಲಿ ಪದೇ ಪದೇ ಶರಣಾಗಿದ್ದಾರೆ ಎಂದು ಟೀಕಿಸಿದರು.

ಬುಧವಾರ ದೆಹಲಿಯ ಕಾಂಗ್ರೆಸ್‌ನ ಇಂದಿರಾ ಗಾಂಧಿ ಭವನ, ಪ್ರಧಾನ ಕಚೇರಿಯಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಖೇರಾ, ಬಿಜೆಪಿ ಜನ ಕಳೆದ 11 ವರ್ಷಗಳಿಂದ ತಮ್ಮ ನಾಯಕನಿಗಾಗಿ ಮುಕದ್ದರ್ ಕಾ ಸಿಕಂದರ್ ಚಿತ್ರವನ್ನು ನಿರ್ಮಿಸುತ್ತಿದ್ದರು. ಆದರೆ ಚಿತ್ರ ಸಿದ್ಧವಾದಾಗ, ಅದು ನರೇಂದ್ರ ಕಾ ಶರಣಾಗತಿ ಎಂದು ಬದಲಾಯಿತು. ವಾಸ್ತವವಾಗಿ, ಧೈರ್ಯದ ಇಂಜೆಕ್ಷನ್ ಇಲ್ಲ. ಆದರೆ ಅದು ವ್ಯಕ್ತಿಯ ಪಾತ್ರದಲ್ಲಿ ಅಂತರ್ಗತವಾಗಿರುತ್ತದೆ. ಬಿಜೆಪಿ–ಆರ್‌ಎಸ್‌ಎಸ್ ಜನರ ಇತಿಹಾಸ ಹೇಡಿತನದಿಂದ ಕೂಡಿದೆ. ಅಂತಹ ವ್ಯಕ್ತಿ ದೇಶದ ಆಡಳಿತ ವಹಿಸಿಕೊಂಡಾಗ, ದೇಶದ ಭವಿಷ್ಯ ಅಪಾಯದಲ್ಲಿದೆ ಮತ್ತು ಇದನ್ನು ಪ್ರಸ್ತುತ ನೋಡುತ್ತಿದ್ದೇವೆ ಎಂದು ಹೇಳಿದ್ದಾರೆ.

ಟ್ರಂಪ್ ಅಲ್ಲಿಂದ ಸಿಗ್ನಲ್ ನೀಡಿದ ತಕ್ಷಣ, ಫೋನ್ ಎತ್ತಿಕೊಂಡು, ನೀವು ಏನು ಮಾಡುತ್ತಿದ್ದೀರಿ ಮೋದಿ ಜಿ ನರೇಂದ್ರ, ಸರೆಂಡರ್ ಎಂದು ಹೇಳಿದರು... ಮತ್ತು ಮೋದಿ ಜಿ 'ಜಿ ಹುಜೂರ್' ಮೂಲಕ ಟ್ರಂಪ್ ಅವರ ಆದೇಶ ಪಾಲಿಸಿದರು ಎಂದು ಭೋಪಾಲ್‌ನಲ್ಲಿ ರಾಹುಲ್ ಗಾಂಧಿ ಹೇಳಿದ ಒಂದು ದಿನದ ನಂತರ ಪವನ್ ಖೇರಾ ಈ ಹೇಳಿಕೆ ನೀಡಿದ್ದಾರೆ. ಇನ್ನು ರಾಹುಲ್ ಗಾಂಧಿ ಹೇಳಿಕೆಗೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ ಬಿಜೆಪಿ ರಾಷ್ಟ್ರೀಯ ವಕ್ತಾರ ಸುಧಾಂಶು ತ್ರಿವೇದಿ ಅವರು, ಕಾಂಗ್ರೆಸ್ ನಾಯಕ ಸಶಸ್ತ್ರ ಪಡೆಗಳನ್ನು ಅವಮಾನಿಸಿದ್ದಾರೆ ಎಂದು ತಿರುಗೇಟು ನೀಡಿದ್ದಾರೆ.

# ಮಧ್ಯಪ್ರದೇಶದಲ್ಲಿ ನಿಗೂಢ ಪ್ರಾಣಿ ಕಡಿತಕ್ಕೆ 6 ಮಂದಿ ಬಲಿ

**ಬರ್ವಾನಿ:** ಮಧ್ಯಪ್ರದೇಶದ ಬರ್ವಾನಿ ಜಿಲ್ಲೆಯಲ್ಲಿ ಎರಡು ವಾರಗಳಲ್ಲಿ ನಿಗೂಢ ಪ್ರಾಣಿಯೊಂದು 6ಮಂದಿಯನ್ನು ಕೊಂದು ಹಾಕಿದೆ. ನಿಗೂಢ ಪ್ರಾಣಿಯಿಂದ ಕಡಿತಕ್ಕೊಳಗಾದವರಿಗೆ ರೇಬಿಸ್ ಚುಚ್ಚುಮದ್ದನ್ನು ಚುಚ್ಚಲಾಯಿತು ಆದರೂ ಯಾರೂ ಬದುಕುಳಿಯಲಿಲ್ಲ ಎಂದು ತಿಳಿದು ಬಂದಿದೆ. ಲಿಂಬೈ ಗ್ರಾಮದ 17 ಮಂದಿ ಮಲಗಿದ್ದರು, ಜನರು ಮಲಗಿದ್ದಾಗ ಪ್ರಾಣಿ ದಾಳಿ ಮಾಡಿದೆ. ಪ್ರಾಣಿ ಯಾವುದೆಂದು ಗುರುತಿಸಲು ಸಾಧ್ಯವಾಗಲಿಲ್ಲ. ಲಿಂಬೈ ಗ್ರಾಮದ ಮೂರು ಸ್ಥಳಗಳಲ್ಲಿ ಆ ಪ್ರಾಣಿ ದಾಳಿ ನಡೆಸಿದೆ. ಒಬ್ಬರು ಅಂಗಳ ಗುಡಿಸುತ್ತಿದ್ದ ಸಂದರ್ಭದಲ್ಲಿ ದಾಳಿ ಮಾಡಿದೆ. ಬದುಕುಳಿದವರು ಆ ಪ್ರಾಣಿ ನಾಯಿಯಂತೆ ಕಾಣುತ್ತಿತ್ತು ಎಂದು ಹೇಳಿದ್ದಾರೆ.

ಬೊಗಳಲಿಲ್ಲ, ಗುರುಗುಟ್ಟಲೂ ಇಲ್ಲ ನೆರಳಿನಂತೆ ಬಂದು ಕಚ್ಚಿ ಕಣ್ಮರೆಯಾಗಿದೆ ಎಂದು ಸ್ಥಳೀಯರು ತಿಳಿಸಿದ್ದಾರೆ. ಎಲ್ಲಾ 17 ಮಂದಿಗೆ ಬರ್ವಾನಿ ಮತ್ತು ಇಂದೋರ್‌ನ ವೈದ್ಯಕೀಯ ಕೇಂದ್ರಗಳಲ್ಲಿ ರೇಬೀಸ್ ವಿರೋಧಿ ಲಸಿಕೆ ನೀಡಲಾಯಿತು. ಆದರೆ ಮೇ 23, ಜೂನ್ 2 ರ ನಡುವೆ, ಅವರಲ್ಲಿ ಆರು ಮಂದಿ ಸಾವನ್ನಪ್ಪಿದ್ದಾರೆ. ಅವರಲ್ಲಿ ಇಬ್ಬರು ಮಹಿಳೆಯರು, 40 ರಿಂದ 60 ವರ್ಷ ವಯಸ್ಸಿನ ನಾಲ್ವರು ಪುರುಷರು. ಇತ್ತೀಚಿನ ಪ್ರಕರಣವೆಂದರೆ 40 ವರ್ಷದ ಸುನಿಲ್, ಅವರು ವೈದ್ಯಕೀಯ ಸಲಹೆಯನ್ನು ಪಾಲಿಸದೆ ಇಂದೋರ್‌ನ ಎಂವೈ ಆಸ್ಪತ್ರೆಯಿಂದ ಹೊರಬಂದರು. ಅವರನ್ನು ಜಿಲ್ಲಾ ಆಸ್ಪತ್ರೆಗೆ ಕರೆದೊಯ್ಯುವ ಮಾರ್ಗಮಧ್ಯೆ ನಿಧನರಾದರು.




ವೈದ್ಯರು ಹಿಂದೆಂದೂ ಈ ರೀತಿ ಕಚ್ಚಿರುವ ಗುರುತನ್ನು ನೋಡಿಯೇ ಇಲ್ಲ ಎಂದಿದ್ದಾರೆ. ಎಲ್ಲಾ ವೈದ್ಯಕೀಯ ಶಿಷ್ಟಾಚಾರಗಳನ್ನು ಅನುಸರಿಸಲಾಗಿದೆ ಮತ್ತು ಲಸಿಕೆಯನ್ನು ಮಾರ್ಗಸೂಚಿಗಳ ಪ್ರಕಾರ ಸಂಗ್ರಹಿಸಲಾಗಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ. ಮೃತರ ಮೆದುಳಿನ ಅಂಗಾಂಶ, ಗಂಟಲಿನ ಬಯಾಪ್ಸಿಯನ್ನು ವಿವರವಾದ ವಿಶ್ಲೇಷಣೆಗಾಗಿ ದೆಹಲಿಗೆ ಕಳುಹಿಸಲಾಗಿದೆ. ಅವರೆಲ್ಲರ ಸಾವಿಗೆ ರೇಬಿಸ್ ಚುಚ್ಚುಮದ್ದು ಕಾರಣವೇ ಅದರ ಆ ಪ್ರಾಣಿ ಕಚ್ಚಿದ್ದು ಕಾರಣವೇ ಎಂಬುದು ತಿಳಿದುಬರಲಿದೆ.

ಅರಣ್ಯ ಇಲಾಖೆಯು ಪ್ರಾಣಿಗಾಗಿ ನಡೆಸಿದ ಹುಡುಕಾಟದಲ್ಲಿ ಇದುವರೆಗೆ ಯಾವುದೇ ಸುಳಿವು ಸಿಕ್ಕಿಲ್ಲ, ಯಾವುದೇ ಹೆಜ್ಜೆ ಗುರುತುಗಳು, ದೃಶ್ಯಗಳು, ಭೌತಿಕ ಸುಳಿವುಗಳು ಇಲ್ಲ ಎಂದು ಡಿಎಫ್‌ಒ ಆಶಿಶ್ ಬನ್ಸೋದ್ ಹೇಳಿದ್ದಾರೆ. ಕಾಡು ಗ್ರಾಮದಿಂದ ಕೇವಲ 4.5 ಕಿ.ಮೀ ದೂರದಲ್ಲಿದೆ. ನೀವು ರಸ್ತೆಯಲ್ಲಿ ವಾಹನ ಚಲಾಯಿಸುವ ಮೂಲಕ ಅಂತಹ ಪ್ರಾಣಿಯನ್ನು ಹಿಡಿಯಲು ಸಾಧ್ಯವಿಲ್ಲ. ಡ್ರೋನ್‌ಗಳನ್ನು ಬಳಸಿ. ತಂಡಗಳ ಸಂಖ್ಯೆಯನ್ನು ಹೆಚ್ಚಿಸಿ ಎಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

## 47 ದಿನ ಮುಂಚಿತವಾಗಿ ಮುಂಗಾರು ಅಧಿವೇಶನ

**ನವದೆಹಲಿ:** ಪಹಲ್ಗಾಮ್ ಉಗ್ರ ದಾಳಿ, ಪಾಕಿಸ್ತಾನದ ಭಯೋತ್ಪಾದಕರ ನೆಲೆಗಳ ಮೇಲೆ ನಡೆಸಿದ ಆಪರೇಷನ್ ಸಿಂಧೂರ ಕುರಿತು ಚರ್ಚಿಸಲು ತಕ್ಷಣ ವಿಶೇಷ ಅಧಿವೇಶನ ಕರೆಯಬೇಕು ಎಂಬ ಪ್ರತಿಪಕ್ಷಗಳ ಬೇಡಿಕೆಯಿಂದ ತಪ್ಪಿಸಿಕೊಳ್ಳಲು ಕೇಂದ್ರ ಸರ್ಕಾರ ಸಂಸತ್ ಮುಂಗಾರು ಅಧಿವೇಶನವನ್ನು 47ದಿನ ಮುಂಚಿತವಾಗಿ ಘೋಷಿಸಿದೆ ಎಂದು ಕಾಂಗ್ರೆಸ್ ಬುಧವಾರ ಆರೋಪಿಸಿದೆ. ಸಂಸತ್ ಮುಂಗಾರು ಅಧಿವೇಶನ ಜುಲೈ 21 ರಿಂದ ಆಗಸ್ಟ್ 12 ರವರೆಗೆ ನಡೆಯಲಿದೆ ಎಂದು ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಬುಧವಾರ ಹೇಳಿದ್ದಾರೆ. ಕಿರಣ್ ರಿಜಿಜು ಹೇಳಿಕೆಗೆ ಎಕ್ಸ್‌ನಲ್ಲಿ ಪ್ರತಿಕ್ರಿಯಿಸಿರುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್, ಸಾಮಾನ್ಯವಾಗಿ ಸಂಸತ್ ಅಧಿವೇಶನದ ದಿನಾಂಕಗಳನ್ನು ಕೆಲವು ದಿನಗಳ ಮುಂಚಿತವಾಗಿ ಘೋಷಿಸಲಾಗುತ್ತದೆ.



ಆದರೆ ಮುಂಗಾರು ಅಧಿವೇಶನವನ್ನು ಆರಂಭವಾಗುವ 47 ದಿನಗಳ ಮುಂಚೆ ಯಾವತ್ತೂ ಘೋಷಿಸಿಲ್ಲ ಎಂದು ಹೇಳಿದ್ದಾರೆ. ಪಹಲ್ಗಾಮ್ ಉಗ್ರ ದಾಳಿ, ಭಯೋತ್ಪಾದಕರನ್ನು ಬಂಧಿಸುವಲ್ಲಿ ಕೇಂದ್ರದ ವಿಫಲತೆ, ಆಪರೇಷನ್ ಸಿಂಧೂರ್‌ನ ಪರಿಣಾಮಗಳು, ಅದರ ಸ್ಪಷ್ಟ ರಾಜಕೀಕರಣ, ಭಾರತ, ಪಾಕಿಸ್ತಾನ ಕದನ ವಿರಾಮಕ್ಕೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಮಧ್ಯಸ್ಥಿಕೆಯ ನಿರಂತರ ಹೇಳಿಕೆ, ನಮ್ಮ ವಿದೇಶಾಂಗ ನೀತಿ, ರಾಜತಾಂತ್ರಿಕ ವೈಫಲ್ಯಗಳ ಕುರಿತು ಚರ್ಚಿಸಲು ತಕ್ಷಣ ವಿಶೇಷ ಅಧಿವೇಶನ ಕರೆಯಬೇಕೆಂಬ ಇಂಡಿಯಾ ಮೈತ್ರಿಕೂಟ, ಇತರ ಪ್ರತಿಪಕ್ಷಗಳ ಬೇಡಿಕೆಯಿಂದ ತಪ್ಪಿಸಿಕೊಳ್ಳಲು ಮಾತ್ರ ಮುಂಗಾರು ಅಧಿವೇಶನದ ದಿನಾಂಕ ಪ್ರಕಟಿಸ ಲಾಗಿದೆ ಎಂದು ಜೈರಾಮ್ ರಮೇಶ್ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

### ಒಡಿಶಾ: ತಪ್ಪಾದ ಇಂಜೆಕ್ಷನ್‌ಗೆ ಐವರು ಬಲಿ; ತನಿಖೆಗೆ ಆದೇಶ

**ಕೊರಾಪುಟ್:** ಒಡಿಶಾದ ಕೊರಾಪುಟ್‌ನಲ್ಲಿರುವ ಸಹೀದ್ ಲಕ್ಷ್ಮಣ್ ನಾಯಕ್ ವೈದ್ಯಕೀಯ ಕಾಲೇಜು, ಆಸ್ಪತ್ರೆಯ ದಾಖಲಾದ ಕೆಲವೇ ಗಂಟೆಗಳಲ್ಲಿ ತೀವ್ರ ಅಸ್ವಸ್ಥಗೊಂಡಿದ್ದ ಐವರು ರೋಗಿಗಳು ಸಾವನ್ನಪ್ಪಿದ್ದಾರೆ. ಆಸ್ಪತ್ರೆ ಸಿಬ್ಬಂದಿ ತಪ್ಪು ಇಂಜೆಕ್ಷನ್ ನೀಡಿದ್ದರಿಂದ ಈ ಸಾವು ಸಂಭವಿಸಿದೆ ಎಂದು ಆರೋಪಿಸಲಾಗಿದೆ. ಮೂವರು ಮಹಿಳೆಯರು, ಇಬ್ಬರು ಪುರುಷರು ಐಸಿಯುಗೆ ದಾಖಲಾಗಿದ್ದರು. ಅವರ ಸಾವಿಗೆ ಸ್ವಲ್ಪ ಮೊದಲು ಆಸ್ಪತ್ರೆ ಸಿಬ್ಬಂದಿ ರೋಗಿಗಳಿಗೆ ಇಂಜೆಕ್ಷನ್ ನೀಡಿದ್ದಾರೆ ಎಂದು ಅವರ ಕುಟುಂಬಗಳು ಆರೋಪಿಸಿವೆ. ಈ ರೋಗಿಗಳನ್ನು ಶಸ್ತ್ರ ಚಿಕಿತ್ಸೆಯ ನಂತರದ ಆರೈಕೆ ಮತ್ತು ಗಂಭೀರ ಮೇಲ್ವಿಚಾರಣೆಗಾಗಿ ಐಸಿಯು ಮತ್ತು ಶಸ್ತ್ರಚಿಕಿತ್ಸಾ ವಾರ್ಡ್‌ಗಳಿಗೆ ದಾಖಲಿಸಲಾಗಿತ್ತು ಎಂದು ವರದಿಯಾಗಿದೆ. ಈ ಸಂಬಂಧ ಪೊಲೀಸರು ತನಿಖೆ ಪ್ರಾರಂಭಿಸಿದ್ದಾರೆ. ಸಾವಿಗೆ ನಿಖರ ಕಾರಣ ಕಂಡುಹಿಡಿಯಲು ಮರಣೋತ್ತರ ಪರೀಕ್ಷೆಯ ವರದಿಗಾಗಿ ಕಾಯಲಾಗುತ್ತಿದೆ ಎಂದು SLNMCHನ ಸೂಪರಿಂಟೆಂಡೆಂಟ್ ಸುಸಂತಾ ಕುಮಾರ್ ಸಾಹು ತಿಳಿಸಿದ್ದಾರೆ. ನಾವು ಎಲ್ಲಾ ಇಲಾಖಾ ಮುಖ್ಯಸ್ಥರ ಸಭೆಯನ್ನು ಕರೆದಿದ್ದೇವೆ. ರಾತ್ರಿ ಸಾವನ್ನಪ್ಪಿದ ರೋಗಿಗಳನ್ನು ಗಂಭೀರ ಸ್ಥಿತಿಯಲ್ಲಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಪ್ರಾಥಮಿಕವಾಗಿ, ಸಾವುಗಳು ಯಾವುದೇ ತಪ್ಪು ಇಂಜೆಕ್ಷನ್‌ನಿಂದ ಸಂಭವಿಸಿಲ್ಲ ಎಂದು ತೋರುತ್ತದೆ. ಆದಾಗ್ಯೂ, ಆರೋಪಗಳ ಬಗ್ಗೆ ನಾವು ತನಿಖೆ ನಡೆಸುತ್ತೇವೆ ಎಂದು ಅವರು ಹೇಳಿದರು. ಮೂವರು ರೋಗಿಗಳು ಐಸಿಯುನಲ್ಲಿ ಸಾವನ್ನಪ್ಪಿದರೆ, ಇಬ್ಬರು ಸಾಮಾನ್ಯ ವಾರ್ಡ್‌ನಲ್ಲಿ ಮೃತ ಪಟ್ಟಿದ್ದರು. ಮೃತರ ಕುಟುಂಬಗಳು ಆಸ್ಪತ್ರೆಯ ಹೊರಗೆ ಪ್ರತಿಭಟನೆ ನಡೆಸಿದರು, ನಂತರ ಪೊಲೀಸರನ್ನು ನಿಯೋಜಿಸಲಾಯಿತು.

## ಭಾರತದ ಪರ ನಿಲ್ಲದಂತೆ ಪಾಕ್ ಮಾಡಿಕೊಂಡ ಮನವಿ ತಿರಸ್ಕರಿಸಿದ ಮಲೇಷ್ಯಾ

**ವಿಶ್ವಸಂಸ್ಥೆ:** ಕಾಶ್ಮೀರ ವಿಷಯವನ್ನು ಉಲ್ಲೇಖಿಸಿ ವಿಶ್ವಸಂಸ್ಥೆಯಲ್ಲಿ ಎಲ್ಲಾ ಆಪರೇಷನ್ ಸಿಂಧೂರ್ ಸಂಪರ್ಕ ಕಾರ್ಯಕ್ರಮಗಳನ್ನು ರದ್ದುಗೊಳಿಸಬೇಕೆಂಬ ಪಾಕಿಸ್ತಾನದ ಮನವಿಯನ್ನು ಮಲೇಷ್ಯಾ ಕಡೆಗಣಿಸಿದೆ ಎಂದು ಮೂಲಗಳು ತಿಳಿಸಿವೆ. ಧರ್ಮದ ಕಾರ್ಡ್ ಆಡಲು ಪ್ರಯತ್ನಿಸುತ್ತಿರುವ ಪಾಕಿಸ್ತಾನಿ ರಾಯಭಾರ ಕಚೇರಿಯು, ಸಂಜಯ್ ಝಾ ನೇತೃತ್ವದ ನಿಯೋಗದ ಎಲ್ಲಾ 10 ಕಾರ್ಯಕ್ರಮಗಳನ್ನು ರದ್ದುಗೊಳಿಸುವಂತೆ ಮಲೇಷ್ಯಾ ಸರ್ಕಾರಿ ಅಧಿಕಾರಿಗಳನ್ನು ಒತ್ತಾಯಿಸಿತು, ನಾವು ಇಸ್ಲಾಮಿಕ್ ದೇಶ, ನೀವು ಇಸ್ಲಾಮಿಕ್ ದೇಶ. ಭಾರತೀಯ ನಿಯೋಗದ ಮಾತನ್ನು ಕೇಳಬೇಡಿ, ಮಲೇಷ್ಯಾದಲ್ಲಿ ಅವರ ಎಲ್ಲಾ ಕಾರ್ಯಕ್ರಮಗಳನ್ನು ರದ್ದುಗೊಳಿಸಿ ಎಂದು ಹೇಳಿದೆ. ಪಾಕಿಸ್ತಾನದ ವಿನಂತಿಯನ್ನು ತಿರಸ್ಕರಿಸಿದ ಮಲೇಷ್ಯಾ ಸರ್ಕಾರವು ಎಲ್ಲಾ 10 ಪ್ರಸ್ತಾವಿತ ಕಾರ್ಯಕ್ರಮಗಳನ್ನು ಆಯೋಜಿಸಲು ಒಂಬತ್ತು ಸದಸ್ಯರ ನಿಯೋಗಕ್ಕೆ ಒಪ್ಪಿಗೆ ನೀಡಿತು. ಜಪಾನ್ , ದಕ್ಷಿಣ ಕೊರಿಯಾ, ಸಿಂಗಾಪುರ, ಇಂಡೋನೇಷ್ಯಾದಲ್ಲಿ ನಿಲುಗಡೆಗಳನ್ನು ಒಳಗೊಂಡ ನಿಯೋಗದ ಬಹುರಾಷ್ಟ್ರ ಪ್ರವಾಸಕ್ಕೆ ಮಲೇಷ್ಯಾ ಅಂತಿಮ ನಿಲ್ದಾಣವಾಗಿತ್ತು. ಆಪರೇಷನ್ ಸಿಂಧೂರ್ ಸಂಪರ್ಕದ ಸಮಯದಲ್ಲಿ ಭಾರತೀಯ ನಿಯೋಗವು ಮಲೇಷ್ಯಾ ನಾಯಕರನ್ನು ಭೇಟಿ ಮಾಡುತ್ತದೆ.



ಜೆಡಿಯು ಸಂಸದ ಸಂಜಯ್ ಝಾ ನೇತೃತ್ವದ ಮಲೇಷ್ಯಾಕ್ಕೆ ಭಾರತೀಯ ನಿಯೋಗದಲ್ಲಿ ಸಂಸದರಾದ ಅಪರಾಜಿತಾ ಸಾರಂಗಿ, ಬ್ರಿಜ್‌ಲಾಲ್, ಪ್ರದಾನ್ ಬರುವಾ, ಹೇಮಾಂಗ್ ಜೋಶಿ, ತೃಣಮೂಲ ಕಾಂಗ್ರೆಸ್‌ನ ಅಭಿಷೇಕ್ ಬ್ಯಾನರ್ಜಿ, ಸಿಪಿಎಂನ ಜಾನ್ ಬ್ರಿಟಾಸ್, ಕಾಂಗ್ರೆಸ್‌ನ ಸಲ್ಮಾನ್ ಖುರ್ಷಿದ್, ಬದ್ರೇನ್, ಫ್ರಾನ್ಸ್‌ನ ಮಾಜಿ ಭಾರತೀಯ ರಾಯಭಾರಿ ಮೋಹನ್ ಕುಮಾರ್ ಇದ್ದರು.

ಪ್ರಧಾನಿ ಮಹಾತಿರ್ ಮೊಹಮ್ಮದ್ ಅವರ ಸಂಪುಟದಲ್ಲಿ ಮಾಜಿ ಸಚಿವರಾಗಿದ್ದ ವೈ.ಬಿ. ಸಿಮ್ ತ್ಸೆ ಕ್ಸಿನ್ ನೇತೃತ್ವದ ಮಲೇಷ್ಯಾದ ಪೀಪಲ್ಸ್ ಜಸ್ಟೀಸ್ ಪಾರ್ಟಿ ಅನ್ನು ಭಾರತೀಯ ನಿಯೋಗ ಭೇಟಿ ಮಾಡಿತು ಮತ್ತು ಆಪರೇಷನ್ ಸಿಂಧೂರ್ ಅಡಿಯಲ್ಲಿ ಭಾರತದ ದೃಢನಿಶ್ಚಯದ ವಿಧಾನವನ್ನು ಒತ್ತಿ ಹೇಳಿತು, ಭಯೋತ್ಪಾದನೆಯ ಬಗ್ಗೆ ಅದರ ಶೂನ್ಯ–ಸಹಿಷ್ಣುತೆಯ ನಿಲುವನ್ನು ಪುನರುಚ್ಚರಿಸಿತು.

# ವಿಶ್ವಸಂಸ್ಥೆಯಲ್ಲಿ ಕಾಶ್ಮೀರ ಸಮಸ್ಯೆ ಪ್ರಸ್ತಾಪಕ್ಕೆ ಹಿನ್ನಡೆ

**ನವದೆಹಲಿ:** ಪಾಕಿಸ್ತಾನದ ಮಾಜಿ ವಿದೇಶಾಂಗ ಸಚಿವ, ಪಾಕಿಸ್ತಾನ ಪೀಪಲ್ಸ್ ಪಾರ್ಟಿ ಅಧ್ಯಕ್ಷ ಬಿಲಾವಲ್ ಭುಟ್ಟೋ ಜರ್ದಾರಿ ಅವರು ಅಂತರ ರಾಷ್ಟ್ರೀಯ ವೇದಿಕೆಗಳಲ್ಲಿ, ವಿಶೇಷವಾಗಿ ವಿಶ್ವ ಸಂಸ್ಥೆಯಲ್ಲಿ ಕಾಶ್ಮೀರ ಸಮಸ್ಯೆಯನ್ನು ಎತ್ತುವ ಇಸ್ಲಾಮಾಬಾದ್‌ನ ಪ್ರಯತ್ನಗಳು ನಿರಂತರ ಹಿನ್ನಡೆಗಳನ್ನು ಎದುರಿಸುತ್ತಿವೆ ಎಂದು ಸಾರ್ವಜನಿಕವಾಗಿ ಒಪ್ಪಿಕೊಂಡಿದ್ದಾರೆ. ನ್ಯೂಯಾರ್ಕ್ ವಿಶ್ವಸಂಸ್ಥೆಯ ಪ್ರಧಾನ ಕಚೇರಿಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತ ನಾಡಿದ ಬಿಲಾವಲ್ ಭುಟ್ಟೋ, ವಿಶ್ವಸಂಸ್ಥೆಯೊಳಗೆ, ಸಾಮಾನ್ಯವಾಗಿ ಕಾಶ್ಮೀರದ ವಿಷಯಕ್ಕೆ ಸಂಬಂಧಿಸಿ ದಂತೆ ನಾವು ಎದುರಿಸುತ್ತಿರುವ ಅಡೆತಡೆಗಳು ಇನ್ನೂ ಅಸ್ತಿತ್ವದಲ್ಲಿವೆ ಎಂದು ಹೇಳಿದರು.

26 ಜೀವಗಳನ್ನು ಬಲಿತೆಗೆದುಕೊಂಡ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯ ನಂತರ ಭಾರತ ಪ್ರಾರಂಭಿಸಿದ ಆಪರೇಷನ್ ಸಿಂದೂರ್‌ನ ಪರಿಣಾಮಗಳು ಸೇರಿದಂತೆ ಇತ್ತೀಚಿನ ಪ್ರಾದೇಶಿಕ ಉದ್ವಿಗ್ನತೆಗಳ ಕುರಿತು ಇಸ್ಲಾಮಾಬಾದ್‌ನ ನಿರೂಪಣೆಯನ್ನು ಪ್ರಸ್ತುತಪಡಿಸಲು ಸರ್ಕಾರ ಆದೇಶಿಸಿದ ಉಪಕ್ರಮದ ಭಾಗವಾಗಿ ಬಿಲಾವಲ್ ಭುಟ್ಟೋ ಪ್ರಸ್ತುತ ಅಮೆರಿಕಕ್ಕೆ ಸಂಸದೀಯ ನಿಯೋಗವನ್ನು ಮುನ್ನಡೆಸುತ್ತಿದ್ದಾರೆ. ಇಸ್ಲಾಮಾಬಾದ್‌ನ ಈ ನಡೆಯನ್ನು ಭಾರತದ ನಿರೂಪಣೆಯನ್ನು, ವಿಶೇಷವಾಗಿ ಪ್ರಭಾವಿ ಪಾಶ್ಚಿಮಾತ್ಯ ರಾಜಧಾನಿ ಗಳಲ್ಲಿ ಸಮತೋಲನಗೊಳಿಸುವ ಪ್ರಯತ್ನವೆಂದು ನೋಡಲಾಗುತ್ತಿದೆ.



ನ್ಯೂಯಾರ್ಕ್‌ಗೆ ಬಂದ ನಂತರ, ಬಿಲಾವಲ್ ಭುಟ್ಟೋ ಅವರ ನಿಯೋಗವು ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರೆಸ್, ಸಾಮಾನ್ಯ ಸಭೆಯ ಅಧ್ಯಕ್ಷ ಫಿಲೆಮನ್ ಯಾಂಗ್, ಭದ್ರತಾ ಮಂಡಳಿಯ ಅಧ್ಯಕ್ಷೆ ಕ್ಯಾರೊಲಿನ್ ರೊಡ್ರಿಗಸ್–ಬಿರ್ಕೆಟ್ ಅವರನ್ನು ಭೇಟಿ ಮಾಡಿದೆ. ಅವರು ಅಮೆರಿಕ, ಚೀನಾ, ರಷ್ಯಾ, ಫ್ರಾನ್ಸ್‌ನ ಖಾಯಂ ಪ್ರತಿನಿಧಿಗಳು, ಭದ್ರತಾ ಮಂಡಳಿಯ ಇತರ ನಾಲ್ಕು ಖಾಯಂ ಸದಸ್ಯರು, ಖಾಯಂ ಸದಸ್ಯ ರಾಷ್ಟ್ರಗಳ ಪ್ರತಿನಿಧಿಗಳೊಂದಿಗೆ ಸಹ ತೊಡಗಿಸಿಕೊಂಡಿದ್ದಾರೆ.

**ವಿಶ್ವಸಂಸ್ಥೆಯ ಅಧಿಕಾರಿಗಳು ರಾಜತಾಂತ್ರಿಕ ರೊಂದಿಗಿನ ಸಂವಾದದ ಸಮಯದಲ್ಲಿ, ಜಲ ವಿವಾದಗಳು ಮತ್ತು ಭಯೋತ್ಪಾದನೆಯಂತಹ ವಿಷಯಗಳ ಬಗ್ಗೆ ಸ್ವೀಕಾರಾರ್ಹತೆ ಇದೆ ಎಂದು ಬಿಲಾವಲ್ ಭುಟ್ಟೋ ಹೇಳಿದರು.ಕನ್ನಡಿ ತಂತ್ರ ಪಾಕಿಸ್ತಾನಿ ನಿಯೋಗದ ರಚನೆಯು ಭಾರತದ ಇತ್ತೀಚಿನ ರಾಜತಾಂತ್ರಿಕ ದಾಳಿಯನ್ನು ನಿಕಟವಾಗಿ ಮಾದರಿಯಾಗಿ ಹೊಂದಿರುವಂತೆ ತೋರುತ್ತಿದೆ, ಇದರಲ್ಲಿ ಸರ್ವಪಕ್ಷ ಸಂಸದೀಯ ನಿಯೋಗವು ಪಹಲ್ಗಾಮ್ ಹತ್ಯಾಕಾಂಡದ ನಂತರ ನವದೆಹಲಿಯ ನಿಲುವನ್ನು ಪ್ರಸ್ತುತಪಡಿಸಲು ಜಾಗತಿಕವಾಗಿ ಪ್ರಯಾಣಿಸುತ್ತಿದೆ.**

### ಗಾಜಾಕ್ಕೆ ನೆರವು ವಿತರಣೆ ನಿಲ್ಲಿಸಿದ ಅಮೆರಿಕದ ಸಂಸ್ಥೆ


**ಕೈರೊ:** ಕಳೆದ ಕೆಲವು ದಿನಗಳಿಂದ ಗಾಜಾದ ಜನರಿಗೆ ಆಹಾರ ಸೇರಿದಂತೆ ಹಲವು ರೀತಿಯ ಮಾನವೀಯ ನೆರವು ನೀಡುತ್ತಿದ್ದ ಅಮೆರಿಕದ ಗಾಜಾ ಹ್ಯುಮ್ಯಾನಿಟೇರಿಯನ್ ಫೌಂಡೇಶನ್ ಬುಧವಾರ ಜನರಿಗೆ ಯಾವುದೇ ನೆರವು ನೀಡದೆ ಹಿಂತಿರುಗಿದೆ. ಗಾಜಾ ನಾಗರಿಕರಿಗೆ ಸೂಕ್ತ ರಕ್ಷಣೆ ಒದಗಿಸಿ ಎಂದು ಸಂಸ್ಥೆಯು ಇಸ್ರೇಲ್‌ಗೆ ಹೇಳಿದೆ. ನೆರವು ವಿತರಣೆ ಮಾಡುತ್ತಿದ್ದ ಸ್ಥಳಕ್ಕೆ ಬರುವ ಗಾಜಾ ಜನರ ಮೇಲೆ ಗುಂಡಿನ ದಾಳಿ ನಡೆಯುತ್ತಿದೆ. ಮಂಗಳವಾರ 27 ಮಂದಿ ಮೃತಪಟ್ಟಿದ್ದಾರೆ. ಭಾನುವಾರದಿಂದ ಈಚೆಗೆ ಮೂರು ದಿನಗಳಲ್ಲಿ ಸುಮಾರು 80 ಜನರು ಇದೇ ಕಾರಣಕ್ಕೆ ಮೃತಪಟ್ಟಿದ್ದಾರೆ. ನೂರಾರು ಜನರು ಗಾಯಗೊಂಡಿದ್ದಾರೆ ಎಂದು ಗಾಜಾದ ಆಸ್ಪತ್ರೆಯೊಂದರ ಅಧಿಕಾರಿಗಳು ಹೇಳಿದ್ದಾರೆ. ಗೊಂದಲಗಳು ಆಗದಂತೆ, ತೊಂದರೆಗಳು ತಲೆದೋರದಂತೆ ಹೇಗೆ ನಡೆಯಬೇಕು ಎಂಬುದರ ಕುರಿತು ಜನರಿಗೆ ಮಾರ್ಗದರ್ಶನ ಮಾಡಿ ಎಂದು ಸಂಸ್ಥೆ ಹೇಳಿದೆ. ಆಹಾರ ಪಡೆದುಕೊಳ್ಳಲು ನಿಂತು ಕೊಂಡಿದ್ದ ಜನರ ಮೇಲೆ ಇಸ್ರೇಲ್‌ನ ಸೈನಿಕರು ಗುಂಡು ಹಾರಿಸಿದರು ಎಂದು ಗಾಜಾ ಜನರು ಹೇಳುತ್ತಿದ್ದಾರೆ. ಈ ಆರೋಪವನ್ನು ಇಸ್ರೇಲ್ ನಿರಾಕರಿಸಿದೆ. ಆದರೆ, ಮಂಗಳವಾರ ಗುಂಡಿನ ದಾಳಿ ನಡೆಸಿದ್ದನ್ನು ಇಸ್ರೇಲ್ ಒಪ್ಪಿಕೊಂಡಿದೆ. ಕೆಲವು ಶಂಕಾಸ್ಪದ ವ್ಯಕ್ತಿಗಳಿಗೆ ಗುಂಡು ಹಾರಿಸಲಾಗಿದೆ. ಅವರು ಯುದ್ಧ ವಲಯದ ಒಳಗೆ ಬರುತ್ತಿದ್ದರು. ಎಚ್ಚರಿಕೆ ನೀಡಿದರೂ ಅವರು ಹಿಂದೆ ಸರಿಯಲಿಲ್ಲ ಎಂದು ಹೇಳಿದೆ.

# ವಿಪಕ್ಷಗಳ ವಿಶೇಷ ಅಧಿವೇಶನದ ಬೇಡಿಕೆ ತಿರಸ್ಕರಿಸಿದ ಕೇಂದ್ರ ಸರ್ಕಾರ

## ಮುಂಗಾರು ಅಧಿವೇಶನದಲ್ಲೇ ಎಲ್ಲಾ ವಿಷಯ ಚರ್ಚಿಸೋಣ ಎಂದ ಕೇಂದ್ರ ಸರ್ಕಾರ

**ಹೊಸದಿಲ್ಲಿ:** ಮಹತ್ವದ ಬೆಳವಣಿಗೆಯೊಂದರಲ್ಲಿ ಮುಂಬರುವ ಜುಲೈ 21ರಿಂದ ಆಗಸ್ಟ್ 12ರವರೆಗೆ ಸಂಸತ್ತಿನ ಮಾನ್ಸೂನ್ ಅಧಿವೇಶನ ನಡೆಯಲಿದೆ ಎಂದು ಕೇಂದ್ರ ಸಚಿವ ಕಿರಣ್ ರಿಜಿಜು ಮಾಹಿತಿ ನೀಡಿದ್ದಾರೆ. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅಧ್ಯಕ್ಷತೆಯ ಸಂಸದೀಯ ವ್ಯವಹಾರಗಳ ಸಂಪುಟ ಸಮಿತಿಯು, ಸಂಸತ್ತಿನ ಮಾನ್ಸೂನ್ ಅಧಿವೇಶನದ ದಿನಾಂಕಗಳನ್ನು ಶಿಫಾರಸು ಮಾಡಿದೆ ಎಂದು ಕಿರಣ್ ರಿಜಿಜು ಸ್ಪಷ್ಟಪಡಿಸಿದ್ದಾರೆ.

ಭಾರತ–ಪಾಕಿಸ್ತಾನ ಸಂಘರ್ಷದ ಈ ಸಂದರ್ಭದಲ್ಲಿ, ಸಂಸತ್ತಿನ ಮಾನ್ಸೂನ ಅಧಿವೇಶನ ಅತ್ಯಂತ ಮಹತ್ವದ್ದಾಗಿದೆ. ದೇಶದ ಜನತೆಗೆ ಏಕತೆ, ಒಗ್ಗಟ್ಟಿನ ಸಂದೇಶವನ್ನು ಸಾರಲು ಈ ಅಧಿವೇಶನವನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಲಾಗುವುದು ಎಂಬ ವಿಶ್ವಾಸ ಇದೆ ಎಂದು ಕಿರಣ್ ರಿಜಿಜು ಹೇಳಿದ್ದಾರೆ. ಪಹಲ್ಗಾಮ್ ಭಯೋತ್ಪಾದಕ ದಾಳಿ ಮತ್ತು ಆಪರೇಷನ್ ಸಿಂಧೂರ ಸೇನಾ ಕಾರ್ಯಾಚರಣೆ ಸಂದರ್ಭದಲ್ಲಿ, ರಾಜಕೀಯ ಪಕ್ಷಗಳು ಪಕ್ಷಬೇಧ ಮರೆತು ಒಗ್ಗಟ್ಟನ್ನು ಪ್ರದರ್ಶಿಸಿವೆ. ಆಡಳಿತ ಪಕ್ಷ, ವಿಪಕ್ಷಗಳು ಒಟ್ಟಾಗಿ ಪಾಕಿಸ್ತಾನಕ್ಕೆ ಬುದ್ಧಿ ಕಲಿಸುವಲ್ಲಿ ಯಶಸ್ವಿಯಾಗಿವೆ. ಸಂಸತ್ತಿನ ಮುಂಗಾರು ಅಧಿವೇಶನ ಕೂಡ ಇದೇ ಹುಮಸ್ಸಿನಲ್ಲಿ ನಡೆಯಲಿದೆ ಎಂಬ ಭರವಸೆ ಇದೆ ಎಂದು ಕಿರಣ್ ರಿಜಿಜು ಹೇಳಿದ್ದಾರೆ.



**ವಿಶೇಷ ಅಧಿವೇಶನಕ್ಕೆ ಬೇಡಿಕೆ**

ಈ ಕುರಿತು ಮಾಹಿತಿ ನೀಡಿರುವ ಕೇಂದ್ರ ಸಚಿವ ಕಿರಣ್ ರಿಜಿಜು, ಪ್ರತಿಪಕ್ಷಗಳ ವಿಶೇಷ ಅಧಿವೇಶನದ ಬೇಡಿಕೆ ಅಪ್ರಸ್ತುತ ಎಂದು ಹೇಳಿದ್ದಾರೆ. ಅಲ್ಲದೇ ಮಾನ್ಸೂನ್ ಅಧಿವೇಶನದಲ್ಲೇ ನಾವು ಎಲ್ಲಾ ವಿಷಯಗಳ ಬಗ್ಗೆ ವಿಸ್ತೃತವಾಗಿ ಚರ್ಚಿಸಬಹುದು ಎಂದು ಅವರು ಸಲಹೆ ನೀಡಿದ್ದಾರೆ. ನಿಯಮಗಳ ಅಡಿಯಲ್ಲಿ, ಮಳೆಗಾಲದ ಅಧಿವೇಶನದಲ್ಲಿ ಎಲ್ಲಾ ವಿಷಯಗಳನ್ನು ನಾವು ಚರ್ಚಿಸಬಹುದು. ಪ್ರತಿಪಕ್ಷಗಳು ಚರ್ಚೆಗೆ ಸಂಸತ್ತಿನ ಮುಂಗಾರು ಅಧಿವೇಶನವನ್ನ ಬಳಸಿಕೊಳ್ಳಬಹುದು ಎಂದು ಕಿರಣ್ ರಿಜಿಜು ಹೇಳಿದ್ದಾರೆ. ಪಹಲ್ಗಾಮ್ ಭಯೋತ್ಪಾದಕ ದಾಳಿ, ಆಪರೇಷನ್ ಸಿಂಧೂರ ಸೇನಾ ಕಾರ್ಯಾಚರಣೆ, ಭಾರತ–ಪಾಕ್ ಕದನ ವಿರಾಮ ಒಪ್ಪಂದ ಹೀಗೆ ಪ್ರತಿ ಹಂತದಲ್ಲೂ ಕಾಂಗ್ರೆಸ್ ನಾಯಕರು ಸಂಸತ್ತಿನ ವಿಶೇಷ ಅಧಿವೇಶನಕ್ಕೆ ಬೇಡಿಕೆ ಇಟ್ಟಿದ್ದನ್ನು ಇಲ್ಲಿ ಗಮನಿಸಬಹುದು.

**ವಿಪಕ್ಷಗಳ ಬೇಡಿಕೆ ಏನಿತ್ತು?**

**ಪಹಲ್ಗಾಮ್ ಭಯೋತ್ಪಾದಕ ದಾಳಿ ಮತ್ತು ಅದಕ್ಕೆ ಪ್ರತೀಕಾರವಾಗಿ ಭಾರತ ನಡೆಸಿದ ಆಪರೇಷನ್ ಸಿಂಧೂರ ಸೇನಾ ಕಾರ್ಯಾಚರಣೆ ಕುರಿತು ಚರ್ಚಿಸಲು, ಸಂಸತ್ತಿನ ವಿದೇಶ ಅಧಿವೇಶನ ಕರೆಯಬೇಕು ಎಂಬುದು ಪ್ರತಿಪಕ್ಷಗಳ ಬೇಡಿಕೆಯಾಗಿತ್ತು. ವಿಶೇಷವಾಗಿ ಕಾಂಗ್ರೆಸ್ ವಿಶೇಷ ಅಧಿವೇಶನಕ್ಕೆ ಒತ್ತಾಯಿಸುತ್ತಾ ಬಂದಿದ್ದು, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು, ಪಾಕಿಸ್ತಾನವೇ ವಿಶೇಷ ಸಂಸತ್ ಅಧಿವೇಶನ ನಡಸಿರುವಾಗ, ನ್ಯಾವ್ಯಾಕೆ ಅಧಿವೇಶನ ಕರೆದು ಚರ್ಚಿಸಬಾರದು ಎಂದು ಕೇಂದ್ರ ಸರ್ಕಾರವನ್ನು ಪ್ರಶ್ನಿಸಿದ್ದರು.**

**ವಿಪಕ್ಷಗಳ ಬೇಡಿಕೆ ತಿರಸ್ಕೃತ**

**ಇದೇ ವೇಳೆ ಪಹಲ್ಗಾಮ್ ಭಯೋತ್ಪಾದಕ ದಾಳಿ ಮತ್ತು ಆಪರೇಷನ್ ಸಿಂಧೂರ ಸೇನಾ ಕಾರ್ಯಾಚರಣೆ ಕುರಿತು ಚರ್ಚಿಸಲು, ಕೇಂದ್ರ ಸರ್ಕಾರ ಈ ಕೂಡಲೇ ಸಂಸತ್ತಿನ ವಿಶೇಷ ಅಧಿವೇಶನ ಕರೆಯಬೇಕು ಎಂಬ ವಿಪಕ್ಷಗಳ ಬೇಡಿಕೆಯನ್ನು ಕೇಂದ್ರ ಸರ್ಕಾರ ತಿರಸ್ಕರಿಸಿದೆ.**



# ಸೋತ ನಂತರ ಮೈದಾನಕ್ಕೆ ಕಣ್ಣೀರಿಡುತ್ತ ಬಂದ ಪ್ರೀತಿ ಝಿಂಟಾ

ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಪಂಜಾಬ್ ಕಿಂಗ್ಸ್ ತಂಡವನ್ನು ಸೋಲಿಸಿ ಐಪಿಎಲ್ 2025 ಪ್ರಶಸ್ತಿಯನ್ನು ಗೆದ್ದುಕೊಂಡಿತು. ಈ ಗೆಲುವಿನ ನಂತರ, ಆರ್‌ಸಿಬಿ ಆಟಗಾರರ ಹಾಗೂ ಅಭಿಮಾನಿಗಳ ಖುಷಿಗೆ ಪಾರವೇ ಇರಲಿಲ್ಲ. ಆದರೆ ಪಂಜಾಬ್ ಕಿಂಗ್ಸ್ ತಂಡದ ಆಟಗಾರರು ಹಾಗೂ ಸಹ-ಮಾಲೀಕಿ ಮತ್ತು ಬಾಲಿವುಡ್ ನಟಿ ಪ್ರೀತಿ ಝಿಂಟಾ ಸೋಲಿನ ದುಃಖದಲ್ಲಿ ಮುಳುಗಿ ಹೋದರು. ಆರ್‌ಸಿಬಿಯಂತೆ ಪಂಜಾಬ್ ಕಿಂಗ್ಸ್ ಕೂಡ ಈವರೆಗೆ ಐಪಿಎಲ್ ಟ್ರೋಫಿಯನ್ನು ಗೆದ್ದಿರಲಿಲ್ಲ. ಚೊಚ್ಚಲ ಟ್ರೋಫಿ ಗೆಲ್ಲುವ ಕನಸು ಅವರಿಗೂ ಇತ್ತು. ಆದರೀಗ ಪಂಜಾಬ್‌ನ ಟ್ರೋಫಿ ಕಾಯುವಿಕೆ ಮುಂದುವರೆದಿದೆ.

**ಸೋಲಿನಿಂದ ಪ್ರೀತಿ ಝಿಂಟಾ ನಿರಾಶೆ:** ಪ್ರೀತಿ ಝಿಂಟಾ ಅವರ ಕೆಲವು ಚಿತ್ರಗಳು ಮತ್ತು ವಿಡಿಯೋಗಳು ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗುತ್ತಿವೆ. ಫೈನಲ್ ಪಂದ್ಯ ಮುಗಿದ ನಂತರ, ಅವರು ಭಾರವಾದ ಹೃದಯದಿಂದ ಮೈದಾನಕ್ಕೆ ಬರುತ್ತಿರುವುದು ಕಂಡುಬಂದಿತು. ಬಿಳಿ ಕುರ್ತಾ, ಕೆಂಪು ದುಪಟ್ಟಾ ಮತ್ತು ಸಲ್ವಾರ್ ಧರಿಸಿ, ಪ್ರೀತಿ ಸುಂದರವಾಗಿ ಕಾಣುತ್ತಿದ್ದರು, ಆದರೆ ಸೋಲಿನಿಂದ ಅವರು ತುಂಬಾ ದುಃಖಿತರಾಗಿದ್ದರು. ಪಂದ್ಯದ ನಂತರ ಅವರು ಮೈದಾನಕ್ಕೆ ಬಂದಾಗ ಅವರ ಮುಖದಲ್ಲಿ ನಿರಾಶೆ ಸ್ಪಷ್ಟವಾಗಿ ಗೋಚರಿಸುತ್ತಿತ್ತು. ಪ್ರೀತಿ ಶ್ರೇಯಸ್ ಅಯ್ಯರ್ ಸೇರಿದಂತೆ ಅನೇಕ ಆಟಗಾರರನ್ನು ಸಮಾಧಾನಪಡಿಸುತ್ತಿರುವುದು ಕಂಡುಬಂದಿದೆ. ಈ ಸಮಯದಲ್ಲಿ ಅವರ ಕಣ್ಣುಗಳು ಒದ್ದೆಯಾಗಿದ್ದವು.

ಪ್ರೀತಿ ಝಿಂಟಾ 2008 ರಿಂದ ಐಪಿಎಲ್‌ನ ಭಾಗವಾಗಿದ್ದಾರೆ. ಅವರು ಪಂಜಾಬ್ ಕಿಂಗ್ಸ್‌ನ ಸಹ-ಮಾಲೀಕರು. ತಂಡದ ಮೇಲಿನ ಅವರ ಪ್ರೀತಿ, ಕ್ರೀಡಾಂಗಣದಲ್ಲಿ ಅವರ ಉಪಸ್ಥಿತಿ ಮತ್ತು ಆಟಗಾರರೊಂದಿಗಿನ ಅವರ



ಒದ್ದೆಯಾದ ಕಣ್ಣುಗಳು ದುಃಖದ ಮುಖ

ಭಾವನಾತ್ಮಕ ಬಾಂಧವ್ಯವು ಅವರನ್ನು ಅತ್ಯಂತ ನೆಚ್ಚಿನ ಮಾಲೀಕರಲ್ಲಿ ಒಬ್ಬರನ್ನಾಗಿ ಮಾಡಿದೆ.

ಆದಾಗ್ಯೂ, ಇದರ ಹೊರತಾಗಿ, ಪಂಜಾಬ್ ತಂಡ ಇನ್ನೂ ಪ್ರಶಸ್ತಿಯನ್ನು ಗೆದ್ದಿಲ್ಲ. ಇದಕ್ಕೂ ಮೊದಲು, ತಂಡವು 2014 ರಲ್ಲಿ ಒಮ್ಮೆ ಮಾತ್ರ ಫೈನಲ್ ಪಂದ್ಯವನ್ನು ಆಡಿತ್ತು.

**ಶ್ರೇಯಸ್ ವಿಕೆಟ್ ಪಂಜಾಬ್‌ಗೆ ಹೊಡೆತ:** ಎರಡನೇ ಕ್ವಾಲಿಫೈಯರ್ ಪಂದ್ಯದಲ್ಲಿ ಪಂಜಾಬ್ ತಂಡವನ್ನು ಗೆಲ್ಲಿಸಿದ ನಾಯಕ ಶ್ರೇಯಸ್ ಅಯ್ಯರ್ ಫೈನಲ್‌ನಲ್ಲಿ ವಿಫಲರಾದರು. ಇದು ತಂಡದ ಸೋಲಿಗೆ ಮುಖ್ಯ ಕಾರಣವಾಯಿತು. ಶ್ರೇಯಸ್ ಅಯ್ಯರ್ ಅದ್ಭುತ ಫಾರ್ಮ್‌ನಲ್ಲಿದ್ದರು. ಅವರು ಕ್ವಾಲಿಫೈಯರ್ -2 ರಲ್ಲಿ ಇದೇ ಮೈದಾನದಲ್ಲಿ 5 ಬೌಂಡರಿ ಮತ್ತು 8 ಸಿಕ್ಸರ್‌ಗಳ ಸಹಾಯದಿಂದ 87 ರನ್‌ಗಳ ಬಿರುಗಾಳಿಯ ಇನ್ನಿಂಗ್ಸ್ ಆಡಿದರು. ಫೈನಲ್‌ನಲ್ಲಿ ಅಯ್ಯರ್ ಬೇಗನೆ ಔಟ್ ಆಗದೇ ಇದ್ದಿದ್ದರೆ, ಪಂದ್ಯದ ಫಲಿತಾಂಶ ಬೇರೆಯೇ ಆಗುತ್ತಿತ್ತು. ಅಯ್ಯರ್ ಅವರ ವಿಕೆಟ್ ಪಂದ್ಯದ ತಿರುವು. ಶ್ರೇಯಸ್ ತಮ್ಮ ಇನ್ನಿಂಗ್ಸ್‌ನ ಎರಡನೇ ಎಸೆತದಲ್ಲಿ ಚೆಂಡನ್ನು ಕಟ್ ಮಾಡಲು ಪ್ರಯತ್ನಿಸುವಾಗ ವಿಕೆಟ್ ಕೀಪರ್ ಜಿತೇಶ್ ಶರ್ಮಾಗೆ ಕ್ಯಾಚ್ ನೀಡಿದರು.

### ಪಂಜಾಬ್‌ಗೆ ಬ್ಯಾಟಿಂಗ್ ವೈಫಲ್ಯ

**ಪಂಜಾಬ್ ಕಿಂಗ್ಸ್ ತಂಡಕ್ಕೆ ಗೆಲ್ಲಲು 191 ರನ್‌ಗಳ ಗುರಿ ಇತ್ತು. ಎರಡನೇ ಇನ್ನಿಂಗ್ಸ್‌ನ ಆರಂಭದಲ್ಲಿ ವಿಕೆಟ್ ಕಷ್ಟವಾಗಿ ಇರಲಿಲ್ಲ. ಚೆಂಡು ಬ್ಯಾಟ್‌ಗೆ ಚೆನ್ನಾಗಿಯೇ ಬರುತ್ತಿತ್ತು. ಸುಲಭವಾಗಿ ರನ್ ಗಳಿಸುತ್ತಿದ್ದರು. ಆದರೆ ಪಂಜಾಬ್ ಕಿಂಗ್ಸ್ ತಂಡದ ಬ್ಯಾಟ್ಸ್‌ಮನ್‌ಗಳು ಫೈನಲ್‌ನ ಒತ್ತಡವನ್ನು ತಡೆದುಕೊಳ್ಳಲು ಸಾಧ್ಯವಾಗಲಿಲ್ಲ. ಜೋಶ್ ಇಂಗ್ಲಿಸ್ ಮತ್ತು ಶಶಾಂಕ್ ಸಿಂಗ್ ಹೊರತುಪಡಿಸಿ, ಯಾವುದೇ ಬ್ಯಾಟ್ಸ್‌ಮನ್ ಮುಕ್ತವಾಗಿ ಆಡಲು ಸಾಧ್ಯವಾಗಲಿಲ್ಲ. ಕೊನೆಯ ಓವರ್‌ನಲ್ಲಿ ನಾಲ್ಕು ಎಸೆತಗಳು ಬಾಕಿ ಇರುವಾಗ ತಂಡದ ಸೋಲು ಖಚಿತವಾಯಿತು. ಆ ನಂತರ ಶಶಾಂಕ್ ಸಿಂಗ್ ಕೆಲವು ಉತ್ತಮ ಹೊಡೆತಗಳನ್ನು ಆಡಿದರೂ, ಆದರೆ, ತಂಡವು 6 ರನ್‌ಗಳಿಂದ ಸೋಲನ್ನು ಎದುರಿಸಬೇಕಾಯಿತು.**





# ಕಳೆದ ವರ್ಷ ಮಹಿಳೆಯರು ಈ ವರ್ಷ ಪುರುಷರು ನೀಗಿತು ಆರ್‌ಸಿಬಿ ಟ್ರೋಫಿ ಬರ

ರಾಯಲ್ ಚಾಲೆಂಜರ್ಸ್ ಬೆಂಗಳೂರು ಐಪಿಎಲ್ 2025 ಪ್ರಶಸ್ತಿಯನ್ನು ಗೆಲ್ಲುವ ಮೂಲಕ ಇತಿಹಾಸ ನಿರ್ಮಿಸಿತು. ಜೂನ್ 3, 2025 ರಂದು ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆದ ಫೈನಲ್‌ನಲ್ಲಿ, ಆರ್‌ಸಿಬಿ ಪಂಜಾಬ್ ಕಿಂಗ್ಸ್ ಅನ್ನು 6 ರನ್‌ಗಳಿಂದ ಸೋಲಿಸಿ ತಮ್ಮ ಮೊದಲ ಐಪಿಎಲ್ ಟ್ರೋಫಿಯನ್ನು ಗೆದ್ದುಕೊಂಡಿತು. ಫೈನಲ್‌ನಲ್ಲಿ ಆರ್‌ಸಿಬಿ ಮೊದಲು ಬ್ಯಾಟಿಂಗ್ ಮಾಡಿ 190 ರನ್ ಗಳಿಸಿತು. ಇದಕ್ಕೆ ಪ್ರತಿಯಾಗಿ ಪಂಜಾಬ್ ಕಿಂಗ್ಸ್ ತಂಡವು 6 ರನ್‌ಗಳಿಂದ ಸೋಲೊಪ್ಪಿಕೊಂಡಿತು. ಈ ಮೂಲಕ ಆರ್‌ಸಿಬಿ 17 ವರ್ಷಗಳ ದೀರ್ಘ ಕಾಯುವಿಕೆಗೆ ಅಂತ್ಯ ಹಾಡಿತು. ಇದಕ್ಕೂ ಮೊದಲು ಆರ್‌ಸಿಬಿ 2009, 2011 ಮತ್ತು 2016 ರಲ್ಲಿ ಫೈನಲ್‌ನಲ್ಲಿ ಸೋತಿದ್ದರು. ಆದರೆ ಕಳೆದೊಂದು ವರ್ಷದಿಂದ ಆರ್‌ಸಿಬಿ ಅದೃಷ್ಟ ಬದಲಾಗಿದ್ದು, ಬ್ಯಾಕ್ ಟು ಬ್ಯಾಕ್ ಟ್ರೋಫಿ ಗೆಲ್ಲುವಲ್ಲಿ ಯಶಸ್ವಿಯಾಗಿದೆ.

**ಆರ್‌ಸಿಬಿಗೆ ಬ್ಯಾಕ್ ಟು ಬ್ಯಾಕ್ ಕಪ್**

ಹೌದು ಆರ್‌ಸಿಬಿ ಪುರುಷರ ತಂಡ ಟ್ರೋಫಿ ಗೆಲ್ಲುವುದಕ್ಕೂ ಮುನ್ನ ಮಹಿಳೆಯರ ಪ್ರೀಮಿಯರ್ ಲೀಗ್‌ನಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮಹಿಳಾ ತಂಡ ಸ್ಮೃತಿ ಮಂಧಾನ ಅವರ ನಾಯಕತ್ವದಲ್ಲಿ 2024 ರ ಚಾಂಪಿಯನ್ ಆಗಿ ಹೊರಹೊಮ್ಮಿತ್ತು. 2023 ರಿಂದ ಆರಂಭವಾದ ಮಹಿಳೆಯರ ಪ್ರೀಮಿಯರ್ ಲೀಗ್‌ನ ಮೊದಲ ಆವೃತ್ತಿಯನ್ನು ಮುಂಬೈ ಇಂಡಿಯನ್ಸ್ ಗೆದ್ದುಕೊಂಡರೆ, ಎರಡನೇ ಆವೃತ್ತಿಯಲ್ಲಿ ಆರ್‌ಸಿಬಿ ಚಾಂಪಿಯನ್ ಆಗಿ ಹೊರಹೊಮ್ಮಿತ್ತು. ಈ ಮೂಲಕ ಮಹಿಳಾ ತಂಡ ಆರ್‌ಸಿಬಿ ಅಭಿಮಾನಿಗಳ ಟ್ರೋಫಿ ಬರವನ್ನು ನೀಗಿಸಿತ್ತು. ಆದಾಗ್ಯೂ ಆರ್‌ಸಿಬಿ ಅಭಿಮಾನಿಗಳ ಮನದಲ್ಲಿ ಪುರುಷರ ತಂಡ ಟ್ರೋಫಿ ಗೆಲ್ಲದಿರುವ ಕೊರಗು ಹಾಗೆಯೇ ಉಳಿದಿತ್ತು. ಆದರೆ ಈ ಬಾರಿ ಆ ಬರ ನೀಗಿಸುವಲ್ಲಿ ರಜತ್ ಪಾಟಿದರ್ ನೇತೃತ್ವದ ಆರ್‌ಸಿಬಿ ತಂಡ ಯಶಸ್ವಿಯಾಗಿದೆ.

**ಆರ್‌ಸಿಬಿ ಮಹಿಳಾ ತಂಡಕ್ಕೆ 8 ವಿಕೆಟ್ ಜಯ**

ದೆಹಲಿಯ ಅರುಣ್ ಜೇಟ್ಲಿ ಮೈದಾನದಲ್ಲಿ ನಡೆದ ಮಹಿಳಾ ಪ್ರೀಮಿಯರ್ ಲೀಗ್ 2024 ರ ಫೈನಲ್ ಪಂದ್ಯದಲ್ಲಿ ಆರ್‌ಸಿಬಿ ಹಾಗೂ ಡೆಲ್ಲಿ ಕ್ಯಾಪಿಟಲ್ಸ್ ಮುಖಾಮುಖಿಯಾಗಿದ್ದವು. ಈ ಪಂದ್ಯದಲ್ಲಿ ಆರ್‌ಸಿಬಿ ಮಹಿಳಾ ತಂಡ ಬಲಿಷ್ಠ ಡೆಲ್ಲಿ ತಂಡವನ್ನು 8 ವಿಕೆಟ್‌ಗಳಿಂದ ಮಣಿಸಿ ಮೊದಲ ಬಾರಿಗೆ ಚಾಂಪಿಯನ್ ಆಗಿ ಹೊರಹೊಮ್ಮಿತ್ತು. ಆ ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಡೆಲ್ಲಿ ತಂಡ ಪೂರ್ಣ 20 ಓವರ್‌ಗಳನ್ನು ಆಡಲಾಗದೆ 18.3 ಓವರ್‌ಗಳಲ್ಲಿ ತನ್ನೆಲ್ಲ ವಿಕೆಟ್ ಕಳೆದುಕೊಂಡು 113 ರನ್ ಕಲೆಹಾಕಲಷ್ಟೇ ಶಕ್ತವಾಗಿತ್ತು. ಈ ಗುರಿ ಬೆನ್ನಟ್ಟಿದ ಆರ್‌ಸಿಬಿ ಕೇವಲ 2 ವಿಕೆಟ್ ಕಳೆದುಕೊಂಡು ಇನ್ನು 3 ಎಸೆತಗಳು ಬಾಕಿ ಇರುವಂತೆಯೇ ಗೆಲುವಿನ ದಡ ಸೇರಿತ್ತು.

# ಆರ್‌ಸಿಬಿ ಕಪ್ ಗೆಲ್ಲಬಾರದು ಎಂದಿದ್ದ ರಾಯುಡು ಈಗ ಉಲ್ಟಾ ಪಲ್ಟಾ

ಈ ಬಾರಿಯ ಐಪಿಎಲ್‌ನಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಕಪ್ ಗೆಲ್ಲಬಾರದು ಎಂದಿದ್ದ ಸಿಎಸ್‌ಕೆ ತಂಡದ ಮಾಜಿ ಆಟಗಾರ ಅಂಬಾಟಿ ರಾಯುಡು ಇದೀಗ ಯೂ ಟರ್ನ್ ಹೊಡೆದಿದ್ದಾರೆ. ಅದು ಸಹ ಚಾಂಪಿಯನ್ ತಂಡ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಕ್ಕೆ ಅಭಿನಂದನೆ ಸಲ್ಲಿಸುವ ಮೂಲಕ ಎಂಬುದು ವಿಶೇಷ.

ಐಪಿಎಲ್ ಆರಂಭಕ್ಕೂ ಮುನ್ನ ಅಂಬಾಟಿ ರಾಯುಡು ಈ ಬಾರಿ ಆರ್‌ಸಿಬಿ ತಂಡ ಕಪ್ ಗೆಲ್ಲಬಾರದು ಎಂದಿದ್ದರು. ಎಸ್ ಬ್ರದಿನಾಥ್ ನಡೆಸಿದ ಚಿಟ್ ಚಾಟ್‌ನಲ್ಲಿ ಕಾಣಿಸಿಕೊಂಡಿದ್ದ ರಾಯುಡುಗೆ ಈ ಬಾರಿಯಾದರೂ ಆರ್‌ಸಿಬಿ ತಂಡದ ಕಾಯುವಿಕೆ ಕೊನೆಗೊಳ್ಳಲಿದೆಯಾ ಎಂದು ಪ್ರಶ್ನಿಸಲಾಗಿತ್ತು.

ಇದಕ್ಕೆ ನಗುತ್ತಾ ಉತ್ತರಿಸಿದ ರಾಯುಡು, ಈ ಸಲ ನನಗೆ ಆರ್‌ಸಿಬಿ ತಂಡ ಕಪ್ ಗೆಲ್ಲೋದು ಇಷ್ಟವಿಲ್ಲ ಎಂದು ಬಹಿರಂಗವಾಗಿಯೇ ಹೇಳಿದ್ದರು. ಅಲ್ಲದೆ ರಾಯಲ್ ಚಾಲೆಂಜರ್ಸ್ ಬೆಂಗಳೂರುನಂತಹ ತಂಡ ಇರಬೇಕು. ಏಕೆಂದರೆ ನಿರೀಕ್ಷೆಗಳನ್ನು ಹೆಚ್ಚಿಸಿ ಅದನ್ನು ಪೂರೈಸಲು ವಿಫಲವಾಗುವ ತಂಡ ಇದ್ದರೇನೇ ಮನರಂಜನೆ ಸಿಗೋದು. ಹೀಗಾಗಿ ಆರ್‌ಸಿಬಿಯಂತಹ ತಂಡ ಐಪಿಎಲ್‌ನಲ್ಲಿ ಇರಬೇಕೆಂದು ನಾನು ಬಯಸುತ್ತೇನೆ.



ಬೆಂಗಳೂರು ತಂಡ ರೋಚಕ ಗೆಲುವು

ಅಲ್ಲದೆ ಆರ್‌ಸಿಬಿ ತಂಡವು ಗೆಲ್ಲಲು ಹೆಣಗಾಡುವುದನ್ನು ನೋಡಿ ನಾನು ಸದಾ ಆನಂದಿಸುತ್ತೇನೆ. ಇದಾಗ್ಯೂ ಅವರು ಟ್ರೋಫಿ ಗೆಲ್ಲಲಿ ಎಂದು ಬಯಸುತ್ತೇನೆ. ಆದರೆ ಈ ಬಾರಿ ಅವರು ಕಪ್ ಗೆಲ್ಲಬಾರದು. ಮುಂದೊಂದು ದಿನ ಯಾವತ್ತಾದರು ಗೆಲ್ಲಲಿ. ಈ ಸಲ ಚೆನ್ನೈ ಸೂಪರ್ ಕಿಂಗ್ಸ್ ತಂಡವು ಟ್ರೋಫಿ ಎತ್ತಿ ಹಿಡಿಯಬೇಕು ಎಂದು ಅಂಬಾಟಿ ರಾಯುಡು ಹೇಳಿದ್ದರು.

ಇದಕ್ಕೂ ಮುನ್ನ ಪೋಡ್ ಕಾಸ್ಟ್‌ವೊಂದರಲ್ಲಿ ಮಾತನಾಡಿದ್ದ ರಾಯುಡು, ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವು ಒಂದು ದಿನ ಕಪ್ ಗೆಲ್ಲಬಹುದು ಎಂದು ನಾನು ಭಾವಿಸುತ್ತೇನೆ. ಆದರೆ ಈ ವರ್ಷ ಅವರು ಕಪ್ ಗೆಲ್ಲದಿರಲಿ ಎಂದು ನಾನು ಆಶಿಸುತ್ತೇನೆ ಹಾಗೂ ಪ್ರಾರ್ಥಿಸುತ್ತೇನೆ ಎಂದಿದ್ದರು.

ಆದರೆ ಅಂಬಾಟಿ ರಾಯುಡು ಅವರ ಪ್ರಾರ್ಥನೆ ಫಲಿಸಲಿಲ್ಲ. ಅಹಮದಾಬಾದ್‌ನಲ್ಲಿ ನಡೆದ ಐಪಿಎಲ್ 2025ರ ಫೈನಲ್ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ವಿರುದ್ಧ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ರೋಚಕ ಗೆಲುವು ದಾಖಲಿಸಿದೆ.

# ಆರ್‌ಸಿಬಿಗೆ ಸೋಲು ತಲೆಕೆಳಗಾದ ಸೆಹ್ವಾಗ್ ಲೆಕ್ಕಾಚಾರ


ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್-18 ರಲ್ಲಿ ಪಂಜಾಬ್ ಕಿಂಗ್ಸ್ ಚಾಂಪಿಯನ್ ಪಟ್ಟ ಅಲಂಕರಿಸಬೇಕೆಂದು ಬಯಸಿದವರಲ್ಲಿ ಟೀಮ್ ಇಂಡಿಯಾದ ಮಾಜಿ ಆಟಗಾರ ವೀರೇಂದ್ರ ಸೆಹ್ವಾಗ್ ಕೂಡ ಒಬ್ಬರು. ಐಪಿಎಲ್ ಫೈನಲ್ ಪಂದ್ಯಕ್ಕೂ ಮುನ್ನ ಸಂದರ್ಶನವೊಂದರಲ್ಲಿ ಮಾತನಾಡಿದ್ದ ಸೆಹ್ವಾಗ್, ಈ ಬಾರಿ ನಾನು ಪಂಜಾಬ್ ಕಿಂಗ್ಸ್ ತಂಡ ಗೆಲ್ಲಬೇಕೆಂದು ಬಯಸುತ್ತೇನೆ. ಅದಕ್ಕಾಗಿ ನಾನು ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವನ್ನು ಬೆಂಬಲಿಸುವುದಾಗಿ ತಿಳಿಸಿದ್ದರು.

ಸೆಹ್ವಾಗ್ ಇಂತಹದೊಂದು ಹೇಳಿಕೆ ನೀಡಲು ಮುಖ್ಯ ಕಾರಣ, ಅವರು ಈ ಬಾರಿ ಬೆಂಬಲಿಸಿದ ತಂಡಗಳು ಸೋಲನುಭವಿಸಿರುವುದು. ಈ ಟ್ರೆಂಡ್ ಅನ್ನು ಮುಂದುವರೆಸಲು ಟೀಮ್ ಇಂಡಿಯಾದ ಮಾಜಿ ಆಟಗಾರ ಫೈನಲ್ ಪಂದ್ಯದಲ್ಲಿ ನನ್ನ ಬೆಂಬಲ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಕ್ಕೆ ಎಂದಿದ್ದರು. ಇದಕ್ಕೂ ಮುನ್ನ ಮೊದಲ ಕ್ವಾಲಿಫೈಯರ್ ಪಂದ್ಯದಲ್ಲಿ ಸೆಹ್ವಾಗ್ ಪಂಜಾಬ್ ಕಿಂಗ್ಸ್ ತಂಡ ಗೆಲ್ಲಲಿದೆ ಎಂದಿದ್ದರು. ಆದರೆ ಗೆದ್ದಿದ್ದು ಎದುರಾಳಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ. ಇನ್ನು ಎಲಿಮಿನೇಟರ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ವಿರುದ್ಧ ಗುಜರಾತ್ ಟೈಟಾನ್ಸ್ ತಂಡ ಗೆಲ್ಲಲಿದೆ ಎಂದು ತಿಳಿಸಿದ್ದರು. ಆದರೆ ಗೆದ್ದಿರುವುದು ಮುಂಬೈ ಇಂಡಿಯನ್ಸ್. ಇನ್ನು ದ್ವಿತೀಯ ಕ್ವಾಲಿಫೈಯರ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ತಂಡ ಗೆಲ್ಲಲಿದೆ ಎಂದು ಸೆಹ್ವಾಗ್ ಭವಿಷ್ಯ ನುಡಿದ್ದರು. ಆದರೆ ಗೆದ್ದಿದ್ದು ಪಂಜಾಬ್ ಕಿಂಗ್ಸ್. ಇಲ್ಲಿ ತನ್ನ ಭವಿಷ್ಯವೆಲ್ಲವೂ ಉಲ್ಟಾ ಆದ ಕಾರಣ, ಅವರು ಆರ್‌ಸಿಬಿ ಗೆಲ್ಲಲಿದೆ ಎಂದಿದ್ದರು.



# ಸಿನಿಮಾ ಫ್ಲಾಪ್ ನಾಲ್ಕು ಕೋಟಿ ಹಣ ಮರಳಿಸಿದ ನಾಯಕ

ಸಿನಿಮಾ ನಟ-ನಟಿಯರ ಸಂಭಾವನೆಗಳಿಂದಾಗಿ ಸಿನಿಮಾಗಳ ಬಜೆಟ್‌ಗಳು ಭಾರಿ ಪ್ರಮಾಣದಲ್ಲಿ ಹೆಚ್ಚಾಗಿದ್ದು, ಇದರಿಂದ ನಿರ್ಮಾಪಕರು ನಷ್ಟ ಅನುಭವಿಸುತ್ತಿದ್ದಾರೆ ಎಂಬ ದೂರುಗಳು ಇತ್ತೀಚೆಗೆ ನಿರ್ಮಾಪಕರಿಂದ ಕೇಳಿ ಬರುತ್ತಿವೆ. ಆದರೆ ಇಲ್ಲೊಬ್ಬ ನಾಯಕ ನಟ, ಸಿನಿಮಾ ಫ್ಲಾಪ್ ಆಗಿದ್ದಕ್ಕೆ ನಿರ್ಮಾಪಕರಿಗೆ ನಾಲ್ಕು ಕೋಟಿ ಹಣ ಮರಳಿಸಿದ್ದಾರೆ. ಸಿನಿಮಾಗಳ ಬಜೆಟ್‌ಗಳು ಮಿತಿ ಮೀರುತ್ತಿದೆ. ಸಿನಿಮಾದ ಒಟ್ಟು ಬಜೆಟ್‌ಗಿಂತಲೂ ಹೆಚ್ಚು ಹಣವನ್ನು ನಟರು ಸಂಭಾವನೆಯಾಗಿ ಪಡೆಯುತ್ತಿರುವುದೂ ಇದೆ. ಸಿನಿಮಾ ನಟ-ನಟಿಯರ ಸಂಭಾವನೆ ಹೆಚ್ಚಳದ ಬಗ್ಗೆ ನಿರ್ಮಾಪಕ ಕರಣ್ ಜೋಹರ್ ಸೇರಿದಂತೆ ದಕ್ಷಿಣದ ಹಲವು ನಿರ್ಮಾಪಕರು ಈಗಾಗಲೇ ಮಾತನಾಡಿದ್ದಾರೆ. ಹೊಸ ನಟರುಗಳು ಸಹ ಈಗ ಹತ್ತಾರು ಕೋಟಿ ಸಂಭಾವನೆ ಪಡೆಯುತ್ತಿದ್ದಾರೆ. ಸಿನಿಮಾ ಹಿಟ್ ಆಗಲಿ ಫ್ಲಾಪ್ ಆಗಲಿ ಅದಕ್ಕೂ ಅವರಿಗೂ ಸಂಬಂಧವಿಲ್ಲ. ಆದರೆ ಇಲ್ಲೊಬ್ಬ ನಾಯಕ ನಟ ಸಿನಿಮಾ ಫ್ಲಾಪ್ ಆಗಿದ್ದಕ್ಕೆ ಪಡೆದಿದ್ದ ಸಂಭಾವನೆಯನ್ನು ವಾಪಸ್ ಮಾಡಿದ್ದಾರೆ.



ಮಿತಿ ಮೀರುತ್ತಿದೆ ಸಿನಿಮಾಗಳ ಬಜೆಟ್‌ಗಳು

ಸಿದ್ದು ಜೊನ್ನಲಗಡ್ಡ ತೆಲುಗಿನ ಜನಪ್ರಿಯ ಮತ್ತು ಪ್ರತಿಭಾವಂತ ಯುವನಟ. ಇವರ ನಟನೆಯ 'ಟಿಲ್ಲು' ಸಿನಿಮಾ ಸಖತ್ ಹಿಟ್ ಆಗಿತ್ತು. ಇತ್ತೀಚೆಗೆ 'ಟಿಲ್ಲು 2' ಸಹ ಬಂದಿತ್ತು. ಆ ಸಿನಿಮಾ ಸಹ ಸೂಪರ್ ಹಿಟ್ ಆಯ್ತು. ಆ ಬಳಿಕ ಸಿದ್ದು ನಟಿಸಿದ ಸಿನಿಮಾ ಒಂದು ಇತ್ತೀಚೆಗಷ್ಟೆ ಬಿಡುಗಡೆ ಆಗಿತ್ತು. ಆ ಸಿನಿಮಾ ಬಾಕ್ಸ್ ಆಫೀಸ್‌ನಲ್ಲಿ ಒಳ್ಳೆಯ ಪ್ರದರ್ಶನ ಕಾಣಲಿಲ್ಲ. ನಿರ್ಮಾಪಕರಿಗೆ ಇದರಿಂದ ಭಾರಿ ನಷ್ಟ ಉಂಟಾಯ್ತು. ಇದೇ ಕಾರಣಕ್ಕೆ ಸಿನಿಮಾಕ್ಕೆ ತಾವು ಪಡೆದಿದ್ದ ಸಂಭಾವನೆಯನ್ನು ಮರಳಿಸಿದ್ದಾರೆ ಸಿದ್ದು. ಸಿದ್ದು ಜೊನ್ನಲಗಡ್ಡ 'ಜಾಕ್' ಹೆಸರಿನ ಸಿನಿಮಾನಲ್ಲಿ ನಟಿಸಿದ್ದರು.

ಸಿನಿಮಾ ಏಪ್ರಿಲ್ 10 ರಂದು ಬಿಡುಗಡೆ ಆಗಿತ್ತು. ಸಿನಿಮಾನಲ್ಲಿ ಸಿದ್ದು ರಾ ಏಜೆಂಟ್ ಆಗುವ ಕನಸು ಕಾಣುತ್ತಿರುವ ಯುವಕನ ಪಾತ್ರ ದಲ್ಲಿ ನಟಿಸಿದ್ದಾರೆ. ಸಿನಿಮಾದಲ್ಲಿ ನಾಯಕಿಯಾಗಿ ವೈಷ್ಣವಿ ಚೈತನ್ಯ ನಟಿಸಿದ್ದಾರೆ. ಸಿನಿಮಾಕ್ಕೆ ಸುಮಾರು 30 ಕೋಟಿ ಬಜೆಟ್ ಹಾಕಲಾಗಿತ್ತು.

ಆದರೆ ಸಿನಿಮಾ ಬಾಕ್ಸ್ ಆಫೀಸ್‌ನಲ್ಲಿ ಗಳಿಸಿದ್ದು 10 ಕೋಟಿಯಷ್ಟೆ.

ಸಿನಿಮಾಕ್ಕಾಗಿ ಸಿದ್ದು ಪಡೆದಿದ್ದ ಸಂಭಾವನೆಯಲ್ಲಿ ನಾಲ್ಕು ಕೋಟಿ ಹಣವನ್ನು ಮರಳಿಸಿದ್ದಾರಂತೆ.



# ಶಿವಣ್ಣನ ವೃತ್ತಿ ಬದುಕಿಗೆ 40 ವರ್ಷ

ಶಿವರಾಜ್ ಕುಮಾರ್ ಅವರು ಚಿತ್ರರಂಗಕ್ಕೆ ಕಾಲಿಟ್ಟು 40 ವರ್ಷಗಳು ಪೂರ್ಣಗೊಂಡ ಸಂಭ್ರಮದಲ್ಲಿ ಕಲರ್ಸ್ ಕನ್ನಡ ವಾಹಿನಿ ವಿಶೇಷ ಕಾರ್ಯಕ್ರಮವನ್ನು ಆಯೋಜಿಸಿದೆ. ಅವರ ಮೊದಲ ಚಿತ್ರ 'ಆನಂದ' 39ನೇ ವಾರ್ಷಿಕೋತ್ಸವವನ್ನೂ ಈ ಕಾರ್ಯಕ್ರಮದಲ್ಲಿ ಆಚರಿಸಲಾಗಿದೆ. ಅನೇಕ ಸೆಲೆಬ್ರಿಟಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದಾರೆ. ಶಿವರಾಜ್‌ಕುಮಾರ್ ಅವರು ಚಿತ್ರರಂಗಕ್ಕೆ ಕಾಲಿಟ್ಟು ಬರೋಬ್ಬರಿ 40 ವರ್ಷಗಳು ಕಳೆದಿವೆ. ಈ ಖುಷಿಯನ್ನು ಸೆಲೆಬ್ರೇಟ್ ಮಾಡಲು ವೇದಿಕೆ ಸಿದ್ಧವಾಗಿದೆ. ಅವರ ನಟನೆಯ 'ಆನಂದ್' ಚಿತ್ರ ರಿಲೀಸ್ ಆಗಿ 39 ವರ್ಷಗಳು ಕಳೆದಿವೆ. ಶಿವಣ್ಣ ಅವರು ಈ ಚಿತ್ರವನ್ನು ಅವರು ಒಪ್ಪಿಕೊಂಡು 4 ದಶಕ ಕಳೆದಿದೆ. ಈ ಖುಷಿಯನ್ನು ಕಲರ್ಸ್ ಕನ್ನಡ ವೇದಿಕೆ ಮೇಲೆ ಸಂಭ್ರಮಿಸಲಾಗಿದೆ. ಆ ಸಂದರ್ಭದ ಪ್ರೋಮೋ ರಿಲೀಸ್ ಆಗಿದೆ. ಶಿವರಾಜ್‌ಕುಮಾರ್ ನಟಿಸಿದ ಮೊದಲ ಚಿತ್ರ 'ಆನಂದ್'.

ಈ ಸಿನಿಮಾ 1986ರ ಜೂನ್ 19ರಂದು ರಿಲೀಸ್ ಆಯಿತು. ಸಿಂಗೀತಮ್ ಶ್ರೀನಿವಾಸ್ ರಾವ್ ಈ ಚಿತ್ರ ನಿರ್ದೇಶನ ಮಾಡಿದರು. ಈ ಸಿನಿಮಾಗೆ ಸುಧಾ ರಾಣಿ ನಾಯಕಿ. ಈ ಚಿತ್ರ ಸೂಪರ್ ಹಿಟ್ ಆಯಿತು. ಈ ಸಿನಿಮ ಥಿಯೇಟರ್‌ನಲ್ಲಿ ಬರೋಬ್ಬರಿ 38 ವಾರ ಪ್ರದರ್ಶನ ಕಂಡಿತ್ತು. ಶಿವರಾಜ್‌ಕುಮಾರ್ ಅವರ ಈ ವಿಶೇಷ ಮೈಲಿಗಲ್ಲನ್ನು ಕಲರ್ಸ್ ಕನ್ನಡ ವಾಹಿನಿ ಸಂಭ್ರಮಿಸುತ್ತಿದೆ. ಕಲರ್ಸ್ ಕನ್ನಡ ಆರಂಭ ಆಗಿ 1 ದಶಕ ಕಳೆದಿದೆ. ಈ ದಶಕದ ಸಂಭ್ರವನ್ನು ವಾಹಿನಿ ಅದ್ದೂರಿಯಾಗಿ ಆಚರಿಸುತ್ತಿದೆ. ಈ ಕಾರ್ಯಕ್ರಮಕ್ಕೆ ಅನೇಕ ಸೆಲೆಬ್ರಿಟಿಗಳು ಆಗಮನಿಸಿದ್ದರು. ಶಿವರಾಜ್‌ಕುಮಾರ್ ಕೂಡ ವೇದಿಕೆ ಏರಿದ್ದಾರೆ. ಶಿವರಾಜ್‌ಕುಮಾರ್ ಅವರು ಗ್ರ್ಯಾಂಡ್ ಆಗಿ ವೇದಿಕೆ ಏರಿದ್ದಾರೆ. 'ಶಿವಣ್ಣ 40' ಎಂಬ ಲೈನ್ ಮೂಲಕ ವಿಡಿಯೋ ಮಾಡಲಾಗಿದೆ. ಈ ವಿಡಿಯೋ ಎಲ್ಲರ ಗಮನ ಸೆಳೆದಿದೆ. 'ಅಣ್ಣಾವ್ರು ಹೋದ ಮೇಲೆ ಆ ಪ್ರೀತಿ-ಅಭಿಮಾನ ಶಿವಣ್ಣನಿಗೆ ಸಿಕ್ಕಿದೆ' ಎಂದು ದುನಿಯಾ ವಿಜಯ್ ಅವರು ಹೇಳಿದರು. 'ನೀವು ಬಂಗಾರದ ಮನುಷ್ಯ' ಎಂದು ಬಾಯ್ತುಂಬ ಹೊಗಳಿದರು ತಾರಾ. ಶಿವಣ್ಣ ಎನರ್ಜಿಟಿಕ್ ಆಗಿ ಡ್ಯಾನ್ಸ್ ಕೂಡ ಮಾಡಿದ್ದಾರೆ. ಶನಿವಾರ ಹಾಗೂ ಭಾನುವಾರ ಸಂಜೆ 7ಗಂಟೆಗೆ ಕಾರ್ಯಕ್ರಮ ಪ್ರಸಾರ ಆಗಲಿದೆ.

1986ರ ಜೂನ್ 19ರಂದು ರಿಲೀಸ್





# ಫ್ಲಾಪ್ ಸಿನಿಮಾ ಬಳಿಕ ಮತ್ತೆ ಬಾಲಿವುಡ್‌ಗೆ ರಶ್ಮಿಕಾ ಮಂದಣ್ಣ

ಕನ್ನಡದಿಂದ ತೆಲುಗಿಗೆ ಹಾರಿ ಅಲ್ಲಿ ಸ್ಟಾರ್ ನಟಿಯಾಗಿ ಗುರುತಿಸಿಕೊಂಡರು. ಬಳಿಕ ಬಾಲಿವುಡ್‌ಗೆ ವಲಸೆ ಹೋಗಿ ಅಲ್ಲಿಯೂ ಸ್ಟಾರ್ ರೀತಿ ಮಿಂಚುತ್ತಿದ್ದಾರೆ. ರಶ್ಮಿಕಾರ ಈ ಹಿಂದಿನ ಬಾಲಿವುಡ್ ಸಿನಿಮಾ ಫ್ಲಾಪ್ ಆಗಿದೆ. ಹಾಗಿದ್ದರೂ ಸಹ ಈಗ ಮತ್ತೊಂದು ಒಳ್ಳೆಯ ಸಿನಿಮಾ ಅವಕಾಶವನ್ನು ರಶ್ಮಿಕಾ ಮಂದಣ್ಣ ಪಡೆದುಕೊಂಡಿದ್ದಾರೆ. ನಟಿ ರಶ್ಮಿಕಾ ಮಂದಣ್ಣ ಕನ್ನಡದಿಂದ ತೆಲುಗಿಗೆ ಹಾರಿ ಅಲ್ಲಿ ಸ್ಟಾರ್ ನಟಿಯಾಗಿ ಗುರುತಿಸಿಕೊಂಡರು. ಬಳಿಕ ಬಾಲಿವುಡ್‌ಗೆ ವಲಸೆ ಹೋಗಿ ಅಲ್ಲಿಯೂ ಸ್ಟಾರ್ ರೀತಿ ಮಿಂಚುತ್ತಿದ್ದಾರೆ. ರಶ್ಮಿಕಾ ಮಂದಣ್ಣ ಒಂದರ ಹಿಂದೊಂದರಂತೆ ಸತತ ಎರಡು ಬ್ಲಾಕ್ ಬಸ್ಟರ್ ಹಿಂದಿ ಸಿನಿಮಾಗಳನ್ನು ನೀಡಿದ್ದರು. ಅದರ ಬೆನ್ನಲ್ಲೆ ಸ್ಟಾರ್ ನಟ ಸಲ್ಮಾನ್ ಖಾನ್ ಜೊತೆಗೆ ನಟಿಸುವ ಅವಕಾಶವನ್ನೂ ಬಾಚಿಕೊಂಡರು. ಆದರೆ ಸಲ್ಮಾನ್ ಜೊತೆ ನಟಿಸಿದ 'ಸಿಖಂಧರ್' ಸಿನಿಮಾ ಹಿಟ್ ಎನಿಸಿಕೊಳ್ಳಲಿಲ್ಲ. ಫ್ಲಾಪ್ ಸಿನಿಮಾ ನೀಡಿದರೂ ಸಹ ಇದೀಗ ರಶ್ಮಿಕಾಗೆ ಮತ್ತೊಂದು ಒಳ್ಳೆಯ ಬಾಲಿವುಡ್ ಸಿನಿಮಾ ಅವಕಾಶ ಅರಸಿ ಬಂದಿದೆ. ಸೈಫ್ ಅಲಿ ಖಾನ್, ದೀಪಿಕಾ ಪಡುಕೋಣೆ, ದಿಯಾನಾ ಪೆಂಟಿ ಒಟ್ಟಿಗೆ ನಟಿಸಿ 2012 ರಲ್ಲಿ ಬಿಡುಗಡೆ ಆಗಿದ್ದ 'ಕಾಕ್‌ಟೈಲ್' ಸಿನಿಮಾ ಆಗ ದೊಡ್ಡ ಹಿಟ್ ಆಗಿತ್ತು. ಮಾಡರ್ನ್ ಹುಡುಗಿ, ಸೀದಾ-ಸಾದಾ ಸಂಸ್ಕಾರವಂತ ಯುವತಿ, ಒಬ್ಬ ಪ್ಲೇಬಾಯ್ ರೀತಿಯ ಯುವಕ ಈ ಮೂವರ ನಡುವೆ ನಡೆಯುವ ಪ್ರೇಮಕತೆಯನ್ನು ಒಳಗೊಂಡಿರುವ ಸಿನಿಮಾ ಇದಾಗಿತ್ತು.

# ನನ್ನ ಮಕ್ಕಳು ಐಸಿಸ್ ಸೇರುತ್ತಾರೆ

ಪ್ರಿಯಾಮಣಿ ಅವರು ತಮ್ಮ ವಿವಾಹ ಮತ್ತು ಲವ್ ಜಿಹಾದ್ ಆರೋಪಗಳ ಬಗ್ಗೆ ತಮ್ಮ ಭಾವನೆಗಳನ್ನು ಹಂಚಿಕೊಂಡಿದ್ದಾರೆ. ಅವರ ಮೇಲೆ ಮತ್ತು ಅವರ ಕುಟುಂಬದ ಮೇಲೆ ಹರಿದು ಬಂದ ದ್ವೇಷದ ಬಗ್ಗೆ ಅವರು ತೀವ್ರವಾಗಿ ಬೇಸರ ವ್ಯಕ್ತಪಡಿಸಿದ್ದಾರೆ. ಭವಿಷ್ಯದಲ್ಲಿ ತಮ್ಮ ಮಕ್ಕಳ ಮೇಲೆ ಆಗಬಹುದಾದ ಪರಿಣಾಮಗಳ ಬಗ್ಗೆಯೂ ಅವರು ಆತಂಕ ವ್ಯಕ್ತಪಡಿಸಿದ್ದಾರೆ. ನಟಿ ಪ್ರಿಯಾಮಣಿ ಅವರಿಗೆ ಜೂನ್ 4 ಜನ್ಮದಿನ. ಈಗ ಅವರಿಗೆ 41ನೇ ವರ್ಷದ ಜನ್ಮದಿನ. ಅವರಿಗೆ ಅಭಿಮಾನಿಗಳು ಹಾಗೂ ಸೆಲೆಬ್ರಿಟಿಗಳು ಶುಭಾಶಯವನ್ನು ಸೋಶಿಯಲ್ ಮೀಡಿಯಾ ಮೂಲಕ ತಿಳಿಸುತ್ತಿದ್ದಾರೆ. ಪ್ರಿಯಾಮಣಿ ಅವರು ಇಷ್ಟು ದೊಡ್ಡ ಮಟ್ಟಕ್ಕೆ ಬೆಳೆಯಲು ಸಾಕಷ್ಟು ಶ್ರಮ ಹಾಕಿದ್ದಾರೆ. ಈ ಮಧ್ಯೆ ಅವರ ವೈಯಕ್ತಿಕ ಜೀವನ ಸಾಕಷ್ಟು ಚರ್ಚೆಯ ಕೇಂದ್ರ ಬಿಂದು ಆಯಿತು. ಏಕೆಂದರೆ ಅವರು ವಿವಾಹ ಆಗಿದ್ದು ಮುಸ್ಲಿಂ ವ್ಯಕ್ತಿಯನ್ನು. ಈ ವಿಚಾರಕ್ಕೆ ಅವರು ಈಗಲೂ ಟೀಕೆ ಎದುರಿಸುತ್ತಾ ಇದ್ದಾರೆ. 2017ರಲ್ಲಿ ಪ್ರಿಯಾಮಣಿ ಅವರು ಮುಸ್ತಫಾ ರಾಜ್ ಅವರನ್ನು ವಿವಾಹ ಆದರು. ಈ ವಿವಾಹ ನಡೆದ ಬಳಿಕ ಅನೇಕರು ಅವರ ಬಗ್ಗೆ ಟೀಕೆ ಮಾಡಿದರು. ಅವರು ಲವ್ ಜಿಹಾದ್‌ಗೆ ಒಳಗಾದರು ಎಂದು ಅನೇಕರು ಹೇಳಿದ್ದರು. ಪ್ರಿಯಾಮಣಿಗೆ ಇದು ಸಾಕಷ್ಟು ಬೇಸರ ಮೂಡಿಸಿತು ಮತ್ತು ಇದನ್ನು ಅವರು ಒಪ್ಪಿಲ್ಲ. ಪರಸ್ಪರ ಇಷ್ಟಪಟ್ಟೇ ಪ್ರಿಯಾಮಣಿ ಅವರು ಮುಸ್ತಫಾ ರಾಜ್ ಅವರನ್ನು ಮದುವೆ ಆಗಿದ್ದರು ಎಂಬುದು ಇಲ್ಲಿ ಗಮನಿಸಬೇಕಾದ ವಿಚಾರ.





# ಮಾರುತ ಚಿತ್ರದಲ್ಲಿ ಕ್ರೇಜಿ ಸ್ಟಾರ್ ರವಿಚಂದ್ರನ್

ದುನಿಯಾ ವಿಜಯ್ ಅಭಿನಯದ ಮಾರುತ ಚಿತ್ರದಲ್ಲಿ ಕ್ರೇಜಿ ಸ್ಟಾರ್ ರವಿಚಂದ್ರನ್ ಅಭಿನಯಿಸಿದ್ದಾರೆ. ಎಸ್.ನಾರಾಯಣ್ ಡೈರೆಕ್ಷನ್ ಮಾಡಿರೋ ಈ ಚಿತ್ರದ ರೀ-ರೆಕಾರ್ಡಿಂಗ್ ಕೆಲಸ ಅದ್ದೂರಿಯಾಗಿಯೇ ನಡೆಯುತ್ತಿದೆ. ಭಾರತದ ಹೆಸರಾಂತ ಮ್ಯೂಸಿಷಿಯನ್ ಈ ಚಿತ್ರಕ್ಕೆ ಕೆಲಸ ಮಾಡುತ್ತಿದ್ದಾರೆ.

ದುನಿಯಾ ವಿಜಯ್ ಅಭಿನಯದ ಮಾರುತ ಚಿತ್ರದ ಕೆಲಸ ಜೋರಾಗಿಯೇ ನಡೆಯುತ್ತಿದೆ. ಚಿತ್ರದ ರೀ-ರೆಕಾರ್ಡಿಂಗ್ ಅನ್ನ ಡೈರೆಕ್ಟರ್ ಎಸ್.ನಾರಾಯಣ್ ಅದ್ದೂರಿಯಾಗಿಯೇ ನಡೆಸುತ್ತಿದ್ದಾರೆ. ಭಾರತದ ಹೆಸರಾಂತ ಮ್ಯೂಸಿಷಿಯನ್ ಈ ಒಂದು ಕೆಲಸವನ್ನ ಈಗ ಮಾಡ್ತಾ ಇದ್ದಾರೆ. ಚಿತ್ರವನ್ನ ಒಬ್ಬರಲ್ಲ, ಇಬ್ಬರು ನಿರ್ಮಿಸಿದ್ದಾರೆ. ಇಬ್ಬರು ನಿರ್ಮಾಪಕರ ಈ ಚಿತ್ರದಲ್ಲಿ ಇಬ್ಬರು ಹೀರೋಗಳೇ ಇದ್ದಾರೆ. ದುನಿಯಾ ವಿಜಯ್ ಪ್ರಮುಖ ರೋಲ್ ಅಲ್ಲಿಯೇ ಇದ್ದಾರೆ. ಶ್ರೇಯಸ್ ಮಂಜು ಈ ಚಿತ್ರದ ಮತ್ತೊಬ್ಬ ಹೀರೋ ಆಗಿದ್ದಾರೆ. ಇವರ ನಡುವೆ ಕ್ರೇಜಿ ಸ್ಟಾರ್ ರವಿಚಂದ್ರನ್ ಸ್ಪೆಷಲ್ ಎಂಟ್ರಿ ಕೂಡ ಇದೆ.

ಡೈರೆಕ್ಟರ್ ಎಸ್.ನಾರಾಯಣ್ ಒಳ್ಳೆ ಪಾತ್ರವನ್ನೆ ಡಿಸೈನ್ ಮಾಡಿದ್ದಾರೆ. ಚಿತ್ರದ ನಾಯಕರಾದ ದುನಿಯಾ ವಿಜಯ್ ಮತ್ತು ಶ್ರೇಯಸ್ ಮಂಜು ಪಾತ್ರಗಳ ಒಂದು ಲೆಕ್ಕ ಆದ್ರೆ, ಕ್ರೇಜಿ ಸ್ಟಾರ್ ರವಿಚಂದ್ರನ್ ವಿಶೇಷ ರೋಲ್‌ನ ವಿಭಿನ್ನವಾಗಿಯೇ ಇದೆ. ಇದರ ಬಗ್ಗೆ ಹೆಚ್ಚಿನ ಮಾಹಿತಿಯನ್ನ ಇನ್ನು ಬಿಟ್ಟುಕೊಟ್ಟಿಲ್ಲ.



**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru - 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news

**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**